ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಏಪ್ರಿಲ್ 15 ಸೋಮವಾರ 2024

ಸಂಪುಟ: 44 | ಸಂಚಿಕೆ: 356 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ನಾನಿರುವವರೆಗೂ ಭಾರತವನ್ನು ಒಡೆಯುವ, ಹಿಂದೂ ಧರ್ಮ ನಾಶಪಡಿಸುವ ಕಾಂಗ್ರೆಸ್ ಉದ್ದೇಶ ಸಫಲವಾಗದು...

■ ಮೈಸೂರಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಗುಡುಗು ■ ಮೈಸೂರು–ಕೊಡಗು, ಮಂಡ್ಯ, ಚಾಮರಾಜನಗರ, ಹಾಸನ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿಗಳ ಪರ ಪ್ರಚಾರ ಭಾಷಣ

● ಕಾಂಗ್ರೆಸ್ ದೇಶ ಒಡೆಯುವ ಕೆಲಸವನ್ನು ವ್ಯವಸ್ಥಿತವಾಗಿ ಮಾಡಿಕೊಂಡು ಬರುತ್ತಿದೆ ● ಹೆಚ್.ಡಿ.ದೇವೇಗೌಡರು, ಬಿ.ಎಸ್.ಯಡಿಯೂರಪ್ಪರ ಮಾರ್ಗದರ್ಶನ; ಕುಮಾರಸ್ವಾಮಿಯವರ ಸಹಯೋಗ ಕರ್ನಾಟಕದ ಅಭಿವೃದ್ಧಿಗೆ ಸಹಕಾರಿ





ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಭಾನುವಾರ ನಡೆದ ಬಿಜೆಪಿ–ಜೆಡಿಎಸ್ ಮೈತ್ರಿ ಚುನಾವಣಾ ಪ್ರಚಾರದ ಬೃಹತ್ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಹಳೇ ಮೈಸೂರು ಭಾಗದ ನಾಲ್ಕು ಲೋಕಸಭಾ ಕ್ಷೇತ್ರಗಳ ಮೈತ್ರಿ ಅಭ್ಯರ್ಥಿಗಳು ಹಾಗೂ ಇತರೆ ಮುಖಂಡರೊಂದಿಗೆ ಕೈ ಮೇಲೆತ್ತುವ ಮೂಲಕ ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದರು. ಮತ್ತೊಂದು ಚಿತ್ರದಲ್ಲಿ ಸಮಾವೇಶದಲ್ಲಿ ನೆರೆದಿದ್ದ ಜನಸ್ತೋಮವನ್ನು ಕಾಣಬಹುದು.

ಮೈಸೂರು, ಏ.14(ಎಸ್‌ಬಿಡಿ)– ಮೋದಿ ಇರುವವರೆಗೂ ಭಾರತವನ್ನು ಒಡೆಯುವ, ಹಿಂದೂ ಧರ್ಮವನ್ನು ನಾಶಪಡಿಸುವ ಕಾಂಗ್ರೆಸ್ ಉದ್ದೇಶ ಸಫಲವಾಗುವುದಿಲ್ಲ ಎಂದು ಪ್ರಧಾನಿ ಮೋದಿ ಮೈಸೂರಿನಲ್ಲಿ ಗುಡುಗಿದರು.

ಇಲ್ಲಿನ ಮಹಾರಾಜ ಕಾಲೇಜು ಮೈದಾನದಲ್ಲಿ ಭಾನುವಾರ ಆಯೋಜಿಸಿದ್ದ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಬೃಹತ್ ಚುನಾವಣಾ ಸಮಾವೇಶದಲ್ಲಿ ಮೈಸೂರು–ಕೊಡಗು, ಮಂಡ್ಯ, ಚಾಮರಾಜನಗರ ಹಾಗೂ ಹಾಸನ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಪರ ಮತಯಾಚಿಸಿ, ಮಾತನಾಡಿದರು. ಪರಂಪರೆಯ ತವರು ಕರ್ನಾಟಕ, ದೇಶದ ಏಕತೆ ಮತ್ತು ಅಖಂಡತೆಗಾಗಿ ಬಲಿದಾನ ಮಾಡಿದೆ. ಇಲ್ಲಿ ಸುತ್ತೂರು ಮಠದ ಸಂತರ ಪರಂಪರೆಯಿದೆ. ರಾಷ್ಟ್ರಕವಿ ಕುವೆಂಪು ಅವರ ಏಕತೆಯ ಸ್ವರವಿದೆ. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಅವರ ಹೆಮ್ಮೆ ಇದೆ. ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕೊಡುಗೆ ಇಂದಿಗೂ ದೇಶಕ್ಕೆ ಪ್ರೇರಣೆಯಾಗಿದೆ. ಕೊಡಗಿನ ಪ್ರತಿಯೊಬ್ಬ ತಾಯಿಯೂ ತಮ್ಮ ಮಕ್ಕಳನ್ನು ದೇಶ ಸೇವೆಗೆ ಕಳುಹಿಸುವ ಕನಸು ಕಾಣುತ್ತಾರೆ. ಆದರೆ ಇಂತಹ ಪುಣ್ಯ ಭೂಮಿಯಲ್ಲಿ ಮತ್ತೊಂದು ಕಡೆ ದೇಶ ವಿಭಜಿಸುವ ಉದ್ದೇಶ ಹೊಂದಿರುವ ಕಾಂಗ್ರೆಸ್ ಪಕ್ಷವಿದೆ. ಆದರೆ ಮೋದಿ ಇರುವವರೆಗೆ, ನನ್ನ ಮೇಲೆ ನಿಮ್ಮ ಆಶೀರ್ವಾದ ಇರುವವರೆಗೆ ಇದು ಸಾಧ್ಯವಾಗುವುದಿಲ್ಲ. ಇದು ಮೋದಿ ಗ್ಯಾರಂಟಿ ಎಂದರು.

ಇತ್ತೀಚೆಗೆ ಕಲಬುರಗಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಲಕ್ಷ್ಮಣ್ ಸವದಿ ಅವರು ಭಾರತ ಮಾತೆಗೆ ಜೈಕಾರ ಕೂಗುವ ಮುನ್ನ ಮಲ್ಲಿಕಾರ್ಜುನ ಖರ್ಗೆ ಅವರು ಅಪಾರ್ಥ ಮಾಡಿಕೊಳ್ಳಬಾರದು ಎಂದು ಹೇಳಿದ ಘಟನೆಗೆ ಪರೋಕ್ಷವಾಗಿ ಚಾಟಿ ಬೀಸಿದ ಪ್ರಧಾನಿ ಮೋದಿ, ಕಾಂಗ್ರೆಸ್‌ನ ಚುನಾವಣಾ ಕಾರ್ಯಕ್ರಮವೊಂದರಲ್ಲಿ ವ್ಯಕ್ತಿಯೊಬ್ಬ ಭಾರತ ಮಾತೆಗೆ ಜೈಕಾರ ಹಾಕುವುದಕ್ಕೂ ಅನುಮತಿ ಪಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಅಪಾಯಕಾರಿ ಬೆಳವಣಿಗೆ ಎನ್ನುವುದನ್ನು ನೀವು ಗಮನಿಸಬೇಕು. ಈ ಹಿಂದೆ 'ವಂದೇ ಮಾತರಂ' ವಿರೋಧಿಸಿದವರು ಈಗ ಭಾರತ್ ಮಾತಾ ಕೀ ಜೈ ಘೋಷಣೆಗೂ ನಿರ್ಬಂಧ ಹಾಕಿದ್ದಾರೆ. ಇದು ಕಾಂಗ್ರೆಸ್‌ನ ಅವನತಿಯ ಪರಾಕಾಷ್ಠೆ. ನಮ್ಮ ದೇಶದಲ್ಲಿ ಭಾರತ ಮಾತೆಗೆ ಜೈಕಾರ ಹಾಕಲು ಅಪ್ಪಣೆ ಬೇಕೆ? ಇದರ ಅಗತ್ಯ ಇದೆಯೇ? ನೀವೇ ಹೇಳಿ ಎಂದು ಸಭಿಕರನ್ನು ಕೇಳಿದಾಗ ಜನರು ಒಕ್ಕೊರಲಿನಿಂದ ಇಲ್ಲ... ಇಲ್ಲ... ಎಂದು ಕೂಗಿದರು. ● 10ನೇ ಪುಟಕ್ಕೆ

ಎನ್‌ಡಿಎ ಮೈತ್ರಿಕೂಟದ 400 ಸ್ಥಾನದ ಗುರಿಗೆ ನಾವು 24 ಸ್ಥಾನದ ಕೊಡುಗೆ ನೀಡಬೇಕು

● ರಾಜ್ಯದ 6 ಕೋಟಿ ಜನತೆಯಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಕೈಮುಗಿದು ಮನವಿ ● ರಾಜ್ಯವನ್ನು ಲೂಟಿ ಮಾಡುವುದನ್ನು ತಪ್ಪಿಸಲು ಕುಮಾರಸ್ವಾಮಿಯನ್ನು ಮೋದಿ ಜೊತೆಗೆ ಹೋಗುವಂತೆ ನಾನೇ ಹೇಳಿದೆ ● ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಗೌಡರ ಆಕ್ರೋಶ




ಮೈಸೂರು,ಏ.14(ಪಿಎಂ)–ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ 400 ಸ್ಥಾನಗಳನ್ನು ಗೆಲ್ಲಬೇಕೆಂಬ ಗುರಿ ಹೊಂದಿರುವುದಕ್ಕೆ ಪೂರಕವಾಗಿ ಕರ್ನಾಟಕ ರಾಜ್ಯದಿಂದ ನಾವು ಕನಿಷ್ಠ 24 ಸ್ಥಾನಗಳನ್ನು ಗೆದ್ದು ಕೊಡುಗೆಯಾಗಿ ನೀಡಬೇಕು. ಈ ನನ್ನ ಮನವಿಯನ್ನು ರಾಜ್ಯದ 6 ಕೋಟಿ ಜನತೆ ಮಾನ್ಯ ಮಾಡಬೇಕೆಂದು ಕೈ ಮುಗಿದು ಪ್ರಾರ್ಥನೆ ಮಾಡುವುದಾಗಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ರಾಜ್ಯದ ಜನತೆಯಲ್ಲಿ ಮನವಿ ಮಾಡಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಬಿಜೆಪಿ–ಜೆಡಿಎಸ್ ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ 'ವಿಕಸಿತ ಭಾರತಕ್ಕೆ ವಿಜಯ ● 10ನೇ ಪುಟಕ್ಕೆ

ಸಂವಿಧಾನ ಬದಲಾವಣೆಯೇ ಬಿಜೆಪಿ, ಆರ್‌ಎಸ್‌ಎಸ್ ಅಜೆಂಡಾ

● ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ ● ಮಡಿಕೇರಿಯಲ್ಲಿ ಜನಧ್ವನಿ ಬೃಹತ್ ಸಮಾವೇಶ



ಮಡಿಕೇರಿಯ ಗಾಂಧಿ ಮೈದಾನದಲ್ಲಿ ನಡೆದ ಜನಧ್ವನಿ ಸಮಾವೇಶವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು. ಸಚಿವರಾದ ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಮಾಜಿ ಸಚಿವ ಎಂ.ಸಿ.ನಾಣಯ್ಯ, ಶಾಸಕರಾದ ಡಾ.ಮಂಥರ್‌ಗೌಡ, ಪೊನ್ನಣ್ಣ ಇದ್ದರು.

ಮಡಿಕೇರಿ, ಏ.14–ಸಂವಿಧಾನ ಬದಲಾವಣೆಯೇ ಬಿಜೆಪಿ ಮತ್ತು ಆರ್‌ಎಸ್‌ಎಸ್‌ನ 'ಹಿಡನ್ ಅಜೆಂಡಾ' ಆಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು.

ನಗರದ ಗಾಂಧಿ ಮೈದಾನದಲ್ಲಿ ಭಾನುವಾರ ಆಯೋಜಿಸಿದ್ದ 'ಜನಧ್ವನಿ–2' ಬೃಹತ್ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನ ಬದಲಾಯಿಸುವುದು ಬಿಜೆಪಿ–ಸಂಘ ಪರಿವಾರದ ಹುನ್ನಾರವಾಗಿದೆ. ಕೇಂದ್ರ ಸಚಿವರಾಗಿದ್ದವರೇ ಈ ಮಾತನ್ನು ಬಹಿರಂಗವಾಗಿ ಹೇಳಿದ್ದಾರೆ. 10 ವರ್ಷಗಳಿಂದ ನರೇಂದ್ರ ಮೋದಿ ಪ್ರಧಾನಿಯಾಗಿ ಅಧಿಕಾರ ನಡೆಸುತ್ತಿದ್ದಾರೆ. ಅವರು ಸಾಂವಿಧಾನಿಕವಾಗಿ ಆಡಳಿತ ನಡೆಸುವ ಬದಲು ಸಂಘ ಪರಿವಾರದ ಸಿದ್ಧಾಂತಗಳಿಗೆ ತಕ್ಕಂತೆ ಅಧಿಕಾರ ನಡೆಸುತ್ತಿರುವುದು ಸ್ಪಷ್ಟವಾಗಿದೆ ಎಂದು ದೂರಿದರು. ಮೋದಿ 10 ವರ್ಷ ಪ್ರಧಾನಿಯಾಗಿ ಕೊಟ್ಟ ಮಾತಲ್ಲಿ ಒಂದನ್ನಾದರೂ ಈಡೇರಿಸಿದ್ದಾರಾ? 'ಅಚ್ಛೇದಿನ್ ಆಯೇಗಾ' ಎಂದು ಮೋದಿ ಹೇಳಿದ್ದರು. ಇಂದು ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಸೇರಿದಂತೆ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದೆ. ನಿರುದ್ಯೋಗ, ಬಡತನ ತಾಂಡವವಾಡುತ್ತಿದೆ. ಇದು ಅಚ್ಛೇದಿನ್ ಸಂಕೇತವೇ. ಭಾರತೀಯರನ್ನು ನಂಬಿಸಿ, ಭ್ರಮೆ ಹುಟ್ಟಿಸಿ, ಭಾವನೆಗಳನ್ನು ಕೆರಳಿಸಿ ವಂಚಿಸುವವರಿಗೆ ಮತ ಹಾಕಿದರೆ ನಿಮ್ಮ ಮತಕ್ಕೆ ಗೌರವ ಬರುತ್ತದೆಯಾ? ಅಥವಾ ನುಡಿದಂತೆ ನಡೆದು ರಾಜ್ಯದ ಜನರ ಬದುಕಿಗೆ ಸ್ಪಂದಿಸಿದ ಕಾಂಗ್ರೆಸ್‌ಗೆ ಮತ ಹಾಕಿದರೆ ಆ ಮತಕ್ಕೆ ಗೌರವ ಬರುತ್ತದೆಯಾ? ಎಂದು ಮತದಾರರು ಚಿಂತಿಸಬೇಕಿದೆ. ಕೊಡಗು ಜಿಲ್ಲೆಯ ಮತದಾರರು ಪ್ರಜ್ಞಾವಂತರಾಗಿದ್ದು, ಯೋಚಿಸಿ ಮತ ಚಲಾಯಿಸುತ್ತಾರೆ ಎನ್ನುವ ಭರವಸೆ ಇದೆ ಎಂದರು.

ಅನ್ಯಾಯವಾದಾಗ ಬಾಯಿ ಬಿಟ್ಟಿಲ್ಲ: ಹಿಂದಿನ ಲೋಕಸಭಾ ಚುನಾವಣೆಯಲ್ಲಿ ರಾಜ್ಯದಿಂದ ಬಿಜೆಪಿಯ 25 ಸಂಸದರು ಗೆಲುವು ಸಾಧಿಸಿದ್ದರು. ಆದರೆ, ತೆರಿಗೆ ಹಂಚಿಕೆ ಸೇರಿದಂತೆ ಇತರೆ ವಿಚಾರಗಳಲ್ಲಿ ಕೇಂದ್ರದಿಂದ ಕರ್ನಾಟಕಕ್ಕೆ ಅನ್ಯಾಯವಾದಾಗ ಯಾವ ಸಂಸದರು ಬಾಯಿ ಬಿಟ್ಟರು? ಬಾಯಿ ಬಿಡದ ಸಂಸದರನ್ನು ಮತ್ತೆ ಆಯ್ಕೆ ಮಾಡಿ ಕಳುಹಿಸಬೇಕೆ? ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು. ಸೋಲುವ ಭಯದಿಂದ ಪ್ರತಾಪ್ ಸಿಂಹ ಅವರನ್ನು ಮೈಸೂರು–ಕೊಡಗು ಕ್ಷೇತ್ರದಿಂದ ಬದಲಾಯಿಸಿದ್ದಾರೆ. ಮಳೆ–ಬೆಳೆ ಇಲ್ಲದೇ ಕಣ್ಣೀರಲ್ಲಿ ● 2ನೇ ಪುಟಕ್ಕೆ

ಸಿದ್ದರಾಮಯ್ಯ ಭೇಟಿ ಬೆನ್ನಲ್ಲೆ ಶ್ರೀನಿವಾಸಪ್ರಸಾದ್ ಭೇಟಿ ಮಾಡಿದ ಯಡಿಯೂರಪ್ಪ

● ಶ್ರೀನಿವಾಸ ಪ್ರಸಾದ್ ಜೊತೆ ರಹಸ್ಯ ಮಾತುಕತೆ ● ಮೋದಿ ಕಾರ್ಯಕ್ರಮಕ್ಕೆ ಆಹ್ವಾನ ● ಬಿಎಸ್ ವೈ ಮನವಿ ನಿರಾಕರಿಸಿದ ಪ್ರಸಾದ್ ● ಶ್ರೀನಿವಾಸ ಪ್ರಸಾದ್ ಚಿತ್ತ ಯಾರತ್ತ...

ಮೈಸೂರು, ಏ.14(ಬಿಎಲ್‌ಯು)– ಚಾಮರಾಜನಗರದ ಹಾಲಿ ಸಂಸದ ಶ್ರೀನಿವಾಸ ಪ್ರಸಾದ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ಭೇಟಿ ಮಾಡಿದ ಬೆನ್ನಲ್ಲೆ ಇಂದು ಚೆಕ್ ಮೇಟ್ ಇಟ್ಟ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಶ್ರೀನಿವಾಸ ಪ್ರಸಾದ್ ಅವರನ್ನು ಭೇಟಿ ಮಾಡಿದರು.

ಮೈಸೂರಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಭಾಗವಹಿಸಬೇಕಿದ್ದ ಬಿಜೆಪಿ ಸಮಾವೇಶದಲ್ಲಿ ಪಾಲ್ಗೊಳ್ಳಲು ಇಂದು ಮೈಸೂರಿಗೆ ಆಗಮಿಸಿದ ಯಡಿಯೂರಪ್ಪ, ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ಶ್ರೀನಿವಾಸ ಪ್ರಸಾದ್ ಅವರ ಮನೆಗೆ ನೇರವಾಗಿ ಆಗಮಿಸಿದರು.

ಈ ವೇಳೆ ಯಡಿಯೂರಪ್ಪ ಅವರು ಶ್ರೀನಿವಾಸ ಪ್ರಸಾದ್ ಅವರನ್ನು ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು. ಮೈಸೂರಿಗೆ ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಆಗಮಿಸುತ್ತಿದ್ದು, ಅವರೊಡನೆ ವೇದಿಕೆ ಹಂಚಿಕೊಳ್ಳುವಂತೆ ಯಡಿಯೂರಪ್ಪ ಮನವಿ ಮಾಡಿದರು.

ಆದರೆ ಯಡಿಯೂರಪ್ಪ ಕೋರಿಕೆಯನ್ನು ಸ್ಪಷ್ಟವಾಗಿ ನಿರಾಕರಿಸಿದ ಶ್ರೀನಿವಾಸ ಪ್ರಸಾದ್, ನಾನು ಈಗ ಸಕ್ರಿಯ ರಾಜಕಾರಣದಿಂದ ನಿವೃತ್ತನಾಗಿದ್ದೇನೆ. ಹಾಗಾಗಿ ಸಮಾವೇಶದಲ್ಲಿ ಭಾಗವಹಿಸುವುದಿಲ್ಲ ಎಂದು ಖಡಾಖಂಡಿತವಾಗಿ ತಿಳಿಸಿದರು. ನರೇಂದ್ರ ಮೋದಿ ಜಾಗತಿಕ ನಾಯಕರು. ಅವರ ಜೊತೆ ಐದು ವರ್ಷಗಳ ಕಾಲ ಸಂಸದನಾಗಿ ಸೇವೆ ಸಲ್ಲಿಸಿದ್ದೇನೆ. ಮೋದಿ ನಾನು ಕಂಡ ಅತ್ಯಂತ ಒಳ್ಳೆಯ ಪ್ರಧಾನಮಂತ್ರಿ. ಈ ಹಿನ್ನೆಲೆ ಮೋದಿ ಹಾಗೂ ಬಿಜೆಪಿ ವಿರುದ್ಧ ನಾನು ಏನನ್ನೂ ಮಾತನಾಡುವುದಿಲ್ಲ. ಆದರೆ ಇಂದಿನ ಮೋದಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಪತ್ರಕರ್ತರ ಮುಂದೆಯೇ ಶ್ರೀನಿವಾಸ ಪ್ರಸಾದ್ ನೀಡಿದ ಈ ಪ್ರತಿಕ್ರಿಯೆಯಿಂದ ಯಡಿಯೂರಪ್ಪ ಮುಜುಗರಕ್ಕೊಳಗಾದರು.

ತರುವಾಯ ಪತ್ರಕರ್ತರನ್ನು ಕೋಣೆಯಿಂದ ಹೊರಗೆ ಕಳುಹಿಸಿದ ಯಡಿಯೂರಪ್ಪ ಶ್ರೀನಿವಾಸ ಪ್ರಸಾದ್ ಜೊತೆ ಪ್ರತ್ಯೇಕವಾಗಿ ಸುಮಾರು 15 ನಿಮಿಷಗಳ ಕಾಲ ರಹಸ್ಯ ಮಾತುಕತೆ ನಡೆಸಿದರು. ಮಾಜಿ ಶಾಸಕ ಪ್ರೀತಂ ಗೌಡ, ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ, ಬಿಜೆಪಿ ಜಿಲ್ಲಾಧ್ಯಕ್ಷ ಮಹದೇವಸ್ವಾಮಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಶ್ರೀನಿವಾಸ ಪ್ರಸಾದ್ ಜೊತೆಗಿನ ರಹಸ್ಯ ಮಾತುಕತೆ ನಂತರ ಹೊರಗೆ ಬಂದು ಪ್ರತಿಕ್ರಿಯೆ ನೀಡಿದ ಯಡಿಯೂರಪ್ಪ, ನರೇಂದ್ರ ಮೋದಿ ಅವರ ಇಂದಿನ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದೇನೆ. ಬಿಜೆಪಿ ಸಂಸದರಾಗಿ ಐದು ನಿಮಿಷ ಬಂದು ಹೋಗುವಂತೆ ಕೋರಿದ್ದೇನೆ. ಇದಕ್ಕೆ ಅವರು ಕೂಡ ಒಪ್ಪಿದ್ದಾರೆ. ಈ ಹಿನ್ನೆಲೆ ಶ್ರೀನಿವಾಸ ಪ್ರಸಾದ್ ಬಂದು ಮೋದಿಗೆ ಶುಭಾಶಯ ಕೋರಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ತರುವಾಯ ಪತ್ರಕರ್ತರ ಜೊತೆ ಮಾತನಾಡಿದ ಶ್ರೀನಿವಾಸ ಪ್ರಸಾದ್, ಬಿಜೆಪಿ ಸಮಾವೇಶದಲ್ಲಿ ಭಾಗವಹಿಸು ವಂತೆ ಆಹ್ವಾನ ನೀಡಿದ್ದಾರೆ. ಮನೆಗೆ ಬಂದವರನ್ನು ಸೌಜನ್ಯದಿಂದ ಬರಮಾಡಿ ಕೊಳ್ಳುವುದು ನನ್ನ ಕರ್ತವ್ಯ. ಇದರಿಂದ ಖಡಾ ಖಂಡಿತವಾಗಿ ಬರಲು ಸಾಧ್ಯವಿಲ್ಲ ಎಂದು ಹೇಳುವುದು ಸರಿಯಲ್ಲ ಎಂದರು. ಸೌಜನ್ಯದಿಂದ ಬಂದಾಗ ಪ್ರೀತಿಯಿಂದ ಮಾತನಾಡಿದ್ದೇನೆ. ಕಾರ್ಯಕ್ರಮಕ್ಕೆ ಹೋಗುವುದು ಬಿಡುವುದು ನನ್ನ ಮುಂದಿನ ತೀರ್ಮಾನ ಎಂದು ಹೇಳಿದರು.

ಆದರೆ ಯಡಿಯೂರಪ್ಪ ಭೇಟಿಯ ಆರಂಭದಲ್ಲೆ ಹೇಳಿದಂತೆ ಶ್ರೀನಿವಾಸ ಪ್ರಸಾದ್ ನರೇಂದ್ರ ಮೋದಿ ಅವರ ಇಂದಿನ ಕಾರ್ಯಕ್ರಮಕ್ಕೆ ಆಗಮಿಸಲಿಲ್ಲ.

ಈಗ ಸಿದ್ದರಾಮಯ್ಯ ಹಾಗೂ ಯಡಿಯೂರಪ್ಪ ಇಬ್ಬರು ಶ್ರೀನಿವಾಸ ಪ್ರಸಾದ್ ಭೇಟಿ ಮಾಡಿ ಬೆಂಬಲ ಕೋರಿದ್ದಾರೆ. ಆದರೆ ಶ್ರೀನಿವಾಸ ಪ್ರಸಾದ್ ಯಾರಿಗೆ ಬೆಂಬಲ ನೀಡುತ್ತಾರೆ ಎಂಬುವುದು ಸಹಜ ಕುತೂಹಲವಾಗಿದೆ.



ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ಸಂಸದ ಶ್ರೀನಿವಾಸ ಪ್ರಸಾದ್ ಮನೆಗೆ ಭಾನುವಾರ ಭೇಟಿ ನೀಡಿದ್ದ ಯಡಿಯೂರಪ್ಪ ಮೈಸೂರಿನಲ್ಲಿ ನಡೆಯುತ್ತಿದ್ದ ಪ್ರಧಾನಮಂತ್ರಿ ನರೇಂದ್ರ ಮೋದಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಈತನನ್ನು ನೋಡಿಕೊಳ್ರಪ್ಪಾ....

ಮಾಜಿ ಶಾಸಕರೂ ಆದ ತಮ್ಮ ಅಳಿಯ ಹರ್ಷವರ್ಧನ್ ರಾಜಕೀಯ ಭವಿಷ್ಯ ನೆನೆದು ಶ್ರೀನಿವಾಸ ಪ್ರಸಾದ್ ಭಾವುಕರಾದ ಪ್ರಸಂಗ ಇಂದು ನಡೆಯಿತು.

ತಾವಿದ್ದ ಸ್ಥಳದತ್ತ ಹರ್ಷವರ್ಧನ್ ಬರುತ್ತಿರುವುದನ್ನು ನೋಡಿ ಮುಗುಳ್ನಕ್ಕ ಶ್ರೀನಿವಾಸ ಪ್ರಸಾದ್, ಪ್ರೀತಮ್‌ಗೌಡ ಕೈ ಹಿಡಿದು ಈತನನ್ನು ನೋಡಿಕೊಳ್ರಪ್ಪಾ ಎಂದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಪ್ರೀತಂಗೌಡ, ನಾವು ಯಾರನ್ನು ಕೈ ಬಿಡುವುದಿಲ್ಲ ಎಂದು ಅಭಯ ನೀಡಿದರು. ಪ್ರೀತಮ್‌ಗೌಡ ಮಾತಿನಿಂದ ಶ್ರೀನಿವಾಸ ಪ್ರಸಾದ್ ಭಾವುಕರಾದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರೀತಮ್ ಗೌಡರನ್ನು ಹೊಗಳಿದ ಶ್ರೀನಿವಾಸ ಪ್ರಸಾದ್, ಪ್ರೀತಮ್‌ಗೌಡ ನೇರವಾಗಿ ಮಾತನಾಡುವ ರಾಜಕಾರಣಿ. ಇಂತವರು ರಾಜಕಾರಣದಲ್ಲಿ ಇರಬೇಕು ಎಂದು ಅಭಿಪ್ರಾಯಪಟ್ಟರು. ಈ ವೇಳೆ ಮತ್ತೊಬ್ಬ ಅಳಿಯ ಡಾ.ಮೋಹನ್ ಕೂಡ ಹಾಜರಿದ್ದರು.

ಶ್ರೀನಿವಾಸ ಪ್ರಸಾದ್ ನೋಯಿಸಿದವರಿಂದ ಈಗ ರಾಜಕೀಯ ಲಾಭಕ್ಕಾಗಿ ಭೇಟಿ

ಈ ಹಿಂದೆ ಶ್ರೀನಿವಾಸ ಪ್ರಸಾದ್ ಅವರನ್ನು ನೋಯಿಸಿದವರು ಇಂದು ತಮ್ಮ ರಾಜಕೀಯ ಲಾಭಕ್ಕಾಗಿ ಅವರನ್ನು ಭೇಟಿ ಮಾಡಲು ಬರುತ್ತಿದ್ದಾರೆ ಶ್ರೀನಿವಾಸ ಪ್ರಸಾದ್ ಅಳಿಯ, ಮಾಜಿ ಶಾಸಕ ಹರ್ಷವರ್ಧನ್ ಕಿಡಿಕಾರಿದರು.

ಈ ಹಿಂದೆ ಶ್ರೀನಿವಾಸ ಪ್ರಸಾದ್ ಅವರನ್ನು ನೋಯಿಸಿದ್ದರು. ಆದರೆ ಈಗ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಅವರನ್ನೇ ಭೇಟಿ ಮಾಡಲು ಬರುತ್ತಿದ್ದಾರೆ. ಆದರೆ ತಮ್ಮ ಮಾವ ಎಲ್ಲಿಯೂ, ಯಾರ ಬಳಿಯೂ ಯಾರ ಬೆಂಬಲದ ಬಗ್ಗೆ ಮಾತನಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ನಮ್ಮ ಮಾವನವರಿಗೆ ಆರೋಗ್ಯ ಸರಿ ಇಲ್ಲ. ಕಾಲಿಗೆ ಗಾಯವಾಗಿದೆ. ಹೆಚ್ಚು ನಡೆಯಲು ಸಾಧ್ಯವಾಗುತ್ತಿಲ್ಲ. ಒಂದು ವಾರದ ಹಿಂದೆಯೇ ಮಹದೇವಸ್ವಾಮಿ ಹಾಗೂ ಮಾಜಿ ಶಾಸಕ ನಿರಂಜನ್ ಕುಮಾರ್ ಕೂಡ ಮೋದಿ ಕಾರ್ಯಕ್ರಮಕ್ಕೆ ಆಹ್ವಾನ ನೀಡಿದ್ದರು. ಆದರೆ ಆರೋಗ್ಯದ ಸಮಸ್ಯೆ ಕಾರಣ ನಾನು ಬರಲು ಸಾಧ್ಯವಿಲ್ಲ ಎಂದು ತಿಳಿಸಿದ್ದರು ಎಂದರು. ಇದೇ ಸಂದರ್ಭ ಬಳಸಿಕೊಂಡ ಕೆಲವರು ತಮ್ಮ ರಾಜಕೀಯ ಲಾಭಕ್ಕಾಗಿ ಶ್ರೀನಿವಾಸ ಪ್ರಸಾದ್ ಭೇಟಿ ಮಾಡಲು ಬರುತ್ತಿದ್ದಾರೆ. ಹಿಂದೆ ಅವರನ್ನು ನೋಯಿಸಿದವರೆ ಈಗ ಭೇಟಿಯಾಗುತ್ತಿದ್ದಾರೆ ಎಂದು ಹರ್ಷವರ್ಧನ್ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವ ಕಾರಣ ಶ್ರೀನಿವಾಸ ಪ್ರಸಾದ್ ಅವರ ಕೆಲವು ಬೆಂಬಲಿಗರು ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ. ಇದರಲ್ಲಿ ವೈಯಕ್ತಿಕ ಲಾಭ ಬಿಟ್ಟು ಬೇರೇನು ಇಲ್ಲ. ಶ್ರೀನಿವಾಸ ಪ್ರಸಾದ್ ಅವರ ಲಕ್ಷಾಂತರ ಬೆಂಬಲಿಗರಿದ್ದಾರೆ. ಆದರೆ ಅವರ ಕಟ್ಟಾ ಬೆಂಬಲಿಗರು ಯಾವುದೇ ಸಭೆ ಸಮಾರಂಭ ಮಾಡಿ ಯಾರಿಗೂ ಬೆಂಬಲ ವ್ಯಕ್ತಪಡಿಸಿಲ್ಲ. ಈಗ ಕಾಂಗ್ರೆಸ್ ಸೇರಿದವರಿಗೆ ಮತ ಬ್ಯಾಂಕ್ ಇಲ್ಲ ಎಂದು ಟೀಕಿಸಿದರು. ನಾನು ಯಾವುದೇ ಕಾರಣಕ್ಕೂ ಬಿಜೆಪಿ ಬಿಟ್ಟು ಹೋಗುವುದಿಲ್ಲ. ನನ್ನನ್ನು ಕಾಂಗ್ರೆಸ್ ನಾಯಕರು ಸಂಪರ್ಕ ಮಾಡುವ ಪ್ರಯತ್ನ ಕೂಡ ಮಾಡಿಲ್ಲ. ಅವರಿಗೆ ನಾನು ಏನು ಎಂದು ಅರ್ಥವಾಗಿರುವ ಕಾರಣ ನನ್ನನ್ನು ಸಂಪರ್ಕಿಸಿಲ್ಲ. ನಾನು ನಮ್ಮ ಬಿಜೆಪಿ ಅಭ್ಯರ್ಥಿ ಬಾಲರಾಜ್ ಗೆಲ್ಲಿಸಲು ಪ್ರಯತ್ನಿಸುತ್ತಿದ್ದೇನೆ ಎಂದು ತಿಳಿಸಿದರು.

ಚಾಮರಾಜನಗರ ಕಾಂಗ್ರೆಸ್ ಭದ್ರಕೋಟೆ. ಕಳೆದ ಬಾರಿ ಶ್ರೀನಿವಾಸ ಪ್ರಸಾದ್ ಬಿಟ್ಟು ಯಾರೇ ಸ್ಪರ್ಧೆ ಮಾಡಿದ್ದರೂ ಬಿಜೆಪಿ ಗೆಲುವು ಕಷ್ಟವಾಗುತ್ತಿತ್ತು. ನಾನು ಹಾಗೂ ನಿರಂಜನ್ ಬಿಜೆಪಿ ಚಿಹ್ನೆಯಲ್ಲಿ ಗೆದ್ದಿದ್ದೆ ಈ ಕಾರಣದಿಂದ. ಆದ ಕಾರಣ ಈಗಿನ ಪರಿಸ್ಥಿತಿ ನೋಡಿ ಚಾಮರಾಜನಗರದಲ್ಲಿ ಕಾಂಗ್ರೆಸ್ ಗೆ ಚೆನ್ನಾಗಿದೆ ಎಂದು ಶ್ರೀನಿವಾಸ ಪ್ರಸಾದ್ ಹೇಳಿದ್ದರು. ಇದರಲ್ಲಿ ಬೇರೆ ಅರ್ಥವಿಲ್ಲ ಎಂದು ಹರ್ಷವರ್ಧನ್ ಸ್ಪಷ್ಟಪಡಿಸಿದರು.

ಹಳ್ಳಿ ಹೆಣ್ಣುಮಕ್ಕಳು ದಾರಿ ತಪ್ಪಿದ್ದಾರೆ ಹೇಳಿಕೆ: ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಸುಮೋಟೋ ಪ್ರಕರಣ ದಾಖಲಿಸಿಕೊಂಡ ಮಹಿಳಾ ಆಯೋಗ



ಬೆಂಗಳೂರು, ಏ.14– ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಿಂದಾಗಿ ಹಳ್ಳಿ ಹೆಣ್ಣು ಮಕ್ಕಳು ದಾರಿ ತಪ್ಪಿದ್ದಾರೆ ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ರಾಜ್ಯ ಮಹಿಳಾ ಆಯೋಗ ಸ್ವಯಂಪ್ರೇರಿತ ಕೇಸ್ ದಾಖಲಿಸಿಕೊಂಡಿದೆ.

ಈ ಹೇಳಿಕೆ ನೀಡುವ ಮೂಲಕ ಹೆಚ್‌ಡಿ ಕುಮಾರಸ್ವಾಮಿ ಅವರು ಮಹಿಳೆಯರ ಘನತೆಗೆ, ಚಾರಿತ್ರ್ಯಕ್ಕೆ ಧಕ್ಕೆ ತಂದಿದ್ದಾರೆ. ಈ ಹಿನ್ನಲೆಯಲ್ಲಿ ಕುಮಾರಸ್ವಾಮಿ ಹೇಳಿಕೆಯನ್ನು ಮಹಿಳಾ ಆಯೋಗ ಗಂಭೀರವಾಗಿ ಪರಿಗಣಿಸಿ ಸುಮೋಟೋ ಪ್ರಕರಣ ದಾಖಲಿಸಿಕೊಂಡಿದ್ದು, ನೋಟಿಸ್ ಜಾರಿ ಮಾಡಲಿದೆ ಎಂದು ಆಯೋಗದ ಮೂಲಗಳು ತಿಳಿಸಿವೆ. ತುಮಕೂರಿನ ತುರುವೇಕೆರೆಯಲ್ಲಿ ಮೈತ್ರಿ ಅಭ್ಯರ್ಥಿ ವಿ.ಸೋಮಣ್ಣ ಪರ ಪ್ರಚಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ಟೀಕಿಸುವ ಭರದಲ್ಲಿ ಹಳ್ಳಿಯ ಹೆಣ್ಣು ಮಕ್ಕಳ ಬಗ್ಗೆ ಲಘುವಾಗಿ ಮಾತನಾಡಿದ್ದರು.

ಹೆಚ್‌ಡಿಕೆ ಸ್ಪಷ್ಟನೆ: ಮಹಿಳೆಯರಿಗೆ ಮುಗ್ಧತೆಯನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವ ಗ್ಯಾರಂಟಿಗಳ ಬಗ್ಗೆ ಎಚ್ಚರದಿಂದಿರಿ ಅಂದಿದ್ದೇನೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ.

ಈ ಸಂಬಂಧ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಕಾಂಗ್ರೆಸ್‌ನವರು ಗ್ಯಾರಂಟಿಗಳ ಹೆಸರಲ್ಲಿ ಹಳ್ಳಿಯ ಮುಗ್ಧ ಹೆಣ್ಣುಮಕ್ಕಳನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಹೇಳಿದ್ದೇನೆ. ನಿಮಗೆ ಕೈ ಎತ್ತಿ ಕೊಡುವ ಶಕ್ತಿ ಕೊಡದೆ ಭಿಕ್ಷೆ ಬೇಡುವ ಪರಿಸ್ಥಿತಿಯಲ್ಲಿ ಇಟ್ಟಿದ್ದಾರೆ. ಇದರ ಬಗ್ಗೆ ಎಚ್ಚರದಿಂದ ದಾರಿತಪ್ಪದೆ ಗಮನಿಸಬೇಕೆಂದು ಹೇಳಿದ್ದೇನೆ ಎಂದು ಸ್ಪಷ್ಟನೆ ಕೊಟ್ಟರು. ನಾನು ಸಾರ್ವಜನಿಕ ಜೀವನಕ್ಕೆ ಬರುವುದಕ್ಕಿಂತ ಮುಂಚೆಯಿಂದಲೂ ಕಷ್ಟ ಎಂದು ಬರುವ ಜನರಿಗೆ ಆಸರೆಯಾಗಿದ್ದೇನೆ.

ಕೋಟ್ಯಂತರ ಜನರಿಗೆ ಅನುಕೂಲ ಮಾಡಿಕೊಟ್ಟಿದ್ದೇನೆ. ತಾಯಂದಿರು ಸಾರಾಯಿ ನಿಷೇಧ ಮಾಡುವಂತೆ ಮನವಿ ಮಾಡಿದಾಗ ಅವರಿಗೆ ಗೌರವ ಕೊಟ್ಟು ಸಾರಾಯಿ ನಿಷೇಧ ಮಾಡಿದ್ದೇನೆ. ಇದು ನಾನು ಮಹಿಳೆಯರಿಗೆ ಕೊಟ್ಟ ಗೌರವ ಎಂದರು. ನಿನ್ನೆ ನಾನು ಮಹಿಳೆಯರಿಗೆ ಅಗೌರವವಾಗಿ ಮಾತನಾಡಿಲ್ಲ ಎಂದರು.

ಕಾಂಗ್ರೆಸ್ ಸರ್ಕಾರ ಭ್ರಷ್ಟ ಸರ್ಕಾರ ಎಂದೇಳಲು ಸಾಕ್ಷಿ ಕೊಡಿ

● ಪ್ರಧಾನಮಂತ್ರಿ ಮೋದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ● ಎನ್.ಆರ್.ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಪರ ಪ್ರಚಾರ

ಮೈಸೂರು, ಏ.14(ಎಂಕೆ)– ಚುನಾವಣಾ ಸಂದರ್ಭ ಬಿಟ್ಟರೆ ಕರ್ನಾಟಕಕ್ಕೆ ಪ್ರವಾಹ, ಬರಗಾಲ ಬಂದಾಗ ಬಂದು ಜನರ ಕಷ್ಟ ಕೇಳದ ನರೇಂದ್ರ ಮೋದಿಯವರ ಸುಳ್ಳು ಆರೋಪಗಳಿಂದ ಕಾಂಗ್ರೆಸ್ ಸರ್ಕಾರ ಭ್ರಷ್ಟ ಸರ್ಕಾರ ಎಂದೇಳಲು ಸಾಧ್ಯವೇ ಇಲ್ಲ. ಇದ್ದರೆ ಅದಕ್ಕೆ ಸಾಕ್ಷಿ ಕೊಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ಹಾಕಿದರು.

ನರಸಿಂಹರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಜೀಜ್‌ಸೇಠ್ ನಗರದ ಮೈದಾನದಲ್ಲಿ ಭಾನುವಾರ ಆಯೋಜಿಸಿದ್ದ ಮೈಸೂರು–ಕೊಡಗು ಲೋಕಸಭಾ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಪ್ರಚಾರ ಸಮಾವೇಶದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರು ಇವತ್ತು ಮೈಸೂರಿಗೆ ಬಂದು ರಾಜ್ಯ ಸರ್ಕಾರವನ್ನು ಲೂಟಿ ಸರ್ಕಾರ ಎಂದು ಟೀಕೆ ಮಾಡಿ ಹೋಗಿದ್ದಾರೆ. ಮೋದಿಜೀ ನಿಮ್ಮ ಬಿಜೆಪಿ ಸರ್ಕಾರ ಮಾತ್ರ 40 ಪರ್ಸೆಂಟ್ ಸರ್ಕಾರ. ನೀವು ಪ್ರಾಮಾಣಿಕ ಎಂದು ಹೇಳುವ ನಿಮ್ಮ ಪಕ್ಷಕ್ಕೆ ಕಾರ್ಪೋರೇಟ್ ಬಾಂಡ್‌ಗಳ ಮೂಲಕ ಹಣ ಶೇಖರಣೆ ಮಾಡಿದ್ದಿರಲ್ಲಾ ಅದಕ್ಕೆ ತೆರಿಗೆ ಕಟ್ಟಿದ್ದೀರಾ? ನೀವು ತೆರಿಗೆ ಕಟ್ಟದೆ ಈ ದೇಶದ ಪ್ರಧಾನಿಯಾಗಿ ಅಪರಾಧ ಮಾಡಿದ್ದು, ಈ ಅಪರಾಧದ ಹೊಣೆಯನ್ನು ಯಾರು ಹೊರುತ್ತಾರೆ ಎಂಬುದನ್ನು ಸ್ಪಷ್ಟಪಡಿಸಿ ಎಂದರು.

ಈಗ ಬಂದು ಸುಳ್ಳು ಆರೋಪಗಳನ್ನು ಮಾಡಿ ಹೋಗಿದ್ದಿರಲ್ಲಾ... ಇದು ಪ್ರಧಾನ ಮಂತ್ರಿ ಸ್ಥಾನಕ್ಕೆ ಗೌರವ ತರುವಂತಹದಲ್ಲ. ಮೋದಿಯವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಬಹುಶಃ ಸ್ವಾತಂತ್ರ್ಯ ಭಾರತದಲ್ಲಿ ಹೆಚ್ಚು ಸುಳ್ಳುಗಳನ್ನು ಹೇಳಿದ ಪ್ರಧಾನ ಮಂತ್ರಿಗಳು ಇದ್ದರೆ ಅದು ಮಿಸ್ಟರ್ ನರೇಂದ್ರ ಮೋದಿ. ನಿಮ್ಮ ಸುಳ್ಳು ಆರೋಪಗಳಿಂದ ಕಾಂಗ್ರೆಸ್ ಸರ್ಕಾರ ಭ್ರಷ್ಟ ಸರ್ಕಾರ ಎಂದೇಳಲು ಸಾಧ್ಯವೇ ಇಲ್ಲ. ಇದ್ದರೆ ಅದಕ್ಕೆ ಸಾಕ್ಷಿ ಕೊಡಿ ಎಂದರು.

ಬಡವರು, ದಲಿತರು, ಅಲ್ಪಸಂಖ್ಯಾತರು, ಮಹಿಳೆಯರ ಸಮಸ್ಯೆಗಳು, ನಿರುದ್ಯೋಗ, ಆಹಾರ ಪದಾರ್ಥಗಳ ಬೆಲೆ ಏರಿಕೆ ಬಗ್ಗೆ ಎಂದೂ ಮಾತನಾಡದ ಮೋದಿಯವರು, ಮಾಡಿರುವುದು ಶ್ರೀಮಂತರ ಕೆಲಸ ಮಾತ್ರ. ಪ್ರಧಾನಿಯಾಗಿ ಹತ್ತು ವರ್ಷವಾಗಿದೆ. ಮೈಸೂರು ಭಾಗದಲ್ಲಿ ಒಂದೇ ಒಂದು ಅಭಿವೃದ್ಧಿ ಕೆಲಸ ಮಾಡದ ನೀವು ಇಲ್ಲಿಗೆ ಯಾವ ಮುಖ ಇಟ್ಟುಕೊಂಡು ಬಂದಿದ್ದೀರಿ. ಈ ಭಾಗದ ಜನರ ಮತ ಕೇಳುವ ನೈತಿಕತೆ ನಿಮಗಿಲ್ಲ ಎಂದು ಲೇವಡಿ ಮಾಡಿದರು.

ಒಂದೇ ಒಂದು ರೂಪಾಯಿಯನ್ನು ಬಳಸಲ್ಲ: ರಾಜ್ಯದಲ್ಲಿ ಬರಗಾಲ ಬಂದಿದೆ. ರೈತರು ಕಣ್ಣೀರಿಡುತ್ತಿದ್ದಾರೆ. ಪರಿಹಾರ ಕೊಡಿ ಎಂದು ಸ್ವತಃ ನಿಮ್ಮ ಬಳಿಗೆ ಬಂದು ಮನವಿ ಮಾಡಿದ್ದೇನೆ. ಮನವಿ ಮಾಡಿ ಆರು ತಿಂಗಳಾಗಿದೆ. ಬರಗಾಲಕ್ಕೆ ಪರಿಹಾರ ಕೊಡಿ ಎಂದರೆ ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿಕೊಳ್ಳುತ್ತಾರೆ ಎನ್ನುತ್ತೀರಿ. ನಾವು ಎಂದಿಗೂ ಗ್ಯಾರಂಟಿ ಯೋಜನೆಗಳಿಗೆ ಅನುದಾನ ಕೇಳಿಲ್ಲ ಕೇಳುವುದೂ ಇಲ್ಲ. ಕೇಂದ್ರದಿಂದ ಬರುವ ಒಂದೇ ಒಂದು ರೂಪಾಯಿಯನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲ್ಲ ಎಂದು ಸ್ಪಷ್ಟಪಡಿಸಿದರು.

ಎಲ್ಲಾ ಗ್ಯಾರಂಟಿಗಳು ಜಾರಿ: ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಹೊರಡಿಸಿರುವ ಚುನಾವಣಾ ಪ್ರಣಾಳಿಕೆಯಲ್ಲಿ ಮಹಿಳೆಯರಿಗೆ ವರ್ಷಕ್ಕೆ ಒಂದು ಲಕ್ಷ ರೂ. ನೀಡಲಾಗುವುದು. ರೈತರ ಸಾಲ ಮನ್ನಾ, ರೈತರು ಬೆಳೆದ ಬೆಳೆಗೆ ಬೆಂಬಲ ಬೆಲೆ. ನಿರುದ್ಯೋಗಿಗಳಿಗೆ ಲಕ್ಷ ರೂ. ನಿರುದ್ಯೋಗ ಭತ್ಯೆ ಸೇರಿದಂತೆ ಎಲ್ಲಾ ಗ್ಯಾರಂಟಿಗಳನ್ನು ಜಾರಿಗೊಳಿಸಲಾಗುವುದು. ನಾವು ನುಡಿದಂತೆ ನಡೆಯುತ್ತೇವೆ. ಮಾತು ತಪ್ಪಿದರೆ ರಾಜಕೀಯವನ್ನೇ ಬಿಟ್ಟುಬಿಡುತ್ತೇವೆಯೇ ಹೊರತು ಸುಳ್ಳು ಹೇಳಿ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡಲ್ಲ ಎಂದು ಭರವಸೆ ನೀಡಿದರು.

ದೇಶದಲ್ಲಿರುವುದು ಗ್ಯಾರಂಟಿ ಗಾಳಿ: ಚುನಾವಣೆ ಸಂದರ್ಭದಲ್ಲಿ ರಾಜ್ಯಕ್ಕೆ ಬರುವ ಮೋದಿಯವರು ಸುಳ್ಳು ಹೇಳಿ ಹೋಗುತ್ತಾರೆ. ಅಭ್ಯರ್ಥಿಗಳಲ್ಲಿ ಯಾರಿಗೂ ಸ್ವತಂತ್ರವಾಗಿ ಗೆಲ್ಲುವ ಶಕ್ತಿ ಇಲ್ಲ. ದೇಶದಲ್ಲಿ ಇರುವುದು ಮೋದಿ ಗಾಳಿಯಲ್ಲ. ದೇಶದ ಉದ್ದಗಲಕ್ಕೂ ಗ್ಯಾರಂಟಿ ಗಾಳಿ ಆವರಿಸಿದೆ ಎಂದರಲ್ಲದೆ ನರಸಿಂಹರಾಜ ಕ್ಷೇತ್ರ ಕಾಂಗ್ರೆಸ್ ಭದ್ರಕೋಟೆಯಾಗಿದ್ದು, ತನ್ವೀರ್ ಸೇಠ್ 6 ಬಾರಿ, ಅವರ ತಂದೆ 6 ಬಾರಿ, ಅವರ ದೊಡ್ಡಪ್ಪ 1 ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಮುಂದೆಯೂ ಎನ್.ಆರ್ ಕ್ಷೇತ್ರ ಕಾಂಗ್ರೆಸ್ ಭದ್ರಕೋಟೆಯೇ ಆಗಿರಲಿದ್ದು, ಲೋಕಸಭಾ ಚುನಾವಣೆಯ ಅಭ್ಯರ್ಥಿ ಎಂ. ಲಕ್ಷ್ಮಣನನ್ನು ಅತೀ ಹೆಚ್ಚು ಮತಗಳಿಂದ ಗೆಲ್ಲಿಸಿ ಎಂದು ಕರೆ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಶಾಸಕ ತನ್ವೀರ್ ಸೇಠ್, ವಿಧಾನಪರಿಷತ್ ಸದಸ್ಯರಾದ ಡಾ.ತಿಮ್ಮಯ್ಯ, ನಜೀರ್ ಅಹಮದ್, ಮಾಜಿ ಶಾಸಕರಾದ ಎಂ.ಕೆ. ಸೋಮಶೇಖರ್, ಭಾರತೀಶಂಕರ್, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪ, ನಗರಾಧ್ಯಕ್ಷ ಆರ್.ಮೂರ್ತಿ, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ನಗರಪಾಲಿಕೆ ಮಾಜಿ ಸದಸ್ಯರಾದ ಆರೀಫ್ ಉಸೇನ್, ಪಂಡು, ಎನ್.ಆರ್ ಕ್ಷೇತ್ರದ ಸಾಹುಕಾರ್ ಚೆನ್ನಯ್ಯ ಬ್ಲಾಕ್‌ನ ಅಧ್ಯಕ್ಷ ಜಿ.ಎನ್. ಮಂಜುನಾಥ್, ಅಜೀಜ್ ಸೇಠ್ ಬ್ಲಾಕ್ ಅಧ್ಯಕ್ಷ ಸೈಯ್ಯದ್ ಇಕ್ಬಾಲ್ ಮತ್ತಿತರರಿದ್ದರು.



ಅಜೀಜ್‌ಸೇಠ್ ನಗರದ ಮೈದಾನದಲ್ಲಿ ಆಯೋಜಿಸಿದ್ದ ಮೈಸೂರು–ಕೊಡಗು ಲೋಕಸಭಾ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಪ್ರಚಾರ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ಜರ್ಮನಿಯ ಹಿಟ್ಲರ್, ಇಟಲಿಯ ಮುಸಲೋನಿ ತತ್ವದ ಮೇಲೆ ನಂಬಿಕೆ ಇಟ್ಟಿರುವ ಬಿಜೆಪಿಯವರು ಭಾರತ ಸಂವಿಧಾನವನ್ನು ಬದಲಾವಣೆ ಮಾಡಲು ಹೊಂಚು ಹಾಕುತ್ತಿದ್ದಾರೆ. ಹಾಗಾಗಿ ಈ ಲೋಕಸಭಾ ಚುನಾವಣೆ ಅತ್ಯಂತ ಮಹತ್ವದ್ದಾಗಿದ್ದು, ಭಾರತ ಸಂವಿಧಾನ, ಪ್ರಜಾತಂತ್ರ ವ್ಯವಸ್ಥೆ ಉಳಿಯಬೇಕಾದರೆ ಕೇಂದ್ರದಲ್ಲಿ ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬರಬೇಕು. ಗ್ಯಾರಂಟಿ ಯೋಜನೆಗಳಿಂದ ಹೆಣ್ಣು ಮಕ್ಕಳು ದಾರಿ ತಪ್ಪುತ್ತಿದ್ದಾರೆ ಎಂದರೆ ಏನರ್ಥ. ನಿಮ್ಮ ಸ್ವಾಭಿಮಾನಕ್ಕೆ ಧಕ್ಕೆ ತಂದವರ ವಿರುದ್ಧ ಪ್ರತಿಭಟಿಸಿ, ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳನ್ನು ಸೋಲಿಸಿ.

–ಸಿದ್ದರಾಮಯ್ಯ, ಮುಖ್ಯಮಂತ್ರಿ

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

15.04.2024 ಸೋಮವಾರ, ಮಳೆ ನಕ್ಷತ್ರ: ಅಶ್ವಿನಿ 13.04.2024 ರಿಂದ 26.04.2024
ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ,
ತಿಥಿ: ಸಪ್ತಮಿ, ನಕ್ಷತ್ರ: ಪುನರ್ವಸು, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಯುನೈಟೆಡ್ ಸ್ಪೋರ್ಟ್ಸ್ ಕ್ಲಬ್, ದೈಹಿಕ ಶಿಕ್ಷಣ ಶಿಕ್ಷಕರ ಅಕಾಡೆಮಿ ಟ್ರಸ್ಟ್, ಮೈಸೂರು :** ಒಂದು ತಿಂಗಳ ಕಾಲ 8ರಿಂದ 16 ವರ್ಷದೊಳಗಿನ ಬಾಲಕ–ಬಾಲಕಿಯರಿಗೆ ಉಚಿತ ಖೋ–ಖೋ ಬೇಸಿಗೆ ತರಬೇತಿ ಶಿಬಿರ, ಉದ್ಘಾಟನೆ: ನಿವೃತ್ತ ಉಪನಿರ್ದೇಶಕ (ಅಕ್ಯಾಡೆಮಿಕ್ಸ್) ಡಾ.ಹೆಚ್.ವಿ.ನಟರಾಜ್, ಅಧ್ಯಕ್ಷತೆ: ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿವೃತ್ತ ನಿರ್ದೇಶಕ ಡಾ.ಸಿ.ಕೃಷ್ಣ, ಸ್ಥಳ: ರೋಟರಿ ಮೈಸೂರು ಶಾಲೆ, ಕನಕದಾಸನಗರ, ಬೆಳಗ್ಗೆ 7 ಗಂಟೆಯಿಂದ.

■ **ತ್ರಯೀನ್ಯಾಸ್ ಶ್ರೀ ವಿದ್ಯಾ ಫೌಂಡೇಷನ್:** 15ನೇ ವರ್ಷದ ವಸಂತ ನವರಾತ್ರಿ ಮಹೋತ್ಸವ, ಬೆಳಗ್ಗೆ 8.30ಕ್ಕೆ ಮಹಾಭಿಷೇಕ, ಸಪ್ತಶತಿ ಪಾರಾಯಣ, ಲಲಿತೋಪಾಖ್ಯಾನ ಪಾರಾಯಣ, ಶ್ರೀ ಚಕ್ರಾರ್ಚನೆ, ಸಂಜೆ 5.30ಕ್ಕೆ ಶ್ರೀ ದಶಶ್ಯಾಮಲಾ ಹೋಮ, ಶ್ರೀ ನಾಗ್ವಾದಿನಿ, ಶ್ರೀ ವಾಗೀಶ್ವರಿ, ಶ್ರೀ ಶುಕಶ್ಯಾಮಲಾ, ಶ್ರೀ ವೀಣಾ ಶ್ಯಾಮಲಾ, ಶ್ರೀ ವೇಣು ಶ್ಯಾಮಲಾ, ಶ್ರೀ ಶಾರಿಕಾಶ್ಯಾಮಲಾ, ಶ್ರೀನಕುಲಿ ಶ್ಯಾಮಲಾ, ಶ್ರೀ ಹಸಂತಿ ಶ್ಯಾಮಲಾ, ಶ್ರೀ ಲಘು ಶ್ಯಾಮಲಾ, ಶ್ರೀ ಹಯಗ್ರೀವ, ಶ್ರೀ ರಾಜಶ್ಯಾಮಲಾ, ಆವರಣಾಂಗ ಹೋಮ, ಪೂರ್ಣಾಹುತಿ, ಕುಂಕುಮಾರ್ಚನೆ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ತ್ರಯೀನ್ಯಾಸ್ ಆವರಣ, ಜಯಲಕ್ಷ್ಮಿಪುಂ.

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ ಸಂಜೆ 7ರವರೆಗೆ

■ **ಶಾರದಾ ವಿಲಾಸ ಶಿಕ್ಷಣ ಸಂಸ್ಥೆಗಳು:** ಡಾ. ಬಿ.ಆರ್. ಅಂಬೇಡ್ಕರ್‌ರವರ 133ನೇ ಜಯಂತ್ಯುತ್ಸವ, ಮುಖ್ಯ ಅತಿಥಿಗಳು: ಸಾಂವಿಧಾನಿಕ ತಜ್ಞರಾದ ಡಾ.ಸುಧಾಕರ ಹೊಸಳ್ಳಿ, ಅಧ್ಯಕ್ಷತೆ: ಶಾರದಾ ವಿಲಾಸ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಬಿ.ಎಂ.ಸುಬ್ರಾಯ, ಉಪಸ್ಥಿತರು: ಸಂಸ್ಥೆಯ ಗೌರವ ಕಾರ್ಯದರ್ಶಿ ಎನ್.ಚಂದ್ರಶೇಖರ್, ಸ್ಥಳ: ಪ್ರೊ.ಚಿನ್ನಸ್ವಾಮಿ ಶೆಟ್ಟಿ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ

■ **ಶ್ರೀ ನಟರಾಜ ಪ್ರತಿಷ್ಠಾನ, ವಾತ್ಸಲ್ಯ ಶಿಕ್ಷಣ ಮಹಾ ವಿದ್ಯಾಲಯ:** ಬಿ.ಇಡಿ ಪಠ್ಯಕ್ರಮ ಪರಿಷ್ಕರಣೆ ಕಾರ್ಯಾಗಾರ, ದಿವ್ಯ ಸಾನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನದ ಅಧ್ಯಕ್ಷ ಶ್ರೀ ಚಿದಾನಂದ ಮಹಾಸ್ವಾಮಿಗಳು, ಉದ್ಘಾಟನೆ: ಮೈಸೂರು ವಿವಿ ಶಿಕ್ಷಣ ಮಂಡಳಿ ಅಧ್ಯಕ್ಷ ಡಾ.ಪುಷ್ಪ ಎಂ, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸೆಮಿನಾರ್‌ಹಾಲ್, ಬೆಳಗ್ಗೆ 10.30ಕ್ಕೆ.

■ **ಮೈಸೂರು ಆರ್ಟ್ ಗ್ಯಾಲರಿ:** ಅರಸಿಕುಮಾರ್ ಅವರ ವಿಶಿಷ್ಟ 3ಡಿ ಛಾಯಾಚಿತ್ರಗಳ ಪ್ರದರ್ಶನ ಮತ್ತು ಪ್ರಾತ್ಯಕ್ಷಿಕೆ, ಉದ್ಘಾಟನೆ: ಹಿರಿಯ ಪತ್ರಕರ್ತ ಕೆ.ನರಸಿಂಹಮೂರ್ತಿ, ಅಧ್ಯಕ್ಷತೆ: ಮೈಸೂರು ಆರ್ಟ್ ಗ್ಯಾಲರಿಯ ಅಧ್ಯಕ್ಷ ಎಲ್.ಶಿವಲಿಂಗಪ್ಪ, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ಬೆಳಗ್ಗೆ 11 ಗಂಟೆಗೆ.

■ **ಕಾದಂಬರಿ ಏಜೆನ್ಸೀಸ್ ಮತ್ತು ವಿಕಲ ವಿಕಾಸ ಟ್ರಸ್ಟ್ :** ಮಕ್ಕಳ ಪುಸ್ತಕಗಳ ಪ್ರದರ್ಶನ ಮತ್ತು ಮಾರಾಟ, ಉದ್ಘಾಟನೆ: ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಮಾನಸ, ಅಧ್ಯಕ್ಷತೆ: ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸ್ಥಳ: ನಂ.45, ಕೆ.ಆರ್. ಸರ್ಕಲ್, ದೇವರಾಜ ಅರಸು ರಸ್ತೆ, ಸಂಜೆ 5.30ಕ್ಕೆ

■ **ನೃತ್ಯ ವಿದ್ಯಾಪೀಠ:** ಶ್ರೀಮತಿ ಶೋಭಾ ಬಾಲಕೃಷ್ಣ ಹಾಗೂ ಜಿ.ಎಂ.ಬಾಲಕೃಷ್ಣ ಅರ್ಪಿಸುವ ಗುರು ವಿದುಷಿ ಸಿ.ಎಸ್.ಅನಿತ ಅವರ ಶಿಷ್ಯೆ ಕುಮಾರಿ ವಿಧುಷಿ ಡಾ.ವಂದಿತ ಕೃಷ್ಣ ಅವರಿಂದ 'ಆಹ್ಲಾದ ನರ್ತನಂ' ಭರತನಾಟ್ಯ ಏಕವ್ಯಕ್ತಿ ಪ್ರದರ್ಶನ, ಸ್ಥಳ: ಕಿರುರಂಗಮಂದಿರ, ಕಲಾಮಂದಿರ ಆವರಣ, ಸಂಜೆ 5.30ಕ್ಕೆ.

■ **ಶ್ರೀ ಗಣಪತಿ ಸೇವಾ ಮಂಡಳಿ ಟ್ರಸ್ಟ್:** ಐದನೆಯ ರಾಮೋತ್ಸವ ಕಾರ್ಯಕ್ರಮ, ಯಕ್ಷಗಾನ ಸೂತ್ರದ ಗೊಂಬೆ 'ಸತ್ಯಹರಿಶ್ಚಂದ್ರ' ಪ್ರಸಂಗ, ಶ್ರೀ ರಾಮೇಶ್ವರ ಕೃಪಾಪೋಷಿತ ಯಕ್ಷಗಾನ ಸೂತ್ರದ ಗೊಂಬೆ ಮೇಳ (ಹಲ್ಲರೆ ಗ್ರಾಮ), ಸ್ಥಳ: ಗಣಪತಿ ದೇವಸ್ಥಾನ, ಐ–ಬ್ಲಾಕ್, ರಾಮಕೃಷ್ಣನಗರ, ಸಂಜೆ 6 ಗಂಟೆಗೆ

■ **ಶ್ರೀ ರಾಮ ಸೇವಾ ಮಂಡಳಿ ಚಾರಿಟಬಲ್ ಟ್ರಸ್ಟ್ :** 30ನೇ ಶ್ರೀರಾಮನವಮಿ ಸಂಗೀತೋತ್ಸವ–2024, ಸಂಜೆ 5.15ಕ್ಕೆ ಪೃಥ್ವಿ ಭಾಸ್ಕರ–ಅಮೋಘ ನಡದೂರ್–ನಂದನ್ ಕಶ್ಯಪ್ ಅವರಿಂದ ಗಾಯನ, ಸಂಜೆ 6.15ಕ್ಕೆ ವಿದುಷಿ ಗಾಯತ್ರಿ ವೆಂಕಟ್ ರಾಘವನ್ ಅವರಿಂದ ಗಾಯನ, ವಿ.ಶ್ರೀಕಾಂತ್–ಪಿಟೀಲು, ಬಿ.ಸಿ.ಮಂಜುನಾಥ್–ಮೃದಂಗ, ಜಿ.ಎಸ್.ರಾಮಾನುಜನ್–ಘಟಂ, ಸ್ಥಳ: ಶ್ರೀ ಪ್ರಸನ್ನ ಪಾರ್ವತಿ ಕಲ್ಯಾಣ ಮಂಟಪ, ವಿವಿ ಮೊಹಲ್ಲಾ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ– ಚನ್ನಪ್ಪ ಅಂಗಡಿ, 6.15–ಗೀತಾರಾಧನ, 6.35. 6.10 ವಿಖ್ಯಾತ ವಿಜ್ಞಾನಿಗಳು ಬಾನುಲಿ ಸರಣಿ, ಪ್ರಸ್ತುತಿ– ಶ್ರೀನಿವಾಸಪ್ರಸಾದ್, 6.40–ಪದ ಸಂಸ್ಕೃತಿ–ಪ್ರಸ್ತುತಿ:– ಡಾ.ಕೆ.ಎಲ್. ಪ್ರಸನ್ನಾಕ್ಷಿ, 6.50–ರೈತರಿಗೆ ಸಲಹೆ, 7.15 ಮತ ಹಾಕೋಣ ಬನ್ನಿ –ಮತದಾನ ಜಾಗೃತಿ ಸರಣಿ, ಮಂಡ್ಯ ಜಿಲ್ಲೆಯ ಚುನಾವಣಾ ರಾಯಭಾರಿಯಾಗಿರುವ ಹಿರಿಯ ಸಾಹಿತಿ, ಚಲನಚಿತ್ರ ಕಥೆ ಬರಹಗಾರ ಹಾಗೂ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು–ಪ್ರಭುಸ್ವಾಮಿ ಮಳಿಮಠ್, 9.05–ನೆನಪಿನಂಗಳ (ಧ್ವನಿ ಭಂಡಾರದಿಂದ) Dur –15' ಹೆಸರಾಂತ ಚಿತ್ರ ಕಲಾವಿದರಾದ ವೈ.ನಾಗರಾಜು ಅವರೊಂದಿಗೆ ಎಂ.ರಾಮನರಸಯ್ಯ ಅವರು ನಡೆಸಿದ್ದ ಸಂವಾದ 10.10– 2024ರ ಸಾರ್ವತ್ರಿಕ ಲೋಕಸಭಾ ಚುನಾವಣೆ ಮಾನ್ಯತೆ ಪಡೆದ ರಾಜ್ಯಮಟ್ಟದ ರಾಜಕೀಯ ಪಕ್ಷಗಳ ಚುನಾವಣಾ ಪ್ರಚಾರ ಭಾಷಣ 4.00–ಮಹಿಳಾರಂಗ "ಡಾಕ್ಟರ್ ಸಮಯ" ವಿಷಯ: ಆರೋಗ್ಯಕರ ಜೀವನಕ್ಕೆ ಬೇಕು ಋತುಮಾನಕ್ಕೆ ತಕ್ಕ ಆಹಾರ ಭಾಗವಹಿಸುವವರು: ಆಹಾರ ಮತ್ತು ಪೋಷಕ ತಜ್ಞೆ ಡಾ.ಸಿ.ಅನಿತಾ, ಪ್ರಸ್ತುತಿ: ಕೆ.ಬಿ.ಮೀನಾ, 4.45 ಹಿಂದಿ ಪಾಠ– ಪ್ರಸ್ತುತಿ: ಶಾಂತ ಡಿ ಕಿಣಿ, 6.50–ಕೃಷಿರಂಗ ಹಣ್ಣು ಹೊನ್ನು ತೋಟಗಾರಿಕಾ ಬೆಳೆಗಳ ಸಮಗ್ರ ಬೇಸಾಯ ವಿಧಾನ ಕುರಿತ ಬಾನುಲಿ ಸರಣಿ, ತೋಟಗಾರಿಕಾ ಮಹಾವಿದ್ಯಾಲಯದಿಂದ ದೊರೆಯುವ ಸೌಲಭ್ಯಗಳನ್ನು ಕುರಿತು ಸಹಾಯಕ ಪ್ರಾಧ್ಯಾಪಕ ಡಾ.ವಿಕ್ರಮ್ ಅಪ್ಪಣ್ಣ ಅವರೊಂದಿಗೆ ಸಂದರ್ಶನ ಸಂದರ್ಶಕರು: ಎನ್. ಕೇಶವಮೂರ್ತಿ, 10.30 ಸವಿನೆನಪು

ಒಂದನೇ ಪುಟದಿಂದ

ಬಿಜೆಪಿ, ಆರ್‌ಎಸ್‌ಎಸ್ ಅಜೆಂಡಾ

ರಾಜ್ಯದ ಜನರು ಕೈ ತೊಳೆಯುತ್ತಿರುವಾಗ ಕೇಂದ್ರ ಸರ್ಕಾರ ನ್ಯಾಯಯುತವಾಗಿ ರಾಜ್ಯಕ್ಕೆ ಬರಬೇಕಾದ ಅನುದಾನವನ್ನೂ ನೀಡಿಲ್ಲ. ಈ ಬಾರಿ ಕ್ಷೇತ್ರದಲ್ಲಿ ಸಾಮಾನ್ಯ ಅಭ್ಯರ್ಥಿಗೆ ಕಾಂಗ್ರೆಸ್ ಅವಕಾಶ ನೀಡಿದ್ದು, ಜನಪರ ಕಾಳಜಿಯಿರುವ ಅಭ್ಯರ್ಥಿ ಸ್ಪರ್ಧಾ ಕಣದಲ್ಲಿದ್ದಾರೆ. ನಿಮ್ಮ ಧ್ವನಿಯಾಗಿ ಅವರು ಲೋಕಸಭೆಯಲ್ಲಿ ಕೆಲಸ ಮಾಡುತ್ತಾರೆ. ಇಂತವರು ಲೋಕಸಭೆಗೆ ಹೋಗಬೇಕೇ ವಿನಾಃ ಬಾಯಿ ಬಿಡದೇ ಇದ್ದವರು ಮನೆಯಲ್ಲಿ ಕುಳಿತವರು ಹೋಗಬಾರದು ಎಂದು ಹೇಳಿದರು.

ಇವರು ದೇಶಭಕ್ತರಲ್ಲ: ಸಂಘ ಪರಿವಾರ ಮತ್ತು ಬಿಜೆಪಿಗರು ದೇಶಭಕ್ತರು ಎಂದು ಹೇಳಿಕೊಳ್ಳುತ್ತಾರೆ. ಇವರು ಬ್ರಿಟಿಷರ ವಿರುದ್ಧದ ಸ್ವಾತಂತ್ರ್ಯ ಹೋರಾಟದಲ್ಲಿ ಏಕೆ ಭಾಗವಹಿಸಲಿಲ್ಲ? ಇವರು ದೇಶಭಕ್ತರಾಗಲು ಸಾಧ್ಯವೇ ಇಲ್ಲ. ಸಂವಿಧಾನಕ್ಕೆ ಅಪಾಯ ಎಂದರೆ ದೇಶದ ಮಹಿಳೆಯರು, ಬಡವರು, ಮಧ್ಯಮ ವರ್ಗದವರು, ಶೂದ್ರರು, ಶ್ರಮಿಕರ ಬದುಕು–ಭವಿಷ್ಯಕ್ಕೆ ಅಪಾಯ ಎಂದರ್ಥ. ಭಾರತದಲ್ಲಿ ಪ್ರಜಾತಂತ್ರ ಮತ್ತು ಸಂವಿಧಾನ ಅಪಾಯದಲ್ಲಿದೆ. ಇದನ್ನು ಉಳಿಸುವ ಅನಿವಾರ್ಯತೆ ನಮ್ಮೆಲ್ಲರ ಮುಂದಿದೆ. ಈ ಬಾರಿ ಬಿಜೆಪಿ ಸೋಲಿಸಿ, ಕಾಂಗ್ರೆಸ್ ಗೆಲ್ಲಿಸುವ ಮೂಲಕ ಪ್ರಜಾತಂತ್ರ ಉಳಿಸಬೇಕು ಎಂದರು.

ಅಭಿವೃದ್ಧಿಗೆ ಬದ್ಧ: ಕೊಡಗಿನ ಬಿಜೆಪಿ ಶಾಸಕರು ಕಳೆದ 20–25 ವರ್ಷಗಳಿಂದ ಜಿಲ್ಲೆಯ ಅಭಿವೃದ್ಧಿಗೆ ಏನು ಕೊಡುಗೆ ನೀಡಿದ್ದಾರೆ? ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯ ಜನರು ಪೊನ್ನಣ್ಣ ಮತ್ತು ಮಂತರ್‌ಗೌಡ ಅವರನ್ನು ಶಾಸಕರಾಗಿ ಆಯ್ಕೆ ಮಾಡಿದ್ದಾರೆ. ಕಾಂಗ್ರೆಸ್ ಇಬ್ಬರೂ ಶಾಸಕರು ತಮ್ಮ ಕ್ಷೇತ್ರದ ಅಭಿವೃದ್ಧಿಗೆ ಏನೇನು ಕೇಳುತ್ತಾರೋ ಅದೆಲ್ಲವನ್ನೂ ಕೊಡಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಸಮಾವೇಶದಲ್ಲಿ ಸಚಿವರಾದ ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕ ಡಾ.ಮಂತರ್‌ಗೌಡ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಕೆಪಿಸಿಸಿ ಚುನಾವಣಾ ಉಸ್ತುವಾರಿ ವಿನಯ್ ಕುಮಾರ್ ಸೊರಕೆ, ಪಕ್ಷ ಮುಖಂಡರಾದ ಮೆಹರೂಜ್ ಖಾನ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ, ಮಾಜಿ ಸಚಿವ ಎಂ.ಸಿ.ನಾಣಯ್ಯ, ಸುಮಾ ವಸಂತ್, ಮಾಜಿ ಶಾಸಕ ಕೆ.ಎಂ. ಇಬ್ರಾಹಿಂ, ವಿಧಾನಪರಿಷತ್ ಮಾಜಿ ಸದಸ್ಯೆ ವೀಣಾ ಅಚ್ಚಯ್ಯ, ಅರುಣ್ ಮಾಚಯ್ಯ, ಕಾಂಗ್ರೆಸ್ ಮುಖಂಡ ಸಾಧು ಕೋಕಿಲ, ಮಾಜಿ ಜಿಲ್ಲಾಧ್ಯಕ್ಷ ಕೆ.ಕೆ. ಮಂಜುನಾಥ್, ಜಿಪಂ ಮಾಜಿ ಸದಸ್ಯೆ ಕೆ.ಪಿ.ಚಂದ್ರಕಲಾ, ಉದ್ಯಮಿ ವಿನೋದ್ ಶಿವಪ್ಪ ಮತ್ತಿತರರು ಹಾಜರಿದ್ದರು.

ರೈತರ ಹಿತಕಾಯಲು ಕಾಂಗ್ರೆಸ್‌ನಿಂದ ಪಂಚ ನ್ಯಾಯ

ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು)





ಮೇಲುಕೋಟೆ: ರೈತರ ಕಲ್ಯಾಣಕ್ಕಾಗಿ ಕಾಂಗ್ರೆಸ್ ಗಂಭೀರವಾಗಿ ಚಿಂತನೆ ನಡೆಸಿದೆ. ಅವರ ಸಂಕಷ್ಟದ ಕರೆಗೆ ಕಿವಿಗೊಟ್ಟು ಪಂಚ ನ್ಯಾಯಗಳನ್ನು ಒಳಗೊಂಡ 'ಕಿಸಾನ್ ನ್ಯಾಯ'ವನ್ನು ಘೋಷಣೆ ಮಾಡುವ ಮೂಲಕ ರೈತರ ಹಿತ ಕಾಪಾಡಲು ಪಕ್ಷ ಬದ್ಧವಾಗಿದೆ ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಹೇಳಿದರು.

ಸರ್ವೋದಯ ಕರ್ನಾಟಕ ಪಕ್ಷದ ಜೊತೆಗೂಡಿ ಮೇಲುಕೋಟೆ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಹಮ್ಮಿಕೊಂಡಿದ್ದ ಚುನಾವಣಾ ಪ್ರಚಾರದ ವೇಳೆ ಮಾತನಾಡಿ, ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ನಿಶ್ಚಿತವಾಗಿದೆ. ಅಧಿಕಾರಕ್ಕೇರಿದ ಕೂಡಲೇ ಸ್ವಾಮಿನಾಥನ್ ಆಯೋಗದ ಶಿಫಾರಸಿನಂತೆ ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಕಾನೂನುಬದ್ಧ ಭರವಸೆ ನೀಡಲಾಗುತ್ತದೆ ಎಂದರು.

ಎಂಎಸ್‌ಪಿಗೆ ಕಾನೂನು ಖಾತರಿ ನೀಡುವುದರಿಂದ ರೈತರಿಗೆ ನ್ಯಾಯಯುತ ಬೆಲೆ ಸಿಗಲಿದ್ದು ಅವರ ಜೀವನ ಪರಿಸ್ಥಿತಿ ಸುಧಾರಿಸಲಿದೆ. ಇದರ ಜೊತೆಗೆ ರೈತರ ಸಾಲಮನ್ನಾ ಮಾಡುವ ಐತಿಹಾಸಿಕ ಮತ್ತು ಕ್ರಾಂತಿಕಾರಿ ನಡೆಗೆ ಕಾಂಗ್ರೆಸ್ ಮುಂದಾಗಿದ್ದು ಇದಕ್ಕೆ ಜನಾಶೀರ್ವಾದ ಬೇಕಿದೆ ಎಂದು ಮನವಿ ಮಾಡಿದರು.

ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಎಂಎಸ್‌ಪಿ, ಕೃಷಿ ಸಾಲಮನ್ನಾ, ಬೆಳೆ ನಷ್ಟವಾದರೆ 30 ದಿನಗಳಲ್ಲಿ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಪಾವತಿ ಮಾಡುವ ವಿಮಾ ಯೋಜನೆ, ಹೊಸ ಆಮದು–ರಫ್ತು ನೀತಿ ಹಾಗೂ ಕೃಷಿ ಯಂತ್ರೋಪಕರಣಗಳು, ರಸಗೊಬ್ಬರ, ಬಿತ್ತನೆಬೀಜಗಳ ಮೇಲಿನ ಜಿಎಸ್‌ಟಿಯನ್ನು ತೆಗೆದುಹಾಕಲಾಗುತ್ತದೆ ಎಂದರು.

ರೈತರ ಕಲ್ಯಾಣಕ್ಕಾಗಿ ಕಾಂಗ್ರೆಸ್ ಪಕ್ಷ ಹತ್ತು ಹಲವು ಯೋಜನೆಗಳನ್ನು ತಂದಿದೆ. ರೈತರು ಈ ದೇಶದ ಬೆನ್ನೆಲುಬು. ರೈತರ ಹಿತ ಕಾಯಲು ಕಾಂಗ್ರೆಸ್ ಬದ್ಧವಾಗಿದೆ. ಈ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸುವ ಮೂಲಕ ಕಾಂಗ್ರೆಸ್‌ಗೆ ಶಕ್ತಿ ತುಂಬಿ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರ ಕೈ ಬಲಪಡಿಸಬೇಕು ಎಂದು ಕರೆಕೊಟ್ಟರು. ಮಲ್ಲನಾಯಕನಕಟ್ಟೆ ಗ್ರಾಮದಲ್ಲಿ ಮಾತನಾಡಿದ ದರ್ಶನ್ ಪುಟ್ಟಣ್ಣಯ್ಯ, ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ವೋಟ್ ಹಾಕುವ ಮುನ್ನ ಗ್ಯಾರಂಟಿಗಳ ಬಗ್ಗೆ ಒಮ್ಮೆ ಯೋಚಿಸಿ. ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಗೂ ಕಾಂಗ್ರೆಸ್ ಒತ್ತು ನೀಡುತ್ತಿದೆ ಎಂದರು.

ಕ್ಷೇತ್ರದ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ 200 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದೆ. ರಸ್ತೆ, ಕುಡಿಯುವ ನೀರು, ನೀರಾವರಿ ಸೇರಿದಂತೆ ನಾನಾ ಅಭಿವೃದ್ಧಿ ಕಾರ್ಯಗಳಿಗೆ ಸರ್ಕಾರದ ಅನುದಾನ ಬಿಡುಗಡೆ ಮಾಡಲಿದ್ದು ಈ ಚುನಾವಣೆಯಲ್ಲಿ ಕಾಂಗ್ರೆಸ್ ಕೈ ಬಲಪಡಿಸಬೇಕಿದೆ ಎಂದರು.

ಸಾವಿರಾರು ಜನರಿಗೆ ಉದ್ಯೋಗ ನೀಡಿರುವ ಸ್ಟಾರ್ ಚಂದ್ರು ಅವರು ಜನಸೇವೆಗೆ ಬಂದಿದ್ದಾರೆ. ನನ್ನನ್ನು ಗೆಲ್ಲಿಸಿದಂತೆ ಸ್ಟಾರ್ ಚಂದ್ರು ಅವರನ್ನು ಗೆಲ್ಲಿಸಿ ಎಂದು ಮತದಾರರಿಗೆ ಕರೆಕೊಟ್ಟರು. ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ಮಾಜಿ ಶಾಸಕ ರಾಮಣ್ಣ, ಎಐಸಿಸಿ ಕಾರ್ಯದರ್ಶಿ ಹಾಗೂ ಕೇರಳದ ಕಾಂಗ್ರೆಸ್ ಶಾಸಕರಾದ ರೋಜಿ ಎಂ. ಜಾನ್ ಸೇರಿದಂತೆ ಸರ್ವೋದಯ ಕರ್ನಾಟಕ ಪಕ್ಷ ಹಾಗೂ ಕಾಂಗ್ರೆಸ್‌ನ ಹಲವು ಮುಖಂಡರು ಚುನಾವಣಾ ಪ್ರಚಾರದಲ್ಲಿ ತೊಡಗಿದ್ದರು.

ಅಂಬೇಡ್ಕರ್ ಭಾವಚಿತ್ರ ಮೆರವಣಿಗೆ ವೇಳೆ ಯುವಕನ ಕೊಲೆ

ಕಲಬುರಗಿ: ಕಲಬುರಗಿ ನಗರದಲ್ಲಿ ಭಾನುವಾರ ರಾತ್ರಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯ ಮೆರವಣಿಗೆ ವೇಳೆ ಯುವಕನನ್ನು ಚಾಕುವಿನಿಂದ ಇರಿದು ಕೊಲೆ ಮಾಡಿದ ಘಟನೆ ಅಶೋಕ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ನ್ಯೂ ಜೇವರ್ಗಿ ರಸ್ತೆಯ ರಾಷ್ಟ್ರಪತಿ ಚೌಕ್‌ನಲ್ಲಿ ನಡೆದಿದೆ. ಅಶೋಕ ನಗರದ ನಿವಾಸಿ ಆಕಾಶ ಆಂಜನೇಯ (26) ಕೊಲೆಯಾದ ಯುವಕ. ಆತನ ಸ್ನೇಹಿತ ನವೀನ್ ಎಂಬಾತ ಕೊಲೆ ಮಾಡಿ ತಲೆ ಮರೆಸಿಕೊಂಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಆಕಾಶ ಮತ್ತು ನವೀನ್ ಸ್ನೇಹಿತರಾಗಿದ್ದು, ಈ ಹಿಂದೆಯೂ ಗಲಾಟೆ ಮಾಡಿಕೊಂಡು ಮತ್ತೆ ಒಂದಾಗಿ ಒಟ್ಟಿಗೆ ಓಡಾಡುತ್ತಿದ್ದರು. ಭಾನುವಾರ ಬೆಳಿಗ್ಗೆಯೂ ಯಾವುದೋ ವಿಚಾರಕ್ಕೆ ಜಗಳ ಮಾಡಿಕೊಂಡಿದ್ದರು. ರಾತ್ರಿ ಅಂಬೇಡ್ಕರ್ ಭಾವಚಿತ್ರದ ಮೆರವಣಿಗೆಯ ವೇಳೆ ರಾಷ್ಟ್ರಪತಿ ಚೌಕ್‌ನಲ್ಲಿ ಆಕಾಶ ಡ್ಯಾನ್ಸ್ ಮಾಡುತ್ತಿದ್ದ. ಹಿಂದುಗಡೆಯಿಂದ ಬಂದ ನವೀನ್, ಆತನ ಬೆನ್ನಿಗೆ ಚೂರಿ ಹಾಕಿ ಪರಾರಿಯಾದ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಸಂಖ್ಯೆ:ಮೈನಪ್ರಾ/ವಿತ–2/ಪಿ.ಆರ್.294/2023–24 ದಿನಾಂಕ: 02–04–2024

ಪತ್ರಿಕಾ ಪ್ರಕಟಣೆ

ಶ್ರೀಮತಿ ಮಂಜುಳ ಕೋಂ ಕೆ. ಅಣ್ಣೇಗೌಡ, ನಂ. ಇ–249, 2ನೇ ಹಂತ, ಕುವೆಂಪುನಗರ, ಮೈಸೂರು– 570023 ರವರಿಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ದಟ್ಟಗಳ್ಳಿ 3ನೇ ಹಂತ ಬಡಾವಣೆ, ಅಳತೆ **9.00 x 12.00** ಮೀಟರ್, ನಿ.ಸಂಖ್ಯೆ 360 ದಿನಾಂಕ: 06–06–1994 ರಂದು ಮಂಜೂರಾಗಿದ್ದು, ದಿನಾಂಕ:21–10–1995 ರಂದು ಸ್ವಾಧೀನಪತ್ರ ಪಡೆದಿರುತ್ತಾರೆ. ಮೂಲ ಮಂಜೂರಾತಿದಾರರಾದ ಶ್ರೀಮತಿ. ಮಂಜುಳ ರವರು ದಿನಾಂಕ: 23–10–2007 ರಂದು ಮರಣ ಹೊಂದಿರುವುದರಿಂದ ಇವರ ಪತಿ ಶ್ರೀ ಕೆ. ಅಣ್ಣೇಗೌಡ ಬಿನ್ ಲೇಟ್ ಕುಳ್ಳೇಗೌಡ ರವರಿಂದ ಪೌತಿ ವರ್ಗಾವಣೆ ಶುಲ್ಕ ರೂ. 100/– ಗಳನ್ನು ರಶೀದಿ ಸಂಖ್ಯೆ 159401 ದಿನಾಂಕ:06–02–2009 ರಂದು ಪಾವತಿಸಿಕೊಂಡು ಪೌತಿ ರೀತ್ಯಾ ವರ್ಗಾವಣೆ ಮಾಡಲಾಗಿದೆ. ಸದರಿಯವರು ಅವರ ಮಗನಾದ ಶ್ರೀ ಎ.ಎಂ. ಪ್ರಸಾದ್ ರವರಿಗೆ ವಿಲ್ ಯಾ ಮರಣ ಶಾಸನ ಪತ್ರವನ್ನು ಉಪನೋಂದಣಾಧಿಕಾರಿ, ಹಾಸನ ರವರ ಕಛೇರಿಯಲ್ಲಿ 3ನೇ ಪುಸ್ತಕದ ದಸ್ತಾವೇಜು ನಂ. **HSN-3-00147-2013-14** ಆಗಿ ಸಿ.ಡಿ. ನಂಬರ್ **HSND 237** ನೇದ್ದರಲ್ಲಿ ದಿನಾಂಕ: 05–03–2014 ರಂದು ನೋಂದಾಯಿಸಿರುತ್ತಾರೆ. ಪೌತಿ ರೀತ್ಯಾ ಹಾಗೂ ವಿಲ್ ಯಾ ಮರಣ ಶಾಸನ ಪತ್ರದ ರೀತ್ಯಾ ವರ್ಗಾವಣೆ ಶುಲ್ಕ ರೂ. 250/– ಗಳನ್ನು ಚಲನ್ ಸಂಖ್ಯೆ 174592 ದಿನಾಂಕ: 06–11–2015 ರಂದು ಪಾವತಿಸಿಕೊಂಡು ಶ್ರೀ. ಎ.ಎಂ.ಪ್ರಸಾದ್ ರವರ ಹೆಸರಿಗೆ ವರ್ಗಾವಣೆ ಮಾಡಲಾಗಿದೆ.

ವರ್ಗಾವಣೆದಾರರಾದ ಶ್ರೀ. ಎ.ಎಂ.ಪ್ರಸಾದ್ ಬಿನ್ ಲೇಟ್ ಕೆ.ಅಣ್ಣೇಗೌಡ, ಮನೆ ನಂ. 123, 6ನೇ ಕ್ರಾಸ್, ಬಿ.ಎಸ್.ಕೆ. 5ನೇ ಹಂತ, ವಸಂತಪುರ, ಬಿ.ಡಿ.ಎ. ಬಡಾವಣೆ, ಬೆಂಗಳೂರು–61 ರವರು ದಟ್ಟಗಳ್ಳಿ 3ನೇ ಹಂತ ಬಡಾವಣೆ, ಅಳತೆ **9.00 x 12.00** ಮೀಟರ್, ನಿ.ಸಂಖ್ಯೆ 360 ರ ಕ್ರಯಪತ್ರ ಕೋರಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿರುತ್ತಾರೆ. ಆದ್ದರಿಂದ ಸದರಿ ನಿವೇಶನವನ್ನು ಪೌತಿವರ್ಗಾವಣೆ ಹಾಗೂ ವಿಲ್ ಪತ್ರದ ರೀತ್ಯಾ ಕ್ರಯಪತ್ರ ಕೋರಿರುವ ಬಗ್ಗೆ, ಈ ಪ್ರಕಟಣೆ ಹೊರಡಿಸಿದ ಹದಿನೈದು ದಿನಗಳೊಳಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಲಿಖಿತವಾಗಿ ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ಇವರಿಗೆ ಸಲ್ಲಿಸುವುದು. ನಿಗಧಿತ ಅವಧಿಯಲ್ಲಿ ಆಕ್ಷೇಪಣೆ ಸಲ್ಲಿಸದಿದ್ದಲ್ಲಿ, ಆಕ್ಷೇಪಣೆ ಏನೂ ಇಲ್ಲವೆಂದು ಭಾವಿಸಿ ಕಾನೂನಿನ ರೀತ್ಯಾ ಮುಂದಿನ ಕ್ರಮವಹಿಸಲಾಗುವುದು.

ಸಹಿ/– ವಿಶೇಷ ತಹಸೀಲ್ದಾರ್
ವಲಯ ಕಛೇರಿ–2
ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಪಾದಚಾರಿಗಳ ಮೇಲೆ ಟಿಪ್ಪರ್: ಒಂದೇ ಕುಟುಂಬದ ಐವರು ದುರ್ಮರಣ

ಬಾಗಲಕೋಟೆ: ಟಿಪ್ಪರ್ ಟೈರ್ ಸ್ಫೋಟಗೊಂಡು ಪಲ್ಟಿಯಾದ ಪರಿಣಾಮ ಒಂದೇ ಕುಟುಂಬದ ಐವರು ಸ್ಥಳದಲ್ಲೇ ಪ್ರಾಣಬಿಟ್ಟಿರುವ ಘಟನೆ ಬಾಗಲಕೋಟೆ ಜಿಲ್ಲೆ ಬೀಳಗಿ ತಾಲ್ಲೂಕಿನ ಹೊನ್ಯಾಳ ಕ್ರಾಸ್ ಬಳಿ ನಡೆದಿದೆ. ಮೃತರನ್ನು ಬಾದರದಿನ್ನಿ ಗ್ರಾಮದ ವೆಂಕಪ್ಪ ತೋಳಮಟ್ಟಿ (70), ಆತನ ಪತ್ನಿ ಯಲ್ಲವ್ವ ತೋಳಮಟ್ಟಿ(60), ಮಗ ಪುಂಡಲೀಕ ತೋಳಮಟ್ಟಿ(35), ಮಗಳು ನಾಗವ್ವ ಬಮ್ಮಣ್ಣವರ (40) ಹಾಗೂ ಅಳಿಯ ಅಶೋಕ ಬಮ್ಮಣ್ಣವರ(45) ಎಂದು ಗುರುತಿಸಲಾಗಿದೆ.

ಮೃತ ವೆಂಕಪ್ಪ ಬಾದರದಿನ್ನಿ ಗ್ರಾಮದವರಾಗಿದ್ದು, ಅಳಿಯ ಮತ್ತು ಮಗಳು ಗಿರಿಸಾಗರ ಗ್ರಾಮದವರು. ಇವರೆಲ್ಲಾ ಹೊಲದ ಕೆಲಸ ಮುಗಿಸಿಕೊಂಡು ಮನೆಗೆ ವಾಪಸ್ ತೆರಳುತ್ತಿದ್ದ ವೇಳೆ ವೇಗವಾಗಿ ಬರುತ್ತಿದ್ದ ಗರಸು ತುಂಬಿದ್ದ ಟಿಪ್ಪರ್ ಟೈರ್ ಸ್ಫೋಟಗೊಂಡ ಪರಿಣಾಮ ರಸ್ತೆ ಬದಿ ನಡೆದುಕೊಂಡು ಬರುತ್ತಿರುವರ ಮೇಲೆ ಲಾರಿ ಪಲ್ಟಿಯಾಗಿದ್ದು ಸ್ಥಳದಲ್ಲೇ ಐವರು ಮೃತಪಟ್ಟಿದ್ದಾರೆ.

ವಿಚಾರ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ್ ರೆಡ್ಡಿ, ಎಎಸ್ಪಿ ಪ್ರಸನ್ನ ದೇಸಾಯಿ ಹಾಗೂ ಬೀಳಗಿ ಠಾಣೆ ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.



ಭಾರತರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಮೈಸೂರಿನ ಪುರಭವನದ ಆವರಣದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್‌ರವರ ಪ್ರತಿಮೆಗೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನರೇಂದ್ರ ಮಾಲಾರ್ಪಣೆ ಮಾಡಿದರು, ಈ ಸಂಧರ್ಭದಲ್ಲಿ ಶಿಕ್ಷಕರು ಮತ್ತು ಪಧವಿದರ ವಿಭಾಗದ ಅಧ್ಯಕ್ಷ ರಾಘವೇಂದ್ರ, ಮೈಸೂರು ಜಿಲ್ಲಾ ಗ್ರಾಮಾಂತರ ಯುವ ಕಾಂಗ್ರೇಸ್ ಉಪಾಧ್ಯಕ್ಷರಾದ ಬಿಳಿಕೆರೆ ಸ್ವಾಮಿ, ಹಾಗೂ ಮುಖಂಡರು ಉಪಸ್ಥಿತರಿದ್ದರು.

PUBLIC NOTICE

The general public is hereby informed that my client has entered into a Sale Agreement and is contemplating to complete the sale transaction with the respective owners of the Schedule Property. Any person/s asserting any right, title, interest or claim in any manner upon the Schedule Property or any part thereof, is hereby required to communicate the same to the undersigned along with documentary evidence within 05 days from the date of this publication. In the event no claims are lodged, it shall be presumed that there are no claims whatsoever in nature with respect to the Schedule Property and my client shall proceeded to complete the execution of Sale Deed.

SCHEDULE OF THE PROPERTY

All that piece and parcel of the old residential house property bearing No. 3024, New No. D-7, (PID No. 32-4-504-7) (Old Property No. 3024, D- 40) situated at Gokulam Park Road, V.V. Mohalla, Mysuru 570002 measuring East to West 60 feet and North to South 46 feet, totally measuring 2758 square feet comprising of construction of about 1410 square feet, Mangalore tile roofing, red oxide flooring and bounded on the:East By: Conservancy, West By: Gokulam Park Road North By:Property No.3024/1 and South By Property No.3023.

Sd/- Mrs.Sandhya Choudhary Advocate & Legal Consultant. #1197, 12/2, KRB Road, Chamarajapuram, Mysuru - 570005
E-mail - sandhyachoudhary05@gmail.com

ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ನಕ್ಕರೆ ಅದೇ ಸ್ವರ್ಗ

ಜನರೆಲ್ಲರೂ 10 ಲಕ್ಷ, 20 ಲಕ್ಷ ಅಂತ ಕೂಗುತ್ತಿದ್ದರು.
ಬಸ್ಯಾ : ಈ ಕಾರಿಗೆ ಯಾಕೆ ಇಷ್ಟೊಂದ್ ರೇಟ್?
ಮಾಲೀಕ: ಈ ಕಾರು 23 ಸಲ ಆಕ್ಸಿಡೆಂಟ್ ಆಗಿದೆ... ಆದರೆ ಪ್ರತಿ ಸಲ ಹೆಂಡತಿನೇ ಸತ್ತಿದ್ದಾಳೆ...!
ಬಸ್ಯಾ : ಅಯ್ಯೋ ನನ್ನ ಮಗ್ನಂದು... ನಂದು ಒಂದು ಕೋಟಿ ಇರಲಿ...!

ಮೈಸೂರು ಮಿತ್ರ

ಸೋಮವಾರ, 15 ಏಪ್ರಿಲ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........
ಸಂದರ್ಭಗಳೇ, ಸಂಬಂಧಗಳ ಆಳ ಮತ್ತು ವಾಸ್ತವವನ್ನು ತಿಳಿಸುತ್ತದೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಾಸಿಗೆ ಇದ್ದಷ್ಟು ಕಾಲು ಚಾಚಬೇಕು

ನಿಮ್ಮ ಪತ್ರಗಳು

ಚಾಮುಂಡಿಬೆಟ್ಟದಲ್ಲಿ ಶುಚಿತ್ವ ಕಾಪಾಡಲು ಮನವಿ

ಮಾನ್ಯರೆ,



ಸಾಂಸ್ಕೃತಿಕ ನಗರಿ ಮೈಸೂರಿನ ಪ್ರಮುಖ ಪ್ರವಾಸಿ ತಾಣಗಳಲ್ಲಿ ಒಂದಾದ ನಾಡಿನ ಅಧಿದೇವತೆ ಚಾಮುಂಡಿ ಬೆಟ್ಟದ ಚಾಮುಂಡೇಶ್ವರಿ ದೇವಿ ಸನ್ನಿಧಿಗೆ ಪ್ರತಿನಿತ್ಯ ದೇಶ-ವಿದೇಶಗಳಿಂದ ಸಾವಿರಾರು ಭಕ್ತರು ಮತ್ತು ಪ್ರವಾಸಿಗರು ಬಂದು ಪ್ರಾರ್ಥನೆ ಸಲ್ಲಿಸಿ ಚಾಮುಂಡಿಬೆಟ್ಟದ ಸುಂದರವಾದ ಪರಿಸರ ರುಚಿಯನ್ನು ಆನಂದಿಸುತ್ತಾರೆ. ಜೊತೆಗೆ ಬೆಟ್ಟದ ಪ್ರಮುಖ ಆಕರ್ಷಣೆ ಮಹಿಷಾಸುರನ ಪ್ರತಿಮೆ ಮುಂದೆ ನಿಂತು ಫೋಟೋ ಕ್ಲಿಕ್ಕಿಸಿಕೊಳ್ಳುವುದು ಸಾಮಾನ್ಯ. ಆದರೆ ಫೋಟೋ ತೆಗೆದುಕೊಳ್ಳುವ ಪ್ರವಾಸಿಗರು, ಭಕ್ತಾದಿಗಳು ತಿಂಡಿ ತಿನಿಸುಗಳು, ಪ್ಲಾಸ್ಟಿಕ್ ಕವರ್‌ಗಳು ಮತ್ತು ನೀರಿನ ಬಾಟಲಿಯನ್ನು ಉಪಯೋಗಿಸಿದ ನಂತರ ಮಹಿಷಾಸುರನ ಪ್ರತಿಮೆಯು ಆವರಣದೊಳಗೆ ಎಸೆದು, ಬೆಟ್ಟದ ಪರಿಸರಕ್ಕೆ ಹಾನಿಯಾಗುವಂತೆ ಗಲೀಜು ಮಾಡುತ್ತಿದ್ದಾರೆ. ಆದ್ದರಿಂದ ಈ ಕೂಡಲೇ ಸಂಬಂಧಪಟ್ಟವರು ಮೈಸೂರು ಪ್ರವಾಸಿ ತಾಣವಾಗಿರುವುದರಿಂದ ಮೈಸೂರು ಪ್ರವಾಸೋದ್ಯಮ ಇಲಾಖೆ ಸಹಯೋಗದೊಂದಿಗೆ ಸ್ವಚ್ಛತೆ ಕಾಪಾಡಲು ಮುಂದಾಗಬೇಕು. ಇಲ್ಲದಿದ್ದರೆ ತಾಯಿ ಚಾಮುಂಡೇಶ್ವರಿಗೆ ಅಗೌರವ ತೋರಿ ಅಪಚಾರ ಮಾಡಿದಂತಾಗುತ್ತದೆ. **-ನಾಗೇಶ್, ಮಾನಸಗಂಗೋತ್ರಿ, ಮೈಸೂರು**

ಪ್ರಾಣಿ ಪಕ್ಷಿಗಳಿಗೆ ನೀರು ಕಲ್ಪಿಸಿ

ಮಾನ್ಯರೆ,



ಮಳೆಯ ಅಭಾವದಿಂದಾಗಿ ಜಲಾಶಯಗಳು, ಕೆರೆ, ನದಿ, ಬಾವಿ ಮುಂತಾದ ಜಲ ಮೂಲಗಳ ನೀರು ಕಡಿಮೆಯಾಗಿದ್ದು, ಬಿಸಿಲಿನ ತಾಪದಿಂದ ಅಪಾರ ಪ್ರಮಾಣದ ನೀರು ಆವಿಯಾಗುತ್ತಿರುವುದರಿಂದ ನೀರಿನ ಅಭಾವ ಸೃಷ್ಟಿಯಾಗಿದೆ.

ಪ್ರಸ್ತುತ ಬೆಂಗಳೂರು ನಗರ ಸೇರಿ ರಾಜ್ಯದ ಎಲ್ಲಾ ಭಾಗಗಳಲ್ಲಿ ಬಿಸಲಿನ ತಾಪದಿಂದ ಬರಗಾಲದ ವಾತಾವರಣ ನಿರ್ಮಾಣವಾಗಿದ್ದು, ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ. ಕೆಲವು ಪ್ರದೇಶಗಳಿಗೆ ಟ್ಯಾಂಕರ್‌ಗಳ ಮೂಲಕ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಮನುಷ್ಯರಾದ ನಾವು ನಮಗೆ ಬೇಕಾದಾಗ ನಮ್ಮ ದಾಹವನ್ನು ತೀರಿಸಿಕೊಳ್ಳುತ್ತೇವೆ. ಆದರೆ ಮಾತು ಬಾರದ ಪ್ರಾಣಿಗಳ ಕಷ್ಟ ಹೇಳಲು ಅಸಾಧ್ಯ. ಕಾಡಿನಲ್ಲಿ ನೀರು ಸಿಗದೆ ಪ್ರಾಣಿಗಳು ನಾಡಿಗೆ ಬರುವುದು ಬೇಸಿಗೆಯಲ್ಲಿ ಸಾಮಾನ್ಯವಾಗಿದೆ. ಕಾಡಿನಲ್ಲಿ ಪ್ರಾಣಿಗಳಿಗೆ ಕೃತಕವಾಗಿ ನೀರು ದೊರಕುವಂತೆ ಮಾಡುವ ಮೂಲಕ ಅಂದರೆ ಸಾಧ್ಯವಾದಷ್ಟು ನೀರನ್ನು ಒದಗಿಸುವುದು. ಖಾಲಿಯಿರುವ ಹೊಂಡ, ಗುಂಡಿಗಳಿಗೆ ನೀರು ಹರಿಸುವುದು ಅಥವಾ ಮೋಡ ಬಿತ್ತನೆಯ ಮೂಲಕ ಕಾಡಿನಲ್ಲಿ ಮಳೆಯಾಗುವಂತೆ ಮಾಡುವ ಮೂಲಕ ಕಾಡಿನಲ್ಲಿ ಪ್ರಾಣಿಗಳಿಗೆ ನೀರನ್ನು ಒದಗಿಸಿ ಅವು ಜನವಸತಿ ಪ್ರದೇಶಗಳಿಗೆ ಬರುವುದನ್ನು ತಡೆಯಬಹುದಾಗಿದೆ. ಇನ್ನು ನಾಡಿನ ಪ್ರಾಣಿ, ಪಕ್ಷಿಗಳಿಗೆ ಅನುಕೂಲವಾಗುವಂತೆ ಮರಗಳ ಮೇಲೆ, ಮನೆಯ ಮೇಲೆ ಅಥವಾ ಎಲ್ಲಿ ಸಾಧ್ಯವೋ ಅಲ್ಲಿ ನಾವು ಬಿಸಾಕುವ ಪ್ಲಾಸ್ಟಿಕ್ ವಾಟರ್ ಬಾಟಲ್‌ಗಳನ್ನು ಎರಡು ಭಾಗ ಮಾಡಿ ಅದರಲ್ಲಿ ನೀರು ಸಂಗ್ರಹಿಸಿ ಮರದಲ್ಲಿ ನೇತು ಹಾಕಿದರೆ ಪಕ್ಷಿಗಳು ನೀರನ್ನು ಸೇವಿಸುತ್ತವೆ.

ಇನ್ನು ಹಸು, ಕರು, ಎಮ್ಮೆ, ನಾಯಿ, ಹಂದಿ ಮುಂತಾದ ಪ್ರಾಣಿಗಳಿಗೆ ಊರಿನ ಹೊರಭಾಗದಲ್ಲಿ ನೀರಿನ ತೊಟ್ಟಿಗಳನ್ನು ನಿರ್ಮಾಣ ಮಾಡುವ ಮೂಲಕ ನೀರನ್ನು ಒದಗಿಸಬಹುದಾಗಿದೆ. ಊರ ಹೊರಗೆ ನೀರಿನ ತೊಟ್ಟಿಗಳನ್ನು ರಾಜ್ಯದ ಕೆಲವು ಭಾಗಗಳಲ್ಲಿ ಕಾಣಬಹುದಾಗಿದೆ. ಸರ್ಕಾರ ಮತ್ತು ಜನತೆ ಇಬ್ಬರು ಸೇರಿ ಅಮಾಯಕ ಪ್ರಾಣಿಗಳಿಗೆ ನೀರನ್ನು ಒದಗಿಸುವ ಮೂಲಕ ಮಾನವೀಯತೆಯ ಮೌಲ್ಯವನ್ನು ರಕ್ಷಿಸೋಣ. **-ರಾಸುಮ ಭಟ್, ಸಂಶೋಧನಾ ವಿದ್ಯಾರ್ಥಿ, ಚಿಕ್ಕಮಗಳೂರು.**

ಕರ್ನಾಟಕವನ್ನು ಸಾಲಮುಕ್ತ ರಾಜ್ಯವನ್ನಾಗಿ ಮಾಡಿ

ಮಾನ್ಯರೆ,

ದಿನದಿಂದ ದಿನಕ್ಕೆ ಚುನಾವಣಾ ಕಾವು ಏರುತ್ತಿದೆ. ದಾಳಿಗೆ ಪ್ರತಿದಾಳಿಗಳು ನಡೆಯುತ್ತಿವೆ. ಕಾಂಗ್ರೆಸ್ ಹಾಗೂ ಬಿಜೆಪಿ ಪಕ್ಷಗಳ ಉಮೇದುದಾರರ ಪಟ್ಟಿ ಬಿಡುಗಡೆಯಾಗಿದೆ. ಭಾರತದ ಪ್ರಜೆಗಳು ಅಷ್ಟು ದಡ್ಡರಲ್ಲ. ಯಾವುದು ಒಳ್ಳೆಯದು ಯಾವುದು ಕೆಟ್ಟದ್ದು ಎಂಬ ಅರಿವು ಅವರಿಗಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಬಿಜೆಪಿ, ಆರ್‌ಎಸ್‌ಎಸ್ ವಿಷವಿದ್ದಂತೆ ಎಂಬ ಆರೋಪಗಳನ್ನು ಮಾಡಿದ್ದಾರೆ. ತಮ್ಮ ಆಡಳಿತದ 75 ವರ್ಷಗಳಲ್ಲಿ ಭಾರತವನ್ನು ಎಷ್ಟು ಆಳಕ್ಕೆ ತಳ್ಳಿದ್ದೀರಿ ಎಂಬ ವಿಷಯಗಳು ಜನರಿಗೆ ತಿಳಿದಿದೆ. ಕಾಂಗ್ರೆಸ್ ಪಕ್ಷ ಆಡಳಿತ ತನ್ನ ಕೈಯಲ್ಲಿ ಇಲ್ಲದೆ ಒದ್ದಾಡುತ್ತಿದೆ. ಆರ್‌ಎಸ್‌ಎಸ್ ಸಂಸ್ಥೆ ಭಾರತದಲ್ಲಿ ಇಲ್ಲದಿದ್ದ ಪಕ್ಷದಲ್ಲಿ ಭಾರತ ಎಂದೋ ವಿದೇಶಿಗರ ವಶವಾಗುತ್ತಿತ್ತು. ಭಾರತೀಯರ ಸ್ಥಿತಿ ಶೋಚನೀಯವಾಗುತ್ತಿತ್ತು. ಖರ್ಗೆಯವರೇ ನಿಮ್ಮ ಪಕ್ಷ ಕರ್ನಾಟಕದಲ್ಲಿ ಆಡಳಿತ ನಡೆಸುತ್ತಿದೆ. ಕರ್ನಾಟಕವನ್ನು ಸಾಲಮುಕ್ತ ರಾಜ್ಯವನ್ನಾಗಿ ಮಾಡಿ ನೀವು ಇಡೀ ದೇಶಕ್ಕೆ ಮಾದರಿಯಾಗಿರಿ. ಆಗ ನಿಮ್ಮನ್ನು ನಿಮ್ಮ ಪಕ್ಷವನ್ನು ಮತದಾರರು ಒಪ್ಪಿಕೊಳ್ಳುತ್ತಾರೆ. ಅದು ಬಿಟ್ಟು ಅನವಶ್ಯಕವಾಗಿ ಆರ್‌ಎಸ್‌ಎಸ್ ಅನ್ನು ದೂರಬೇಡಿ. **-ಸತ್ಯಪ್ರಿಯ, ಮೈಸೂರು.**



ಜಿ. ಎಲ್. ತ್ರಿಪುರಾಂತಕ
ಮೊ: 96866-77284

ಬೆರಗು

ಟೀಕೆಗಳು ಸಾಯುತ್ತವೆ; ಕೆಲಸಗಳು ಉಳಿಯುತ್ತವೆ!

ಈ ಮೇಲಿನ ಮೌಲ್ಯಯುತವಾದ ಮಾತನ್ನು ರಾಷ್ಟ್ರಕವಿ ಕುವೆಂಪು ಅವರು ಹೇಳಿದ್ದಾರೆ. ಈ ನುಡಿಮುತ್ತು ಸರ್ವಕಾಲಕ್ಕೂ ವೇದ್ಯವಾದದ್ದು. ಅನೇಕರಿಗೆ ಕೆಲಸ ಮಾಡುವ ಕಲೆ ಕರಗತವಾಗಿದ್ದರೆ, ಹಲವರಿಗೆ ಟೀಕೆ ಮಾಡುವ ಚಾಳಿ ಕರಗತವಾಗಿರುತ್ತದೆ. ಟೀಕೆ ಮಾಡುವುದು ಅವರ ಕೆಲಸವಾಗಿರುತ್ತದೆ ಕೂಡ. ಅವರು ಸಮಸ್ಯೆಯನ್ನು ಸರಿಪಡಿಸುವ ನಿಟ್ಟಿನಲ್ಲಿ ಕೆಲಸ ಮಾಡುವುದಿಲ್ಲ. ಆದರೆ ತಪ್ಪುಗಳನ್ನು ಹುಡುಕಿ ಆಡುವ ಜಾಯಮಾನದವರಾಗಿರುತ್ತಾರೆ. ಅವರಿಗೆ ಸಮಸ್ಯೆ ಹುಟ್ಟುಹಾಕುವುದು ಗೊತ್ತಿರುತ್ತದೆಯೇ ವಿನಃ ಪರಿಹಾರಗಳನ್ನು ಹುಡುಕುವ ವ್ಯವದಾನ ಇರುವುದಿಲ್ಲ. ಅವರಿಗೆ ಅನ್ಯರು ಮಾಡುವ ಕೆಲಸದಲ್ಲಿ ಕೊಂಕು ನುಡಿಯದೇ ಇದ್ದರೆ ಸಮಾಧಾನವೇ ಇರುವುದಿಲ್ಲ. ಕೆಲವರು ಮಾತ್ರ ತಂದೆ, ಗುರುವಿನ ಸ್ಥಾನದಲ್ಲಿ ನಿಂತು ತಪ್ಪುಗಳನ್ನು ಸರಿಪಡಿಸಿ ಮಾರ್ಗದರ್ಶಕರಾಗಿ ಇರುತ್ತಾರೆ. ಅಂತಹವರನ್ನು ಸದಾ ಸ್ಮರಿಸುವಂತಾಗುತ್ತದೆ.



ನಮ್ಮ ಬಂಧು ಬಾಂಧವರ ನಡುವೆ ಹಾಗೂ ಕೆಲಸ ಮಾಡುವ ಸ್ಥಳಗಳಲ್ಲಿ ಈ ಟೀಕಾಕಾರರನ್ನು ಕಾಣಬಹುದು. ಯಾವಾಗಲೂ ಏನಾದರೂ ಒಂದು ತಪ್ಪನ್ನು ಹುಡುಕಿ ಹೇಳಲು ಸದಾ ಕಾತರದಿಂದ ಕಾಯುತ್ತಿರುತ್ತಾರೆ. ಅವರಿಗೆ ಇತರರು ಉತ್ತಮವಾಗಿ ಕೆಲಸ ಮಾಡಿದರೆ ಬೇಸರ, ತಪ್ಪು ಮಾಡಿದರೆ ಇನ್ನಿಲ್ಲದ ಖುಷಿ. ಯಾವುದಾದರು ಕೆಲಸವನ್ನು ತನ್ನ ಸಹೋದ್ಯೋಗಿ ಯಶಸ್ವಿಗೊಳಿಸಿದರೆ ಅವರಿಗೆ ಕನಿಷ್ಠ ಒಂದು ಅಭಿನಂದನೆ ಸಲ್ಲಿಸುವ ಯೋಗ್ಯತೆ ಇಲ್ಲದಿದ್ದರೂ, ಹತ್ತು ಕೆಲಸದಲ್ಲಿ ಒಂದು ತಪ್ಪಾದರೆ ಅದನ್ನೇ ದೊಡ್ಡದು ಮಾಡಿ ಊರಿಗೆಲ್ಲಾ ಹೇಳುತ್ತಾ ತಮ್ಮ ಸಣ್ಣತನವನ್ನು ಜಾಹೀರು ಮಾಡಿಕೊಳ್ಳುತ್ತಿರುತ್ತಾರೆ. ತಾನು ಸರಿ, ಇಡೀ ಪ್ರಪಂಚ ಸರಿಯಿಲ್ಲ ಎಂದು ಭಾವಿಸಿರುತ್ತಾರೆ. ಯಾವುದೇ ಕೆಲಸದಲ್ಲಿ ನೈಪುಣ್ಯತೆ ಹೊಂದಿರದಿದ್ದರೂ, ಕೆಲಸ ಮಾಡುವವರಿಗೆ ನಿರುತ್ಸಾಹ ಮೂಡುವ ರೀತಿ ಅಡ್ಡ ಮಾತು ಆಡುತ್ತಲೇ ಇರುತ್ತಾರೆ.

ಸಾಹಿತ್ಯ ಕ್ಷೇತ್ರದಲ್ಲಿಯೂ ಅಷ್ಟೇ. ಕೆಲವರು ಟೀಕೆ ಮಾಡುವುದೇ ಸಾಹಿತ್ಯ ಕೃಷಿ ಎಂದು ಭಾವಿಸಿರುತ್ತಾರೆ. ಅವರ ಜೀವಮಾನವಿಡಿ ಇಂದು ಪುಟ ಮೌಲಿಕ ಸಾಹಿತ್ಯ ರಚಿಸಿರುವುದಿಲ್ಲ, ರಚಿಸಿದ್ದರೂ ಅದೂ ಯಾರಿಗೂ ರುಚಿಸಿರುವುದಿಲ್ಲ. ಆದರೆ ಬೇರೆಯವರ ಒಂದು ಸಣ್ಣ ಕಥೆಯ ಕುರಿತು ಕಾದಂಬರಿ ಆಗುವಷ್ಟು ವಿಮರ್ಶೆ ಹೆಸರಿನಲ್ಲಿ ಟೀಕೆ ಟಿಪ್ಪಣಿ ಬರೆಯಲು ಅವರಿಗೆ ಸಾಮರ್ಥ್ಯವಿರುತ್ತದೆ. ಯುವಕರು ಹೊಸದಾಗಿ ಏನಾದರೂ ಬರೆದರೆ ಅವರಿಗೆ ಸೂಕ್ತ ಮಾರ್ಗದರ್ಶನ ಮಾಡಿ, ಸಾಹಿತ್ಯ ಕ್ಷೇತ್ರಕ್ಕೆ ಏನಾದರೂ ಕೊಡುಗೆ ಕೊಡಲು ಪರೋಕ್ಷವಾಗಿ ಕಾರಣರಾಗಬಹುದು. ಅದನ್ನು ಬಿಟ್ಟು ತನ್ನ ಪ್ರತಿಸ್ಪರ್ಧಿ ಎಂದು ಭಾವಿಸಿ, ಏನಾದರೂ ಹೊಸದಾಗಿ ಪ್ರಕಟಣೆ ಮಾಡಿದರೆ, ಆ ಕೃತಿಯ ಕುರಿತು ಕೇವಲವಾಗಿ ಮಾತನಾಡಿ, ಯುವ ಸಾಹಿತಿಗಳಿಗೆ ತಣ್ಣೀರು ಎರಚಿ ವಿಕೃತಾನಂದ ಅನುಭವಿಸುವ ಹಿರಿಯ ಸಾಹಿತಿಗಳು ಅನೇಕರಿದ್ದಾರೆ. ಆದರೆ ಕೆಲವರು ಮಾತ್ರ ತಮ್ಮಲ್ಲಿಗೆ ಬಂದವರನ್ನು ಶಿಷ್ಯರಂತೆ ಸ್ವೀಕರಿಸಿ, ಅವರಿಗೆ ಸೂಕ್ತ ರೀತಿಯಲ್ಲಿ ಮಾರ್ಗದರ್ಶನ ಮಾಡಿ, ಅವರು ಹೊಸದಾಗಿ ಕೃತಿ ರಚಿಸಿದರೆ ಪ್ರಶಂಸಿಸಿ, ಅವರ ಏಳಿಗೆ ಕಂಡು ಖುಷಿಪಡುತ್ತಾರೆ. ಅಂತಹವರ ಸಂಖ್ಯೆ ಮಾತ್ರ ಬಹಳ ವಿರಳ ಎಂಬುದು ವಿಪರ್ಯಾಸ.

ಆಡುವವರ ಬಾಯಿಗೆ ಕೆಟ್ಟವರಾದರೇನು? ಒಳ್ಳೆಯವರಾದರೇನು? ಅವರಿಗೆ ಮಾತನಾಡುವ ವ್ಯಕ್ತಿಯೊಬ್ಬರ ವಿಷಯ ಬೇಕಷ್ಟೆ. ಟೀಕೆ ಮಾಡುವಾಗ ಜಾತಿ, ಧರ್ಮ, ಭಾಷೆ, ವಲಯ, ಲಿಂಗ..... ಹೀಗೆ ಅನೇಕ ರೀತಿಯ ಅಂಶಗಳು ಗಣನೆಗೆ ಬರುತ್ತವೆ. ಅನ್ಯ ಜಾತಿಯವ ಅನ್ನುವ ಕಾರಣಕ್ಕೆ, ಬೇರೆ ಧರ್ಮದವನು ಅನ್ನುವ ಕಾರಣಕ್ಕೆ, ಬೇರೆ ರಾಜ್ಯದವರು ಅನ್ನುವ ಕಾರಣಕ್ಕೆ, ಅನ್ಯಲಿಂಗಿ ಅನ್ನುವ ಕಾರಣಕ್ಕೆ ಅವರ ಕೆಲಸವನ್ನು ಪರಿಗಣಿಸಿ ವಸ್ತುನಿಷ್ಠವಾಗಿ ಟೀಕಿಸದೆ, ವ್ಯಕ್ತಿನಿಷ್ಠವಾಗಿ ಟೀಕಿಸುವುದು ಒಂದು ಕೆಲವರಿಗೆ ಜಾಡ್ಯವಾಗಿದೆ. ತಮ್ಮ ಜಾತಿಯವನ್ನು ವಿನಾಕಾರಣ ಹೊಗಳುವ, ಅನ್ಯ ಜಾತಿಯವರನ್ನು ವಿನಾಕಾರಣ ತೆಗಳುವ ಖಾಯಿಲೆಯು ಎಲ್ಲಾ ಕ್ಷೇತ್ರಗಳಲ್ಲಿಯೂ ಇದೆ. ಇತಿಹಾಸದ ಪುಟಗಳಲ್ಲಿಯೂ ಈ ಟೀಕಾಕಾರರ ಅಸ್ತ್ರಗಳು ಪ್ರಬಲವಾಗಿರುವುದನ್ನು ಕಾಣಬಹುದು. ಆದರೆ ಆ ಎಲ್ಲಾ ಟೀಕೆಗಳು ಸತ್ತು ಸಮಾಧಿಯಾಗಿವೆ. ಆದರೆ ಟೀಕೆಗಳನ್ನು ಸಹಿಸಿಕೊಂಡು ಸವಾಲಿನ ರೀತಿ ಮಾಡಿದ ಕೆಲಸಗಳು ಉಳಿದಿವೆ. ಟೀಕೆಗಳು ಸ್ಥಾವರವಾದರೆ ಆದರೆ ಕೆಲಸಗಳು ಜಂಗಮ ಇದ್ದಹಾಗೆ. ಸ್ಥಾವರಕ್ಕಳಿವುಂಟು, ಜಂಗಮಕ್ಕೆ ಅಳಿವಿಲ್ಲ.

ಕೆಲಸಮಾಡುವವರಿಗೆ ಕೆಲಸವೇ ಕಾಯಕವಾದರೆ, ಟೀಕಾಕಾರರಿಗೆ ಟೀಕಿಸುವುದೇ ಕಾಯಕ. ಅದನ್ನು ನಿತ್ಯ ಅವರು ಮಾಡದಿದ್ದರೆ ಅವರು ನೆಮ್ಮದಿಯಾಗಿ ನಿದ್ರಿಸಲು ಸಾಧ್ಯವಿಲ್ಲ. ಟೀಕಾಕಾರರ ಸಂಚಿಗೆ ಅನೇಕ ಅಮಾಯಕರು ಬಲಿಯಾಗಿದ್ದಾರೆ. ಅನೇಕ ಸಂಘಸಂಸ್ಥೆಗಳಲ್ಲಿ ಉನ್ನತ ಸ್ಥಾನ ಅಲಂಕರಿಸಿರುವ ಟೀಕಾಕಾರರ ಹೊಟ್ಟೆಕಿಚ್ಚಿಗೆ ಕಿರಿಯ ಉದ್ಯೋಗಿಗಳು ವಿನಾಕಾರಣ ಕೆಲಸ ಕಳೆದುಕೊಂಡಿದ್ದಾರೆ. ತನಗಿಂತ ಬುದ್ಧಿವಂತರಾಗಿ ಕೆಲಸ ಮಾಡುವವರನ್ನು ಸಹಿಸದ ಮೇಲಾಧಿಕಾರಿಗಳು ಅನೇಕ ಪ್ರಾಮಾಣಿಕ ಉದ್ಯೋಗಿಗಳಿಗೆ ಟೀಕೆಗಳಿಂದ ಚಿತ್ರವಿಚಿತ್ರ ಹಿಂಸೆ ನೀಡುತ್ತಿರುತ್ತಾರೆ. ಅನೇಕರ ಭವಿಷ್ಯಕ್ಕೆ ಮುಳ್ಳಾಗಿರುತ್ತಾರೆ. ಸರ್ವಾಧಿಕಾರಿ ಧೋರಣೆಯಿಂದ ಅನೇಕ ಪರಿಶ್ರಮಿ ಉದ್ಯೋಗಿಗಳ ಭವಿಷ್ಯಕ್ಕೆ ಮಾರಕವಾಗಿರುತ್ತಾರೆ. ತಮ್ಮ ಕೈಕೆಳಗಿನವರು ತಪ್ಪು ಮಾಡಿ ಬೈಯಿಸಿಕೊಳ್ಳುವುದು ಅವರಿಗೆ ಇಷ್ಟವಾಗುತ್ತದೆ. ತುಂಬಾ ಚೆನ್ನಾಗಿ ಕೆಲಸ ಮಾಡುವವರನ್ನು ಕಂಡರೆ ಅವರಿಗೆ ಆಗದು. ಏನಾದರೂ ಒಂದು ತಪ್ಪು ಹುಡುಕಿ ಎಲ್ಲರೆದುರು ಕಂಡಕಂಡಲ್ಲಿ ಕೊಂಕು ನುಡಿಗಳಿಂದ ಹಿಂಸಿಸುತ್ತಲೇ ಇರುತ್ತಾರೆ. ಹೀಗೆ ಮಾಡುವುದರ ಮೂಲಕ ತಮ್ಮ ಕಂಟ್ರೋಲ್‌ಗೆ ತೆಗೆದುಕೊಳ್ಳಬೇಕು ಎಂಬುದು ಅವರ ಹುನ್ನಾರವಾಗಿರುತ್ತದೆ. ಆದರೆ ಕಷ್ಟನಷ್ಟ ಅನುಭವಿಸುವವರು ಮಾತ್ರ ಪ್ರಾಮಾಣಿಕ ಉದ್ಯೋಗಿಗಳು.

ಹಾಗಾದರೆ ಟೀಕಾಕಾರರು ಬೇಡವೇ? ಅವರುಗಳ ಮಾತುಗಳನ್ನು ಉಪೇಕ್ಷಿಸಬೇಕೆ? ಅವರಿಂದ ದೂರವಿರಬೇಕೆ? ಟೀಕಿಸುವವರನ್ನು ಪ್ರತಿಯಾಗಿ ನಾವು ಸಹ ಟೀಕಿಸಬೇಕೆ? ಎಂಬ ಪ್ರಶ್ನೆ ಮೂಡುತ್ತದೆ. ಟೀಕಾಕಾರನ್ನು ಯಾವುದೇ ಕಾರಣಕ್ಕೂ ಶತೃಗಳಂತೆ ಭಾವಿಸಬಾರದು. ಅವರು ನಮಗೆ ಸ್ಫೂರ್ತಿಯ ಮೂರ್ತಿಗಳು ಎಂದು ಭಾವಿಸಬೇಕು. ಟೀಕಾಕಾರರಿಗೆ ಮಾತಿನ ರೂಪದಲ್ಲಿ ಉತ್ತರ ನೀಡಲೇಬಾರದು, ಬದಲಿಗೆ ನಮ್ಮ ಕೃತಿಯಿಂದ ಉತ್ತರ ನೀಡಬೇಕು. ಕುವೆಂಪು ಅವರ ಮಾತುಗಳನ್ನು ಮತ್ತೆ ಮತ್ತೆ ನೆನೆಯುತ್ತ ನಮ್ಮ ಚಿತ್ತ ನಮ್ಮ ಕೆಲಸದತ್ತ ಇರುವಂತೆ ನೋಡಿಕೊಳ್ಳಬೇಕು. ಅವರು ನಮ್ಮ ಕೆಲಸವನ್ನು ಎಷ್ಟೇ ಟೀಕಿಸಲಿ, ಕೆಲಸದ ಮೇಲಿನ ಆಸಕ್ತಿಯನ್ನು ಕಳೆದುಕೊಳ್ಳಬಾರದು. ಕೆಲಸವನ್ನು ಮತ್ತಷ್ಟು ಉತ್ತಮಗೊಳಿಸುವ ಮೂಲಕ ಅವರಿಗೆ ಪ್ರತಿಕ್ರಿಯಿಸಬೇಕು. ಅವರು ನಮ್ಮ ಮನಸ್ಸಿಗೆ ನೋವಾಗುವ ರೀತಿಯಲ್ಲಿ ಮಾತನಾಡಿದರೂ, ನಗುಮುಖದಿಂದಲೇ ಅವರ ಮಾತುಗಳನ್ನು ಸ್ವೀಕರಿಸಿ, ಸವಾಲಿನ ರೀತಿಯಲ್ಲಿ ಕೆಲಸವನ್ನು ಮಾಡಿ ತೋರಿಸಬೇಕು. ಟೀಕೆಯಿಂದ ನಮಗೆ ಬರುವ ಕೋಪವನ್ನು ಮಾತಿನಲ್ಲಿ ತೋರಿದರೆ ಸುಮ್ಮನೆ ಘರ್ಷಣೆಯಾಗುತ್ತದೆ, ಅದರೆ ಬದಲಿಗೆ ಆ ಕೋಪವನ್ನು ನಮ್ಮ ಕೆಲಸಕ್ಕೆ ಇಂಬು ನೀಡುವ ಶಕ್ತಿಯಾಗಿ ಬಳಸಿಕೊಳ್ಳಬೇಕು.

> **“ ಟೀಕಾಕಾರರನ್ನು ಪ್ರತಿಟೀಕೆಯಿಂದ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ. ಆದರೆ ಅವರ ಮುಂದೆ ಸಾಧನೆ ಮಾಡಿ ಬೆಳೆದು ಅವರ ಬಾಯಿ ಮುಚ್ಚಿಸಬಹುದು. ನಮ್ಮ ಮಾತು ಅವರ ನಿದ್ರೆ ಕೆಡಿಸಬಾರದು, ನಮ್ಮ ಕೆಲಸದ ಗುಣಮಟ್ಟ ಅವರ ನಿದ್ರೆ ಕೆಡಿಸಬೇಕು. ಮಾತನಾಡುವುದು ಸಾಧನೆಯಾಗಬಾರದು. ಸಾಧನೆ ಮಾತನಾಡಬೇಕು. ಟೀಕಾಕಾರರು ಎಸೆಯುವ ಕಲ್ಲುಗಳನ್ನು ನಮ್ಮ ಸಾಧನೆಯ ಕಟ್ಟಡಕ್ಕೆ ಬಳಸಿಕೊಳ್ಳಬೇಕು. ಒಮ್ಮೊಮ್ಮೆ ನಮ್ಮ ಕೆಲಸವನ್ನು ಹೊಗಳುವವರು ಹಾಳು ಮಾಡಿಬಿಡುತ್ತಾರೆ. ಆದರೆ ಟೀಕಾಕಾರರು ನಮ್ಮ ಕೆಲಸವನ್ನು ಶ್ರದ್ಧೆಯಿಂದ ಮಾಡುವಂತೆ ಪರೋಕ್ಷವಾಗಿ ಸಹಾಯ ಮಾಡಿರುತ್ತಾರೆ. ಹಾಗಾಗಿ ಅವರಿಗೆ ನಾವು ಕೃತಜ್ಞತೆ ಸಲ್ಲಿಸಬೇಕು.**

ಟೀಕಾಕಾರರನ್ನು ಪ್ರತಿಟೀಕೆಯಿಂದ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ. ಆದರೆ ಅವರ ಮುಂದೆ ಸಾಧನೆ ಮಾಡಿ ಬೆಳೆದು ಅವರ ಬಾಯಿ ಮುಚ್ಚಿಸಬಹುದು. ನಮ್ಮ ಮಾತು ಅವರ ನಿದ್ರೆ ಕೆಡಿಸಬಾರದು, ನಮ್ಮ ಕೆಲಸದ ಗುಣಮಟ್ಟ ಅವರ ನಿದ್ರೆ ಕೆಡಿಸಬೇಕು. ಮಾತನಾಡುವುದು ಸಾಧನೆಯಾಗಬಾರದು. ಸಾಧನೆ ಮಾತನಾಡಬೇಕು. ಟೀಕಾಕಾರರು ಎಸೆಯುವ ಕಲ್ಲುಗಳನ್ನು ನಮ್ಮ ಸಾಧನೆಯ ಕಟ್ಟಡಕ್ಕೆ ಬಳಸಿಕೊಳ್ಳಬೇಕು. ಒಮ್ಮೊಮ್ಮೆ ನಮ್ಮ ಕೆಲಸವನ್ನು ಹೊಗಳುವವರು ಹಾಳು ಮಾಡಿಬಿಡುತ್ತಾರೆ. ಆದರೆ ಟೀಕಾಕಾರರು ನಮ್ಮ ಕೆಲಸವನ್ನು ಶ್ರದ್ಧೆಯಿಂದ ಮಾಡುವಂತೆ ಪರೋಕ್ಷವಾಗಿ ಸಹಾಯ ಮಾಡಿರುತ್ತಾರೆ. ಹಾಗಾಗಿ ಅವರಿಗೆ ನಾವು ಕೃತಜ್ಞತೆ ಸಲ್ಲಿಸಬೇಕು. ಪುರಂದರ ದಾಸರು ತಮ್ಮ ದಾಸಪದದಲ್ಲಿ

“ನಿಂದಕರಿರಬೇಕು ಇರಬೇಕು
ನಿಂದಕರಿರಬೇಕು,
ಹಂದಿ ಇದ್ದರೆ ಕೇರಿ ಹ್ಯಾಂಗೆ
ಶುದ್ಧಿಯೊ ಹಂಗೆ.. ನಿಂದಕರಿರಬೇಕು.
ದುಷ್ಟ ಜನರು ಈ ಸೃಷ್ಟಿಗೊಳಿದ್ದರೆ
ಶಿಷ್ಟ ಜನರಿಗೆಲ್ಲ ಕೀರ್ತಿಗಳು...
ದುರುಳ ಜನಂಗಳು ಚಿರಕಾಲ
ಇರವಂತೆ
ಕರವ ಮುಗಿದು ವರ ಬೇಡುವೆನು...”

ಎಂದು ಬಹಳ ಅರ್ಥಪೂರ್ಣವಾಗಿ ಹೇಳಿದ್ದಾರೆ. ಇವೆಲ್ಲಾ ಅನುಭವ ನುಡಿಗಳಾದ್ದರಿಂದ ಅವುಗಳು ವೇದವಾಕ್ಯಗಳಂತೆ ಇರುತ್ತವೆ. ಈ ಮಾತುಗಳು ನಮಗೆ ಜೀವನಪಾಠದ ರೀತಿ ಇರುತ್ತವೆ.

ಎಲ್ಲಾ ಕಾಲದಲ್ಲಿಯೂ ಎಲ್ಲರನ್ನು ಮೆಚ್ಚಿಸಲು ಸಾಧ್ಯವಿಲ್ಲ. ಜಗತ್ತು ಯಾರನ್ನು ತಾನೆ ಜರಿಯುವುದನ್ನು ಬಿಟ್ಟಿದೆ. ನಿಂದಿಸುವ ಮಂದಿ ತಮ್ಮ ಬದುಕಿನ ಪುಟಗಳನ್ನು ತಿರುವಿ ಹಾಕುವ ಬದಲು ಅನ್ಯರ ಬದುಕಿನ ಪುಟಗಳನ್ನು ತಿರುವಿ ಹಾಕಿ ಅವುಗಳಲ್ಲಿ ತಿದ್ದುಪಡಿಗಳನ್ನು ತಿಳಿಸುತ್ತಿರುತ್ತಾರೆ. ಅದಕ್ಕಾಗಿ ಅವರಿಗೆ ಆಭಾರಿಯಾಗಿರಬೇಕು. ಉಚಿತವಾಗಿ ಈ ಕೆಲಸವನ್ನು ಅವರು ಮಾಡುತ್ತಿದ್ದಾರೆ. ಯಾವುದೇ ಫಲಾಪೇಕ್ಷೆ ಇಲ್ಲದೆ ವಿಮರ್ಶೆಗಳನ್ನು ಮಾಡುವುಕ್ಕೆ ಅವರಿಗೆ ಧನ್ಯವಾದಗಳನ್ನು ತಿಳಿಸಬೇಕು. ಇಷ್ಟೆಲ್ಲಾ ಶ್ರಮ ಹಾಕಿ ಅವರು ಮಾಡುವ ಟೀಕೆಗಳು ಸತ್ತು ಹೋಗುತ್ತವೆ, ಅವರ ಟೀಕೆಯಿಂದ ಸರಿಯಾದ ಕೆಲಸಗಳು ಉಳಿಯುತ್ತವೆ ಎಂಬುದೇ ವಿಪರ್ಯಾಸ !

ಟೀಕಾಕಾರರು ನಮ್ಮ ಬದುಕನ್ನು ಸರಿದಾರಿಯಲ್ಲಿ ಹೋಗಲು ಸಹಕರಿಸುತ್ತಿರುತ್ತಾರೆ. ನೈತಿಕತೆಯು ಎಲ್ಲೆ ಮೀರದಿರಲು, ಅಧರ್ಮ-ಅನೀತಿಯಿಂದ ನಡೆದುಕೊಳ್ಳದೆ ಇರುವುದರಲ್ಲಿ ಅವರ ಪಾತ್ರ ಅಪಾರವಾಗಿರುತ್ತದೆ. ಟೀಕಾಕಾರರು ನಮ್ಮ ಪ್ರೋತ್ಸಾಹಕರು, ಅನೇಕ ಕಷ್ಟಕರ ಕೆಲಸಗಳಿಗೆ ಉತ್ತೇಜನ ನೀಡುವವರಾಗಿತ್ತಾರೆ. ಅವರ ಟೀಕೆಗಳನ್ನು ಆಶೀರ್ವಾದ ಎಂದು ಸ್ವೀಕರಿಸಿ, ಮಾಡುವ ಕೆಲಸವನ್ನು ಉತ್ತಮವಾಗಿ ಮಾಡಿದರೆ ಖಂಡಿತಾ ಸಾರ್ಥಕ ಭಾವ ಮೂಡುತ್ತದೆ. ಅವರು ನೆಮ್ಮದಿ ಹಾಳು ಮಾಡಿಕೊಂಡು ಟೀಕೆ ಮಾಡುವುದರಿಂದಲೇ ನಾವು ಕೆಲಸ ಮಾಡಿ ನೆಮ್ಮದಿಯಾಗಿ ಇರಲು ಸಾಧ್ಯ. ಏನಂತೀರಿ?

ಪದ ತಾಂಬೂಲ:
ಟೀಕೆಗಳು ಸ್ಥಾವರವಾದರೆ
ಕೆಲಸಗಳು ಜಂಗಮ,
ಸ್ಥಾವರಕ್ಕಳಿವುಂಟು,
ಜಂಗಮಕ್ಕಳಿವಿಲ್ಲ !

ತಂತ್ರಜ್ಞಾನ ಬಳಕೆ ನಡುವೆ ಸ್ವಯಂ ವಿವೇಚನೆ ಕಳೆದುಕೊಳ್ಳಬೇಡಿ

ಮೈಸೂರು ವೈದ್ಯಕೀಯ ಕಾಲೇಜು-ಸಂಶೋಧನಾ ಸಂಸ್ಥೆಯ 95ನೇ ಪದವಿ ಪ್ರದಾನ ಸಮಾರಂಭದಲ್ಲಿ ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್.ಕಿರಣ್‌ಕುಮಾರ್



ಮೈಸೂರಿನ ಕೆಎಸ್‌ಒಯು ಘಟಿಕೋತ್ಸವ ಭವನದಲ್ಲಿ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಹಾಗೂ ಎಂಎಂಸಿ ಅಲುಮ್ನಿ ಅಸೋಸಿಯೇಷನ್‌ನಿಂದ ಭಾನುವಾರ ನಡೆದ 95ನೇ ಪದವೀಧರರ ದಿನಾಚರಣೆ ಸಮ್ಮರ್ ಡ್ರೀಮ್ಸ್‌ನಲ್ಲಿ ಸಂಸ್ಥೆಯ 151 ವಿದ್ಯಾರ್ಥಿಗಳಿಗೆ ವೈದ್ಯಕೀಯ ಪದವಿ ಪ್ರದಾನ ಮಾಡಲಾಯಿತು.

ಮೈಸೂರು, ಏ.14(ಜಿಎ)-ತಂತ್ರಜ್ಞಾನದ ಬಳಕೆಯ ನಡುವೆ ಸ್ವಯಂ ವಿವೇಚನೆ ಮತ್ತು ಸೇವಾ ಮನೋಭಾವ ಕಳೆದುಕೊಳ್ಳಬೇಡಿ ಎಂದು ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್.ಕಿರಣ್‌ಕುಮಾರ್ ತಿಳಿಸಿದರು.

ಮೈಸೂರಿನ ಕೆಎಸ್‌ಒಯು ಘಟಿಕೋತ್ಸವ ಭವನದಲ್ಲಿ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಹಾಗೂ ಎಂಎಂಸಿ ಅಲುಮ್ನಿ ಅಸೋಸಿಯೇಷನ್‌ನಿಂದ ಭಾನುವಾರ ನಡೆದ 95ನೇ ಪದವೀಧರರ ದಿನಾಚರಣೆ ಸಮ್ಮರ್ ಡ್ರೀಮ್ಸ್‌ನಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಂದು ತಂತ್ರಜ್ಞಾನ ಡಿಜಿಟಲ್ ಕ್ಷೇತ್ರವನ್ನೂ ದಾಟಿ ಕ್ವಾಂಟಮ್ ಕ್ಷೇತ್ರದತ್ತ ಸಾಗುತ್ತಿದೆ. ಹಲವಾರು ಸಂಗತಿಗಳ, ಅನುಭವಗಳ ಶೋಧಿಸಿ ಉತ್ತರ, ಸಲಹೆ ಒದಗಿಸುವ ವ್ಯವಸ್ಥೆ ಬಂದಿದೆ. ಆದರೆ, ಸುತ್ತಲಿನ ಜೀವಿಗಳ ಬದುಕನ್ನು ಉತ್ತಮಗೊಳಿಸುವ ಉದ್ದೇಶ ಮಾತ್ರ ನಮ್ಮೊಳಗಿನಿಂದಲೇ ಹುಟ್ಟಬೇಕು. ವೇಗವಾಗಿ ಬೆಳೆಯುತ್ತಿರುವ ತಂತ್ರಜ್ಞಾನದ ಉತ್ಪನ್ನವಾಗಬೇಡಿ, ಅದನ್ನು ಸೂಕ್ತವಾಗಿ ಬಳಸಿಕೊಳ್ಳುವ ಜ್ಞಾನಿಗಳಾಗಿ ಎಂದರು.


ಮನುಷ್ಯ ತನ್ನೆಲ್ಲಾ ಕಲಿಕೆಯಲ್ಲೂ ಸುತ್ತಲಿನ ವಾತಾವರಣವನ್ನು ಅನುಕರಿಸುತ್ತಾನೆ. ಈ ಅನುಕರಣೆ ಮನುಕುಲದ ಒಳಿತಿಗೆ ಪೂರಕವಾಗಿರಬೇಕು. ತಂತ್ರಜ್ಞಾನ ಕೂಡ ಮನುಷ್ಯ ನೀಡುವ ಮಾಹಿತಿಗಳನ್ನು ಅನುಕರಿಸಿ ಕಾರ್ಯನಿರ್ವಹಿಸುತ್ತದೆ ಎಂಬುದನ್ನು ಮರೆಯಬಾರದು. ನಾವು ಅದಕ್ಕೆ ಅಡಿಯಾಳಾಗಬಾರದು ಎಂದರು.

ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತವು ಪ್ರವೇಶಿಸುವಾಗ ದೇಶದಲ್ಲಿ ಹಸಿವು, ಬಡತನ ಸಮಸ್ಯೆಗಳು ಇದ್ದವು. ಆದರೂ, ವಿಜ್ಞಾನಿ ವಿಕ್ರಂ ಸಾರಾಭಾಯಿ ಅವರು ಬಾಹ್ಯಾಕಾಶ ಕ್ಷೇತ್ರ ಜನರ ಒಳಿತಿಗೆ ಅಗತ್ಯ ಎಂದು ಒತ್ತಾಯಿಸಿ ಮುಂದುವರಿದರು. ತಿರುವನಂತಪುರಂ ಬಳಿಯ ತುಂಬಾ ಗ್ರಾಮದಲ್ಲಿ ಮೀನುಗಾರರನ್ನು ಮನವೊಲಿಸಿ ರಾಕೆಟ್ ಉಡಾವಣೆ ಕೇಂದ್ರ ಆರಂಭಿಸಿದರು. ಇಂದು ಸೆಟಲೈಟ್‌ಗಳ ಮೂಲಕ ಮೀನುಗಾರರಿಗೆ ಸುರಕ್ಷತೆ ಸಂದೇಶ, ಮೀನುಗಳ ಲಭ್ಯತೆ ಮಾಹಿತಿ ನೀಡಲಾಗುತ್ತಿದೆ. ಜೀವ ರಕ್ಷಣೆಯೊಂದಿಗೆ ಸಾವಿರಾರು ಕೋಟಿ ಲಾಭವಾಗಿದೆ. ನಮ್ಮ ಕೆಲಸಗಳಲ್ಲಿ ಭವಿಷ್ಯದ ಮುನ್ನೋಟವಿರಬೇಕು ಎಂದು ವಿವರಿಸಿದರು.

ವೈದ್ಯಕೀಯ ಕ್ಷೇತ್ರದಲ್ಲಿ ಹಲವು ನೂತನ ತಂತ್ರಜ್ಞಾನಗಳು ಬಂದಿವೆ. ರೋಬೋಟ್ ಬಳಸಿ ಮಹತ್ವದ ಕಾರ್ಯಗಳನ್ನು ಮಾಡಲಾಗುತ್ತಿದೆ. ಈ ಎಲ್ಲದರ ನಡುವೆಯೂ ಸಮಗ್ರ ಚಿಂತನೆಗಳೊಂದಿಗೆ ಕಾರ್ಯನಿರ್ವಹಿಸುವ ಸಮರ್ಥ ವೈದ್ಯರ ಅಗತ್ಯವಿದೆ. ತಂತ್ರಜ್ಞಾನದ ಬಳಕೆಯ ನಡುವೆ ಸ್ವಯಂ ವಿವೇಚನೆ ಮತ್ತು ಸೇವಾ ಮನೋಭಾವ ಕಳೆದುಕೊಳ್ಳಬೇಡಿ ಎಂದರು.

ಸಂಸ್ಥೆಯ 151 ವಿದ್ಯಾರ್ಥಿಗಳಿಗೆ ವೈದ್ಯಕೀಯ ಪದವಿ ಪ್ರದಾನ ಮಾಡಲಾಯಿತು. 10 ವಿದ್ಯಾರ್ಥಿಗಳಿಗೆ 16 ನಗದು ಪುರಸ್ಕಾರ ದೊರೆಯಿತು. ಈ ವೇಳೆ ಸಂಸ್ಥೆ ಡೀನ್ ಡಾ.ಕೆ.ಆರ್.ದಾಕ್ಷಾಯಿಣಿ, ಅಸೋಸಿಯೇಷನ್ ಅಧ್ಯಕ್ಷ ಡಾ.ಎಚ್.ಎನ್.ದಿನೇಶ್, ಗೌರವಾಧ್ಯಕ್ಷ ಡಾ.ಸಿ.ಡಿ.ಶ್ರೀನಿವಾಸಮೂರ್ತಿ, ಕಾರ್ಯದರ್ಶಿ ಡಾ.ಎಚ್.ಬಿ.ಶಶಿಧರ್, ಸಂಸ್ಥೆ ಟೀಚರ್ಸ್ ಅಸೋಸಿಯೇಷನ್ ಅಧ್ಯಕ್ಷ ಡಾ.ಪಿ.ಎಲ್.ಬಸವಣ್ಣ, ವಿದ್ಯಾರ್ಥಿ ಕ್ಷೇಮಪಾಲನಾ ಅಧಿಕಾರಿ ಡಾ.ಎಸ್.ಚಂದ್ರಶೇಖರ್ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com



ಮೈಸೂರು, ಹಂಪಿ, ಬಾದಾಮಿ ಸೇರಿ ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು

• ಪ್ರಧಾನಿ ಮೋದಿ ಭರವಸೆ • ರಾಜ್ಯ ಕಾಂಗ್ರೆಸ್ ಸರ್ಕಾರ ಅಭಿವೃದ್ಧಿ ಬದಲು ಕಪ್ಪು ಹಣ ಸಾಗಿಸುವುದರಲ್ಲಿ ನಿರತವಾಗಿದೆ • ದೇಶದ ಐಟಿ ಹಬ್ ಬೆಂಗಳೂರಲ್ಲಿ ಹನಿ ಕುಡಿಯುವ ನೀರಿಗೂ ಹಾಹಾಕಾರ ತಂದಿತ್ತಿದ್ದಾರೆ • ಬಡವರು, ರೈತರ ಪರಿಸ್ಥಿತಿ ಹೇಳತೀರದು; ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಿ



ಮೈಸೂರಿನಲ್ಲಿ ನಡೆದ ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಬೃಹತ್ ಪ್ರಚಾರ ಸಮಾವೇಶದಲ್ಲಿ ಮೈಸೂರು ಬಿಜೆಪಿ ವತಿಯಿಂದ ಪ್ರಧಾನಿ ಮೋದಿ ಅವರಿಗೆ ದೇವರ ಮೂರ್ತಿ ನೀಡಿ, ಮೈಸೂರು ಪೇಟ, ಮೈಸೂರು ಸಿಲ್ಕ್ ಶಲ್ಯ, ಮೈಸೂರು ಮಲ್ಲಿಗೆ ಹಾರ ಹಾಕಿ ಅಭಿನಂದಿಸಲಾಯಿತು. ಈ ವೇಳೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಮಾಜಿ ಸಿಎಂಗಳಾದ ಬಿ.ಎಸ್.ಯಡಿಯೂರಪ್ಪ, ಹೆಚ್.ಡಿ.ಕುಮಾರಸ್ವಾಮಿ ಇನ್ನಿತರ ಮುಖಂಡರಿದ್ದರು.


ಮೈಸೂರು, ಏ.14(ಎಸ್‌ಬಿಡಿ)- ನಮ್ಮ ಕರ್ನಾಟಕದ ಪಾರಂಪರಿಕ ತಾಣಗಳಾದ ಮೈಸೂರು, ಹಂಪಿ ಹಾಗೂ ಬಾದಾಮಿ ವಿಶ್ವಮಟ್ಟದ ಪ್ರವಾಸೋದ್ಯಮ ನಕ್ಷೆಯಲ್ಲಿ ಮಿಂಚಲಿದ್ದು, ಈ ಮೂಲಕ ರಾಜ್ಯದ ಪ್ರವಾಸೋದ್ಯಮ ಹೊಸ ದಿಕ್ಕಿನಲ್ಲಿ ಸಾಗಲಿದೆ ಎಂದು ಪ್ರಧಾನಿ ಮೋದಿ ಭರವಸೆ ನೀಡಿದರು.

ಮೈಸೂರಿನಲ್ಲಿ ಬೃಹತ್ ಚುನಾವಣಾ ಸಮಾವೇಶದಲ್ಲಿ ಕನ್ನಡದಲ್ಲೇ ಭಾಷಣ ಆರಂಭಿಸಿದ ಮೋದಿ, ಕರ್ನಾಟಕದ ಸಮಸ್ಯೆಗಳ ಮೂಲಕ ಕಾಂಗ್ರೆಸ್ ಸರ್ಕಾರಕ್ಕೆ ಚಾಟಿ ಬೀಸುವುದರ ಜೊತೆಗೆ ಪ್ರವಾಸೋ ದ್ಯಮ ಅಭಿವೃದ್ಧಿಯ ಆಶಯ ವ್ಯಕ್ತಪಡಿಸಿದರು.

ಕರ್ನಾಟಕ ಪರಂಪರೆಯ ತವರು. ರಾಜ್ಯದ ಪ್ರವಾಸೋದ್ಯಮದ ಅಭಿವೃದ್ಧಿ ಜೊತೆಗೆ ಉದ್ಯೋಗ ಸೃಷ್ಟಿಗೆ ಹೆಚ್ಚಿನ ಒತ್ತು ನೀಡಲಾಗುವುದು. ಮೈಸೂರು ಕರ್ನಾಟಕದ ಸಾಂಸ್ಕೃತಿಕ ರಾಜಧಾನಿ. ಇಲ್ಲಿ ಜರುಗುವ ದಸರಾ ಮಹೋತ್ಸವ ವಿಶ್ವ ವಿಖ್ಯಾತಿ ಪಡೆದಿದೆ. ನಮ್ಮ ಕನ್ನಡ ಭಾಷೆ ದೇಶದ ಸಮೃದ್ಧ ಭಾಷೆಯಾಗಿದ್ದು, ಇದರ ವಿಸ್ತರಣೆಗೂ ಆದ್ಯತೆ ನೀಡಲಾಗುವುದು. ಕರ್ನಾಟಕ ದೇಶದ ಐಟಿ ಹಾಗೂ ಟೆಕ್ನಾಲಜಿಯ ಹಬ್ ಆಗಲಿದ್ದು, ಯುವ ಜನತೆಗೆ ಹೆಚ್ಚಿನ ಉದ್ಯೋಗ ಲಭ್ಯವಾಗಲಿದೆ ಎಂದರು.

ಕಾಂಗ್ರೆಸ್‌ನಿಂದ ಖಜಾನೆ ಖಾಲಿ: ಕರ್ನಾಟಕ ಕಾಂಗ್ರೆಸ್ ನಡೆಯಿಂದ ಸರ್ಕಾರದ ಖಜಾನೆ ಖಾಲಿಯಾಗಿದ್ದು, ಜನ ನೋವಿನಲ್ಲಿದ್ದಾರೆ. ಕಾಂಗ್ರೆಸ್‌ಗೆ ಅಭಿವೃದ್ಧಿಗಿಂತ ಕಪ್ಪು ಹಣ ಕೂಡಿಸುವುದಷ್ಟೇ ಮಹತ್ವದ ಕೆಲಸವಾಗಿದೆ. ಇಲ್ಲಿಂದ ನೂರು ಕೋಟಿ ಕಪ್ಪು ಹಣವನ್ನು ಚುನಾವಣೆಗೆಂದು ಬೇರೆ ರಾಜ್ಯಗಳಿಗೆ ಕಳುಹಿಸಲಾಗಿದೆ. ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕ ಅಧೋಗತಿಯತ್ತ ಸಾಗುತ್ತಿದೆ. ಐಟಿ ಹಬ್ ಆಗಿರುವ ಬೆಂಗಳೂರಿನಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಸೃಷ್ಟಿಯಾಗಿದೆ. ರಾಜ್ಯದ ವಿಕಾಸ, ಬಡವರ ಕಲ್ಯಾಣ ಯೋಜನೆಗಳನ್ನು ನಿಲ್ಲಿಸಿದ್ದಾರೆ. ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಇಲ್ಲದೆ ರೈತರು ಕಂಗಾಲಾಗಿದ್ದಾರೆ. ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರದ 6 ಸಾವಿರ ರೂ. ಜೊತೆಗೆ ರಾಜ್ಯದಿಂದ ನೀಡುತ್ತಿದ್ದ 4 ಸಾವಿರ ರೂ. ಸಹಾಯಧನವನ್ನು ನಿಲ್ಲಿಸಿದ್ದಾರೆ. ಏ.26ರಂದು ಮತದಾನದ ವೇಳೆ ಕಾಂಗ್ರೆಸ್ ತಿರಸ್ಕರಿಸುವ ಮೂಲಕ ತಕ್ಕ ಪಾಠ ಕಲಿಸಬೇಕು ಎಂದರು.

ಗೌಡರಿಗೆ ಮೋದಿ ವಿನಮ್ರ



ಸಮಾವೇಶದ ವೇದಿಕೆಗೆ ಸಂಜೆ 5.14ಕ್ಕೆ ಮೋದಿ ಆಗಮಿಸುತ್ತಿದ್ದಂತೆ ವೇದಿಕೆಯಲ್ಲಿದ್ದ ಎಲ್ಲಾ ಗಣ್ಯರೂ ಮೇಲೆದ್ದು ಕೈಮುಗಿದು ನಮಸ್ಕರಿಸಿದರು. ಈ ವೇಳೆ 91ರ ಹರೆಯದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರೂ ಮೇಲೇಳಲು ಪ್ರಯತ್ನಿಸಿದರು. ಇದನ್ನು ಗಮನಿಸಿದ ಮೋದಿ, ದೇವೇಗೌಡರನ್ನು ಮೇಲೇಳದಂತೆ ಮನವಿ ಮಾಡಿ ಕೈಮುಗಿದು ನಮಸ್ಕರಿಸಿದರು. ಈ ಬಗ್ಗೆ ದೇವೇಗೌಡರೂ ಭಾಷಣದಲ್ಲಿ ಪ್ರಸ್ತಾಪಿಸಿ, ಎರಡೂ ಮಂಡಿಗಳಲ್ಲಿ ನೋವಿರುವುದರಿಂದ ಮೇಲೆದ್ದು ಮೋದಿ ಅವರಿಗೆ ಗೌರವ ಸೂಚಿಸಲು ಸಾಧ್ಯವಾಗಲಿಲ್ಲ ಎಂದರು. ದೇವೇಗೌಡರ ಅಬ್ಬರದ ಭಾಷಣವನ್ನು ಮೋದಿ ತದೇಕಚಿತ್ತದಿಂದ ಆಲಿಸುತ್ತಿದ್ದರು. ಮೋದಿ ಅವರ ಎಡಬದಿಯಲ್ಲಿ ಹೆಚ್.ಡಿ.ದೇವೇಗೌಡರು ಹಾಗೂ ಬಲಬದಿಯಲ್ಲಿ ಬಿ.ಎಸ್.ಯಡಿಯೂರಪ್ಪನವರು ಕುಳಿತಿದ್ದರು. ಬಿಎಸ್‌ವೈ ಪಕ್ಕದಲ್ಲಿ ಕುಮಾರಸ್ವಾಮಿ ಹಾಗೂ ದೇವೇಗೌಡರ ಪಕ್ಕದಲ್ಲಿ ಯದುವೀರ್‌ಗೆ ಆಸನ ವ್ಯವಸ್ಥೆ ಮಾಡಲಾಗಿತ್ತು.

'ನಿಮಗೆಲ್ಲಾ ನನ್ನ ನಮಸ್ಕಾರಗಳು...'

ಸಮಾವೇಶದಲ್ಲಿ 'ನಿಮಗೆಲ್ಲಾ ನನ್ನ ನಮಸ್ಕಾರಗಳು' ಎಂದು ಕನ್ನಡದಲ್ಲೇ ಮಾತು ಆರಂಭಿಸಿದ ಪ್ರಧಾನಿ ಮೋದಿ, ಚೈತ್ರ ನವರಾತ್ರಿ ಸಂದರ್ಭದಲ್ಲಿ ನನಗೆ ತಾಯಿ ಚಾಮುಂಡೇಶ್ವರಿ ಆಶೀರ್ವಾದ ಪಡೆಯುವ ಅವಕಾಶ ಸಿಕ್ಕಿದೆ. ನಾನು ತಾಯಿ ಚಾಮುಂಡೇಶ್ವರಿ, ಭುವನೇಶ್ವರಿ ಹಾಗೂ ಕಾವೇರಿ ಮಾತೆ ಚರಣಗಳಿಗೆ ನಮಸ್ಕರಿಸುತ್ತೇನೆ. ಆದರಣೀಯ ದೇವೇಗೌಡರಿಗೆ ತುಂಬು ಹೃದಯದಿಂದ ಧನ್ಯವಾದ ಸಮರ್ಪಿಸುತ್ತೇನೆ. ರಾಜನೀತಿ ಪಥದಲ್ಲಿ ಅತ್ಯಂತ ಹಿರಿಯ ರಾಜಕಾರಣಿ ಇವರ ಆಶೀರ್ವಾದ ಪಡೆಯುವುದು ನನ್ನ ಸೌಭಾಗ್ಯ. ಇವರಾಡಿದ ಎಲ್ಲಾ ಮಾತುಗಳನ್ನೂ ಅರ್ಥ ಮಾಡಿಕೊಂಡಿದ್ದೇನೆ. ದೊಡ್ಡ ಸಂಖ್ಯೆಯಲ್ಲಿ ನೆರೆದಿರುವ ನಿಮ್ಮ ಮೂಲಕ ಇಡೀ ರಾಜ್ಯದ ಆಶೀರ್ವಾದ ಪಡೆದಿದ್ದೇನೆ 'ಪೂರ್ತಿ ಕರ್ನಾಟಕ ಹೇಳುತ್ತಿದೆ ಮತ್ತೊಮ್ಮೆ ಮೋದಿ ಸರ್ಕಾರ' ಎಂದು ಹೇಳಿದರು. ಈ ವೇಳೆ ಸಭಿಕರೂ ಪುನರಾವರ್ತನೆ ಮಾಡಿದರು. ಕನ್ನಡದಲ್ಲಿ ಭಾಷಣ ಶುರು ಮಾಡಿದಾಗ ಸಭಿಕರ ಶಿಳ್ಳೆ, ಚಪ್ಪಾಳೆ ಮುಗಿಲು ಮುಟ್ಟಿತ್ತು. 'ಭಾರತ್ ಮಾತಾ ಕೀ ಜೈ' ಮೂಲಕ ಮೋದಿ ಭಾಷಣ ಮುಗಿಸಿದರು.

ನಾಲ್ವರು ಅಭ್ಯರ್ಥಿಗಳ ಪರ ಮತಯಾಚನೆ

ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ನಮ್ಮ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ. ಮಂಡ್ಯ ಕ್ಷೇತ್ರದಲ್ಲಿ ನನ್ನ ಮಿತ್ರ ಹೆಚ್.ಡಿ.ಕುಮಾರಸ್ವಾಮಿ, ಮೈಸೂರು-ಕೊಡಗು ಕ್ಷೇತ್ರದಲ್ಲಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಚಾಮರಾಜನಗರದಲ್ಲಿ ಬಾಲರಾಜ್ ಹಾಗೂ ಹಾಸನದಲ್ಲಿ ಪ್ರಜ್ವಲ್ ರೇವಣ್ಣ ಸ್ಪರ್ಧಿಸಿದ್ದಾರೆ. ಇವರಿಗೆ ನಿಮ್ಮ ಮತ ನೀಡಿ ಗೆಲ್ಲಿಸಿ. ನಿಮ್ಮ ಒಂದೊಂದು ಮತವೂ ಮೋದಿಯ ಶಕ್ತಿ ವೃದ್ಧಿಸುತ್ತವೆ ಎಂದು ಪ್ರಧಾನಿ ಮೋದಿ ಮನವಿ ಮಾಡಿದರು. ಸಮಾವೇಶದ ಕೊನೆಯಲ್ಲಿ ಅಭ್ಯರ್ಥಿಗಳು, ವೇದಿಕೆಯಲ್ಲಿದ್ದ ನಾಯಕರೊಂದಿಗೆ ಕೈಮೇಲೆತ್ತಿ ವಿಜಯದ ವಿಶ್ವಾಸ ವ್ಯಕ್ತಪಡಿಸಿದರು.



ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆದ ಬಿಜೆಪಿ-ಜೆಡಿಎಸ್ ಸಮಾವೇಶದಲ್ಲಿ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ. ದೇವೇಗೌಡರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಸನ್ಮಾನಿಸಿದರು.



ಬಿಜೆಪಿ-ಜೆಡಿಎಸ್ ಸಮಾವೇಶದ ವೇದಿಕೆಗೆ ಪ್ರಧಾನಿ ನರೇಂದ್ರ ಮೋದಿಯವರು ಆಗಮಿಸಿದ ಸಂದರ್ಭದಲ್ಲಿ ಅಯೋಧ್ಯೆ ರಾಮಮಂದಿರ ಬಾಲರಾಮ ವಿಗ್ರಹದ ಶಿಲ್ಪಿ ಅರುಣ್ ಯೋಗಿರಾಜ್, ಪ್ರಧಾನಿಗಳಿಗೆ ನಮಸ್ಕರಿಸುವ ಮೂಲಕ ಗೌರವ ಸಲ್ಲಿಸಿದರು.




ಬಿಜೆಪಿ-ಜೆಡಿಎಸ್ ಸಮಾವೇಶದ ಸಭಾಂಗಣಕ್ಕೆ ಪ್ರವೇಶಿಸುತ್ತಿರುವವರನ್ನು ಪೊಲೀಸರು ತಪಾಸಣೆ ಮಾಡಿ ಒಳಬಿಡುತ್ತಿರುವುದು.

ಉದ್ಘೋಷ, ಜೈಕಾರ....

ಹೆಲಿಕಾಪ್ಟರ್ ಸದ್ದು ಕೇಳಿದಾಗಲೇ ನೆರೆದಿದ್ದ ಸಭಿಕರು ಎದ್ದು ನಿಂತು ಪೆಂಡಾಲ್ ಸಂದುಗಳಲ್ಲೇ ಆಗಸದತ್ತ ನೋಡಲಾರಂಭಿಸಿದರು. ಇನ್ನು ಪ್ರಧಾನಿ ಮೋದಿ ವೇದಿಕೆಗೆ ಆಗಮಿಸುತ್ತಿದ್ದಂತೆ 'ಮೋದಿ ಮೋದಿ...' ಮುಗಿಲು ಮುಟ್ಟಿತ್ತು. ಅವರ ಭಾಷಣದ ಮಧ್ಯೆ 2-3 ಬಾರಿ ಇದೇ ಘೋಷಣೆ ಮೊಳಗಿತು. 'ಜೈ ಶ್ರೀರಾಮ್...', 'ಭಾರತ್ ಮಾತಾ ಕೀ ಜೈ..' ಘೋಷಣೆಗಳೂ ಮುಗಿಲು ಮುಟ್ಟಿದ್ದವು. ಮಾಜಿ ಸಿಎಂ ಯಡಿಯೂರಪ್ಪ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಪ್ರತಾಪ್ ಸಿಂಹ, ಯದುವೀರ್ ವೇದಿಕೆಗೆ ಬಂದಾಗಲೂ ಶಿಳ್ಳೆ, ಕೇಕೆ ಜೋರಾಗಿ ಕೇಳಿಬಂದಿತು. ಪ್ರತಾಪ್ ಸಿಂಹ ವೇದಿಕೆಗೆ ಬರುತ್ತಿದ್ದಂತೆ ದೇವೇಗೌಡರು ಹಾಗೂ ಯಡಿಯೂರಪ್ಪನವರ ಕಾಲುಮುಟ್ಟಿ ನಮಸ್ಕರಿಸಿದರು. ಮಾಜಿ ಸಚಿವ ಸಿ.ಟಿ.ರವಿ ಭಾಷಣಕ್ಕೆ ತೆರಳುವಾಗ ಈ ಇಬ್ಬರು ಹಿರಿಯರ ಕಾಲು ಮುಟ್ಟಿ ನಮಸ್ಕರಿಸಿದರು.

ಸಂಸದ ವಿ.ಶ್ರೀನಿವಾಸ ಪ್ರಸಾದ್ ಗೈರು



ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರೂ ಭೇಟಿ ಮಾಡಿ, ಸಮಾವೇಶಕ್ಕೆ ಬರುವಂತೆ ಆಹ್ವಾನಿಸಿದರೂ ಚಾಮರಾಜನಗರ ಹಾಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಗೈರಾಗಿದ್ದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕೂಡ ಬಂದಿರಲಿಲ್ಲ. ಅವರು ಮಂಗಳೂರಿಗೆ ತೆರಳಿದ್ದಾರೆಂದು ಬಿಜೆಪಿ ನಾಯಕರೊಬ್ಬರು ತಿಳಿಸಿದರು. ವಿಧಾನಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಅವರು ಮುಂಚಿತವಾಗಿಯೇ ಆಗಮಿಸಿದ್ದರು.

ವಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಜೆಡಿಎಸ್ ರಾಜ್ಯ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ, ಸಂಸದರಾದ ಪ್ರತಾಪ್ ಸಿಂಹ, ಸುಮಲತಾ, ಮಾಜಿ ಸಚಿವರಾದ ಎಸ್.ಎ. ರಾಮದಾಸ್, ಸಿ.ಟಿ.ರವಿ, ಸಾ.ರಾ. ಮಹೇಶ್, ಎನ್.ಮಹೇಶ್, ಹೆಚ್.ಡಿ. ರೇವಣ್ಣ, ಸಿ.ಹೆಚ್. ವಿಜಯಶಂಕರ್, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಶಾಸಕರಾದ ಶ್ರೀವತ್ಸ, ಜಿ.ಡಿ.ಹರೀಶ್ ಗೌಡ, ಸಿ.ಎನ್. ಮಂಜೇಗೌಡ, ಸುಜಾ ಕುಶಾಲಪ್ಪ, ಮಾಜಿ ಶಾಸಕರಾದ ಹರ್ಷವರ್ಧನ್, ಕೆ.ಮಹದೇವ್, ಅಶ್ವಿನ್‌ಕುಮಾರ್, ಸಿ.ಎಸ್. ನಿರಂಜನ್, ಮುಖಂಡರಾದ ಪ್ರೇಮಾ ಶಂಕರೇಗೌಡ, ಎನ್.ವಿ.ಫಣೀಶ್, ಮೈ.ವಿ. ರವಿಶಂಕರ್, ಎಂ.ರಾಜೇಂದ್ರ, ರಘು ಆರ್. ಕೌಟಿಲ್ಯ, ಡಾ.ಅನಿಲ್ ಥಾಮಸ್, ಮಂಗಳಾ ಸೋಮಶೇಖರ್, ಪ್ರತಾಪ್ ಸಿಂಹ ನಾಯಕ್ ಸೇರಿದಂತೆ ಜೆಡಿಎಸ್-ಬಿಜೆಪಿಯ ಹಲವು ಮುಖಂಡರು ಭಾಗವಹಿಸಿದ್ದರು.

ಜೂ.4ರಂದು ಮೂರನೇ ಬಾರಿಗೆ ಮೋದಿ ಪ್ರಧಾನಿಯಾಗಿ ನಿಯುಕ್ತಿ ಆಗಲಿದ್ದಾರೆ: ಪ್ರತಾಪ್ ಸಿಂಹ




ಮೈಸೂರು,ಏ.14(ಪಿಎಂ)- ಜೂನ್ 4ರಂದು ಸಂಜೆ 4ರಿಂದ 5 ಗಂಟೆಯಷ್ಟರಲ್ಲಿ ಈ ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿ ಅವರು ಮೂರನೇ ಬಾರಿಗೆ ಆಯ್ಕೆಯಾಗಲಿದ್ದಾರೆ. ಇದರಲ್ಲಿ ಯಾರಿಗೂ ಅನುಮಾನವೇ ಬೇಡ ಎಂದು ಸಂಸದ ಪ್ರತಾಪ್ ಸಿಂಹ ವಿಶ್ವಾಸ ವ್ಯಕ್ತಪಡಿಸಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಹಮ್ಮಿಕೊಂಡಿದ್ದ ಸಮಾವೇಶದಲ್ಲಿ ಪ್ರಧಾನಿ ಮೋದಿಯವರ ಆಗಮನಕ್ಕೂ ಮುನ್ನ ಮಾತನಾಡಿದ ಅವರು, ಇದಕ್ಕಾಗಿ ಮೈಸೂರು ಕ್ಷೇತ್ರದಿಂದ ಯದು ವೀರ್, ಚಾಮರಾಜನಗರದಿಂದ ಬಾಲರಾಜ್, ಹಾಸನದಿಂದ ಪ್ರಜ್ವಲ್ ರೇವಣ್ಣ, ಮಂಡ್ಯ ದಿಂದ ಕಾವೇರಿಯನ್ನು ಕಾಯುವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಆಯ್ಕೆ ಮಾಡಿ ಸಂಸತ್ತಿಗೆ ಕಳುಹಿಸಬೇಕು ಎಂದರು. ಬಂಧುಗಳೇ ಕಳೆದ 10 ವರ್ಷ ಗಳಲ್ಲಿ ಸಾಕಷ್ಟು ಪ್ರೀತಿ-ವಿಶ್ವಾಸ ಮತ್ತು ಬೆಂಬಲ ಕೊಟ್ಟಿದ್ದೀರಿ. ಎರಡು ಬಾರಿ ಭಾರೀ ಅಂತರದಲ್ಲಿ ಗೆಲುವು ತಂದುಕೊಟ್ಟಿದ್ದೀರಿ. ಅಂತೆಯೇ ನಮ್ಮ ಈ ನಾಲ್ಕು ಅಭ್ಯರ್ಥಿಗಳನ್ನು ಒಳ್ಳೆಯ ಅಂತರದಲ್ಲಿ ಗೆಲ್ಲಿಸಿಕೊಡಿ ಎಂದು ಕೋರಿ ದರಲ್ಲದೆ, 10 ವರ್ಷಗಳಲ್ಲಿ ಸಂಸದರಾಗಿ ತಾವು ಕೈಗೊಂಡ ಅಭಿವೃದ್ಧಿ ಕೆಲಸಗಳನ್ನು ತಿಳಿಸಿದರು. ಚಾಮುಂಡಿಬೆಟ್ಟದ ಅಭಿವೃದ್ಧಿಗೂ ಅನುದಾನ ತಂದಿದ್ದೇನೆ. ತಾಯಿ ಚಾಮುಂಡೇಶ್ವರಿಗೆ ಅಪಮಾನ ಮಾಡಿದ ಸಂದರ್ಭದಲ್ಲೂ ಹೋರಾಟ ಮಾಡಿದ್ದೇನೆ. ಆ ಮೂಲಕ ಮಹಿಷಾ ದಸರ ಎಂಬ ಅನಿಷ್ಟವನ್ನು ಮಟ್ಟ ಹಾಕಿದ್ದೇನೆ ಎಂದರು.

ಈ ಭಾಗದಲ್ಲಿ ಹನುಮ ಜಯಂತಿಯನ್ನು ಹೋಬಳಿ ಮಟ್ಟದಲ್ಲಿ ಆಚರಿಸುವಂತಾಗಿದೆ. 2015ರಲ್ಲಿ ಇದೇ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದರು. ಆಗ ಹುಣಸೂರು ಹನುಮ ಜಯಂತಿ ಮಾಡಲಾಯಿತು. ಇದೇ ವೇಳೆ ನನ್ನ ವಿರುದ್ಧ ಎರಡು ಕ್ರಿಮಿನಲ್ ಕೇಸ್ ದಾಖಲಿಸಿದರು. ಹನುಮ ಜಯಂತಿ ಹೋಬಳಿ ಹೋಬಳಿಗಳಲ್ಲೂ ನಡೆಯಲು ನಾಂದಿ ಹಾಡಿದ್ದು ಹುಣಸೂರು ಹನುಮ ಜಯಂತಿ. ಹಿಂದುತ್ವ, ರಾಷ್ಟ್ರೀಯತೆ, ಅಭಿವೃದ್ಧಿ ವಿಚಾರದಲ್ಲಿ ಕಳೆದ 10 ವರ್ಷಗಳಲ್ಲಿ ಕೆಲಸ ಮಾಡಿ ತೋರಿಸಿದ್ದೇನೆ. ಎಲ್ಲಾ ಕೆಲಸ ಮಾಡಿದ್ದೇನೆ ಎಂದು ಹೇಳಿದರು. ವೇದಿಕೆಯಲ್ಲಿ ಪ್ರಧಾನಿ ಮೋದಿಯವರು ಪ್ರತಾಪ್ ಸಿಂಹ ಅವರ ಬೆನ್ನುತಟ್ಟಿದ್ದು ಗಮನ ಸೆಳೆಯಿತು.

ಎಸ್.ಎ.ರಾಮದಾಸ್‌ಗೆ ಪ್ರಧಾನಿ ಮೋದಿಯವರ ಪ್ರೀತಿಯ ಗುದ್ದು



ಮೈಸೂರು, ಏ.14 (ಪಿಎಂ)- ಸಮಾವೇಶದ ವೇದಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಮಾಜಿ ಸಚಿವ ಎಸ್.ಎ.ರಾಮದಾಸ್ ಅವರಿಗೆ ಆತ್ಮೀಯತೆಯ ಗುದ್ದು ಕೊಟ್ಟರು. ನರೇಂದ್ರ ಮೋದಿಯವರು ಮೈಸೂರಿಗೆ ಈ ಹಿಂದೆಯೂ ಭೇಟಿ ನೀಡಿದ್ದಾಗ, ಹಲವು ಬಾರಿ ರಾಮದಾಸ್ ಅವರ ಬೆನ್ನಿಗೆ ಪ್ರೀತಿಯಿಂದ ಗುದ್ದಿ ಆತ್ಮೀಯತೆ ತೋರಿದ್ದರು. ಅದೇ ಆತ್ಮೀಯತೆ ಇಂದು ಸಹ ಮುಂದುವರೆಯಿತು.

ಎನ್‌ಡಿಎಗೆ ಆಶೀರ್ವಾದ ಮಾಡಿ; ಸಂಸದೆ ಸುಮಲತಾ



ಮೈಸೂರು, ಏ.14(ಪಿಎಂ)- ಭವ್ಯ ಭಾರತ ನಿರ್ಮಿಸಬೇಕೆಂಬುದು ಪ್ರಧಾನಿ ಮೋದಿ ಅವರ ಕನಸು. ಎನ್‌ಡಿಎಗೆ 400 ಸ್ಥಾನ ಗಳಿಸಲು ಆಶೀರ್ವಾದ ಮಾಡಿದರೆ ನಮ್ಮೆಲ್ಲರ ಭವಿಷ್ಯ ಉಜ್ವಲವಾಗಲಿದೆ ಎಂದು ಸಂಸದೆ ಸುಮಲತಾ ಅಂಬರೀಶ್ ಹೇಳಿದರು.

ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಮಾವೇಶದಲ್ಲಿ ಪ್ರಧಾನಿ ಮೋದಿಯವರ ಆಗಮನಕ್ಕೂ ಮುನ್ನ ಮಾತನಾಡಿದ ಅವರು, ಭಾರತ ದೇಶ ಪ್ರಗತಿಯ ಹಾದಿಯಲ್ಲಿ ಸಾಗಲು ಬಿಜೆಪಿ-ಎನ್‌ಡಿಎ ಪರವಾಗಿ ತಮ್ಮಲ್ಲಿ ಆಶೀರ್ವಾದ ಕೇಳುತ್ತಿದ್ದೇನೆ ಎಂದರು. ನಮ್ಮ ದೇಶವನ್ನು 2047ರ ವೇಳೆಗೆ ಅಂದರೆ 25 ವರ್ಷಗಳ ನಂತರ ಇಡೀ ಜಗತ್ತಿನಲ್ಲೇ ನಂಬರ್ 1 ಆಗಿರಬೇಕೆಂಬುದು ಮೋದಿಯವರ ಕನಸು. ಆ ಕನಸಿಗೆ ನಾವೆಲ್ಲರೂ ಆಶೀರ್ವಾದ ಮಾಡಬೇಕು ಎಂದರು.

ದೇಶದಲ್ಲಿ ಮೋದಿ ಅಲೆ-ಬಿರುಗಾಳಿ ಬೀಸುತ್ತಿದೆ; ಶಾಸಕ ಜಿ.ಟಿ.ದೇವೇಗೌಡ



ಮೈಸೂರು, ಏ.14(ಪಿಎಂ)- ಇಡೀ ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಅಲೆ-ಬಿರುಗಾಳಿ ಬೀಸುತ್ತಿದೆ. ದೇಶದಲ್ಲಿ ಮೋದಿಯವರು ಒಬ್ಬರೇ ಪ್ರಧಾನಿ ಸ್ಥಾನಕ್ಕೆ ಅರ್ಹರಾದ ನಾಯಕ ಎಂದು ಜೆಡಿಎಸ್ ಕೋರ್ ಕಮಿಟಿ ರಾಜ್ಯಾಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡ ಹೇಳಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಹಮ್ಮಿಕೊಂಡಿದ್ದ ಸಮಾವೇಶದಲ್ಲಿ ಪ್ರಧಾನಿ ಮೋದಿಯವರ ಆಗಮನಕ್ಕೂ ಮುನ್ನ ಮಾತನಾಡಿದ ಅವರು, ಇಡೀ ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಅಲೆ-ಬಿರುಗಾಳಿ ಬೀಸುತ್ತಿದೆ. ಇದಕ್ಕೆ ಕರ್ನಾಟಕವೂ ಹೊರತಲ್ಲ ಎಂದರು.

ಕಾಂಗ್ರೆಸ್‌ನಿಂದ ಅಧಿಕಾರ ದುರುಪಯೋಗ: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವ ಕಾರಣ ತಾವೆಲ್ಲರೂ ಎಚ್ಚರಿಕೆಯಿಂದ ಇರಬೇಕು. ಕಾಂಗ್ರೆಸ್ ಸರ್ಕಾರ ದಿನನಿತ್ಯ ಆಡಳಿತ ಯಂತ್ರವನ್ನು ದುರುಪಯೋಗ ಮಾಡಿಕೊಳ್ಳುತ್ತಿದೆ. 10 ತಿಂಗಳಿಂದ ಗ್ಯಾರಂಟಿ ಬಗ್ಗೆಯೇ ಹೇಳುತ್ತಿದ್ದು, ನಾವೆಲ್ಲರೂ ಎಚ್ಚರಿಕೆಯಿಂದ ಇರಲೇಬೇಕು. ಮೋದಿಯವರ ಅಲೆಯ ಜೊತೆಗೆ ನಮ್ಮ ಎರಡೂ ಪಕ್ಷಗಳು ಸಂಘಟನಾತ್ಮಕವಾಗಿ ಕೆಲಸ ಮಾಡಬೇಕು ಎಂದು ಹೇಳಿದರು.

ಮೋದಿ ಅಲೆ, ಬಿಜೆಪಿ-ಜೆಡಿಎಸ್ ಮೈತ್ರಿಯಿಂದ ರಾಜ್ಯದಲ್ಲಿ 28ಕ್ಕೆ 28 ಸ್ಥಾನಗಳನ್ನು ಗೆದ್ದು ದೇಶದಲ್ಲಿ ದಾಖಲೆ ಬರೆಯಲಿದ್ದೇವೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಧೂಳೀಪಟವಾಗಲಿದೆ. ಕಾಂಗ್ರೆಸ್‌ನವರು ಈಗ 25 ಗ್ಯಾರಂಟಿ ಬಗ್ಗೆ ಮಾತನಾಡುತ್ತಿದ್ದಾರೆ. ಆದರೆ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ತಿರುಕನ ಕನಸು ಎಂದು ವ್ಯಂಗ್ಯವಾಡಿದರು.

ಜಾತಿ ವಿಷಬೀಜ ಬಿತ್ತಿ ಅಧಿಕಾರಕ್ಕೆ ಬರುವ ಭ್ರಮೆಯಲ್ಲಿ ಕಾಂಗ್ರೆಸ್

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಾಗ್ದಾಳಿ



ಮೈಸೂರು,ಏ.14(ಪಿಎಂ)- ಕಾಂಗ್ರೆಸ್ ಪಕ್ಷ ಹಣ ಬಲ, ಹೆಂಡದ ಬಲ, ತೋಳ್ಬಲ, ಅಧಿಕಾರ ಬಲ ಹಾಗೂ ಜಾತಿಯ ವಿಷಬೀಜ ಬಿತ್ತುವ ಮೂಲಕ ಅಧಿಕಾರಕ್ಕೆ ಬರುವ ಭ್ರಮೆಯಲ್ಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಾಗ್ದಾಳಿ ನಡೆಸಿದರು.

ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಸಮ್ಮುಖದಲ್ಲಿ ಮಾತನಾಡಿದ ಅವರು, ಭ್ರಮೆಯಲ್ಲಿರುವ ಕಾಂಗ್ರೆಸ್ ಮುಖಂಡರಿಗೆ ಹೇಳುತ್ತೇನೆ. ಲೋಕಸಭಾ ಚುನಾವಣಾ ಫಲಿತಾಂಶದ ನಂತರ ನೀವು ಎಲ್ಲಿರುತೀರಾ ಎಂದರೆ ನಿಮ್ಮ ಅಡ್ರೆಸ್ ಇರುವುದಿಲ್ಲ ಎಂದು ವ್ಯಂಗ್ಯವಾಡಿದರು.

ಇಡೀ ವಿಶ್ವವೇ ಮೆಚ್ಚಿರುವಂತಹ ನಮ್ಮ ಪ್ರಧಾನಿ ನರೇಂದ್ರ ಮೋದಿ ಅವರು ಡಾ.ಅಂಬೇಡ್ಕರ್ ಅವರ ಜಯಂತಿಯಂದು ಇಲ್ಲಿಗೆ ಆಗಮಿಸಿರುವುದು ನಮಗೆ ಸಂತಸ ಉಂಟು ಮಾಡಿದೆ. ಜೆಡಿಎಸ್-ಬಿಜೆಪಿ ಒಂದಾಗಿ ಒಗ್ಗಟಾಗಿ ಈ ರಾಜ್ಯದಲ್ಲಿ 28ಕ್ಕೆ 28 ಲೋಕಸಭಾ ಕ್ಷೇತ್ರಗಳನ್ನೂ ಗೆಲ್ಲಬೇಕೆಂಬ ಸಂಕಲ್ಪ ಮಾಡಿದ್ದೇವೆ. ಇದಕ್ಕೆ ನಿಮ್ಮೆಲ್ಲರ ಆಶೀರ್ವಾದ ಬೇಕೆಂದು ಪ್ರಾರ್ಥನೆ ಮಾಡುತ್ತೇನೆ ಎಂದು ಕೋರಿದರು.

ಇಂದು ಇಡೀ ವಿಶ್ವವೇ ಭಾರತ ಮತ್ತು ಮೋದಿಯವರ ಕಡೆಗೆ ತಿರುಗಿ ನೋಡುತ್ತಿದೆ. ಅಂತಹ ಮಹಾನ್ ವ್ಯಕ್ತಿ ಮೋದಿಯವರು. ಬಿಜೆಪಿ-ಜೆಡಿಎಸ್ ಒಂದಾಗಿ ಮುಂದಿನ ದಿನಗಳಲ್ಲಿ ಕೆಲಸ ಮಾಡುತ್ತೇವೆ ಎನ್ನುವ ಭರವಸೆಯನ್ನು ಕೊಡಲು ನಾವೆಲ್ಲಾ ಒಟ್ಟಾಗಿ ಇಂದು ನಿಮ್ಮ ಮುಂದೆ ಬಂದಿದ್ದೇವೆ ಎಂದರು.



ದೇಶಕ್ಕೆ ಸಂವಿಧಾನ ಶಿಲ್ಪಿ, ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಕೊಡುಗೆ ಅಪಾರ. ಮೈಸೂರು ಸಂಸ್ಥಾನ ಮತ್ತು ಅಂಬೇಡ್ಕರ್ ಅವರಿಗೆ ನಿಕಟ ಸಂಬಂಧವಿದೆ. ನಮ್ಮ ಮೈಸೂರು ಸಂಸ್ಥಾನದ ಪ್ರಜಾಪ್ರತಿನಿಧಿ ಸಭೆಯನ್ನು ಅಂಬೇಡ್ಕರ್ ತಾವು ಬರೆದಿರುವ ಸಂವಿಧಾನದಲ್ಲಿ ಉಲ್ಲೇಖಿಸಿದ್ದಾರೆ. ಕಳೆದ 10 ವರ್ಷಗಳಲ್ಲಿ ಪ್ರಧಾನಿ ಮೋದಿಯವರು ಮಾಡಿರುವ ಅಭಿವೃದ್ಧಿ ಕೆಲಸಗಳು ನಮ್ಮ ಕಣ್ಣ ಮುಂದೆಯೇ ಇವೆ. ಭಾರತ ಪರಂಪರೆ ಸಂರಕ್ಷಣೆಗೂ ಕ್ರಮ ವಹಿಸಿದ್ದು, ಅದಕ್ಕೆ ಮೈಸೂರೇ ದೊಡ್ಡ ಉದಾಹರಣೆ.

-ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್,
ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ

ಶಾಸಕ ಜಿ.ಡಿ.ಹರೀಶ್‌ಗೌಡರ ಬೆನ್ನುತಟ್ಟಿ ಶುಭ ಹಾರೈಸಿದ ಪ್ರಧಾನಿ ಮೋದಿ



ಮೈಸೂರು,ಏ.14(ಪಿಎಂ)-ಮಹಾರಾಜ ಕಾಲೇಜು ಮೈದಾನದಲ್ಲಿ ನಡೆದ ಸಮಾವೇಶದಲ್ಲಿ ಪ್ರಧಾನಿ ಮೋದಿಯವರು ಹುಣಸೂರು ಕ್ಷೇತ್ರದ ಶಾಸಕ ಜಿ.ಡಿ.ಹರೀಶ್ ಗೌಡರ ಬೆನ್ನುತಟ್ಟಿ, ಶುಭ ಹಾರೈಸಿದರು.

ವಿಜಯ ಸಂಕಲ್ಪ ಸಮಾವೇಶ ವೇದಿಕೆಯಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಜಿ.ಡಿ. ಹರೀಶ್‌ಗೌಡರನ್ನು ಪ್ರಧಾನಿಗಳಿಗೆ ಪರಿಚಯಿಸಿದರು.

ಈ ವೇಳೆ ಎದ್ದು ನಿಂತು ಮೋದಿಯವರಿಗೆ ಹರೀಶ್‌ಗೌಡರು ನಮಸ್ಕರಿಸಿದರು. ಆಗ ಮೋದಿಯವರು ಹರೀಶ್‌ಗೌಡರ ಕೈ ಹಿಡಿದು ಆತ್ಮೀಯತೆಯಿಂದ ಕುಶಲೋಪರಿ ವಿಚಾರಿಸಿದರು. ಅಲ್ಲದೆ, ಹರೀಶ್‌ಗೌಡರ ಕಾರ್ಯವೈಖರಿ, ಜನಮನ್ನಣೆ ಬಗ್ಗೆ ಕುಮಾರಸ್ವಾಮಿ ಅವರಿಂದ ಕೇಳಿ ತಿಳಿದ ಪ್ರಧಾನಿಗಳು, ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ, ಬೆನ್ನುತಟ್ಟಿ ಶುಭ ಕೋರಿದರು. ಮೈಸೂರು ಭಾಗದ ಯುವ ನಾಯಕ ಜಿ.ಡಿ.ಹರೀಶ್‌ಗೌಡರಿಗೆ ಮೋದಿಯವರು ಉತ್ತೇಜಿಸಿದ ಪರಿ ಸಭಿಕರ ಗಮನ ಸೆಳೆಯಿತು.

ಕಾವೇರಿ, ಮೇಕೆದಾಟು ಸಮಸ್ಯೆ ನಿವಾರಣೆಗೆ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ

ಪುತ್ರ ಕುಮಾರಸ್ವಾಮಿ ಪರ ಮತ ಯಾಚನೆ ವೇಳೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಕರೆ

ಚಿನಕುರಳಿ,ಏ.14–ಕಾವೇರಿ ವ್ಯಾಪ್ತಿಯ ಎಲ್ಲಾ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ ಕೊಡುವ ಮೂಲಕ ಮೋದಿ ಅವರಿಗೆ ಶಕ್ತಿ ತುಂಬಿ ನಂತರ ಕಾವೇರಿ ನದಿನೀರು ಹಂಚಿಕೆ ವಿವಾದ ಹಾಗೂ ಮೇಕೆದಾಟು ಯೋಜನೆಗಳ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವ ಕೆಲಸ ಮಾಡಬೇಕು ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಮನವಿ ಮಾಡಿದರು.

ಚಿನಕುರಳಿ ಗ್ರಾಮದಲ್ಲಿ ಎನ್‌ಡಿಎ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರ ಪರವಾಗಿ ನಡೆದ ಚುನಾವಣಾ ಪ್ರಚಾರದ ಕಾರ್ಯಕ್ರಮ ಉದ್ಘಾಟಿಸಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಂತರ ಮಾತನಾಡಿದರು.

ಕಾವೇರಿ ಉಳಿವಿಗಾಗಿ ನಾನು ನಿರಂತರವಾಗಿ ಹೋರಾಟ ನಡೆಸಿಕೊಂಡು ಬಂದಿದ್ದೇನೆ. ಚಡ್ಡಿ ಮೆರವಣಿಗೆ ನಡೆಸಿ ಕಾವೇರಿ ರಕ್ಷಣೆ ಮಾಡುವ ಕೆಲಸ ಮಾಡಿದ್ದೇನೆ. ಕಾವೇರಿ ಉಳಿಸಿಕೊಳ್ಳುವುದು ಸುಲಭದ ಮಾತಲ್ಲ. ಕಾವೇರಿ ರಕ್ಷಣೆಗಾಗಿ ಕಾವೇರಿ ಕೊಳ್ಳದ ಎಲ್ಲಾ 10 ಎನ್‌ಡಿಎ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಕಳುಹಿಸಿಕೊಟ್ಟು ಆ ನಂತರ ಮೋದಿ ಅವರೊಂದಿಗೆ ಚರ್ಚಿಸಿ ಕಾವೇರಿ ನದಿ ನೀರಿನ ಸಮಸ್ಯೆ ಇತ್ಯರ್ಥ ಮಾಡಿಸಿಕೊಳ್ಳಬೇಕು ಎಂದರು.

ಕುಮಾರಸ್ವಾಮಿ ಎದುರು ನಿಂತಿರುವ ವ್ಯಕ್ತಿ ಹಣದಲ್ಲಿ ಗಟ್ಟಿಯಾಗಿದ್ದಾರೆ. ಎಚ್.ಡಿ.ಕುಮಾರಸ್ವಾಮಿ ಅವರು ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಯಾಗಿ ಸ್ವಚ್ಛ ರಾಜಕಾರಣ ಮಾಡಿದ್ದಾರೆ. ರೈತರ ಸಾಲಮನ್ನಾ ಮಾಡಿದ್ದಾರೆ. ಜನಪರ, ರೈತಪರ, ಮಹಿಳೆ ಪರವಾದ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಮಂಡ್ಯ ಜಿಲ್ಲೆಗೆ ಸಾಕಷ್ಟು ಕೆಲಸ ಮಾಡಿ ಜನರ ಹೃದಯದಲ್ಲಿ ನೆಲೆಸಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರು, ಎಚ್.ಡಿ.ಕುಮಾರಸ್ವಾಮಿ ಅವರು ಈಗಾಗಲೆ ಗೆದ್ದಿದ್ದಾರೆ ಎಂದು ಹೇಳಿದ್ದಾರೆ. ಜಿಲ್ಲೆಯ ಜನತೆ ಶಕ್ತಿ ತೋರಿಸಿ ಕುಮಾರಸ್ವಾಮಿ ಅವರನ್ನು ಗೆಲ್ಲಿಸಿಕೊಡಿ ಎಂದು ಮನವಿ ಮಾಡಿದರು.





ಚಿನಕುರಳಿ ಗ್ರಾಮದಲ್ಲಿ ಎನ್‌ಡಿಎ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರ ಪರವಾಗಿ ನಡೆದ ಚುನಾವಣಾ ಪ್ರಚಾರ ಕಾರ್ಯಕ್ರಮವನ್ನು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಉದ್ಘಾಟಿಸಿದರು. ಇದೇ ವೇಳೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರನ್ನು ಮುಸ್ಲಿಂ ಸಮುದಾಯದವರು ಸನ್ಮಾನಿಸುತ್ತಿರುವುದನ್ನು ಬಲಚಿತ್ರದಲ್ಲಿ ಕಾಣಬಹುದು.

ಡಿಕೆಶಿ ವಿರುದ್ಧ ಗುಡುಗು: ಸರಕಾರ ಕೊಡುವ ಗ್ಯಾರಂಟಿಗೆ ಮೋಸ ಹೋಗಬೇಡಿ, ಮೋದಿ ಬಹಳ ಗ್ಯಾರಂಟಿ ಕೊಟ್ಟಿದ್ದಾರೆ. ಕರ್ನಾಟಕದ ನೀರಾವರಿ ಮಂತ್ರಿ ತುಂಬಾ ತಜ್ಞರು, ಬರಿ ನೀರಾವರಿ ಅಲ್ಲ ಇಡೀ ಬೆಂಗಳೂರನ್ನೇ ಬಾಚಿಕೊಳ್ಳುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಆಕ್ರೋಶ ಹೊರಹಾಕಿದರು.

ನಿಖಿಲ್ ಕುಮಾರಸ್ವಾಮಿ ಮಾತನಾಡಿ, ಎಚ್.ಡಿ.ದೇವೇಗೌಡರು ಇಳಿ ವಯಸ್ಸಿನಲ್ಲೂ ಕಾವೇರಿ ನದಿ ನೀರು ಹಾಗೂ ಮೇಕೆದಾಟು ಯೋಜನೆಗಾಗಿ ರಾಜ್ಯಸಭೆಯಲ್ಲಿ ಹೋರಾಟ ನಡೆಸುತ್ತಿದ್ದಾರೆ. ದೇವೇಗೌಡರು ಜೀವನದುದ್ದಕ್ಕೂ ಕಾವೇರಿ ನೀರಿಗಾಗಿ ಹೋರಾಟ ನಡೆಸಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಸಂಸದ ಕುಪೇಂದ್ರರೆಡ್ಡಿ, ಕೆಆರ್‌ಪೇಟೆ ಶಾಸಕ ಎಸ್.ಟಿ.ಮಂಜು, ಮಾಜಿ ಶಾಸಕರಾದ ಅನ್ನದಾನಿ, ಕೆ.ಟಿ.ಶ್ರೀಕಂಠೇಗೌಡ, ಅಂಬುಜಮ್ಮ, ನಾಗಮ್ಮ, ಬಿಜೆಪಿ. ಜಿಲ್ಲಾಧ್ಯಕ್ಷ ಡಾ.ಎನ್.ಎಸ್.ಇಂದ್ರೇಶ್, ಮೈಷುಗರ್ ಮಾಜಿ ಅಧ್ಯಕ್ಷ ಶಿವಲಿಂಗೇಗೌಡ, ತಾಲೂಕು ಅಧ್ಯಕ್ಷರಾದ ಎಸ್.ಎ.ಮಲ್ಲೇಶ್, ಧನಂಜಯ್ಯ, ಜಿ.ಪಂ. ಸದಸ್ಯ ಸಿ.ಅಶೋಕ್, ಪಿ.ಎಲ್.ಡಿ. ಬ್ಯಾಂಕ್ ಮಾಜಿ ಅಧ್ಯಕ್ಷ ಯಶವಂತ್, ದ್ಯಾವಪ್ಪ, ಡೈರಿ ಅಧ್ಯಕ್ಷ ಸಿ.ಶಿವಕುಮಾರ್, ತಾಲೂಕು ವೀರಶೈವ ಮಹಾಸಭಾ ಅಧ್ಯಕ್ಷ ನಿರಂಜನ್ ಬಾಬು ಸೇರಿದಂತೆ ಹಲವರು ಇದ್ದಾರೆ.

> ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ನಮಗೆ 200 ವರ್ಷದಿಂದಲು ಅನ್ಯಾಯವಾಗುತ್ತಿದೆ. ಪ್ರಧಾನಿ ಮೋದಿ ಅವರು ಮನಸ್ಸು ಮಾಡಿದ್ರೆ ಏನು ಬೇಕಾದರೂ ಮಾಡಬಹುದು. ಮೋದಿ ಅವರಿಗೆ ಮೂರನೇ ಬಾರಿಗೆ ಈ ದೇಶವನ್ನು ಆಳುವ ಶಕ್ತಿಯನ್ನು ಚಾಮುಂಡೇಶ್ವರಿ ಕೊಡಲಿ.
> –ಹೆಚ್.ಡಿ.ದೇವೇಗೌಡ, ಮಾಜಿ ಪ್ರಧಾನಿ

ಸ್ಟಾರ್‌ಚಂದ್ರು ಬೆಂಬಲಿಸಲು ರಮೇಶ್‌ಬಾಬು ಕರೆ



ಮಂಡ್ಯ,ಏ.14–ಮಂಡ್ಯ ಜಿಲ್ಲೆಗೆ ಏನೂ ಕೊಡುಗೆ ಕೊಡದೆ ಇರುವ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಮಂಡ್ಯ ಜಿಲ್ಲೆ ನಮ್ಮದು ಎನ್ನುತ್ತಿದ್ದಾರೆ. ನಮ್ಮೆಲ್ಲರ ಅಸ್ತಿತ್ವದ ಪ್ರಶ್ನೆಯಾಗಿರುವ ಮಂಡ್ಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರನ್ನು ಮತದಾರರು ಬೆಂಬಲಿಸಬೇಕು ಎಂದು ಚೆಸ್ಕಾಂ ಅಧ್ಯಕ್ಷ ಹಾಗೂ ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ ತಿಳಿಸಿದರು.

ತಾಲೂಕಿನ ಹಳುವಾಡಿ ಗ್ರಾಮದಲ್ಲಿ ಮಂಡ್ಯ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಪರ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದ ಅವರು, ಮಂಡ್ಯ ಲೋಕಸಭಾ ಚುನಾವಣೆ ಕಾಂಗ್ರೆಸ್ ಹಾಗೂ ಜೆಡಿಎಸ್ ಅಭ್ಯರ್ಥಿ ನಡುವೆ ನೇರ ಹಣಾಹಣಿ ನಡೆಯಲಿದ್ದು ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ ಸಾಮಾನ್ಯ ಅಭ್ಯರ್ಥಿ ಅಲ್ಲ ಎರಡು ಬಾರಿ ಮುಖ್ಯಮಂತ್ರಿ ಆಗಿರುವವರು, ನಮ್ಮ ಅಭ್ಯರ್ಥಿ ಜಿಲ್ಲೆಯ ಮಣ್ಣಿನ ಮಗ ಸ್ಟಾರ್ ಚಂದ್ರು ಅವರಿಗೆ ಏ.26ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ನಿಮ್ಮಲ್ಲಿರುವ ಸಣ್ಣ ಭಿನ್ನಾಭಿಪ್ರಾಯಗಳನ್ನು ಮರೆತು ಒಗ್ಗಟ್ಟಾಗಿ ಚುನಾವಣೆ ಎದುರಿಸಬೇಕು ಎಂದರು.

ಜನರ ಜೀವನ ಸುಧಾರಣೆಗೆ ಕಾಂಗ್ರೆಸ್ ಗ್ಯಾರಂಟಿ ಸಹಕಾರಿ

ಸ್ಟಾರ್ ಚಂದ್ರು ಪರ ದರ್ಶನ್, ದಿನೇಶ್ ಗೂಳಿಗೌಡ, ರಾಮು ಭರ್ಜರಿ ಪ್ರಚಾರ

ಮಂಡ್ಯ,ಏ.14–ಸಮಾಜದ ಕಟ್ಟ ಕಡೆಯ ವ್ಯಕ್ತಿಯನ್ನು ಆರ್ಥಿಕವಾಗಿ ಮೇಲಕ್ಕೆತ್ತಲು ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಜನರ ಜೀವನ ಸುಧಾರಣೆಗೆ ಸಹಕಾರಿಯಾಗಿವೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಹೇಳಿದರು.

ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇ ಗೌಡ (ಸ್ಟಾರ್ ಚಂದ್ರು) ಪರವಾಗಿ ಭಾನುವಾರ ಮೇಲುಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಂಡ್ಯ ತಾಲೂಕಿನ ದುದ್ದ ಹೋಬಳಿಯ ವಿವಿಧ ಗ್ರಾಮಗಳಲ್ಲಿ ರೈತ ಸಂಘ ಹಾಗೂ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಚುನಾವಣಾ ಪ್ರಚಾರದ ವೇಳೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ವೋಟ್ ಹಾಕುವ ಮುನ್ನ ಗ್ಯಾರಂಟಿಗಳ ಬಗ್ಗೆ ಒಮ್ಮೆ ಯೋಚಿಸಿ. ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಗೂ ಕಾಂಗ್ರೆಸ್ ಒತ್ತು ನೀಡುತ್ತಿದೆ ಎಂದರು.

ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ ಮಾತನಾಡಿ, ವಿಧಾನಸಭಾ ಚುನಾವಣಾ ಸಂದರ್ಭದಲ್ಲಿ ಹೇಳಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಐದು ಗ್ಯಾರಂಟಿಗಳನ್ನು ಜಾರಿ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಐದು ಗ್ಯಾರಂಟಿಗಳು ಬರಗಾಲದಲ್ಲಿ ಜನರ ಕೈ ಹಿಡಿದಿವೆ ಎಂದು ಹೇಳಿದರು.



ಮೇಲುಕೋಟೆ ಶ್ರೀ ಚೆಲುವನಾರಾಯಣಸ್ವಾಮಿ ದರ್ಶನ ಪಡೆದ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಹಾಗೂ ಶಾಸಕ ದರ್ಶನ್ ಪುಟ್ಟಣ್ಣಯ್ಯ

ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳನ್ನು ಅನುಷ್ಠಾನಕ್ಕೆ ತಂದಿದೆ. ಶಕ್ತಿ ಯೋಜನೆಯಡಿ 5.50 ಕೋಟಿ ರೂ. ಉಚಿತ ಟಿಕೆಟ್‌ಗಳನ್ನು ನೀಡಲಾಗಿದೆ ಗೃಹ ಲಕ್ಷ್ಮಿ ಯೋಜನೆಯಡಿ 4.50 ಲಕ್ಷ ಮಹಿಳೆಯರಿಗೆ 600 ಕೋಟಿ ಹಣ ಅವರ ಖಾತೆಗೆ ನೇರವಾಗಿ ತಲುಪಿದೆ ಎಂದು ಮಾಹಿತಿ ನೀಡಿದರು.

ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಮಾತನಾಡಿ, ರೈತರ ಕಲ್ಯಾಣಕ್ಕಾಗಿ ಕಾಂಗ್ರೆಸ್ ಗಂಭೀರವಾಗಿ ಚಿಂತನೆ ನಡೆಸಿದೆ. ಅವರ ಸಂಕಷ್ಟದ ಕರೆಗೆ ಕಿವಿಗೊಟ್ಟು ಪಂಚ ನ್ಯಾಯಗಳನ್ನು ಒಳಗೊಂಡ ಕಿಸಾನ್ ನ್ಯಾಯವನ್ನು ಘೋಷಣೆ ಮಾಡುವ ಮೂಲಕ ರೈತರ ಹಿತ ಕಾಪಾಡಲು ಪಕ್ಷ ಬದ್ಧವಾಗಿದೆ ಎಂದು ಹೇಳಿದರು.

ಸರ್ವೋದಯ ಕರ್ನಾಟಕ ಪಕ್ಷದ ಜೊತೆಗೂಡಿ ಮೇಲುಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಹಮ್ಮಿಕೊಂಡಿದ್ದ ಚುನಾವಣಾ ಪ್ರಚಾರದ ವೇಳೆ ಮಾತನಾಡಿ, ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ನಿಶ್ಚಿತವಾಗಿದೆ. ಅಧಿಕಾರಕ್ಕೇರಿದ ಕೂಡಲೇ ಸ್ವಾಮಿನಾಥನ್ ಆಯೋಗದ ಶಿಫಾರಸಿನಂತೆ ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಕಾನೂನುಬದ್ಧ ಭರವಸೆ ನೀಡಲಾಗುತ್ತದೆ ಎಂದರು.

ಎಂಎಸ್‌ಪಿಗೆ ಕಾನೂನು ಖಾತರಿ ನೀಡುವುದರಿಂದ ರೈತರಿಗೆ ನ್ಯಾಯಯುತ ಬೆಲೆ ಸಿಗಲಿದ್ದು ಅವರ ಜೀವನ ಪರಿಸ್ಥಿತಿ ಸುಧಾರಿಸಲಿದೆ. ಇದರ ಜೊತೆಗೆ ರೈತರ ಸಾಲಮನ್ನಾ ಮಾಡುವ ಐತಿಹಾಸಿಕ ಮತ್ತು ಕ್ರಾಂತಿಕಾರಿ ನಡೆಗೆ ಕಾಂಗ್ರೆಸ್ ಮುಂದಾಗಿದ್ದು ಇದಕ್ಕೆ ಜನಾಶೀರ್ವಾದ ಬೇಕಿದೆ ಎಂದು ಮನವಿ ಮಾಡಿದರು.

ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ನಾವು ಅಳವಡಿಸಿಕೊಂಡು ಅವರು ಹಾಕಿಕೊಟ್ಟ ದಾರಿಯಲ್ಲಿ ಸಾಗಬೇಕಿದೆ. ಸಮಾನತೆ, ಭ್ರಾತೃತ್ವ, ನ್ಯಾಯದ ಸಂದೇಶವನ್ನು ಸಾರಿದ ಅಂಬೇಡ್ಕರ್ ಅವರನ್ನು ಆರಾಧಿಸುವುದರ ಜೊತೆಗೆ ಅವರ ಸಿದ್ಧಾಂತವನ್ನು ಅನುಸರಿಸಬೇಕಿದೆ ಎಂದು ಕರೆಕೊಟ್ಟರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಹೆಚ್.ಬಿ.ರಾಮು, ಎಐಸಿಸಿ ಕಾರ್ಯದರ್ಶಿ ಹಾಗೂ ಕೇರಳದ ಕಾಂಗ್ರೆಸ್ ಶಾಸಕ ರೋಜಿ ಜಾನ್, ಮೈಷುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್.ಚಿದಂಬರ್, ಕಾಂಗ್ರೆಸ್ ಮುಖಂಡರಾದ ತ್ಯಾಗರಾಜು, ಚಂದಗಾಲು ವಿಜಯ್, ಗ್ರಾಮಸ್ಥರು, ಅಭಿಮಾನಿಗಳು ಸೇರಿದಂತೆ ನೂರಾರು ಮಂದಿ ಭಾಗವಹಿಸಿ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನಿಂದ ಮಂಡ್ಯ ಮರ್ಯಾದೆ ಹಾಳು



ಮೇಳಾಪುರ ಗ್ರಾಮದಲ್ಲಿ ಮತ ಯಾಚಿಸುತ್ತಿರುವ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ

ಶ್ರೀರಂಗಪಟ್ಟಣ: ಜಿಲ್ಲಾ ರಾಜಕಾರಣ ತನ್ನದೇ ಆದ ಗಾಂಭೀರ್ಯ ಹೊಂದಿತ್ತು, ಆದರೆ ಕಾಂಗ್ರೆಸ್‌ನ ಕೆಲ ಧೋರಣೆಗಳಿಂದಾಗಿ ಜಿಲ್ಲಾ ರಾಜಕಾರಣದ ಮರ್ಯಾದೆ ಹಾಳಾಗುತ್ತಿದೆ ಎಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ತಿಳಿಸಿದರು.

ಕ್ಷೇತ್ರದ ಕಸಬಾ ಹೋಬಳಿ ವ್ಯಾಪ್ತಿಯ ನಗುವನಹಳ್ಳಿ, ಬ್ರಹ್ಮಪುರ, ಮೊಮ್ಮೂರು ಅಗ್ರಹಾರ, ಬೆಳವಾಡಿ, ನಗುವನಹಳ್ಳಿ ಕಾಲೋನಿ, ಚಂದಗಾಲು, ನಾಗಯ್ಯನಹುಂಡಿ, ಹೊಸೂರು, ಮೇಳಾಪುರ, ಹೆಬ್ಬಾಡಿಹುಂಡಿ, ಹೆಬ್ಬಾಡಿ, ಹಂಪಾಪುರ, ಹುರಳಿಕ್ಯಾತನಹಳ್ಳಿ, ಚಿಕ್ಕಂಕನಹಳ್ಳಿ, ಸುಗ್ಗಹಳ್ಳಿ, ಕೊಕ್ಕರೆಹುಂಡಿ, ತರೀಪುರ, ಮಹದೇವಪುರ ಸೇರಿದಂತೆ ಮುಂತಾದ ಗ್ರಾಮಗಳಲ್ಲಿ ಜೆಡಿಎಸ್ ಹಾಗೂ ಬಿಜೆಪಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರನ್ನು ಭೇಟಿ ಮಾಡಿ ಮಂಡ್ಯ ಲೋಕಸಭಾ ಅಭ್ಯರ್ಥಿ ಪರ ಮತಯಾಚಿಸಿ ಮಾತನಾಡಿದರು.

ರಾಜಕಾರಣದ ಯಾವುದೇ ಗಂಧ, ಗಾಳಿ ತಿಳಿಯದ, ಕೇವಲ ಹಣ ಮಾಡಿದವರನ್ನು ಕಾಂಗ್ರೆಸ್ ಪಕ್ಷ ಹುಡುಕಿ ರಾಜಕಾರಣಕ್ಕೆ ಕರೆತರುತ್ತಿದೆ. 6 ತಿಂಗಳು ಮೊದಲೇ ಯಾರು ಹೆಚ್ಚಿಗೆ ಹಣ ಮಾಡಿದ್ದಾರೆ ಎಂದು ಹುಡುಕಿ ಲೋಕಸಭಾ ಅಭ್ಯರ್ಥಿಯನ್ನಾಗಿ ಮಾಡಿದ್ದಾರೆ. ಹೀಗಾಗಿ ಇಂತಹ ಅನಿವಾರ್ಯ ಪರಿಸ್ಥಿತಿಯಲ್ಲಿ ಜಿಲ್ಲೆಯ ಜೆಡಿಎಸ್ ಹಾಗೂ ಬಿಜೆಪಿ ಪಕ್ಷಗಳ ಮುಖಂಡರುಗಳು ಒತ್ತಾಯಪೂರ್ವಕವಾಗಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಮಂಡ್ಯ ಲೋಕಸಭಾ ಅಭ್ಯರ್ಥಿಯಾಗಿ ಕಣಕ್ಕಿಳಿಸಿದ್ದಾರೆ. ಜಿಲ್ಲೆಯ ಗೌರವ ಹಾಗೂ ಹಳಿ ತಪ್ಪುತ್ತಿರುವ ಜಿಲ್ಲಾ ರಾಜಕಾರಣ ಸರಿಪಡಿಸುವುದು ನಿಮ್ಮ ಕೈಯಲ್ಲಿದೆ ಎಂದು ಹೇಳಿದರು. ಈ ವೇಳೆ ತಾಲೂಕು ಜೆಡಿಎಸ್ ಅಧ್ಯಕ್ಷ ದಶರಥ, ಬಾಬುರಾಯನಕೊಪ್ಪಲು ತಿಲಕ್, ಬಿಜೆಪಿ ಮುಖಂಡ ಟಿ.ಶ್ರೀಧರ್, ಮುಖಂಡರಾದ ನಗುವನಹಳ್ಳಿ ಶಿವಸ್ವಾಮಿ, ನೆಲಮನೆ ಗುರುಪ್ರಸಾದ್, ಅನಿಲ್, ಕಿರಣ್, ಸಂಜಯ್, ಕೊಕ್ಕರೆಹುಂಡಿ ರವಿ, ಶಿವಣ್ಣ, ಲತಾ, ಬೆಳವಾಡಿ ಜವರಪ್ಪ, ಏಜಾಜ್‌ಪಾಷ, ಹೆಬ್ಬಾಡಿ ಮಂಜು ಸೇರಿದಂತೆ ಇತರರು ಇದ್ದರು.

ಫಿಲ್ ಸಾಲ್ಟ್ ಅಬ್ಬರ, ಲಕ್ನೋ ತತ್ತರ

ಕೋಲ್ಕತ್ತಾ, ಏ.14– ಮಿಚೆಲ್ ಸ್ಟಾರ್ಕ್ ಮಾರಕ ಬೌಲಿಂಗ್ ದಾಳಿ ಹಾಗೂ ಫಿಲ್ ಸಾಲ್ಟ್ ಅವರ ಸ್ಫೋಟಕ ಬ್ಯಾಟಿಂಗ್ ನೆರವಿನಿಂದ ಕೋಲ್ಕತ್ತಾ ನೈಟ್ ರೈಡರ್ಸ್ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಇದರೊಂದಿಗೆ ಕೆಕೆಆರ್ ಅಂಕಪಟ್ಟಿಯಲ್ಲಿ 2ನೇ ಸ್ಥಾನ ಭದ್ರಪಡಿಸಿಕೊಂಡಿದೆ.

ಕಳೆದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಸೋತಿದ್ದ ಲಕ್ನೋ ಇದೀಗ ಕೋಲ್ಕತಾ ನೈಟ್ ರೈಡರ್ಸ್ ಎದುರು ಹೀನಾಯ ಸೋಲು ಅನುಭವಿಸಿದೆ. ಮೊದಲೇ ಸೋಲಿನ ಆಘಾತದಲ್ಲಿದ್ದ ಲಖನೌ ಪಡೆಗೆ ಫಿಲ್ ಸಾಲ್ಟ್ ಸ್ಫೋಟಕ ಅರ್ಧಶತಕ ಸಿಡಿಸಿ ಗಾಯದ ಮೇಲೆ ಉಪ್ಪು ಸುರಿದಿದ್ದಾರೆ. ಗೆಲ್ಲಲು 162 ರನ್ ಗುರಿ ಬೆನ್ನತ್ತಿದ ಕೆಕೆಆರ್ 2 ವಿಕೆಟ್ ನಷ್ಟಕ್ಕೆ ಇನ್ನೂ 26 ಎಸೆತ ಬಾಕಿ ಇರುವಾಗಲೇ ಗೆಲುವಿನ ನಗೆ ಬೀರಿದೆ.

ಇಲ್ಲಿನ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ಎಲ್ಎಸ್‌ಜಿ ನೀಡಿದ ಸ್ಪರ್ಧಾತ್ಮಕ ಗುರಿ ಬೆನ್ನತ್ತಿದ ಕೆಕೆಆರ್ ಆರಂಭದಲ್ಲೇ 6 ರನ್ ಗಳಿಸಿದ್ದ ಸುನೀಲ್ ನರೈನ್ ವಿಕೆಟ್ ಕಳೆದುಕೊಂಡಿತು. ನಂತರ ಅಂಗ್‌ಕೃಷ್ ರಘುವಂಶಿ 7 ರನ್ ಗಳಿಸಿ ಮೊಯ್ಸಿನ್ ಖಾನ್‌ಗೆ ವಿಕೆಟ್ ಒಪ್ಪಿಸಿದರು.

42 ರನ್‌ಗಳಿಗೆ 2 ವಿಕೆಟ್ ಕಳೆದುಕೊಂಡು ಸಂಕಷ್ಟದಲ್ಲಿದ್ದ ಕೋಲ್ಕತ್ತಾಗೆ 3ನೇ ವಿಕೆಟ್‌ಗೆ ಜೊತೆಯಾದ ನಾಯಕ ಶ್ರೇಯಸ್ ಅಯ್ಯರ್ ಹಾಗೂ ಫಿಲ್ ಸಾಲ್ಟ್ ಮುರಿಯದ 120 ರನ್ ಜೊತೆಯಾಟವಾಡುವ ಮೂಲಕ ತಂಡವನ್ನು ಗೆಲುವಿನ ದಡ ಸೇರಿಸಿದರು. ಸ್ಫೋಟಕ ಬ್ಯಾಟಿಂಗ್ ನಡೆಸಿದ ಫಿಲ್ ಸಾಲ್ಟ್ 47 ಎಸೆತಗಳಲ್ಲಿ 14 ಬೌಂಡರಿ, 3 ಸಿಕ್ಸರ್ ಒಳಗೊಂಡ ಅಜೇಯ 89 ರನ್ ಗಳಿಸಿದರು. ಮತ್ತೊಂದು ತುದಿಯಲ್ಲಿ ನಾಯಕ ಶ್ರೇಯಸ್ ಅಯ್ಯರ್ 38 ಎಸೆತಗಳಲ್ಲಿ 6 ಬೌಂಡರಿ ಒಳಗೊಂಡ ಅಜೇಯ 38 ರನ್ ಬಾರಿಸಿದರು. ಲಕ್ನೋ ಪರ ಮೊಯ್ಸಿನ್ ಖಾನ್ 2 ವಿಕೆಟ್ ಪಡೆದರು.



ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 161 ರನ್‌ಗಳನ್ನು ಕಲೆ ಹಾಕಿತು. ತಂಡದ ಮೊತ್ತ 39 ರನ್ ಆಗುವಷ್ಟರಲ್ಲೇ ಕ್ವಿಂಟನ್ ಡಿ ಕಾಕ್ 10, ದೀಪಕ್ ಹೂಡ 8 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಈ ವೇಳೆ ಮೂರನೇ ವಿಕೆಟ್‌ಗೆ ಜೊತೆಯಾದ ನಾಯಕ ಕೆ.ಎಲ್. ರಾಹುಲ್, ಆಯುಷ್ ಬದೋನಿ 39 ರನ್ ಜೊತೆಯಾಟವಾಡುವ ಮೂಲಕ ತಂಡಕ್ಕೆ ಚೇತರಿಕೆ ನೀಡಿದರು. ಈ ವೇಳೆ ರಾಹುಲ್ 2 ಸಿಕ್ಸರ್, 3 ಬೌಂಡರಿ ಒಳಗೊಂಡ 39 ರನ್ ಗಳಿಸಿ ನಿರ್ಗಮಿಸಿದರು. ಇನ್ನು ಆಯುಷ್ ಬದೋನಿ 29 ರನ್ ಗಳಿಸಿದರೂ ಅದನ್ನು ದೊಡ್ಡ ಮೊತ್ತವನ್ನಾಗಿ ಪರಿವರ್ತಿಸುವಲ್ಲಿ ವಿಫಲರಾದರು. ಮಾರ್ಕಸ್ ಸ್ಟೋಯ್ನಿಸ್ 10 ರನ್ ಗಳಿಸಿ ಔಟಾಗುವ ಮೂಲಕ ಮತ್ತೊಮ್ಮೆ ನಿರಾಸೆ ಮೂಡಿಸಿದರು. ಮಧ್ಯಮ ಕ್ರಮಾಂಕದಲ್ಲಿ ಅಬ್ಬರಿಸಿದ ನಿಕೋಲಸ್ ಪೂರನ್ 32 ಎಸೆತಗಳಲ್ಲಿ 4 ಸಿಕ್ಸರ್, 2 ಬೌಂಡರಿ ಒಳಗೊಂಡ 45 ರನ್‌ಗಳನ್ನು ಸಿಡಿಸಿದರು.

ಕೆಕೆಆರ್ ಪರ ಮಿಚೆಲ್ ಸ್ಟಾರ್ಕ್ 3, ವೈಭವ್ ಆರೋರ, ಸುನೀಲ್ ನರೇನ್, ವರುಣ್ ಚಕ್ರವರ್ತಿ ಹಾಗೂ ಆಂಡ್ರೆ ರಸೆಲ್ ತಲಾ ಒಂದೊಂದು ವಿಕೆಟ್ ಕಬಳಿಸಿದರು. ಫಿಲ್ ಸಾಲ್ಟ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

> **ಇಂದಿನ ಪಂದ್ಯ (ಏ.15)**
> ರಾಯಲ್ ಚಾಲೆಂಜರ್ಸ್ ಬೆಂಗಳೂರು / ಸನ್‌ರೈಸರ್ಸ್ ಹೈದರಾಬಾದ್
> ಸ್ಥಳ: ಬೆಂಗಳೂರು, ಎಂ.ಚಿನ್ನಸ್ವಾಮಿ ಕ್ರೀಡಾಂಗಣ.
> ಸಮಯ: ಸಂಜೆ 7.30ಕ್ಕೆ

ಮುಂಬೈ ವಿರುದ್ಧ ಚೆನ್ನೈಗೆ ಸೂಪರ್ ಗೆಲುವು

ಮುಂಬೈ, ಏ.14– ಋತುರಾಜ್ ಗಾಯಕ್ವಾಡ್, ಶಿವಂ ದುಬೆ ಅವರುಗಳ ಅರ್ಧಶತಕ ಹಾಗೂ ಮತೀಶ ಪತಿರಾನ ಅವರ ಕರಾರುವಾಕ್ ಬೌಲಿಂಗ್ ದಾಳಿ ನೆರವಿನಿಂದ ಚೆನ್ನೈ ಸೂಪರ್ ಕಿಂಗ್ಸ್ ಮುಂಬೈ ಇಂಡಿಯನ್ಸ್ ವಿರುದ್ಧ 20 ರನ್‌ಗಳ ಅಮೋಘ ಗೆಲುವು ದಾಖಲಿಸಿದೆ. ಆ ಮೂಲಕ ಮುಂಬೈ ಪರ ರೋಹಿತ್ ಶರ್ಮಾ ಸಿಡಿಸಿದ ಶತಕ ವ್ಯರ್ಥವಾಯಿತು.

ಇಲ್ಲಿನ ವಾಂಖೆಡೆ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ಆರಂಭ ಉತ್ತಮವಾಗಿರಲಿಲ್ಲ. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಅಜಿಂಕ್ಯಾ ರಹಾನೆ 5 ರನ್ ಗಳಿಸಿ ಬಹುಬೇಗ ನಿರ್ಗಮಿಸಿದರು. ನಂತರ 1 ಸಿಕ್ಸರ್, 2 ಬೌಂಡರಿ ಒಳಗೊಂಡ 21 ರನ್ ಗಳಿಸಿದ್ದ ರಚಿನ್ ರವೀಂದ್ರ ಶ್ರೇಯಸ್ ಗೋಪಾಲ್‌ಗೆ ವಿಕೆಟ್ ಒಪ್ಪಿಸಿದರು. ಈ ವೇಳೆ 3ನೇ ವಿಕೆಟ್‌ಗೆ ಜೊತೆಯಾದ ನಾಯಕ ಋತುರಾಜ್ ಗಾಯಕ್ವಾಡ್ ಹಾಗೂ ಶಿವಂ ದುಬೆ 90 ರನ್‌ಗಳ ಬೃಹತ್ ಜೊತೆಯಾಟ ನಡೆಸಿ ತಂಡದ ಮೊತ್ತ ಹೆಚ್ಚಿಸಿದರು. ಆದರೆ 40 ಎಸೆತಗಳಲ್ಲಿ ತಲಾ 5 ಸಿಕ್ಸ್, ಬೌಂಡರಿ ಒಳಗೊಂಡ 69 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಬಂದ ಡ್ಯಾರಿಯಲ್ ಮಿಚೆಲ್ 17 ರನ್ ಗಳಿಸಿ ಔಟಾದರು. ಮತ್ತೊಂದೆಡೆ ಅಬ್ಬರಿಸಿದ ಶಿವಂ ದುಬೆ 28 ಎಸೆತಗಳಲ್ಲಿ ಅರ್ಧಶತಕ ಸಿಡಿಸಿ, ಅಂತಿಮವಾಗಿ 38 ಎಸೆತಗಳಲ್ಲಿ 10 ಬೌಂಡರಿ, 2 ಸಿಕ್ಸರ್ ಒಳಗೊಂಡ ಅಜೇಯ 66 ರನ್ ಗಳಿಸಿದರೇ, ಧೋನಿ ಕೊನೆಯ ಓವರ್‌ನಲ್ಲಿ ಹ್ಯಾಟ್ರಿಕ್ ಸಿಕ್ಸರ್ ಬಾರಿಸುವ ಮೂಲಕ 4 ಬಾಲ್‌ಗಳಿಗೆ 20 ರನ್ ಗಳಿಸಿ ಅಭಿಮಾನಿಗಳು ಹುಚ್ಚೆದ್ದು ಕುಣಿಯುವಂತೆ ಮಾಡಿದರು. ಅಂತಿಮವಾಗಿ ಚೆನ್ನೈ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 206 ರನ್‌ಗಳ ಬೃಹತ್ ಮೊತ್ತ ಪೇರಿಸಿತು.





207ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್ 6 ವಿಕೆಟ್ ನಷ್ಟಕ್ಕೆ 186 ರನ್ ಗಳಿಸಿ ಹೀನಾಯ ಸೋಲು ಕಂಡಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಇಶನ್ ಕಿಶನ್ ಹಾಗೂ ರೋಹಿತ್ ಶರ್ಮಾ 70 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಉತ್ತಮ ಆರಂಭ ಒದಗಿಸಿದರು. ಈ ವೇಳೆ ಇಶನ್ ಕಿಶನ್ ಔಟಾದರೆ, ಸೂರ್ಯ ಕುಮಾರ್ ಯಾದವ್ 2 ಎಸೆತ ಎದುರಿಸಿ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ನಂತರ ಬಂದ ತಿಲಕ್ ವರ್ಮಾ 31, ಟೀಮ್ ಡೇವಿಡ್ 13 ರನ್ ಗಳಿಸಿ ನಿರ್ಗಮಿಸಿದರು. ಒಂದೆಡೆ ವಿಕೆಟ್ ಬೀಳುತ್ತಿದ್ದರೂ ಮತ್ತೊಂದೆಡೆ ಏಕಾಂಗಿ ಹೋರಾಟ ನಡೆಸಿದ ರೋಹಿತ್ ಶರ್ಮಾ 63 ಎಸೆತಗಳಲ್ಲಿ 11 ಬೌಂಡರಿ, 5 ಸಿಕ್ಸರ್ ಒಳಗೊಂಡ 105 ರನ್ ಗಳಿಸಿ ಅಜೇಯರಾಗಿ ಉಳಿದರಾದರೂ ತಂಡಕ್ಕೆ ಜಯ ತಂದು ಕೊಡಲು ಸಾಧ್ಯವಾಗಲಿಲ್ಲ. ಚೆನ್ನೈ ಪರ ಮತೀಶ ಪತಿರಾನ 4, ಮುಸ್ತಫಿಜಾರ್ ರೆಹಮಾನ್ ಮತ್ತು ತುಷಾರ್ ದೇಶಪಾಂಡೆ ತಲಾ ಒಂದೊಂದು ವಿಕೆಟ್ ಉರುಳಿಸಿದರು. ಮತೀಶ ಪತಿರಾನ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಒಕ್ಕಲಿಗ ಅಭ್ಯರ್ಥಿಗಳ ಬೆಂಬಲಿಸುವ ಮೂಲಕ ನನಗೆ ಶಕ್ತಿ ನೀಡಿ

ಮೈಸೂರಿನ ಒಕ್ಕಲಿಗ ಮುಖಂಡರ ಸಭೆಯಲ್ಲಿ ಡಿಸಿಎಂ ಡಿಕೆಶಿ ಕರೆ



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಒಕ್ಕಲಿಗ ಮುಖಂಡರ ಸಭೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಮಾತನಾಡಿದರು.

ಮೈಸೂರು, ಏ.14(ಎಸ್‌ಪಿಎನ್)– ಕಾಂಗ್ರೆಸ್ ಪಕ್ಷದಲ್ಲಿ ಒಕ್ಕಲಿಗರ ನಾಯಕತ್ವಕ್ಕೆ ಸಾಕಷ್ಟು ಮನ್ನಣೆ ಇದೆ. ಹಾಗಾಗಿಯೇ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಎಂಟು ಒಕ್ಕಲಿಗ ಅಭ್ಯರ್ಥಿಗಳಿಗೆ ಅವಕಾಶ ಮಾಡಿಕೊಟ್ಟಿದೆ. ಈ ಅಭ್ಯರ್ಥಿಗಳನ್ನು ಬೆಂಬಲಿಸುವ ಮೂಲಕ ನನ್ನ ನಾಯಕತ್ವಕ್ಕೆ ಈ ಭಾಗದ ಒಕ್ಕಲಿಗರು ಮತ್ತಷ್ಟು ಶಕ್ತಿ ತುಂಬಬೇಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮುದಾಯದ ಮುಖಂಡರಲ್ಲಿ ಮನವಿ ಮಾಡಿದರು.

ಮೈಸೂರು ಸಯ್ಯಾಜಿರಾವ್ ರಸ್ತೆಯ ಖಾಸಗಿ ಹೋಟೆಲ್‌ನಲ್ಲಿ ಶಾಸಕ ಕೆ.ಹರೀಶ್ ಗೌಡ ನೇತೃತ್ವದಲ್ಲಿ ನಡೆದ ಒಕ್ಕಲಿಗ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಜಾತ್ಯಾತೀತ ಜನತಾ ದಳ(ಜೆಡಿಎಸ್)ದ ಆಯುಸ್ಸು ಮುಗಿದಿದೆ. ಬಿಜೆಪಿಯಲ್ಲಿ ಒಕ್ಕಲಿಗರ ನಾಯಕತ್ವ ಬೆಳೆಯಲು ಅವಕಾಶವಿಲ್ಲ. ಹಾಗಾಗಿಯೇ ಕಾಂಗ್ರೆಸ್ ಪಕ್ಷದಲ್ಲಿ ಮೈಸೂರು–ಕೊಡಗು, ಮಂಡ್ಯ, ಹಾಸನ, ತುಮಕೂರು ಇತರೆಡೆ ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದರು.

ಪ್ರಸ್ತುತ ಜೆಡಿಎಸ್ ಪಕ್ಷ ಒಂದು ಕುಟುಂಬಕ್ಕೆ ಸೀಮಿತವಾಗಿದೆ. 2023ರ ವಿಧಾನ ಸಭಾ ಚುನಾವಣೆಯಲ್ಲಿ 19 ಸ್ಥಾನಕ್ಕೆ ಸೀಮಿತವಾಗಿದೆ. ಅಲ್ಲದೆ, ಅಲ್ಲಿನ ಕಾರ್ಯಕರ್ತರು ರಾಜಕೀಯವಾಗಿ ಬೆಳೆಯಲು ಅವಕಾಶ ನೀಡುತ್ತಿಲ್ಲ. ಈ ಬಾರಿ ಚುನಾವಣೆಯಲ್ಲಿ ಮಂಡ್ಯದಿಂದ ಮಾಜಿ ಶಾಸಕ ಪುಟ್ಟರಾಜುವಿಗೆ ಅವಕಾಶ ಕೊಡುತ್ತೇನೆ ಎಂದು ಹೇಳಿ, ಈಗ ಹೆಚ್.ಡಿ.ಕುಮಾರಸ್ವಾಮಿಯೇ ಅಭ್ಯರ್ಥಿಯಾಗಿದ್ದಾರೆ. ಹಾಸನದಲ್ಲಿ ಹೆಚ್.ಡಿ.ರೇವಣ್ಣ ಮಗ ಅಭ್ಯರ್ಥಿಯಾಗಿದ್ದಾರೆ. ಇನ್ನು ಬೆಂಗಳೂರು ಗ್ರಾಮಾಂತರದಲ್ಲಿ ಅಳಿಯ ಡಾ.ಸಿ.ಎನ್.ಮಂಜುನಾಥ್‌ರಿಗೆ ಬಿಜೆಪಿಯಿಂದ ಅಭ್ಯರ್ಥಿ ಮಾಡಿದ್ದಾರೆ. ಹೀಗಾದರೆ ಸಾಮಾನ್ಯ ಒಕ್ಕಲಿಗರು ರಾಜಕಾರಣದಲ್ಲಿ ಬೆಳೆಯುವುದು ಬೇಡವೇ ಎಂದು ಪ್ರಶ್ನಿಸಿದರು.

ಮೈಸೂರಿನಲ್ಲಿ ಒಕ್ಕಲಿಗರ ಬೆಳವಣಿಗೆಗೆ ಸ್ವಲ್ಪ ಸಮಸ್ಯೆಗಳಿವೆ. ಅದನ್ನು ಮುಂದಿನ ದಿನಗಳಲ್ಲಿ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಅಲ್ಲದೆ, 2018ರಲ್ಲಿ 39 ಸೀಟು ಗೆದ್ದಿದ್ದ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಯಾವುದೇ ಷರತ್ತು ಇಲ್ಲದೆ, ಮುಖ್ಯಮಂತ್ರಿಯಾಗುವಂತೆ ಸ್ವತಃ ನಾನೇ ನಮ್ಮ ಹೈಕಮಾಂಡ್ ಒಪ್ಪಿಸಿ, ಅಧಿಕಾರ ಕೊಡಿಸಿದ್ದೆ. ಅದನ್ನು ಉಳಿಸಿಕೊಳ್ಳುವ ಪ್ರಯತ್ನ ಆ ದಿನಗಳಲ್ಲಿ ಮಾಡಲಿಲ್ಲ. ಈಗ ರಾಜಕೀಯವಾಗಿ ವಿಷ ಹಾಕಿದ್ದೇನೆ ಎಂದು ನನ್ನ ಮೇಲೆ ಹೆಚ್‌ಡಿಕೆ ಆರೋಪ ಮಾಡುತ್ತಿದ್ದಾರೆ ಎಂದು ಹೆಚ್‌ಡಿಕೆ ಅವರ ಹೆಸರೇಳದೇ ಕಿಡಿಕಾರಿದರು.

ಇನ್ನು ಎಷ್ಟು ದಿನ ಹಂತ ಬೆಂಬಲಿಸುತ್ತೀರಿ: ಈ ಭಾಗದ ಒಕ್ಕಲಿಗರು ಇನ್ನು ಎಷ್ಟು ದಿನ ಅಂತ ಒಂದು ಕುಟುಂಬವನ್ನು ನಂಬಿ, ರಾಜಕೀಯವಾಗಿ ಬೆಂಬಲ ನೀಡುತ್ತೀರಿ. ಕಳೆದ 47 ವರ್ಷಗಳ ಹಿಂದೆ ಒಕ್ಕಲಿಗ ಅಭ್ಯರ್ಥಿಗೆ ಕಾಂಗ್ರೆಸ್‌ನಲ್ಲಿ ಅವಕಾಶ ನೀಡಿದ್ದು ಬಿಟ್ಟರೆ, ಮತ್ತೆ ಅವಕಾಶ ನೀಡಿರುವುದು 2024ರ ಈ ಚುನಾವಣೆಯಲ್ಲಿ. ಹಾಗಾಗಿ ಎಂ.ಲಕ್ಷ್ಮಣ ಅವರನ್ನು ಬೆಂಬಲಿಸಿ ಎಂದು ಮನವಿ ಮಾಡಿದರಲ್ಲದೆ, ಈ ಹಿಂದೆ ರಾಜವಂಶಸ್ಥರಾದ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್, ದೇವರಾಜ ಅರಸು ಕುಟುಂಬದವರಿಗೆ, ನಂತರ ಕುರುಬ ಸಮುದಾಯಕ್ಕೆ ಅವಕಾಶ ನೀಡಲಾಗಿತ್ತು. ಕಳೆದ ಹತ್ತು ವರ್ಷಗಳಿಂದ ಪ್ರತಾಪ ಸಿಂಹ ಅವರಿಗೆ ಅವಕಾಶ ನೀಡಲಾಗಿತ್ತು ಆ ಬೆಂಬಲವನ್ನು ನಮ್ಮ ಅಭ್ಯರ್ಥಿ ಲಕ್ಷ್ಮಣನಿಗೂ ನೀಡುವಂತೆ ಮನವಿ ಮಾಡಿದರು.

ಚುಚ್ಚು ಮಾತಿಗೆ ಕಿಡಿಕಿಡಿ: ಬೆಂಗಳೂರು ಸುತ್ತಮುತ್ತ ನನ್ನೊಬ್ಬನ ಆಸ್ತಿ ಇದೆಯೇ, ಹೆಚ್.ಡಿ.ದೇವೇಗೌಡರ ಕುಟುಂಬ ಸದಸ್ಯರ ಸಾವಿರಾರು ಎಕರೆ ಆಸ್ತಿ ಇಲ್ಲವೇ, ಇವೆಲ್ಲವನ್ನು ಬಹಿರಂಗವಾಗಿ ಮಾತಾಡುವುದಿಲ್ಲ. ಆದರೂ ದಿನನಿತ್ಯ ಕುಮಾರ ಸ್ವಾಮಿ ನನ್ನ ಬಗ್ಗೆ, ಚೆಲುವರಾಯಸ್ವಾಮಿ, ಕೆ.ವೆಂಕಟೇಶ್ ಸೇರಿದಂತೆ ಇತರೆ ಸಾಮಾನ್ಯ ಒಕ್ಕಲಿಗ ನಾಯಕರ ಬಗ್ಗೆ ಹಗುರವಾಗಿ ಮಾತನಾಡುತ್ತಿದ್ದಾರೆ. ಇಂತಹ ಚುಚ್ಚುಮಾತುಗಳನ್ನು ಎಷ್ಟು ದಿನ ಸಹಿಸಿಕೊಳ್ಳುವುದು ಎಂದರು.

ಈ ವೇಳೆ ಪಶು ಸಂಗೋಪನಾ ಸಚಿವ ವೆಂಕಟೇಶ್, ಕೃಷಿ ಸಚಿವ ಚೆಲುವರಾಯ ಸ್ವಾಮಿ, ಶಾಸಕ ಕೆ.ಹರೀಶ್‌ಗೌಡ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ ಕುಮಾರ್, ಮುಖಂಡ ಮಂಚೇಗೌಡನ ಕೊಪ್ಪಲು ರವಿ ಸೇರಿದಂತೆ ಇತರರಿದ್ದರು.

ಸಾಮಾನ್ಯ ಒಕ್ಕಲಿಗರು ಬೆಳೆಯಬಾರದೇ...!

ಮೈಸೂರು, ಏ.14(ಎಸ್‌ಪಿಎನ್)– ನಾವು ಕೂಡ ಒಕ್ಕಲಿಗರೇ, ನಾವು ಕೂಡ ಅಷ್ಟೋ–ಇಷ್ಟೋ ಸಮಾಜದಲ್ಲಿ ಗುರುತಿಸಿಕೊಂಡು ಸಮುದಾಯದ ಕೆಲಸ ಮಾಡುತ್ತಿದ್ದೇವೆ. ಆದರೆ, ಸಾಮಾನ್ಯ ಒಕ್ಕಲಿಗರು ರಾಜಕೀಯದಲ್ಲಿ ಬೆಳೆಯಲು ಒಂದು ಕುಟುಂಬ ಬಿಡುತ್ತಿಲ್ಲ ಎಂದು ಪಶು ಸಂಗೋಪನಾ ಸಚಿವ ವೆಂಕಟೇಶ್ ಹಾಗೂ ಕೃಷಿ ಸಚಿವ ಎನ್.ಚಲುವರಾಯ ಸ್ವಾಮಿ ಅವರು ಜೆಡಿಎಸ್ ನಾಯಕರ ಹೆಸರು ಉಲ್ಲೇಖಿಸದೇ ಕಿಡಿಕಾರಿದರು.

ಕೃಷಿ ಸಚಿವ ಎನ್.ಚಲುವರಾಯ ಸ್ವಾಮಿ ಮಾತನಾಡಿ, ಜೆಡಿಎಸ್ ನಾಯಕರು ದಿನನಿತ್ಯ ಮಾಧ್ಯಮಗಳಲ್ಲಿ ನಮ್ಮನ್ನು ಅಪರಾಧಿಗಳಂತೆ ಬಿಂಬಿಸುತ್ತಿದ್ದಾರೆ. ಇದಕ್ಕೆ ನಾವು ಮಾಡಿದ ಅಪರಾಧವಾದರೂ ಏನು? ನಾವು ರಾಜಕೀಯದಲ್ಲಿ ಬೇರೆ ಪಕ್ಷದಿಂದ ಗುರುತಿಸಿಕೊಂಡಿದ್ದೇ ಅಪರಾಧವೇ? ಇದು ಇಲ್ಲಿಗೆ ನಿಲ್ಲಬೇಕು ಎಂದು ತಾಕೀತು ಮಾಡಿದರು. ಹಾಸನ, ಮಂಡ್ಯ, ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ನಿಂತಿರುವ ಅಭ್ಯರ್ಥಿಗಳು ಒಂದೇ ಕುಟುಂಬಕ್ಕೆ ಸೇರಿದವರು. ಉಳಿದೆಡೆ ಬೆಂಗಳೂರು ಉತ್ತರ, ಚಿಕ್ಕಬಳ್ಳಾಪುರ ಬಿಟ್ಟರೆ ಬಿಜೆಪಿಯಲ್ಲಿ ಒಕ್ಕಲಿಗರಿಗೆ ಅವಕಾಶ ನೀಡಿಲ್ಲ. ಸಾಮಾನ್ಯ ನಾಯಕರ ಸೇವೆಯನ್ನು ಒಕ್ಕಲಿಗ ಸಮುದಾಯ ಗುರುತಿಸುತ್ತಿಲ್ಲ ಎಂಬ ನೋವು ನನ್ನನ್ನು ಸೇರಿದಂತೆ ಡಿಸಿಎಂ ಡಿ.ಕೆ.ಶಿವಕುಮಾರ್, ಕೆ.ವೆಂಕಟೇಶ್ ಸೇರಿದಂತೆ ಎಲ್ಲರನ್ನು ಕಾಡುತ್ತಿದೆ ಎಂದು ಬಾವುಕರಾದರು.

ಮೈಸೂರಲ್ಲಿ ಡಾ.ಅಂಬೇಡ್ಕರ್ ಜಯಂತಿ ಅರ್ಥಪೂರ್ಣ ಆಚರಣೆ

ಪುರಭವನ ಆವರಣದ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ; ವರ್ಣರಂಜಿತ ಮೆರವಣಿಗೆ

●ಮೆರವಣಿಗೆಗೆ ಜಾನಪದ ಕಲಾತಂಡಗಳ ಮೆರಗು ●ಅಂಬೇಡ್ಕರ್, ಬುದ್ಧ, ನಾಲ್ವಡಿ ಪ್ರತಿಮೆಯ ಅತ್ಯಾಕರ್ಷಕ ಸ್ತಬ್ಧಚಿತ್ರ ●ಧರ್ಮಾತೀತ, ಜಾತ್ಯತೀತವಾಗಿ ಜಯಂತಿಯಲ್ಲಿ ಭಾಗಿ; ಗಮನ ಸೆಳೆದ ಡಾ.ಬಿ.ಆರ್.ಅಂಬೇಡ್ಕರ್ ಸಂದೇಶಗಳು

ಮೈಸೂರು, ಏ.14(ಬಿಎಲ್‌ಯು)– ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತಿಯನ್ನು ಮೈಸೂರಿನಲ್ಲಿ ಭಾನುವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಅಂಬೇಡ್ಕರ್ ಜಯಂತಿ ಆಚರಣೆಗೆ ಜಿಲ್ಲಾಡಳಿತದಿಂದ ಯಾವುದೇ ವೇದಿಕೆ ಕಾರ್ಯಕ್ರಮ ಆಯೋಜಿಸಿರಲಿಲ್ಲ.

ವೇದಿಕೆ ಕಾರ್ಯಕ್ರಮದ ಬದಲು ಜಿಲ್ಲಾಡಳಿತದ ವತಿಯಿಂದ ಪುರಭವನದ ಆವರಣದಲ್ಲಿನ ಅಂಬೇಡ್ಕರ್ ಪ್ರತಿಮೆ ಮುಂದೆ ಸರಳ ಕಾರ್ಯಕ್ರಮ ಆಯೋಜಿಸಲಾಗಿತ್ತು. ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಾಯಿತ್ರಿ, ನಗರಪಾಲಿಕೆ ಆಯುಕ್ತೆ ಡಾ.ಮಧು ಸೇರಿದಂತೆ ಇತರೆ ಅಧಿಕಾರಿಗಳು ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಮಾಡಿದರು.

ದೇಶದಲ್ಲಿ ಸಮಾನತೆಯ ಸಮಾಜ ನಿರ್ಮಾಣ ಮಾಡಲು ಸಂವಿಧಾನದ ಕೊಡುಗೆ ನೀಡಿದ ಅಂಬೇಡ್ಕರ್ ಅವರ ತತ್ವ, ಸಿದ್ಧಾಂತ ಹಾಗೂ ಚಿಂತನೆಗಳನ್ನು ಈ ವೇಳೆ ಸ್ಮರಿಸಲಾಯಿತು.

ಮೈಸೂರಿನ ಅಶೋಕಪುರಂನಲ್ಲಿ ಕೂಡ ಅಂಬೇಡ್ಕರ್ ಜಯಂತಿಯನ್ನು ಅದ್ಧೂರಿಯಿಂದ ಆಚರಿಸಲಾಯಿತು. ಮಾಜಿ ಮೇಯರ್ ಪುರುಷೋತ್ತಮ್ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ತರುವಾಯ ಜಾನಪದ ಕಲಾತಂಡಗಳಿದ್ದ ವರ್ಣರಂಜಿತ ಮೆರವಣಿಗೆ ಚಾಲನೆಗೊಂಡಿತು. ಡಾ.ಅಂಬೇಡ್ಕರ್, ಬುದ್ಧ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆ ಇರುವ ಸ್ತಬ್ಧಚಿತ್ರ ಅತ್ಯಾಕರ್ಷಕವಾಗಿತ್ತು. ಸಂವಿಧಾನದ ಮಹತ್ವವನ್ನು ಸಾರುವ ಬರಹಗಳು ಗಮನ ಸೆಳೆಯಿತು.

ಬಿದರು ಬೊಂಬೆ, ನವಿಲು ಕುಣಿತ, ತಮಟೆ, ನಗಾರಿ ಸೇರಿದಂತೆ ಇತರೆ ಜಾನಪದ ಕಲಾತಂಡಗಳು ಮೆರವಣಿಗೆಗೆ ಮೆರಗು ನೀಡಿತು. ಸಾಮಾಜಿಕ ಕ್ರಾಂತಿಯ ಗೀತೆಗಳನ್ನು ಮೈಕ್ ಮೂಲಕ ಸಾರಲಾಯಿತು. ಸಂವಿಧಾನದ ಮೂಲಕ ಸಮಾನತೆ ಸಮಾಜ ನಿರ್ಮಾಣಕ್ಕೆ ಅಂಬೇಡ್ಕರ್ ನೀಡಿರುವ ಸಂದೇಶವನ್ನು ಸಾರಲಾಯಿತು.



ಮೈಸೂರಿನ ಪುರಭವನದ ಮುಂದೆ ಜಿಲ್ಲಾಡಳಿತದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಇತರೆ ಅಧಿಕಾರಿಗಳು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ, ಪುಷ್ಪಾರ್ಚನೆ ಮಾಡಿದರು.



ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತಿ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ಭಾನುವಾರ ವರ್ಣರಂಜಿತ ಮೆರವಣಿಗೆ ನಡೆಯಿತು. ಅಶೋಕಪುರಂನಿಂದ ಹೊರಟ ಮೆರವಣಿಗೆ ನಗರದ ಹಲವು ರಸ್ತೆಗಳಲ್ಲಿ ಸಂಚರಿಸಿ ಪುರಭವನ ತಲುಪಿತು.

ಸಾವಿರಾರು ಸಂಖ್ಯೆಯ ಜನರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಅಶೋಕಪುರಂನಿಂದ ಹೊರಟ ಮೆರವಣಿಗೆ ಅಶೋಕ ವೃತ್ತ, ಆರ್‌ಟಿಓ ವೃತ್ತ, ವಾಣಿವಿಲಾಸ ರಸ್ತೆ, ಸಿದ್ದಪ್ಪ ವೃತ್ತ, ಅಗ್ರಹಾರ ವೃತ್ತ, ಬಸವೇಶ್ವರ ವೃತ್ತ, ಸಯ್ಯಾಜಿರಾವ್ ರಸ್ತೆ, ಕೆ.ಆರ್.ವೃತ್ತ, ಆಲ್ಬರ್ಟ್ ವಿಕ್ಟರ್ ರಸ್ತೆ, ಚಾಮರಾಜ ಒಡೆಯರ್ ವೃತ್ತದ ಮೂಲಕ ಪುರಭವನಕ್ಕೆ ಬಂದು ತಲುಪಿತು.

ಮೆರವಣಿಗೆಯಲ್ಲಿ ಭಾಗವಹಿಸಿದ್ದ ಸಹಸ್ರಾರು ಜನರು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಅಶೋಕಪುರಂ ಮುಖಂಡರಾದ ಸುನೀಲ್, ಪೈಲ್ವಾನ್ ಪುಟ್ಟಸ್ವಾಮಿ, ದೊಡ್ಡಸಿದ್ದಯ್ಯ, ಶಿವಸ್ವಾಮಿ ಸೇರಿದಂತೆ ಇತರರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಮುಂಜಾಗ್ರತಾ ಕ್ರಮವಾಗಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗಿತ್ತು. ಮೆರವಣಿಗೆ ಸಾಗುವ ರಸ್ತೆಯಲ್ಲಿ ವಾಹನ ಸಂಚಾರವನ್ನು ಸಂಪೂರ್ಣ ನಿರ್ಬಂಧಿಸಲಾಗಿತ್ತು. ಧರ್ಮಾತೀತವಾಗಿ, ಜಾತ್ಯತೀತವಾಗಿ ಬಹಳಷ್ಟು ಜನರು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ, ಪುಷ್ಪಾರ್ಚನೆ ಮಾಡಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಸಂಭ್ರಮದಲ್ಲಿ ಭಾಗಿಯಾಗಿದ್ದರು.

ಅಂಬೇಡ್ಕರ್ ಪ್ರತಿಮೆ ಮುಂದೆ ಮತದಾನ ಜಾಗೃತಿ



ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯ ಮತದಾನ ಮಾಡುವ ಕುರಿತಂತೆ ಪುರಭವನದ ಅಂಬೇಡ್ಕರ್ ಪ್ರತಿಮೆ ಮುಂದೆ ಇಂದು ಪ್ರೇರೇಪಿಸಲಾಯಿತು.

ನಗರಪಾಲಿಕೆ ಆಯುಕ್ತೆ ಡಾ.ಮಧು, ಬಲೂನ್ ಹಾರಿಸುವ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸ್ವೀಪ್ ಕಾರ್ಯಕ್ರಮದಡಿ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಕಡ್ಡಾಯ ಮತದಾನ ಮಾಡುವಂತೆ ಒತ್ತಿ ಹೇಳಲಾಯಿತು.

ಯಾರೂ ಕೂಡ ಮತದಾನದಿಂದ ವಂಚಿತರಾಗಬಾರದು. ಮತದಾನ ನಮ್ಮ ಹಕ್ಕು ಹಾಗೂ ಕರ್ತವ್ಯ ಎಂದು ತಿಳಿದು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಲಾಯಿತು.

ಈ ವೇಳೆ ಮತದಾನ ಜಾಗೃತಿ ಸಂದೇಶ ಸಾರುವ ಘೋಷಣಾ ಫಲಕಗಳನ್ನು ಪ್ರದರ್ಶಿಸಲಾಯಿತು. ಈ ಮೂಲಕ ಏ. 26ರಂದು ತಪ್ಪದೆ ಎಲ್ಲರೂ ಮತದಾನ ಮಾಡಿ ಎಂದು ಮನವಿ ಮಾಡಲಾಯಿತು.

ಪಾಲಿಕೆ ವಲಯ ಆಯುಕ್ತೆ ವಾಣಿ ವಿ.ಆಳ್ವಾ, ಅಭಿವೃದ್ಧಿ ಅಧಿಕಾರಿ ವೆಂಕಟೇಶ್, ಸಹಾಯಕ ಕಂದಾಯಾಧಿಕಾರಿ ಸಿದ್ದರಾಜು ಸೇರಿದಂತೆ ಇತರರು ಈ ವೇಳೆ ಹಾಜರಿದ್ದರು. ಈ ವೇಳೆ ಮತದಾನದ ಮಹತ್ವ ಅರಿತ ಯುವತಿಯರು ಸೇರಿದಂತೆ ಮಹಿಳೆಯರು ನಾನು ಮತದಾನ ಮಾಡುವೆ, ನೀವು ಕಡ್ಡಾಯವಾಗಿ ಮತದಾನ ಮಾಡಿ ಎಂಬ ಸಂದೇಶ ಸಾರಿದರು.



ಕರ್ನಾಟಕ ರಾಜ್ಯ ಡಾ.ಬಿ.ಆರ್.ಅಂಬೇಡ್ಕರ್ ಆದಿದ್ರಾವಿಡ (ಪೌರಕಾರ್ಮಿಕರ) ಯುವಕರ ಅಭಿವೃದ್ಧಿ ಮಹಾ ಸಂಘದ ಕಚೇರಿಯಲ್ಲಿ ಅಂಬೇಡ್ಕರ್ ಅವರ 133ನೇ ಜನ್ಮದಿನ ಆಚರಿಸಲಾಯಿತು. ಈ ವೇಳೆ ಗೌರವಾಧ್ಯಕ್ಷ ಎನ್.ಮಾರ, ರಾಜ್ಯಪ್ರಧಾನ ಕಾರ್ಯದರ್ಶಿ ಮಂಚಯ್ಯ, ಗೌರವ ಕಾರ್ಯದರ್ಶಿ ಬಸವನಗುಡಿ ನಂಜಪ್ಪ, ರಂಗಣ್ಣ, ಸೋಮ, ನಂಜುಂಡ, ಬಹದ್ದೂರು ಕೃಷ್ಣ ಮತ್ತಿತರರಿದ್ದರು.



ವಿಶ್ವಮಾನವ ಮೈಸೂರು ವಿವಿ ನೌಕರರ ವೇದಿಕೆ ವತಿಯಿಂದ ಭಾನುವಾರ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಲಾಯಿತು. ಈ ವೇಳೆ ಮೈವಿವಿ ಮೈಸೂರು ಪರೀಕ್ಷಾಂಗ ಕುಲಸಚಿವ ಡಾ.ಬಸಪ್ಪ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯರಾದ ಮಹದೇಶ್, ನಾಗರಾಜ್, ನಟರಾಜ್, ಪ್ರೊ.ಶಿವರಾಜಪ್ಪ, ಮಾಜಿ ಸಿಂಡಿಕೇಟ್ ಸದಸ್ಯ ಡಾ. ಈ.ಸಿ ನಿಂಗರಾಜುಗೌಡ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮೃಗಾಲಯದಲ್ಲಿ ಇಂದಿನಿಂದ ಬೇಸಿಗೆ ಶಿಬಿರ

ಮೈಸೂರು, ಏ.14 (ಬಿಎಲ್‌ಯು) –ಮೈಸೂರಿನ ಶ್ರೀ ಚಾಮ ರಾಜೇಂದ್ರ ಮೃಗಾಲಯದಲ್ಲಿ ನಾಳೆ(ಏಪ್ರಿಲ್ 15)ಯಿಂದ ಬೇಸಿಗೆ ಶಿಬಿರ ಆರಂಭವಾಗಲಿದೆ. ನಾಳೆ ಬೆಳಿಗ್ಗೆ 10 ಗಂಟೆಗೆ ಮೃಗಾಲಯದ ಆ್ಯಂಪಿ ಥಿಯೇಟರ್‌ನಲ್ಲಿ ಶಿಬಿರದ ಉದ್ಘಾಟನೆ ನೆರವೇರಲಿದೆ. ಎರಡು ಬ್ಯಾಚ್‌ಗಳಲ್ಲಿ ಬೇಸಿಗೆ ಶಿಬಿರ ನಡೆಯಲಿದ್ದು, ತಲಾ ಒಂದು ಬ್ಯಾಚ್‌ನಲ್ಲಿ 60 ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ.

ಮೊದಲ ಬ್ಯಾಚ್‌ನ ಬೇಸಿಗೆ ಶಿಬಿರ ನಾಳೆಯಿಂದ ಆರಂಭವಾಗಿ ಏಪ್ರಿಲ್ 24 ರವರೆಗೆ ನಡೆಯಲಿದೆ. ಎರಡನೇ ಬ್ಯಾಚ್ ಶಿಬಿರ ಮೇ 6 ರಿಂದ ಮೇ 15 ರವರೆಗೆ ನಡೆಯಲಿದೆ. ಮೃಗಾಲಯದಲ್ಲಿ ಪ್ರಾಣಿ ಗಳ ನಿರ್ವಹಣೆ, ಪ್ರಾಣಿಗಳ ನಡವಳಿಕೆಯ ಅಧ್ಯಯನ, ಕಾಡು ಪ್ರಾಣಿಗಳ ಸಂರಕ್ಷಣೆ, ಸಂರಕ್ಷಣಾ ಕ್ಷೇತ್ರದಲ್ಲಿ ಪ್ರಸ್ತುತ ಸವಾಲು ಗಳ ವಿವಿಧ ಅಂಶಗಳನ್ನು ವಿದ್ಯಾರ್ಥಿ ಗಳಿಗೆ ತಿಳಿಸಲಾಗುವುದು.

ಈ ಎಲ್ಲಾ ವಿಚಾರಗಳನ್ನು ಸಿದ್ಧಾಂತ ಮತ್ತು ಪ್ರಾಯೋಗಿಕ ತರಗತಿಗಳ ಮೂಲಕ ಮಕ್ಕಳಿಗೆ ಮನದಟ್ಟು ಮಾಡುವುದು ಈ ಬೇಸಿಗೆ ಶಿಬಿರದ ಮೂಲ ಉದ್ದೇಶ ವಾಗಿದೆ. ಮೃಗಾಲಯದ ಅಧಿಕಾರಿಗಳು ಮತ್ತು ಇತರೆ ವಿಷಯ ತಜ್ಞರು ವಿದ್ಯಾರ್ಥಿಗಳ ಜೊತೆ ಸಂವಾದದಲ್ಲಿ ಭಾಗ ವಹಿಸಲಿದ್ದಾರೆ ಎಂದು ಮೃಗಾಲಯ ಪ್ರಾಧಿ ಕಾರದ ಕಾರ್ಯನಿರ್ವಾಹಕ ನಿರ್ದೇಶಕ ಮಹೇಶ್‌ಕುಮಾರ್ ತಿಳಿಸಿದ್ದಾರೆ.



ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜನ್ಮದಿನಾಚರಣೆ ಪ್ರಯುಕ್ತ ಪುರಭವನದ ಆವರಣದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಹುಯಿಲಾಳು ರಾಮಸ್ವಾಮಿ ಮಾಲಾರ್ಪಣೆ ಮಾಡಿದರು. ಈ ವೇಳೆ ಗ್ರಾಮ ಸದಸ್ಯರಾದ ಪಿ.ಮಹದೇವ, ಸವಿತಾ ಸಮಾಜದ ನಗರಾಧ್ಯಕ್ಷ ಹರೀಶ್‌ರೆಡ್ಡಿ, ಗೋಪಾಲಗೌಡ, ಮೈಸೂರು ಜಿಲ್ಲಾ ಕಾಂಗ್ರೆಸ್ ಮಾಧ್ಯಮ ಸಂಚಾಲಕ ಚೆಟ್ಟಿಹುಂಡಿ ಸುನಿಲ್, ಹುಯಿಲಾಳು ಮುಂಜುನಾಥ್ ಪ್ರಸಾದ್ ಇದ್ದರು.



ಸರ್ ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಅಂಬೇಡ್ಕರ್ ಜಯಂತಿ ಪ್ರಯುಕ್ತ ಮೈಸೂರಿನ ಅಶೋಕಪುರಂ ಪಾರ್ಕ್ ಬಳಿ ಇರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಅಧ್ಯಕ್ಷ ಜಯನಗರ ಮಹೇಶ್, ಕಾರ್ಯದರ್ಶಿ ರವಿಕುಮಾರ್, ನಿರ್ದೇಶಕರಾದ ಚಂದ್ರೇಗೌಡ, ಯೋಗೇಶ್‌ಕುಮಾರ್, ಶಿವರಾಜು, ಯೋಗೇಶ್ ಹೆಬ್ಬಾಳ್, ಸದಸ್ಯ ಕುಮಾರ್ ಇದ್ದರು.

ಉನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು.ಏ.14–ಮೈಸೂರಿನಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿರುವ ಇನ್ನೋವೇಟಿವ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ವಿ.ವಿನುತ ಪಿಯುಸಿ ಪರೀಕ್ಷೆಯಲ್ಲಿ 600ಕ್ಕೆ 578 ಅಂಕ ಪಡೆದು ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಈಕೆ ವಿಜಯನಗರದ 4ನೇ ಹಂತದ ಬಿ.ವೆಂಕಟೇಶ್ ಮತ್ತು ಜ್ಯೋತಿ ದಂಪತಿ ಪುತ್ರಿ

ಬಿಜೆಪಿ 'ಸಂಕಲ್ಪ ಪತ್ರ': ಬಡವರು, ಯುವಜನರು, ರೈತರು, ಮಹಿಳೆಯರಿಗೆ 'ಮೋದಿ ಗ್ಯಾರಂಟಿ'

●ಸೂರ್ಯಘರ್ ಯೋಜನೆಯಡಿ ಉಚಿತ ವಿದ್ಯುತ್ ●ರೈತರಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಳ ●ಈಶಾನ್ಯ ಮತ್ತು ದಕ್ಷಿಣ ರಾಜ್ಯಗಳಿಗೆ ಬುಲೆಟ್ ರೈಲು ●ದೇಶಾದ್ಯಂತ ಏರ್‌ಪೋರ್ಟ್ ರೈಲ್ವೇ ನಿಲ್ದಾಣ ನಿರ್ಮಾಣ ●70 ವರ್ಷ ಮೇಲ್ಪಟ್ಟವರಿಗೆ ಉಚಿತ ಆರೋಗ್ಯ ಸೇವೆ ●ಮುದ್ರಾ ಸಾಲ ಯೋಜನೆ 20 ಲಕ್ಷಕ್ಕೆ ಹೆಚ್ಚಳ ●3 ಕೋಟಿ ಬಡವರಿಗೆ ಮನೆ ನಿರ್ಮಾಣ

'ಒಂದು ರಾಷ್ಟ್ರ-ಒಂದು ಚುನಾವಣೆ'; ಸಿಎಎ ಜಾರಿ; ವಂದೇ ಭಾರತ್ ದೇಶದ ಮೂಲೆ ಮೂಲೆಗೆ ವಿಸ್ತರಣೆ; ಉತ್ತರ, ದಕ್ಷಿಣ, ಪೂರ್ವ ಭಾರತದಲ್ಲಿ ಬುಲೆಟ್ ರೈಲು ಯೋಜನೆ ಜಾರಿ

ನವದೆಹಲಿ, ಏ.14– ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನಕ್ಕೆ ಕೇವಲ ಒಂದು ವಾರ ಬಾಕಿ ಇರುವಾಗ ಭಾರತೀಯ ಜನತಾ ಪಕ್ಷವು ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜನ್ಮದಿನವಾದ ಭಾನುವಾರದಂದು 'ಪಕ್ಷದ ಸಂಕಲ್ಪ ಪತ್ರ' (ಬಿಜೆಪಿ ಪ್ರಣಾಳಿಕೆಗೆ ಹೆಸರು–BJP Sankalp Patra) ಹೆಸರಿನಲ್ಲಿ ಚುನಾವಣಾ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ.

ಸಂಕಲ್ಪ ಪತ್ರ ಬಿಡುಗಡೆ ಮಾಡಿದ ಪ್ರಧಾನಿ ಮೋದಿ ದೇಶದ ದೂರದೃಷ್ಟಿಯ ಬಗ್ಗೆ ಮಾತನಾಡಿದ್ದಾರೆ. ಸೂರ್ಯಘರ್ ಯೋಜನೆಯಡಿ ಉಚಿತ ವಿದ್ಯುತ್, ರೈತರಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಳ, ಈಶಾನ್ಯ ಮತ್ತು ದಕ್ಷಿಣ ರಾಜ್ಯಗಳಿಗೆ ಬುಲೆಟ್ ರೈಲು, ದೇಶಾದ್ಯಂತ ಏರ್‌ಪೋರ್ಟ್ ರೈಲ್ವೇ ನಿಲ್ದಾಣ ನಿರ್ಮಾಣ, 70 ವರ್ಷ ಮೇಲ್ಪಟ್ಟವರಿಗೆ ಉಚಿತ ಆರೋಗ್ಯ ಸೇವೆ, ಮುದ್ರಾ ಸಾಲ ಯೋಜನೆ 20 ಲಕ್ಷಕ್ಕೆ ಹೆಚ್ಚಳ, 3 ಕೋಟಿ ಬಡವರಿಗೆ ಮನೆ ನಿರ್ಮಾಣ ಸೇರಿದಂತೆ 14 ಗ್ಯಾರಂಟಿಗಳನ್ನು ಮುಂದಿನ ಐದು ವರ್ಷದಲ್ಲಿ ದೇಶದ ಎಲ್ಲರಿಗೂ ತಲುಪಿಸುವುದಾಗಿ ಘೋಷಿಸಿದರು.

4 ವರ್ಗದ ಜನರ ಮೇಲೆ ವಿಶೇಷ ಒತ್ತು: ಸರ್ಕಾರದ ಯೋಜನೆಗಳ ಫಲಾನುಭವಿಗಳಾದ ಸಮಾಜದ ಬಡವರು, ಯುವಜನತೆ, ರೈತರು ಮತ್ತು ಮಹಿಳೆಯರು (ಗ್ಯಾನ್) ಎಂಬ ನಾಲ್ಕು ವಿಶಾಲ ಗುಂಪುಗಳ ಪ್ರತಿನಿಧಿಗಳಿಗೆ ಪ್ರಧಾನ ಮಂತ್ರಿಗಳು ಪ್ರಣಾಳಿಕೆಯ ಪ್ರತಿಗಳನ್ನು ಇದೇ ಸಂದರ್ಭದಲ್ಲಿ ಹಸ್ತಾಂತರಿಸಿದರು. ಪಕ್ಷದ ಪ್ರಣಾಳಿಕೆಯು ಎನ್‌ಡಿಎ ಸರ್ಕಾರದ ಸಾಧನೆಗಳ ಸಮಗ್ರ ಅವಲೋಕನವನ್ನು ಪಟ್ಟಿಮಾಡಿದೆ. ಇದು 2047 ರ ವೇಳೆಗೆ 'ವಿಕಸಿತ ಭಾರತ'ವನ್ನು ನಿರ್ಮಿಸುವ ದೃಷ್ಟಿಕೋನ ಹೊಂದಿದೆ ಎಂದು ಅವರು ಹೇಳಿದರು.

ಬಡತನ ನಿರ್ಮೂಲನೆಗೆ ಬಿಜೆಪಿ ಒತ್ತು ನೀಡಿದೆ. ಇದು ಮೋದಿ ಗ್ಯಾರಂಟಿಯಾಗಿದೆ ಎಂದ ಅವರು, ಈಗಾಗಲೇ ಜಾರಿಯಲ್ಲಿರುವ ಉಚಿತ ರೇಷನ್ ಯೋಜನೆ ಮುಂದಿನ 5 ವರ್ಷಗಳ ಕಾಲವೂ ಜಾರಿಯಲ್ಲಿರಲಿವೆ. ಬಡವರ ಬಟ್ಟಲು ಪೋಷಕಾಂಶಗಳಿಂದ ಕೂಡಿರಬೇಕು ಎಂಬುದು ನಮ್ಮ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಜನೌಷಧಿ ಕೇಂದ್ರಗಳ ಮೂಲಕ ಶೇ.50ರಷ್ಟು ರಿಯಾಯಿತಿಯೊಂದಿಗೆ ಈಗಾಗಲೇ ಔಷಧಿಗಳು ಲಭ್ಯವಾಗುತ್ತಿದೆ. ದೇಶದಲ್ಲಿ ಮತ್ತಷ್ಟು ಜನೌಷಧಿ ಕೇಂದ್ರಗಳನ್ನು ಸ್ಥಾಪಿಸಲಾಗುವುದು. 70 ವರ್ಷ ಮೇಲ್ಪಟ್ಟ ಎಲ್ಲಾ ಹಿರಿಯ ನಾಗರಿಕರಿಗೂ ಐದು ಲಕ್ಷದವರೆಗಿನ ಉಚಿತ ವೈದ್ಯಕೀಯ ತಪಾಸಣೆ ಹಾಗೂ ಚಿಕಿತ್ಸೆಯನ್ನು ಒದಗಿಸಲಾಗುವುದು ಎಂದು ಅವರು ಹೇಳಿದರು. ಬಿಜೆಪಿ ಈಗಾಗಲೇ 4 ಕೋಟಿ ಬಡವರಿಗೆ ಮನೆ ನಿರ್ಮಿಸಿಕೊಟ್ಟಿದೆ. ಮತ್ತೆ 3 ಕೋಟಿ ಹೊಸ ಮನೆಗಳನ್ನು ನಿರ್ಮಿಸಿಕೊಡಲಿದೆ ಎಂದು ಹೇಳಿದ ಅವರು, ಈವರೆಗೂ ನಾವು ಸಬ್ಸಿಡಿ ಸಿಲಿಂಡರ್ ಅನ್ನು ಮನೆಗೆ ತಲುಪಿಸುತ್ತಿದ್ದೇವೆ. ಇನ್ನು ಮುಂದೆ ಪೈಪ್‌ಗಳ ಮೂಲಕ ಕಡಿಮೆ ವೆಚ್ಚದ ಅಡುಗೆ ಅನಿಲವನ್ನು ಮನೆ ಮನೆಗೆ ತಲುಪಿಸಲು ತ್ವರಿತವಾಗಿ ಕ್ರಮ ಕೈಗೊಳ್ಳುತ್ತೇವೆ ಎಂದು ಅವರು ಹೇಳಿದರು.

ಪಿಎಂ ಸೂರ್ಯಘರ್ ಮುಕ್ತ ವಿದ್ಯುತ್ ಯೋಜನೆಯನ್ನು ಮತ್ತಷ್ಟು ತ್ವರಿತವಾಗಿ ಕಾರ್ಯಗತಗೊಳಿಸುವುದು ಬಿಜೆಪಿ ಸಂಕಲ್ಪವಾಗಿದೆ. ಮನೆಯಲ್ಲಿ ಉಚಿತ ವಿದ್ಯುತ್ ಹೇಗೋ ಸಿಗುತ್ತದೆ. ಜೊತೆಗೆ ಹೆಚ್ಚುವರಿ ವಿದ್ಯುತ್ ಅನ್ನು ಮಾರಾಟ ಮಾಡಿ ಹಣವನ್ನೂ ಗಳಿಸಬಹುದು. ಜೊತೆ ಜೊತೆಗೆ ವಿದ್ಯುತ್ ಚಾಲಿತ ವಾಹನಗಳನ್ನು ಬಳಸುವವರಿಗೆ ಉಚಿತ ಚಾರ್ಜಿಂಗ್ ವ್ಯವಸ್ಥೆಯೂ ದೊರೆತಂತಾಗುತ್ತದೆ ಎಂದು ಮೋದಿ ಹೇಳಿದರು.



ಲೋಕಸಭಾ ಚುನಾವಣೆಯ ಬಿಜೆಪಿ ಪ್ರಣಾಳಿಕೆಯನ್ನು ಪ್ರಧಾನಿ ಮೋದಿ ಭಾನುವಾರ ಬಿಡುಗಡೆ ಮಾಡಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ ಸಿಂಗ್, ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ, ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಇದ್ದರು.

ರೈಲ್ವೆ ಸೇವೆ

ಬಿಜೆಪಿ ವಂದೇ ಭಾರತ್ ರೈಲುಗಳನ್ನು ದೇಶದ ಮೂಲೆ ಮೂಲೆಗೆ ವಿಸ್ತರಿಸಲಿದೆ. ವಂದೇ ಭಾರತ್‌ನ ಮೂರು ಮಾದರಿಗಳು ದೇಶದಲ್ಲಿ ಓಡಲಿವೆ, ಚೇರ್‌ಕಾರ್ ಮತ್ತು ವಂದೇ ಭಾರತ್ ಮೆಟ್ರೋ. ಭಾರತದ ಪ್ರತಿಯೊಂದು ಭಾಗದಲ್ಲೂ ಬುಲೆಟ್ ರೈಲು ಓಡಿಸುವ ತಮ್ಮ ಪಕ್ಷದ ಸಂಕಲ್ಪವನ್ನು ಅವರು ವ್ಯಕ್ತಪಡಿಸಿದರು.

ಮುಂಬರುವ ದಿನಗಳಲ್ಲಿ ಉತ್ತರ ಭಾರತ, ದಕ್ಷಿಣ ಭಾರತ ಮತ್ತು ಪೂರ್ವ ಭಾರತದಲ್ಲಿ ತಲಾ ಒಂದು ಬುಲೆಟ್ ರೈಲು ಯೋಜನೆಯನ್ನು ಪ್ರಾರಂಭಿಸುವ ಮೂಲಕ ಆಧುನಿಕತೆಯತ್ತ ಪಯಣವನ್ನು ವೇಗಗೊಳಿಸುತ್ತದೆ. ಇದರ ಸರ್ವೆ ಕಾರ್ಯವೂ ಶೀಘ್ರವೇ ಆರಂಭವಾಗಲಿದೆ. ಅಹಮದಾಬಾದ್–ಮುಂಬೈ ಬುಲೆಟ್ ರೈಲಿನ ಕೆಲಸವು ವೇಗವಾಗಿ ಪ್ರಗತಿಯಲ್ಲಿದೆ ಮತ್ತು ಬಹುತೇಕ ಮುಕ್ತಾಯದ ಹಂತದಲ್ಲಿದೆ ಎಂದು ಅವರು ಹೇಳಿದರು.

ಮುದ್ರಾ ಸಾಲ 10 ರಿಂದ 20 ಲಕ್ಷಕ್ಕೆ ಏರಿಕೆ: ಮುದ್ರಾ ಯೋಜನೆಯ ಸಾಲದ ಪ್ರಮಾಣವನ್ನು 10 ಲಕ್ಷದಿಂದ 20 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗಿದೆ. ಈ ಸಂಕಲ್ಪ ಪತ್ರದಲ್ಲಿ ಉದ್ಯೋಗ ಸೃಷ್ಟಿಯ ಬಗ್ಗೆ ಗಮನಹರಿಸಲಾಗಿದೆ. ಅದು ಉದ್ಯೋಗ ಪ್ರಮಾಣ, ಉದ್ಯೋಗದ ಗುಣಮಟ್ಟ ಎರಡಕ್ಕೂ ಒತ್ತು ನೀಡಲಾಗಿದೆ ಎಂದರು.

ಉತ್ತಮ ಮೂಲಸೌಕರ್ಯ: ದೇಶದಲ್ಲಿ ಉತ್ತಮ ಆಡಳಿತ, ಡಿಜಿಟಲ್ ಆಡಳಿತ ಮತ್ತು ಡೇಟಾ ಆಡಳಿತವನ್ನು ನೇರಗೊಳಿಸಲು ಬಿಜೆಪಿ ಅಗತ್ಯ ಮೂಲಸೌಕರ್ಯ ಮತ್ತು ಪರಿಸರ ವ್ಯವಸ್ಥೆಯನ್ನು ರಚಿಸುತ್ತದೆ.

'ಒಂದು ರಾಷ್ಟ್ರ ಒಂದು ಚುನಾವಣೆ' ಎಂಬ ಸಂಕಲ್ಪದೊಂದಿಗೆ ನಾವು ಮುಂದುವರಿಯುತ್ತೇವೆ ಎಂದು ಅವರು ಹೇಳಿದರು. ದೇಶದ ಹಿತದೃಷ್ಟಿಯಿಂದ ದೊಡ್ಡ ಮತ್ತು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುವುದರಿಂದ ಬಿಜೆಪಿ ಎಂದಿಗೂ ಹಿಂದೆ ಸರಿಯುವುದಿಲ್ಲ ಎಂದು ಪ್ರಧಾನಿ ಮೋದಿ ಹೇಳಿದರು.

ಆಹಾರ ಕೇಂದ್ರ: ಭಾರತವನ್ನು ಆಹಾರ ಸಂಸ್ಕರಣೆಯ ಕೇಂದ್ರವನ್ನಾಗಿ ಮಾಡುವ ತಮ್ಮ ಬದ್ಧತೆಯನ್ನು ಅವರು ಪುನರುಚ್ಚರಿಸಿದರು. ಆಯುಷ್ಮಾನ್ ಭಾರತ್ ಯೋಜನೆಯ ವ್ಯಾಪ್ತಿಗೆ ತೃತೀಯ ಲಿಂಗಿಗಳನ್ನು ಸೇರಿಸಲು ಬಿಜೆಪಿ ಯೋಚಿಸುತ್ತಿದೆ ಎಂದು ಅವರು ಉಲ್ಲೇಖಿಸಿದ್ದಾರೆ.

ಕಳೆದ ದಶಕದಲ್ಲಿ ಸರಿಸುಮಾರು 10 ಕೋಟಿ ಮಹಿಳೆಯರು ಸ್ವಸಹಾಯ ಗುಂಪುಗಳೊಂದಿಗೆ ಸಂಪರ್ಕ ಹೊಂದಿದ್ದಾರೆ ಮತ್ತು 3,00,000 ಗ್ರಾಮೀಣ ಮಹಿಳೆಯರನ್ನು ಬೆಂಬಲಿಸಲು ಬಿಜೆಪಿ ಉದ್ದೇಶಿಸಿದೆ ಎಂದು ಪ್ರಧಾನಿ ಹೇಳಿದರು.

ಬಿಜೆಪಿ ಪ್ರಣಾಳಿಕೆಯು "ಒಂದು ರಾಷ್ಟ್ರ, ಒಂದು ಮತದಾನ' ಉಪಕ್ರಮವನ್ನು ಅನುಷ್ಠಾನಗೊಳಿಸುವುದು, ಸಾಮಾನ್ಯ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು, ರೈಲು ಪ್ರಯಾಣಕ್ಕಾಗಿ ವೈಟಿಂಗ್ ಲಿಸ್ಟ್ ರದ್ದುಗೊಳಿಸುವುದು, 5G ನೆಟ್‌ವರ್ಕ್‌ಗಳ ವಿಸ್ತರಣೆ ಮತ್ತು ಪ್ರಪಂಚದಾದ್ಯಂತ ರಾಮಾಯಣ ಉತ್ಸವಗಳನ್ನು ಆಯೋಜಿಸುವ ಬಗ್ಗೆ ಪ್ರಸ್ತಾಪಿಸುತ್ತದೆ.

ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ ಸಿಂಗ್, ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, ಪಕ್ಷದ ಮುಖಂಡ ಅಶ್ವಿನಿ ವೈಷ್ಣವ್ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಸಂಕಲ್ಪ ಪತ್ರಗಳನ್ನು ವಿತರಿಸಲಾಯಿತು.

ಮೈಸೂರು ಮಿತ್ರ ಸೋಮವಾರ 15 ಏಪ್ರಿಲ್ 2024

600ರಲ್ಲಿ 60 ಭರವಸೆಯನ್ನೂ ಈಡೇರಿಸಿಲ್ಲ

ಬಿಜೆಪಿ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ



ಮಡಿಕೇರಿಯ ಗಾಂಧಿ ಮೈದಾನದಲ್ಲಿ ಭಾನುವಾರ ನಡೆದ ಕಾಂಗ್ರೆಸ್ ಜನಧ್ವನಿ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜನರತ್ತ ಕೈ ಬೀಸಿದರು. ಶಾಸಕರಾದ ಡಾ.ಮಂತರ್‌ಗೌಡ, ಎಸ್.ಪೊನ್ನಣ್ಣ ಇದ್ದರು.

ಮಡಿಕೇರಿ, ಏ.14–2018ರಲ್ಲಿ 600 ಭರವಸೆ ನೀಡಿದ ಬಿಜೆಪಿ 60 ಭರವಸೆಗಳನ್ನೂ ಈಡೇರಿಸಿಲ್ಲ. ಮುಂದೆಯೂ ಈಡೇರಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಮಡಿಕೇರಿಯ ಗಾಲ್ಫ್‌ಗ್ರೌಂಡ್ ಹೆಲಿಪ್ಯಾಡ್‌ನಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಪ್ರಣಾಳಿಕೆಯಲ್ಲಿ ಬಡಕುಟುಂಬಗಳಿಗೆ ಕಡಿಮೆ ಬೆಲೆಗೆ ಗ್ಯಾಸ್, ಯುವಶಕ್ತಿ, ನಾರಿ ಶಕ್ತಿ, ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ಮೊದಲೇ ಮಾಡಿರುವ ಘೋಷಣೆಗಳ ಬಗ್ಗೆ ಚರ್ಚೆಯಾಗಬೇಕು. ವಿದೇಶಗಳಿಂದ ಕಪ್ಪುಹಣ ತಂದುಕೊಟ್ಟರೇ? 2 ಕೋಟಿ ಉದ್ಯೋಗ ಸೃಷ್ಟಿ, ರೈತರ ಆದಾಯ ದುಪ್ಪಟ್ಟು ಮಾಡಿದರೇ? ಮೇಕ್ ಇನ್ ಇಂಡಿಯಾ, ಅಚ್ಛೇದಿನ್ ಆಯೇಗಾ ಎಂದು ಹೇಳಿದ್ದರು. ಆಹಾರ ಪದಾರ್ಥಗಳ ಬೆಲೆ ಕಡಿಮೆಯಾಯಿತೇ? ಎಂದು ಪ್ರಶ್ನಿಸಿದರು.

ಮೋದಿ 10 ವರ್ಷಗಳಲ್ಲಿ ಪ್ರಧಾನಿಯಾಗಿ ಏನು ಮಾಡಿದ್ದಾರೆ? ಎಂದು ಮೊದಲು ಹೇಳಬೇಕು. ಅದರ ಅವಲೋಕನ ನಂತರ ಮುಂದಿನದ್ದು ಹೇಳಬೇಕು. ಬಿಜೆಪಿ ಸರ್ಕಾರ 25 ಕೋಟಿ ಉದ್ಯೋಗ ಸೃಷ್ಟಿಸಿದ್ದಾರೆ ಎಂದು ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ನಿರುದ್ಯೋಗ ಸಮಸ್ಯೆ ಹೆಚ್ಚಾಗಿದೆ. 25 ಕೋಟಿ ಉದ್ಯೋಗ ಯಾರಿಗೆ ಕೊಟ್ಟಿದ್ದಾರೆ ಎಂದರು.

ಶ್ರೀನಿವಾಸ್ ಪ್ರಸಾದ್ ಅವರ ಮನೆಗೆ ಸೋಲುವ ಭಯದಿಂದ ಸಿಎಂ ಭೇಟಿ ನೀಡಿದ್ದಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿರುವ ಬಗ್ಗೆ ಮಾತನಾಡಿದ ಅವರು, ನಾನು ಶ್ರೀನಿವಾಸ ಪ್ರಸಾದ್ ರಾಜಕೀಯದಲ್ಲಿ ಸಮಕಾಲೀನರು. ಅವರು 1974 ರಲ್ಲೇ ವಿಧಾನಸಭೆಗೆ ಸ್ಪರ್ಧಿಸಿದ್ದರು, ನಾವು ಒಟ್ಟಿಗೆ ರಾಜಕಾರಣದಲ್ಲಿದ್ದೆವು. ದೀರ್ಘ ಕಾಲದ ಸ್ನೇಹಿತ. ಅವರು ರಾಜಕೀಯದಿಂದ ನಿವೃತ್ತರಾಗಿ ಯಾವ ಪಕ್ಷಕ್ಕೂ ಬೆಂಬಲ ನೀಡು ವುದಿಲ್ಲ ಎಂದು ಹೇಳಿದ್ದಾರೆ. ಇಂತಹ ಸಂದರ್ಭದಲ್ಲಿ ಭೇಟಿಯಾಗಿ ಅವರ ಆರೋಗ್ಯ ವಿಚಾರಿಸಿದ್ದೇನೆ ಎಂದು ತಿಳಿಸಿದರು.

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳಿಂದಾಗಿ ಹೆಣ್ಣು ಮಕ್ಕಳು ದಾರಿತಪ್ಪಿದ್ದಾರೆ ಎಂದು ಹೇಳಿರುವ ಮಾಜಿ ಸಿಎಂ ಕುಮಾರಸ್ವಾಮಿ ಅವರ ಮನಸ್ಥಿತಿ ಅರ್ಥ ಮಾಡಿಕೊಳ್ಳಬೇಕು, ದಾರಿ ತಪ್ಪಿದ್ದಾರೆ ಎಂದರೇನು? ಅವರ ಹೇಳಿಕೆಯಿಂದ ಹೆಣ್ಣು ಮಕ್ಕಳ ಬಗ್ಗೆ ಅವರಿಗಿರುವ ಭಾವನೆ ಏನು ಎಂದು ಅರ್ಥವಾಗುತ್ತದೆ ಎಂದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿದ್ಯುತ್, ಮದ್ಯ, ಬಸ್, ಸ್ಟಾಂಪ್ ಪೇಪರ್ ಬೆಲೆ ಹೆಚ್ಚು ಮಾಡಿ ಗ್ಯಾರಂಟಿ ಕೊಡುತ್ತಿದ್ದಾರೆ ಎಂದು ಹೇಳಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, ಅದಕ್ಕೆಲ್ಲ ಎಷ್ಟು ದುಡ್ಡು ಬರುತ್ತದೆ ಎಂದು ವಿಜಯೇಂದ್ರಗೆ ತಿಳಿದಿದೆಯೇ? ಗ್ಯಾರಂಟಿಗಳಿಗಾಗಿ ವರ್ಷಕ್ಕೆ 56 ಸಾವಿರ ಕೋಟಿ ಅಗತ್ಯವಿದೆ ಅವುಗಳಿಂದ ಅಷ್ಟು ಹಣ ಬರುತ್ತದೆಯೇ ಎಂದು ಪ್ರಶ್ನಿಸಿದರು.

ಎಚ್ಡಿಕೆ ಹೇಳಿಕೆ ಇಡೀ ಮಹಿಳಾ ಸಮೂಹಕ್ಕೆ ಅವಮಾನ

ಕಾಂಗ್ರೆಸ್ ಪ್ರಚಾರ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಸಮಾಧಾನ

ಮಡಿಕೇರಿ, ಏ.14–ಕಾಂಗ್ರೆಸ್ ಸರ್ಕಾರದ 5 ಗ್ಯಾರಂಟಿಗಳಿಂದ ಹಳ್ಳಿಯ ಹೆಣ್ಣು ಮಕ್ಕಳು ದಾರಿ ತಪ್ಪುತ್ತಿದ್ದಾರೆ ಎಂದು ಹೇಳಿಕೆ ನೀಡುವ ಮೂಲಕ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಇಡೀ ಮಹಿಳಾ ಸಮೂಹ ಮತ್ತು ತಾಯಿ ಚಾಮುಂಡೇಶ್ವರಿಗೆ ಅವಮಾನ ಮಾಡಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಗಾಂಧಿ ಮೈದಾನದಲ್ಲಿ ನಡೆದ ಕಾಂಗ್ರೆಸ್ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಮಹಿಳೆಯರ ಬದುಕನ್ನು ಹಸನಾಗಿಸುವ, ಅವರ ಮನೆಗಳನ್ನು ಬೆಳಗುವ ಯೋಜನೆಗಳ ಬಗ್ಗೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ನೀಡಿರುವ ಹೇಳಿಕೆ ನನ್ನನ್ನ ಅತ್ಯಂತ ದುಃಖಿತನನ್ನಾಗಿ ಮಾಡಿದೆ. ಅವರ ಹೇಳಿಕೆ ಇಡೀ ಮಾನವ ಕುಲಕ್ಕೆ ಮಾಡಿರುವ ಅಪಮಾನವಾಗಿದೆ ಎಂದು ತಿಳಿಸಿದರು.

ಬದುಕನ್ನು ಬದಲಿಸುವ ಪಂಚ ಗ್ಯಾರಂಟಿಗಳ ಪ್ರಯೋಜನವನ್ನು ರಾಜ್ಯದ 1.20 ಕೋಟಿ ಮಹಿಳೆಯರು ಪಡೆದುಕೊಳ್ಳುತ್ತಿದ್ದಾರೆ. ಇವರು ದಾರಿ ತಪ್ಪುತ್ತಿದ್ದಾರಾ ಕುಮಾರಸ್ವಾಮಿಯವರೇ? ಇದಕ್ಕೆ ತಕ್ಕ ಉತ್ತರವನ್ನು ಮತದಾರರು ನೀಡಲಿದ್ದಾರೆ. ಹೋರಾಟ



ಕಾಂಗ್ರೆಸ್ ಸಮಾವೇಶದಲ್ಲಿ ಡಿ.ಕೆ. ಶಿವಕುಮಾರ್ ಮಾತನಾಡಿದರು.

ಮಾಡುವುದು ಸಂವಿಧಾನ ಬದ್ಧ ಹಕ್ಕು. ಹೀಗಾಗಿ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹೇಳಿಕೆಯ ವಿರುದ್ಧ ಸ್ವಾಭಿಮಾನಿ ಮಹಿಳೆಯರು ಹೋರಾಟಕ್ಕೆ ಮುಂದಾಗಬೇಕು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಧರ್ಮದ 'ಕೈ' ಅಧಿಕಾರದಲ್ಲಿರಬೇಕು: ಕಮಲ ಕೆರೆಯಲ್ಲಿರಬೇಕು, ತೆನೆ ಹೊಲದಲ್ಲಿರಬೇಕು ಮತ್ತು ದಾನ ಧರ್ಮಗಳನ್ನು ಮಾಡುವ ಕೈ ಅಧಿಕಾರದಲ್ಲಿರಬೇಕು. ಚುನಾವಣಾ ಪೂರ್ವದಲ್ಲಿ ನೀಡಿದ ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ಅತ್ಯಂತ ವಿಶ್ವಾಸದಿಂದ ಇಂದು ನಿಮ್ಮ ಮುಂದೆ ನಿಂತಿದ್ದೇವೆ. ಕಾಂಗ್ರೆಸ್ ತನ್ನ ಭರವಸೆಗಳನ್ನು ಈಡೇರಿಸಿದ್ದರೆ ಬಿಜೆಪಿ ತಾನು ನುಡಿದಂತೆ ನಡೆದುಕೊಂಡಿದೆಯೇ? ವಿದೇಶದಲ್ಲಿರುವ ಕಪ್ಪು ಹಣವನ್ನು ಮರಳಿ ತಂದು ಪ್ರತಿ ಪ್ರಜೆಗಳ ಖಾತೆಗೆ 15 ಲಕ್ಷ ರೂ. ಹಾಕುವುದಾಗಿ, ರೈತರ ಆದಾಯ ದುಪ್ಪಟ್ಟು, ಪ್ರತಿವರ್ಷ 2 ಕೋಟಿ ಉದ್ಯೋಗ ಸೃಷ್ಟಿಯ ಭರವಸೆಗಳನ್ನು ಈಡೇರಿಸದ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಕೊಟ್ಟ ಮಾತನ್ನು ಉಳಿಸಿಕೊಂಡಿಲ್ಲ ಎಂದು ಟೀಕಿಸಿದರು.

ಗ್ಯಾರಂಟಿಗಳು ನಿಮ್ಮ ಕಣ್ಣಲ್ಲಿದೆ: ಭರವಸೆ ಮತ್ತು ಈಡೇರಿಕೆಗಳ ನಡುವೆ ಕೇವಲ 4 ಬೆರಳಿನ ಅಂತರವಷ್ಟೆ ಇದೆ. ಕಾಂಗ್ರೆಸ್ ಸರ್ಕಾರ ನೀಡಿದ ಗ್ಯಾರಂಟಿಗಳು ಈಡೇರುವ ಮೂಲಕ ಅವುಗಳು ನಿಮ್ಮ ಕಣ್ಣ ಮುಂದೆ ಇವೆ. ಬಿಜೆಪಿ ನೀಡಿದ ಭರವಸೆಗಳು ಕೇವಲ ಕಿವಿಯ ಮೇಲಷ್ಟೇ ಇದ್ದು, ಗ್ಯಾರಂಟಿಗಳಂತೆ ಜಾರಿಯಾಗಿ ಕಣ್ಣ ಮುಂದಿಲ್ಲ ಎಂದರು.

ಸಮಾವೇಶದಲ್ಲಿ ಸಚಿವರಾದ ಹೆಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್, ಶಾಸಕ ಡಾ.ಮಂತರ್‌ಗೌಡ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಕೆಪಿಸಿಸಿ ಚುನಾವಣಾ ಉಸ್ತುವಾರಿ ವಿನಯ್ ಕುಮಾರ್ ಸೊರಕೆ, ಪಕ್ಷ ಮುಖಂಡರಾದ ಮೆಹರೂಜ್ ಖಾನ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ, ಮಾಜಿ ಸಚಿವ ಎಂ.ಸಿ.ನಾಣಯ್ಯ, ಸುಮಾ ವಸಂತ್, ಮಾಜಿ ಶಾಸಕ ಕೆ.ಎಂ. ಇಬ್ರಾಹಿಂ, ವಿಧಾನಪರಿಷತ್ ಮಾಜಿ ಸದಸ್ಯೆ ವೀಣಾ ಅಚ್ಚಯ್ಯ, ಅರುಣ್ ಮಾಚಯ್ಯ, ಹಾಸ್ಯ ನಟ ಸಾಧು ಕೋಕಿಲ, ಮಾಜಿ ಜಿಲ್ಲಾಧ್ಯಕ್ಷ ಕೆ.ಕೆ.ಮಂಜುನಾಥ್, ಜಿಪಂ ಮಾಜಿ ಸದಸ್ಯೆ ಕೆ.ಪಿ.ಚಂದ್ರಕಲಾ, ಉದ್ಯಮಿ ವಿನೋದ್ ಶಿವಪ್ಪ ಮತ್ತಿತರರು ಹಾಜರಿದ್ದರು.

> 'ಜಾತ್ಯತೀತ ಪಕ್ಷ' ಎನ್ನುತ್ತಿದ್ದ ಜೆಡಿಎಸ್, ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವ ಮೂಲಕ 'ಆ ಪಾರ್ಟಿ ಹೋಯ್ತು'. ಲೋಕಸಭಾ ಚುನಾವಣೆಯ ಬಳಿಕ ಆ ಪಾರ್ಟಿ ಇರುತ್ತದೆಯೇ ಎಂಬುದನ್ನು ಹೆಚ್.ಡಿ.ದೇವೇಗೌಡರೇ ತಿಳಿಸಬೇಕು.
> –ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

> ರಾಜ್ಯದ ಸಮಗ್ರ ಅಭಿವೃದ್ಧಿಗೆ ಒತ್ತು ನೀಡುವ ಕೆಲಸವನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ. ಕೊಡಗಿನಲ್ಲಿ ಪ್ರಾಕೃತಿ ವಿಕೋಪವಾದಾಗ ಕೇಂದ್ರ ಸರ್ಕಾರ ಬಿಡಿಗಾಸು ನೀಡಿಲ್ಲ. ರಾಜ್ಯ, ಕೇಂದ್ರ ಸರ್ಕಾರದ ಜೊತೆ ಅನುದಾನಕ್ಕೆ ಬೇಡಬೇಕಾದ ಪರಿಸ್ಥಿತಿಯನ್ನು ಬಿಜೆಪಿ ತಂದಿಟ್ಟಿದೆ. ಸಂಸದರಾಗಿ ಸಂಸತ್‌ನಲ್ಲಿ ಧ್ವನಿ ಎತ್ತಲು ನಮ್ಮ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಬೇಕು.
> –ತನ್ವೀರ್ ಸೇಠ್, ನರಸಿಂಹರಾಜ ಕ್ಷೇತ್ರದ ಶಾಸಕ

> ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಜಿಲ್ಲೆಯ ಬೆಟ್ಟದಂಚಿನ ಗ್ರಾಮಗಳಿಗೂ ತಲುಪಿದ್ದು, ಇದಕ್ಕಿಂತ ಹೆಮ್ಮೆಯ ವಿಚಾರ ಬೇರೊಂದಿಲ್ಲ. ಜಿಲ್ಲೆಯಲ್ಲಿ ದ್ವೇಷದ ರಾಜಕೀಯ ಮಾಡಲಾಗುತ್ತಿದೆ ಎಂದು ಆರೋಪ ಮಾಡಲಾಗುತ್ತಿದೆ. ಇದು ಭೂತದ ಕೈಯಲ್ಲಿ ಭಗವದ್ಗೀತೆ ಹಿಡಿದಂತಿದೆ. ದ್ವೇಷ, ಜಾತಿ, ಧರ್ಮದ ರಾಜಕಾರಣ ಬಿಜೆಪಿಯ ಕೊಡುಗೆಯಾಗಿದೆ. –ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ವಿರಾಜಪೇಟೆ ಶಾಸಕ

> ಮೋದಿ ಹವಾ ಎಲ್ಲೂ ಇಲ್ಲ. ಇಲ್ಲಿ ಕೇವಲ 'ಗ್ಯಾರಂಟಿ' ಯೋಜನೆಗಳ ಹವಾ ಮಾತ್ರ ಇರೋದು. ನಾವುಗಳು ವಿಧಾನಸಭಾ ಚುನಾವಣೆಯಲ್ಲಿ ಪಡೆದ ಮತಕಿಂತ ಹೆಚ್ಚಿನ ಮತಗಳನ್ನು ನೀಡುವ ಮೂಲಕ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸುವ ಜವಾಬ್ದಾರಿ ನಮ್ಮ ಮೇಲಿದೆ. –ಡಾ.ಮಂತರ್‌ಗೌಡ, ಮಡಿಕೇರಿ ಶಾಸಕ

ಸಿಎನ್‌ಸಿಯಿಂದ ಎಡಮ್ಯಾರ್ ಆಚರಣೆ



ಮದೆನಾಡಿನ ಬೆಟ್ಟತ್ತೂರು ಗ್ರಾಮದ ಕೂಪದಿರ ಎನ್.ಮೋಹನ್ ಗದ್ದೆಯಲ್ಲಿ ಎಡಮ್ಯಾರ್ ಆಚರಣೆ ಅಂಗವಾಗಿ ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಕೆಂಪಯ್ಯ ಉಳುಮೆ ಮಾಡಿದರು.

ಮಡಿಕೇರಿ, ಏ.14–ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಕೊಡವರ ಹೊಸವರ್ಷ ಎಡಮ್ಯಾರ್ ಅನ್ನು ಭಾನುವಾರ ಮದೆನಾಡಿನ ಬೆಟ್ಟತ್ತೂರು ಗ್ರಾಮದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಗ್ರಾಮದ ಕೂಪದಿರ ಎನ್.ಮೋಹನ್ ಅವರ ಗದ್ದೆಯಲ್ಲಿ ಭೂ ತಾಯಿಗೆ ಪೂಜೆ ಸಲ್ಲಿಸಿದ ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಕೆಂಪಯ್ಯ, ಜೋಡೆತ್ತುಗಳ ಮೂಲಕ ಉಳುಮೆ ಮಾಡಿದರು. ಭೂ ತಾಯಿ ಹಾಗೂ ಕೊಡವ ಬುಡಕಟ್ಟು ಜನರ ನಡುವಿನ ಅವಿನಾಭಾವ ಸಂಬಂಧವನ್ನು ಪ್ರತಿಪಾದಿಸಿದರು. ಗಾಳಿಯಲ್ಲಿ ಗುಂಡು ಹಾರಿಸಿ ಊರು ಮಂದ್‌ನಲ್ಲಿ ಹಿರಿಯರನ್ನು ಸ್ಮರಿಸಿದರು.

ಪ್ರಕೃತಿ ಆರಾಧಕರಾದ ಕೊಡವರ ವಿಶಿಷ್ಟವಾದ ಆಚರಣೆಯನ್ನು ವಿಶ್ವ ಮಟ್ಟಕ್ಕೆ ಪರಿಚಯಿಸುವ ಸಲುವಾಗಿ ಹೊಸವರ್ಷ ಎಡಮ್ಯಾರ್ ಅನ್ನು ಸಿಎನ್‌ಸಿ ಸಂಘಟನೆ ಪ್ರತಿವರ್ಷ ಆಚರಿಸುತ್ತಿದ್ದು, ಇದು 30ನೇ ವರ್ಷದ ಕಾರ್ಯಕ್ರಮವಾಗಿದೆ. ನಮ್ಮ ಸಂಸ್ಕೃತಿ, ಪರಂಪರೆಯನ್ನು ಈ ರೀತಿ ಪ್ರತಿಬಿಂಬಿಸುವುದರಿಂದ ಕೊಡವರ ಅಸ್ತಿತ್ವದ ಬಗ್ಗೆ ಇಡೀ ವಿಶ್ವಕ್ಕೆ ತಿಳಿಯಲಿದೆ. ಅತ್ಯಂತ ಸೂಕ್ಷ್ಮ ಆದಿಮ ಸಂಜಾತ ಕೊಡವರ ಸ್ಥಿತಿಗತಿಯ ಬಗ್ಗೆ ಅರಿವು ಮೂಡಲಿದ್ದು, ಹಕ್ಕು ಮತ್ತು ಸಂಸ್ಕೃತಿಯ ರಕ್ಷಣೆಗೆ ಸಹಕಾರಿಯಾಗಲಿದೆ ಎಂದು ಎನ್.ಯು.ನಾಚಪ್ಪ ತಿಳಿಸಿದರು.

ಇದೇ ವೇಳೆ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಎನ್.ಯು. ನಾಚಪ್ಪ ಮಾತನಾಡಿ, ಅಂಬೇಡ್ಕರ್ ಸ್ಮರಿಸುವುದು ಮತ್ತು ಜಯಂತಿ ಆಚರಿಸುವುದು ಸಂವಿಧಾನ ಶಿಲ್ಪಿಗೆ ಸಲ್ಲಿಸುವ ಗೌರವವಾಗಿದೆ. ಅಂಬೇಡ್ಕರ್ ರಚಿಸಿದ ಸಂವಿಧಾನ ಕೊಡವ ಬುಡಕಟ್ಟು ಜನರ ಏಕೈಕ ಭರವಸೆಯ ಕಿರಣ ಮತ್ತು ನ್ಯಾಯ ಸಮ್ಮತವಾದ ಕೊಡವರ ಆಶಯಗಳನ್ನು ಸಾಧಿಸಲು ರಾಮಬಾಣವಾಗಿದೆ ಎಂದು ವಿಶ್ಲೇಷಿಸಿದರು.

ಎಡಮ್ಯಾರ್ ಆಚರಣೆ ವೇಳೆ ಕೂಪದಿರ ಮೋಹನ್, ಕೂಪದಿರ ಪುಷ್ಪಾ ಮುತ್ತಪ್ಪ, ಗಂಗವ್ವ, ಭವ್ಯ ಮಾಚಯ್ಯ, ಕೊಂಪ್ಪಿರ ಯಶವಂತ ಕುಮಾರ್, ನಯನಾ ಯಶವಂತ, ಕೂಪದಿರ ಸಾಬು, ಕಾವೇರಮ್ಮ, ವಿಹಾನ್, ವಿನು, ಪ್ರೇಮ್ ಕುಮಾರ್, ಕೆ. ಇರಾ ಜಗತ್ ಮತ್ತಿತರರು ಹಾಜರಿದ್ದರು.

ವಿರಾಜಪೇಟೆಯಲ್ಲಿ ಅಂಬೇಡ್ಕರ್ ಜಯಂತಿ



ವಿರಾಜಪೇಟೆ: ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಅಂಬೇಡ್ಕರ್ ಜಯಂತಿಯನ್ನು ನಗರದ ಪುರಭವನದಲ್ಲಿ ಆಚರಿಸಲಾಯಿತು. ತಹಸೀಲ್ದಾರ್ ರಾಮಚಂದ್ರ ಸಮಾಜ ಕಲ್ಯಾಣ ಇಲಾಖೆ ನಿರ್ದೇಶಕಿ ಪ್ರೀತಿ ಚಿಕ್ಕಮಾದಯ್ಯ, ಪೊನ್ನಂಪೇಟೆ ತಾಪಂ ಇಓ ಮಹೇಶ್ ಹೊಳ್ಳ, ಸಹಾಯಕ ಚುನಾವಣಾಧಿಕಾರಿ ನಾರಾಯಣಸ್ವಾಮಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಪ್ರಕಾಶ್, ಜಿಪಂ ಇಂಜಿನಿಯರ್ ಮಹದೇವ, ಪೊನ್ನಂಪೇಟೆ ತಹಸೀಲ್ದಾರ್ ಮೋಹನ್ ಕುಮಾರ್, ಕಂದಾಯ ಪರಿವೀಕ್ಷಕ ಹರೀಶ್, ಸಮಾಜ ಕಲ್ಯಾಣ ಇಲಾಖೆಯ ಕೆ.ಎಂ.ಸುಮಯ್ಯ, ಬಸಪ್ಪ ಉಪಸ್ಥಿತರಿದ್ದರು.

ಕಾಂಗ್ರೆಸ್ ಕಚೇರಿಯಲ್ಲೂ ಅಂಬೇಡ್ಕರ್ ಜಯಂತಿ



ಚಾಮರಾಜನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಮತ್ತಿತರರು ನಮನ ಸಲ್ಲಿಸಿದರು.

ಚಾಮರಾಜನಗರ, ಏ.14–ಅಂಬೇಡ್ಕರ್ ರಚಿಸಿರುವ ಸಂವಿಧಾನ ಅಪಾಯದಲ್ಲಿದ್ದು, ಅದನ್ನು ರಕ್ಷಿಸಲು ಪ್ರತಿಯೊಬ್ಬರು ಕಾಂಗ್ರೆಸ್ ಬೆಂಬಲಿಸಬೇಕು ಎಂದು ಚಾ.ನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಅನುಯಾಯಿಗಳಾದ ನಾವೆಲ್ಲರೂ ಅವರ ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಳ್ಳುವ ಜೊತೆಗೆ ಅವರ ಹಾದಿಯಲ್ಲೇ ನಡೆಯೋಣ. ಈಗಾಗಲೇ ಬಿಜೆಪಿಯವರು 400ಕ್ಕೂ ಹೆಚ್ಚು ಲೋಕಸಭಾ ಕ್ಷೇತ್ರಗಳಲ್ಲಿ ಗೆದ್ದರೆ ಸಂವಿಧಾನ ಬದಲಾವಣೆ ಮಾಡುತ್ತೇವೆ ಎಂಬ ಮಾತುಗಳನ್ನಾಡುತ್ತಿದ್ದಾರೆ. ಇದರಿಂದ ಎಚ್ಚೆತ್ತು ಸಂವಿಧಾನ ರಕ್ಷಣೆಗೆ ಮುಂದಾಗೋಣ ಎಂದರು.

ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಅಂಬೇಡ್ಕರ್ ಶೋಷಿತ ಸಮಾಜದ ಧ್ವನಿಯಾಗಿ ಎಲ್ಲಾ ವರ್ಗಗಳಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿಕೊಟ್ಟ ಮಹಾನ್ ನಾಯಕರು ಎಂದು ಬಣ್ಣಿಸಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ವಿಶ್ವದಲ್ಲೇ ಅತ್ಯಂತ ಶ್ರೇಷ್ಠವಾದ ಸಂವಿಧಾನ ನೀಡಿದ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಮುನ್ನಡೆಯಬೇಕು. ಅಂಬೇಡ್ಕರ್ ಕೊಡುಗೆಯನ್ನು ಕಾಂಗ್ರೆಸ್ ಸದಾ ಸ್ಮರಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್.ಮಹದೇವ್, ಮಾಜಿ ಸಂಸದ ಎಂ. ಶಿವಣ್ಣ, ಮಾಜಿ ಶಾಸಕ ಜಿ.ಎನ್. ನಂಜುಂಡ ಸ್ವಾಮಿ, ಎಸ್ಸಿ ಘಟಕದ ಅಧ್ಯಕ್ಷ ಸೋಮೇಶ್ವರ್, ಕೊಳ್ಳೇಗಾಲ ನಾಗರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹಮದ್ ಅಸ್ಗರ್, ಎ.ಎಸ್.ಗುರುಸ್ವಾಮಿ, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಅಫ್ಜಲ್ ಷರೀಫ್, ಲಕ್ಷ್ಮಿನಾರಾಯಣ್, ಎಸ್ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಪು.ಶ್ರೀನಿವಾಸನಾಯಕ, ಹಿಂದುಳಿದ ವರ್ಗಗಳ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿ.ಎ.ಮಹದೇವಶೆಟ್ಟಿ, ಜಿಪಂ ಮಾಜಿ ಸದಸ್ಯರಾದ ಸದಾಶಿವ ಮೂರ್ತಿ, ಕೆರೆಹಳ್ಳಿ ನವೀನ್ ಇದ್ದರು.

ಆಡಳಿತ ವ್ಯವಸ್ಥೆಗೆ ಆಧುನಿಕ ಸ್ಪರ್ಶ ನೀಡಿದ ಅಂಬೇಡ್ಕರ್

• ಜಿಲ್ಲಾಧಿಕಾರಿ ಶಿಲ್ಪನಾಗ್ ಸ್ಮರಣೆ • ಚಾ.ನಗರದಲ್ಲಿ ಅಂಬೇಡ್ಕರ್ ಜಯಂತಿ



ಚಾಮರಾಜನಗರದ ಪೇಟೆ ಪ್ರೈಮರಿ ಶಾಲಾ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಶಿಲ್ಪನಾಗ್, ಸುಗತಪಾಲ ಬಂತೇಜಿ ಮತ್ತಿತರರು ಪುಷ್ಪ ನಮನ ಸಲ್ಲಿಸಿದರು.

ಚಾಮರಾಜನಗರ, ಏ.14–ಸಂವಿಧಾನ ಮೂಲಕ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗ ವ್ಯವಸ್ಥೆಯನ್ನು ಹುಟ್ಟುಹಾಕಿ ದೇಶದ ಆಡಳಿತ ವ್ಯವಸ್ಥೆಗೆ ಆಧುನಿಕ ಸ್ಪರ್ಶ ನೀಡಿದ ಡಾ.ಬಿ.ಆರ್.ಅಂಬೇಡ್ಕರ್ ಮಹಾನ್ ಮಾನವತಾವಾದಿ ಆಗಿದ್ದಾರೆ ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಸ್ಮರಿಸಿರು.

ನಗರದ ಪೇಟೆ ಪ್ರೈಮರಿ ಶಾಲಾ ಆವರಣದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಅಂಬೇಡ್ಕರ್ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರ್ ವಿದ್ಯಾರ್ಥಿ ದೆಸೆಯಲ್ಲಿಯಲ್ಲೇ ಬಹುಮುಖ ಹೋರಾಟದ ಪ್ರತಿಭೆಯಾಗಿದ್ದರು. ಸಮಾಜಶಾಸ್ತ್ರ, ನ್ಯಾಯಶಾಸ್ತ್ರ, ಅರ್ಥಶಾಸ್ತ್ರಜ್ಞರು ಆಗಿದ್ದ ಅಂಬೇಡ್ಕರ್ ದೇಶದ ಕಾನೂನು ಸುವ್ಯವಸ್ಥೆಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಲೇಖಕ ಮಲ್ಲುಂಡಿ ಮಹದೇವಸ್ವಾಮಿ ಮಾತನಾಡಿ, 45 ವರ್ಷಗಳ ಸುದೀರ್ಘ ಹೋರಾಟದ ಬದುಕು ಅಂಬೇಡ್ಕರ್ ಅವರದ್ದು. ದೇಶದ ಜನರಿಗೆ ಅಮೂಲ್ಯವಾದ ಹಕ್ಕುಗಳನ್ನು ನೀಡಿದ ಅಂಬೇಡ್ಕರ್, ದೇಶದ ಪ್ರತಿ ಗುಡಿಸಲಿನಲ್ಲೂ ಒಬ್ಬೊಬ್ಬ ಅಂಬೇಡ್ಕರ್ ಹುಟ್ಟುವ ಕನಸು ಕಂಡಿದ್ದರು. ದೇಶದಲ್ಲಿ ಇನ್ನೂ ಜೀವಂತವಾಗಿರುವ ಬಡತನ, ಅಸಮಾನತೆ, ಅತ್ಯಾಚಾರ, ಶೋಷಣೆ ನಿರ್ಮೂಲನೆಗೆ ಅಂಬೇಡ್ಕರ್ ಅವರ ಚಿಂತನೆ, ಮೌಲ್ಯಗಳು ಸಾರ್ವಕಾಲಿಕ ದಾರಿದೀಪಗಳಾಗಿವೆ ಎಂದರು.

ಜಗತ್ತಿನ ಶಾಂತಿಗಾಗಿ ರಾಜಪದವಿಯನ್ನು ಧಿಕ್ಕರಿಸಿದ ಬುದ್ಧ, ಸಾಮಾಜಿಕ ಅಸಮಾನತೆ ವಿರೋಧಿಸಿ ಮಂತ್ರಿ ಪದವಿ ಧಿಕ್ಕರಿಸಿದ ಬಸವಣ್ಣ, ಮಹಿಳೆಯರಿಗೆ ಹಕ್ಕುಗಳನ್ನು ನೀಡಲು ನಿರಾಕರಿಸಿದ ನಿಲುವಿಗೆ ಮಂತ್ರಿ ಪದವಿ ಒಲ್ಲದ ಆಧುನಿಕ ವ್ಯಕ್ತಿ ಅಂಬೇಡ್ಕರ್. ಈ ಮೂರು ವಿಚಾರಗಳಲ್ಲಿ ಸರ್ವರ ಒಳಿತು ಅಡಗಿದೆ. ಈ ಕುರಿತು ಆತ್ಮವಿಮರ್ಶೆ ಮಾಡಬೇಕಾದ ಅಗತ್ಯವಿದೆ. ಅಂಬೇಡ್ಕರ್ ಯಾರೆಂದು ಎಲ್ಲರಿಗೂ ಗೊತ್ತು. ಅಂಬೇಡ್ಕರ್ ಏನು? ಎಂಬುದನ್ನು ಅರಿಯುವ ಅವಶ್ಯವಿದೆ. ಅಂಬೇಡ್ಕರ್ ಬಗ್ಗೆ ಭಾರತೀಯರಿಗಿಂತ ಹೆಚ್ಚಾಗಿ ವಿದೇಶಿಯರು ಅರಿತಿದ್ದಾರೆ. ಅದಕ್ಕಾಗಿಯೇ ಸಾಕಷ್ಟು ರಾಷ್ಟ್ರಗಳಲ್ಲಿ ಅಂಬೇಡ್ಕರ್ ಅವರನ್ನು ಸ್ಮರಿಸಿ ಗೌರವ ಸಲ್ಲಿಸಲಾಗುತ್ತಿದೆ ಎಂದು ಹೇಳಿದರು.

ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕೊಳ್ಳೇಗಾಲದ ಜೇತವನ ಬುದ್ಧ ವಿಹಾರದ ಸುಗತಪಾಲ ಬಂತೇಜಿ ಸಾನಿಧ್ಯ ವಹಿಸಿದ್ದರು. ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉದ್ದೇಶ್, ನಗರಸಭೆ ಪೌರಾಯುಕ್ತ ಎಸ್.ವಿ.ರಾಮದಾಸ್, ಸಮಾಜ ಕಲ್ಯಾಣ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ, ಸಹಾಯಕ ನಿರ್ದೇಶಕ ಚಿಕ್ಕಬಸವಯ್ಯ ಇತರರು ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಡಳಿತ ಭವನದ ಮುಂಭಾಗದ ಅಂಬೇಡ್ಕರ್ ಪ್ರತಿಮೆಗೆ ಜಿಲ್ಲಾಧಿಕಾರಿ ಶಿಲ್ಪನಾಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಹಾಗೂ ಗಣ್ಯರು ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು. ಬಳಿಕ ನಗರದ ಪ್ರವಾಸಿ ಮಂದಿರದಲ್ಲಿ ಅಂಬೇಡ್ಕರ್ ಭಾವಚಿತ್ರ ಮರವಣಿಗೆಗೆ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಂಜುನಾಥ ಪ್ರಸನ್ನ ಚಾಲನೆ ನೀಡಿದರು.



ಕೊಳ್ಳೇಗಾಲ ತಾಲೂಕಿನ ಕುಣಗಳ್ಳಿ ಗ್ರಾಮ ಪಂಚಾಯಿತಿಯಲ್ಲಿ ವಿಶೇಷಚೇತನರು ಹಾಗೂ ಯುವ ಮತದಾರರು ವಿಶಿಷ್ಟವಾಗಿ ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ ಮೂಡಿಸಿದರು. ತಾಪಂ ಸಹಾಯಕ ನಿರ್ದೇಶಕ ಗೋಪಾಲಕೃಷ್ಣ, ಪಿಡಿಓ ಚೆನ್ನೇಶ, ಸಂಜೀವಿನಿ ಯೋಜನೆ ಒಕ್ಕೂಟದ ಸದಸ್ಯರು ಇದ್ದರು.

ಹಾಸ್ಟೆಲ್ ಜಮೀನು ಪರಭಾರೆ: ಮತ್ತೊಬ್ಬ ಬಂಧನ

ಚಾಮರಾಜನಗರ, ಏ.14–ನಗರದ ಬಿ.ರಾಚಯ್ಯ ಜೋಡಿ ರಸ್ತೆಯ ಆದಿಕರ್ನಾಟಕ ಹಾಸ್ಟೆಲ್ (ಕೆ.ಸಿ. ರಂಗಯ್ಯ ಹಾಸ್ಟೆಲ್) ಜಮೀನನ್ನು ನಕಲಿ ದಾಖಲೆ ಸೃಷ್ಟಿಸಿ ಪರಭಾರೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪಟ್ಟಣ ಠಾಣೆ ಪೊಲೀಸರು ಮತ್ತೊಬ್ಬ ಪ್ರಮುಖ ಆರೋಪಿಯನ್ನು ಭಾನುವಾರ ಬಂಧಿಸಿದ್ದಾರೆ.

ಪ್ರಕರಣ ದಾಖಲಾದ ನಂತರ ತಲೆಮರೆಸಿಕೊಂಡಿದ್ದ ತಾಲೂಕಿನ ಕುದೇರು ಗ್ರಾಮದ ಕೆ.ಬಿ.ಹರೀಶನನ್ನು ಪೊಲೀಸರು ಭಾನುವಾರ ಬೆಳಗ್ಗೆ ಬೆಂಗಳೂರಿನಲ್ಲಿ ಬಂಧಿಸಿದ್ದಾರೆ. ಪ್ರಕರಣ ಸಂಬಂಧ ತನಿಖಾಧಿಕಾರಿಗಳು ಅವರನ್ನು ವಿಚಾರಣೆ ನಡೆಸಿದ್ದು, ಸೋಮವಾರ ನ್ಯಾಯಾಲಯಕ್ಕೆ ಹಾಜರು ಪಡಿಸುವ ಸಾಧ್ಯತೆ ಇದೆ.

ಹಾಸ್ಟೆಲ್‌ಗೆ ಸೇರಿದ ಸರ್ವೇ ನಂ.295/4ರ ಎಂಟು ಗುಂಟೆ ಜಮೀನನ್ನು ನಕಲಿ ದಾಖಲೆ ಸೃಷ್ಟಿಸಿ ನಗರದ ಎಸ್.ಸಿ.ಗೋವಿಂದರಾಜು ಅವರಿಗೆ 13.16 ಲಕ್ಷ ರೂ.ಗೆ ಕ್ರಯ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಈ ಪ್ರಕರಣ ಸಂಬಂಧ ಕೆಲ ದಿನಗಳ ಹಿಂದೆ ಪೊಲೀಸರು ಗೋವಿಂದರಾಜುನನ್ನು ಬಂಧಿಸಲಾಗಿತ್ತು. ಉಳಿದ 12 ಆರೋಪಿಗಳು ನಾಪತ್ತೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಾಂಗ್ರೆಸ್‌ನಿಂದ ಅಂಬೇಡ್ಕರ್‌ಗೆ ಅವಮಾನ



ಚಾಮರಾಜನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ಚಾಮರಾಜನಗರ, ಏ.14–ಡಾ.ಬಿ. ಆರ್.ಅಂಬೇಡ್ಕರ್ ಅವರಿಗೆ ಬದುಕಿದ್ದಾಗಲ್ಲೂ, ಸಾವಿನ ನಂತರವೂ ಕಾಂಗ್ರೆಸ್ ಅವಮಾನಿಸುತ್ತಿದೆ ಎಂದು ಕೇಂದ್ರ ಬರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಆರೋಪಿಸಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಅಂಬೇಡ್ಕರ್ ಸಂವಿಧಾನದಡಿ ಸರ್ವರಿಗೂ ಸಮಾನತೆ ನೀಡಿದ್ದಾರೆ. ಆದರೆ, ಕಾಂಗ್ರೆಸ್ ಅವರನ್ನು ಚುನಾವಣೆಯಲ್ಲಿ ಸೋಲಿಸಿತು. ಮರಣದ ನಂತರವೂ ಅಂತ್ಯಸಂಸ್ಕಾರಕ್ಕೆ ಜಾಗ ನೀಡದೆ ಅವಮಾನಿಸಿದೆ ಎಂದರು.

ಬಿಜೆಪಿ ಓಬಿಸಿ ಮೋರ್ಚಾದ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ನೂರೊಂದುಶೆಟ್ಟಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುತ್ತಿದ್ದಾರೆ. ಅಲ್ಲದೆ, ಅಂಬೇಡ್ಕರ್ ಗೌರವಾರ್ಥವಾಗಿ ಐದು ಸ್ಥಳಗಳನ್ನು ಪಂಚತೀರ್ಥವಾಗಿ ಸ್ಥಾಪಿಸುವ ಮೂಲಕ ಗೌರವ ನೀಡಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಶಿವುವಿರಾಟ್, ಎಸ್‌ಸಿ ಮೋರ್ಚಾ ಅಧ್ಯಕ್ಷ ಮೂಡಹಳ್ಳಿ ಎಚ್.ಮೂರ್ತಿ, ಟಗರಪುರ ರೇವಣ್ಣ, ಕಾರ್ಯದರ್ಶಿ ನಟರಾಜು, ಗ್ರಾಮಾಂತರ ಮಂಡಲ ಅಧ್ಯಕ್ಷ ಮಹೇಶ್, ಟೌನ್ ಅಧ್ಯಕ್ಷ ಶಿವರಾಜ್, ಎಸ್‌ಟಿ ಮೋರ್ಚಾ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸೂರ್ಯ ಕುಮಾರ್, ನಗರಸಭಾ ಸದಸ್ಯ ಕುಮುದ ಕೇಶವಮೂರ್ತಿ, ಪ್ರಧಾನ ಕಾರ್ಯದರ್ಶಿ ಮುತ್ತಿಗೆ ಮೂರ್ತಿ, ಖಜಾಂಚಿ ಅರಕಲವಾಡಿ ಮಹದೇವಯ್ಯ ಮತ್ತಿತರರು ಇತರರು.

ನವ ಭಾರತ ನಿರ್ಮಾಣದಲ್ಲಿ ಅಂಬೇಡ್ಕರ್ ಕೊಡುಗೆ ಅಪಾರ

ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅಭಿಮತ



ಮೈಸೂರು, ಏ.14(ಜಿಎ)– ನವ ಭಾರತದ ನಿರ್ಮಾಣದಲ್ಲಿ ಅಂಬೇಡ್ಕರ್ ಅವರ ಕೊಡುಗೆ ಅಪಾರವಾದದ್ದು. ಛಿದ್ರಗೊಂಡಿದ್ದ ಸಮಾಜವನ್ನು ಒಂದು ಗೂಡಿಸುವ ನೆಲೆಗಳನ್ನು ಕಟ್ಟುವಲ್ಲಿ ಅವರ ಪಾತ್ರ ಅವಿಸ್ಮರಣೀಯವಾಗಿದೆ ಎಂದು ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ಹೇಳಿದರು.

ಮೈಸೂರು ವಿವಿಯ ಡಾ.ಬಿ.ಆರ್. ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕದ ಸಹಯೋಗದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತಿ ಅಂಗವಾಗಿ ಭಾನುವಾರ ಮಾನಸಗಂಗೋತ್ರಿಯ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರದ ವಿಶ್ವಜ್ಞಾನಿ ಸಭಾಂಗಣದಲ್ಲಿ ಆಯೋಜಿಸಿದ್ದ 'ಒಳಗೊಳ್ಳುವ ಸಮಾಜದ ರೂವಾರಿಯಾಗಿ ಅಂಬೇಡ್ಕರ್' ಕುರಿತ ವಿಶೇಷ ಉಪನ್ಯಾಸ ಹಾಗೂ ಪಿಎಚ್.ಡಿ, ಸ್ನಾತಕ, ಸ್ನಾತಕೋತ್ತರ ಪದವಿಗಳಲ್ಲಿ ಪ್ರಥಮ ರ್‍ಯಾಂಕ್ ಪಡೆದವರಿಗೆ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬದುಕಿನುದ್ದಕ್ಕೂ ಎಲ್ಲರನ್ನೂ ಒಳಗೊಳ್ಳುವ ಚರಿತ್ರೆಯ ನಿರ್ಮಾಣದ ಹಾದಿಯನ್ನು ನಿರ್ಮಿಸಿ ಪ್ರತಿಯೊಬ್ಬ ಭಾರತೀಯನ ಬೆಳವಣಿಗೆಗೆ ಮುಕ್ತ ಅವಕಾಶವನ್ನು ಕಲ್ಪಿಸಿದ ಕೀರ್ತಿ ಅಂಬೇಡ್ಕರ್ ಅವರದ್ದು, ಅವರು ಭಾರತದ ಸಮಸ್ಯೆಗಳಿಗೆ ತಮ್ಮ ಆಳವಾದ ಅಧ್ಯಯನದ ಮೂಲಕವೇ ಪರಿಹಾರದ ಮಾರ್ಗಗಳನ್ನು ತೋರಿಸಿಕೊಟ್ಟಿದ್ದಾರೆ. ಅಂದು ಅಂಬೇಡ್ಕರ್ ಅವರು ಒಬ್ಬ ವಿದ್ಯಾರ್ಥಿಯಾಗಿ ಭಾರತದಲ್ಲಿ ಅನುಭವಿಸಿದ ಸವಾಲುಗಳನ್ನು ಇಂದಿನ ವಿದ್ಯಾರ್ಥಿಗಳಿಗೆ ಇಲ್ಲದಂತೆ ಮಾಡಿರುವ ಮಹಾನಾಯಕ ಎಂದು ನೆನೆದರು.

ಹೈದರಾಬಾದ್ ಕೇಂದ್ರೀಯ ವಿವಿಯ ಕುಲಪತಿ ಪ್ರೊ.ಪಿ.ತಿರುಮಾಳ್, ಮೈಸೂರು ವಿವಿಯ ಪರೀಕ್ಷಾಂಗ ಕುಲಸಚಿವ ಡಾ.ಬಸಪ್ಪ ಮಾತನಾಡಿದರು. ಮೈಸೂರು ವಿವಿಯ ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಪೀಠದ ಸಂದರ್ಶಕ ಪ್ರಾಧ್ಯಾಪಕರಾದ ಪ್ರೊ.ಆರ್.ಇಂದಿರಾ ಅಧ್ಯಕ್ಷತೆ ವಹಿಸಿ ದ್ದರು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕದ ಉಪಕುಲ ಸಚಿವ ಎನ್.ಎಸ್.ಚಿದಾನಂದ ಮೂರ್ತಿ, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರದ ನಿರ್ದೇಶಕ ಪ್ರೊ.ಜೆ.ಸೋಮಶೇಖರ್, ಪ್ರೊ.ನರೇಂದ್ರ ಕುಮಾರ್ ಉಪಸ್ಥಿತರಿದ್ದರು.

ನಿರ್ಮಾಪಕ ಸೌಂದರ್ಯ ಜಗದೀಶ್ ಆತ್ಮಹತ್ಯೆ



ಬೆಂಗಳೂರು, ಏ.14– ಮಹಾಲಕ್ಷ್ಮಿ ಲೇಔಟ್ ಠಾಣೆ ವ್ಯಾಪ್ತಿಯಲ್ಲಿ ನೆಲೆಸಿದ್ದ ಸಿನಿಮಾ ನಿರ್ಮಾಪಕ ಹಾಗೂ ಉದ್ಯಮಿ ಸೌಂದರ್ಯ ಜಗದೀಶ್ ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಹಾಲಕ್ಷ್ಮಿ ಲೇಔಟ್‌ನಲ್ಲಿರುವ ಮನೆಯಲ್ಲಿ ಅವರು ಆತ್ಮಹತ್ಯೆಗೆ ಶರಣಾಗಿದ್ದು, ಕುಟುಂಬಸ್ಥರ ಹೇಳಿಕೆ ಪಡೆದು ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದರು.

ಸಿನಿಮಾ ನಿರ್ಮಾಪಕರಾಗಿದ್ದ ಇವರು ಅಪ್ಪು ಮತ್ತು ಪಪ್ಪು, ಮಸ್ತ್ ಮಜಾ ಮಾಡಿ, ರಾಮ್‌ಲೀಲಾ, ಸ್ನೇಹಿತರು ಹಾಗೂ ಇತರೆ ಸಿನಿಮಾ ನಿರ್ಮಿಸಿದ್ದರು.

ರಾಜಾಜಿನಗರದ ಡಾ. ರಾಜ್‌ಕುಮಾರ್ ರಸ್ತೆಯಲ್ಲಿ ಜೆಟ್‌ಲಾಗ್ ರೆಸ್ಟೊ ಬಾರ್ ಸಹ ನಡೆಸುತ್ತಿದ್ದರು. ನಟ ದರ್ಶನ್ ಅಭಿನಯದ ಕಾಟೇರ ಸಿನಿಮಾ ಬಿಡುಗಡೆ ಸಂದರ್ಭದಲ್ಲಿ ಇದೇ ಬಾರ್‌ನಲ್ಲಿ ರಾತ್ರಿ ಪಾರ್ಟಿ ನಡೆದಿತ್ತು. ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು, ರೆಸ್ಟೋರೆಂಟ್ ಮತ್ತು ಬಾರ್ ಬಂದ್ ಮಾಡಿಸಿದ್ದರು. ಜೊತೆಗೆ, ಸೌಂದರ್ಯ ಜಗದೀಶ್ ಹಾಗೂ ಪತ್ನಿ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು

ಹಣಕಾಸು ವ್ಯವಹಾರದಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿ ಸೌಂದರ್ಯ ಜಗದೀಶ್ ಆತ್ಮಹತ್ಯೆಗೆ ಶರಣಾಗಿರುವ ಮಾಹಿತಿ ಇದೆ. ಸಾವಿನ ಬಗ್ಗೆ ತನಿಖೆ ಮುಂದುವರಿಸಲಾಗಿದೆ ಎಂದು ಪೊಲೀಸರು ಹೇಳಿದರು



ಭಾನುವಾರ ಒಕ್ಕಲಿಗ ಮುಖಂಡರ ಸಭೆಯಲ್ಲಿ ಪಾಲ್ಗೊಳ್ಳಲು ಮೈಸೂರಿಗೆ ಆಗಮಿಸಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಶಾಸಕ ಕೆ.ಹರೀಶ್‌ಗೌಡ, ಕೆ.ಜಿ.ಕೊಪ್ಪಲು ಯುವ ಮುಖಂಡರಾದ ಕೊಪ್ಪಲು ಭಾಸ್ಕರ್, ಒಕ್ಕಲಿಗರ ಸಂಘದ ಸಿ.ಜಿ.ಗಂಗಾಧರ್, ಲೋಕೇಶ್, ಶ್ರೀಧರ್, ರಾಘು, ರಾಜೇಶ್, ಕೌಶಿಕ್, ಸೋಮು ಇತರರು ಭಾರೀ ಹಾರ ಹಾಕಿ ಅಭಿನಂದಿಸಿದರು.

ಕರ್ನಾಟಕ ಪ್ರಜಾ ಪಾರ್ಟಿ (ರೈತ ಪರ್ವ)ಯೇ ರಾಜ್ಯದ ಏಕೈಕ ಪ್ರಾದೇಶಿಕ ಪಕ್ಷ



ಮೈಸೂರು, ಏ.14– ಕರ್ನಾಟಕ ಪ್ರಜಾ ಪಾರ್ಟಿ (ರೈತ ಪರ್ವ)ಯೇ ರಾಜ್ಯದ ಏಕೈಕ ಪ್ರಾದೇಶಿಕ ಪಕ್ಷ ಎಂದು ಪಕ್ಷದ ಸಂಸ್ಥಾಪಕ ರಾಜ್ಯಾಧ್ಯಕ್ಷ ಬಿ.ಶಿವಣ್ಣ ಹೇಳಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಹಿಂದೆ ರಾಜ್ಯದಲ್ಲಿ ಇದ್ದಂತಹ ಜೆಡಿಎಸ್ ಪಕ್ಷವು ಎನ್‌ಡಿಎ ಮೈತ್ರಿಕೂಟದ ಪಕ್ಷವಾಗಿರುವುದರಿಂದ ಅದರ ಪ್ರಾದೇಶಿಕ ಸ್ವರೂಪವನ್ನು ಕಳೆದುಕೊಂಡಂತಾಗಿದ್ದು, ನಮ್ಮ ಪಕ್ಷವೇ ರಾಜ್ಯದ ಏಕೈಕ ಪ್ರಾದೇಶಿಕ ಪಕ್ಷ ಎಂದಿದ್ದಾರೆ.

ಆದ್ದರಿಂದ ಲೋಕಸಭಾ ಚುನಾವಣೆಯಲ್ಲಿ ಎಲ್ಲೆಲ್ಲಿ ನಾವು ಅಭ್ಯರ್ಥಿಗಳನ್ನು ಹಾಕಿರುತ್ತೇವೋ ಅವರನ್ನು ಜಯಶೀಲರನ್ನಾಗಿ ಮಾಡಬೇಕೆಂದು ಮನವಿ ಮಾಡಿದ್ದಾರೆ.



ಡಾ.ಬಿ.ಆರ್.ಅಂಬೇಡ್ಕರ್‌ರವರ 133ನೇ ಜಯಂತಿ ಪ್ರಯುಕ್ತ ಮೈಸೂರು ಹೋಟೆಲ್ ಮಾಲೀಕರ ಸಂಘದಿಂದ ಟೌನ್‌ಹಾಲ್‌ನಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ನಾರಾಯಣಗೌಡ, ಸದಸ್ಯರುಗಳಾದ ಎ.ಸಿ.ರವಿ, ರಾಜೇಶ್, ಮಾದೇವ, ಚಂದ್ರ, ರಮೇಶ ಇನ್ನಿತರರಿದ್ದರು.

ಒಂದನೇ ಪುಟದಿಂದ

ಸಫಲವಾಗದು...

ತುಕ್ಡೇ ಗ್ಯಾಂಗ್‌ಗೆ ಪಾಠ ಕಲಿಸಿ: ಕಾಂಗ್ರೆಸ್ ದೇಶದಲ್ಲಿ ಅಪಾಯಕಾರಿ ಹೆಜ್ಜೆ ಹಾಕುತ್ತಿದೆ. ದೇಶ ಒಡೆಯುವ, ದುರ್ಬಲಗೊಳಿಸುವ ಕೆಲಸವನ್ನು ವ್ಯವಸ್ಥಿತವಾಗಿ ಮಾಡಿಕೊಂಡು ಬರುತ್ತಿದೆ. ಆರ್ಟಿಕಲ್ 370 ರದ್ದುಪಡಿಸಿದಾಗ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರು ಕಾಶ್ಮೀರಕ್ಕೂ ಇತರೆ ರಾಜ್ಯಗಳಿಗೂ ಏನು ಸಂಬಂಧ ಎಂದು ಪ್ರಶ್ನಿಸಿದ್ದರು. ಭಾರತದ ವಿರುದ್ಧವಾಗಿ ಮಾತನಾಡುವವರಿಗೆ ಕಾಂಗ್ರೆಸ್ ಪುರಸ್ಕಾರ ನೀಡುತ್ತದೆ. ದೇಶ ಒಡೆಯುವುದು ಕಾಂಗ್ರೆಸ್‌ನ ಖತರ್ನಾಕ್ ಸಂಚು. ಭಾರತದ ಕೀರ್ತಿ ಪತಾಕೆ ವಿಶ್ವದೆಲ್ಲೆಡೆ ಪಸರಿಸುತ್ತಿದೆ. ಆದರೆ ಕಾಂಗ್ರೆಸ್ ನಾಯಕರು ವಿದೇಶಗಳಿಗೆ ಹೋದಾಗ ಭಾರತವನ್ನು ಕೀಳುಮಟ್ಟದಲ್ಲಿ ಬಿಂಬಿಸುವ ಯಾವ ಅವಕಾಶಗಳನ್ನೂ ಬಿಡುವುದಿಲ್ಲ.

ಭಾರತೀಯ ಸೇನೆಯ ಸರ್ಜಿಕಲ್ ಸ್ಟ್ರೈಕ್ ಬಗ್ಗೆಯೂ ಸಾಕ್ಷಿ ಕೇಳಿದ್ದರು. ಕರ್ನಾಟಕದಲ್ಲಿ ಧಾರ್ಮಿಕ ಸಂಘರ್ಷಗಳಿಗೆ ಅವಕಾಶ ಮಾಡಿಕೊಟ್ಟಿದೆ. ಆತಂಕವಾದಿಗಳೊಂದಿಗೆ ಕೈಜೋಡಿಸಿದೆ. ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ನಿರ್ಮಿಸುವ ಐನೂರು ವರ್ಷಗಳ ಕನಸು ಕಳೆದ ಜ.22ರಂದು ಸಾಕಾರವಾಯಿತು. ಆದರೆ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ಕಾಂಗ್ರೆಸ್‌ನವರು ಬೈಕಾಟ್ (ಬಹಿಷ್ಕಾರ) ಮಾಡಿದರು. ಕಾಂಗ್ರೆಸ್ ಪಕ್ಷ ತುಕ್ಡೆ ತುಕ್ಡೆ ಗ್ಯಾಂಗ್‌ನ ಸುಲ್ತಾನ್ ಆಗುತ್ತಿದೆ. ಇಂತಹ ಪಕ್ಷವನ್ನು ನೀವು ಬೆಂಬಲಿಸುತ್ತೀರಾ? ಅವರನ್ನು ನೀವು ಕ್ಷಮಿಸುತ್ತೀರಾ? ಕಾಂಗ್ರೆಸ್‌ನ ಆಟ ಮಿತಿಮೀರಿದೆ. ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿ ಎಂದು ಮನವಿ ಮಾಡಿದರು.

ನಿಮ್ಮ ಮತದಿಂದ ತಾಕತ್ತು: ಬಿಜೆಪಿ ಪಕ್ಷದ ಸಂಕಲ್ಪ ಪತ್ರವೇ ಮೋದಿ ಗ್ಯಾರಂಟಿ. ಬಡವರಿಗೆ ಮೂರು ಕೋಟಿ ಮನೆಗಳ ನಿರ್ಮಾಣ, ಪ್ರತಿ ಬಡ ಕುಟುಂಬಕ್ಕೂ 5 ವರ್ಷ ಉಚಿತ ಪಡಿತರ ಕಾರ್ಯಕ್ರಮ ವಿಸ್ತರಣೆ, 70 ವರ್ಷ ಮೇಲ್ಪಟ್ಟ ಹಿರಿಯರಿಗೆ ಆಯುಷ್ಮಾನ್ ಯೋಜನೆಯಡಿ ಉಚಿತ ಚಿಕಿತ್ಸೆ ದೊರಕಲಿದೆ. ಇವೆಲ್ಲಾ ಕೇವಲ ಘೋಷಣೆಯಲ್ಲ. ಇದು ಮೋದಿ ಗ್ಯಾರಂಟಿ. ಇದಕ್ಕೆ ನಿಮ್ಮ ಒಂದು ಮತದಿಂದ ಶಕ್ತಿ ಹಾಗೂ ಹುಮ್ಮಸ್ಸು ಹೆಚ್ಚುತ್ತದೆ. ದೇಶದ ಅತ್ಯಂತ ಹಿರಿಯ ರಾಜಕಾರಣಿ ಹೆಚ್.ಡಿ.ದೇವೇಗೌಡರು, ಬಿ.ಎಸ್.ಯಡಿಯೂರಪ್ಪನವರ ಸಮರ್ಥ ನಾಯಕತ್ವ, ಕುಮಾರಸ್ವಾಮಿ ಅವರ ಸಹಯೋಗವಿದೆ. ಇಂತಹವರ ಅನುಭವ ಕರ್ನಾಟಕದ ಅಭಿವೃದ್ಧಿಗೆ ಸಹಕಾರಿಯಾಗಿದೆ. ಈಗಾಗಲೇ ಡಿಜಿಟಲ್ ಇಂಡಿಯಾದಿಂದ ನಮ್ಮ ಬದುಕು ಬದಲಾಗಿದೆ. ಎಕ್ಸ್‌ಪ್ರೆಸ್ ವೇ, ವಾಯು ಹಾಗೂ ಜಲ ಸಂಪರ್ಕದಲ್ಲಿ ಕ್ರಾಂತಿ ಮಾಡಿದ್ದೇವೆ. ತಂತ್ರಜ್ಞಾನಕ್ಕೆ ಬೇರೆ ದೇಶಗಳ ಅವಲಂಬಿಸುವ ಪರಿಸ್ಥಿತಿ ಬದಲಾಗಿದೆ. ನಾವೇ ಚಂದ್ರಯಾನದಲ್ಲಿ ಯಶಸ್ವಿಯಾಗಿದ್ದೇವೆ. ವಿಶ್ವದ ಅತಿದೊಡ್ಡ ಇನ್ನೋವೇಷನ್ ಹಬ್ ಆಗಿ ಭಾರತ ಪರಿವರ್ತನೆ ಆಗುತ್ತಿದೆ. ನೀವು ನಿಮ್ಮ ಊರಿಗೆ ಹೋಗಿ ಪ್ರತಿಯೊಬ್ಬರಿಗೂ ಮೋದಿ ಸಂಕಲ್ಪ ಹಾಗೂ ಪ್ರಣಾಮವನ್ನು ತಿಳಿಸಿ, ಎನ್‌ಡಿಎ ಅಭ್ಯರ್ಥಿಗಳನ್ನು ಬೆಂಬಲಿಸಲು ಕೇಳಬೇಕೆಂದು ಮನವಿ ಮಾಡಿದರು.

2047ರ ವಿಕಸಿತ ಭಾರತಕ್ಕೆ ಶ್ರಮ: ಬಂಧುಗಳೇ 2024ರ ಲೋಕಸಭಾ ಚುನಾವಣೆ ಐದು ವರ್ಷಕ್ಕೆ ಸೀಮಿತವಲ್ಲ, ಇದು 2047ರ ವಿಕಸಿತ ಭಾರತದ ಭವಿಷ್ಯ. 2047ರ ವಿಕಸಿತ ಭಾರತಕ್ಕೆ ದಿನದ 24 ಗಂಟೆ ಕೆಲಸ ಮಾಡುತ್ತೇನೆ. ಪಿಎಂ ಆವಾಜ್ ಯೋಜನೆ, ಹೈವೇ ಯೋಜನೆ, ವಂದೇ ಭಾರತ್ ರೈಲು ಸೇವೆ, ಜಲಜೀವನ್ ಮಿಷನ್ ಸೇರಿದಂತೆ ಎಲ್ಲಾ ಕಾರ್ಯಕ್ರಮಗಳೂ ಕರ್ನಾಟಕದ ಜನರಿಗೂ ತಲುಪಿವೆ. ನಾನು ನನ್ನ ಕರ್ತವ್ಯ ನಿರ್ವಹಿಸಿ ಎಲ್ಲದಕ್ಕೂ ಲೆಕ್ಕ ಕೊಟ್ಟಿದ್ದೇನೆ. ಆದರೆ ಕಾಂಗ್ರೆಸ್ ಆರು ದಶಕದ ಆಡಳಿತದ ಲೆಕ್ಕ ಕೊಟ್ಟಿದ್ದೇಯೇ? ಎಂದು ಪ್ರಶ್ನಿಸಿದರು.

ನಾವು 24 ಸ್ಥಾನದ ಕೊಡುಗೆ ನೀಡಬೇಕು



ಸಂಕಲ್ಪ ಸಮಾವೇಶ'ದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಸಮ್ಮುಖದಲ್ಲಿ 91 ವರ್ಷದ, ವಯೋಸಹಜ ಅನಾರೋಗ್ಯ ಸಮಸ್ಯೆ ಎದುರಿಸುತ್ತಿರುವ ಮಾಜಿ ಪ್ರಧಾನಿ ದೇವೇಗೌಡರು ತಮ್ಮ ಅದ್ಭುತ ಭಾಷಣದ ಮೂಲಕ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಬಿಜೆಪಿ-ಜೆಡಿಎಸ್ ಕಾರ್ಯಕರ್ತರು, ಜನತೆಯಲ್ಲಿ ಉತ್ಸಾಹ ತುಂಬಿದರು. ರಾಷ್ಟ್ರದ ಆರ್ಥಿಕ ಪರಿಸ್ಥಿತಿಯನ್ನು 5ನೇ ಸ್ಥಾನದಿಂದ 3ನೇ ಸ್ಥಾನಕ್ಕೆ ತರುವ ಶಪಥವನ್ನು ನರೇಂದ್ರ ಮೋದಿಯವರೇ ತಾವು ಮಾಡಿದ್ದೀರಿ. ಅದಕ್ಕೆ ನಮ್ಮ ಕೊಡುಗೆ ಕೇವಲ ಮೂರು ಜೆಡಿಎಸ್ ಸ್ಥಾನಗಳು ಮಾತ್ರವಲ್ಲ, 24 ಎನ್‌ಡಿಎ ಅಭ್ಯರ್ಥಿಗಳ ಗೆಲುವು ಆಗಲೇಬೇಕು. ಆ ನಿಟ್ಟಿನಲ್ಲಿ ಕೆಲಸ ಮಾಡುವುದು ಯಡಿಯೂರಪ್ಪನವರೇ ನಮ್ಮ ಜವಾಬ್ದಾರಿ. ನಾವು ಆ ಕೆಲಸ ಮಾಡೋಣ ಎಂದು ವೇದಿಕೆಯಲ್ಲೇ ಇದ್ದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪರನ್ನು ಉದ್ದೇಶಿಸಿ ದೇವೇಗೌಡರು ಹೇಳಿದರು.

ಈ ರಾಷ್ಟ್ರವನ್ನು ಸಮರ್ಥವಾಗಿ ನಡೆಸುವಂತಹ ಶಕ್ತಿ ಎನ್‌ಡಿಎನಲ್ಲಿ ಒಬ್ಬರಿಗೆ ಇದ್ದು, ಅದು ನರೇಂದ್ರ ಮೋದಿ ಅವರು. ಈ ಬೃಹತ್ ಸಮಾವೇಶದಲ್ಲಿ ನಾನು ನಾಲ್ಕು ಲೋಕಸಭಾ ಕ್ಷೇತ್ರಕ್ಕೆ ಸೀಮಿತವಾಗಲ್ಲ. ನಿಮ್ಮಲ್ಲಿ ನಾನು ಕೈ ಮುಗಿದು ಪ್ರಾರ್ಥನೆ ಮಾಡುತ್ತೇನೆ. ರಾಜ್ಯದಲ್ಲಿ ಎನ್‌ಡಿಎ ಅಭ್ಯರ್ಥಿಗಳನ್ನು ಬೆಂಬಲಿಸಿ ಎಂದು ಮತದಾರರಲ್ಲಿ ಮನವಿ ಮಾಡಿದರು. 10 ವರ್ಷಗಳ ಕಾಲ ರಾಷ್ಟ್ರದ ಪ್ರಧಾನ ಮಂತ್ರಿಯಾಗಿ ಇಡೀ ರಾಷ್ಟ್ರಕ್ಕೆ ಗೌರವ ತಂದುಕೊಟ್ಟ ಒಬ್ಬ ವ್ಯಕ್ತಿ ಯಾರಾದರೂ ಇದ್ದರೆ ನನ್ನ ಪಕ್ಕದಲ್ಲೇ ಕುಳಿತಿದ್ದಾರೆ ಅವರೇ ನರೇಂದ್ರ ಮೋದಿ. ಅವರು ಯಶಸ್ವಿ ಆಡಳಿತ ನೀಡಿದ್ದಾರೆ. ಅವರು ವೇದಿಕೆಗೆ ಬಂದಾಗ, ನಾನು ಎದ್ದು ನಿಂತು ಗೌರವ ಸಲ್ಲಿಸಲು ಸಾಧ್ಯವಾಗಲಿಲ್ಲ. ಕಾರಣ ನನಗೆ ಮಂಡಿ ನೋವು ಇದೆ. ಕ್ಷಮಿಸಬೇಕೆಂದು ಅವರಲ್ಲಿ ಪ್ರಾರ್ಥನೆ ಮಾಡುತ್ತೇನೆ ಎಂದರು. ಕಳೆದ ವಿಧಾನ ಸಭಾ ಚುನಾವಣೆಯ ಸಂದರ್ಭದಲ್ಲಿ ಕೇವಲ ಒಂದೆರಡು ದಿನಗಳ ಮಧ್ಯೆ 2 ಸಾವಿರ ರೂ.ಗಳ ಗ್ಯಾರಂಟಿ ಕೊಡುವುದೂ ಸೇರಿದಂತೆ ಐದು ಗ್ಯಾರಂಟಿಗಳನ್ನು ಕೊಡುವುದಾಗಿ ಹೇಳಿ ಈ ರಾಜ್ಯದಲ್ಲಿ 136 ಸ್ಥಾನಗಳನ್ನು ಗೆದ್ದಂತಹ ಇಬ್ಬರು ಮಹನೀಯರು ಇದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೆಸರೇಳದೇ ವ್ಯಂಗ್ಯವಾಡಿದರು.

ರಾಜ್ಯ ಲೂಟಿ ಆಗುತ್ತಿದೆ: ಇಂದಿನ ಆಡಳಿತದಲ್ಲಿ ಈ ರಾಜ್ಯ ಹೇಗೆ ನಡೆಯುತ್ತಿದೆ ಎಂದು ನೋಡಿದರೆ ಆತಂಕ ಉಂಟಾಗುತ್ತದೆ. ನನ್ನ 64 ವರ್ಷಗಳ ರಾಜಕೀಯ ಜೀವನದಲ್ಲಿ ನೋಡದಂತಹ ಲೂಟಿ ಇಂದು ನಡೆಯುತ್ತಿದೆ. ಬೆಂಗಳೂರು ನಗರ, ಬಿಡಿಎ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಯೋಜನಾ ಪ್ರಾಧಿಕಾರ, ಅದರ ಜೊತೆಗೆ ನೀರಾವರಿ ಇಲಾಖೆಯನ್ನು ಬಾಚಿ ಬಾಚಿ ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್‌ಗಡಕ್ಕೆ ಕರ್ನಾಟಕ ಜನರ ಸಂಪತ್ತು ಕಳುಹಿಸಲಾಗುತ್ತಿದೆ. ಆ ಮೂಲಕ ಬಿಜೆಪಿಯನ್ನು ಸೋಲಿಸಲೇಬೇಕೆಂದು ಹೊರಟಿದ್ದಾರೆ ಎಂದು ಕಿಡಿಕಾರಿದರು.

ಲೂಟಿ ತಪ್ಪಿಸಲು ಮೋದಿಯವರ ಜೊತೆಗೆ ಹೋಗೆಂದೆ: ದೇವೇಗೌಡರು ಈ 91ನೇ ವಯಸ್ಸಿನಲ್ಲಿ ಬಿಜೆಪಿ ಜೊತೆ ಹೋಗಿದ್ದಾರೆ ಎಂತಹ ದುರ್ದೈವ ಎಂದು ಹೇಳಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಈ ದೇಶವನ್ನು ಉತ್ತಮವಾಗಿ ಮುನ್ನಡೆಸಿ, ದೇಶಕ್ಕೆ ಕೀರ್ತಿ ತಂದುಕೊಟ್ಟ ವ್ಯಕ್ತಿ ಅವರು ನರೇಂದ್ರ ಮೋದಿ. ಇದನ್ನು ನನ್ನ ರಾಜಕೀಯ ಅನುಭವದಲ್ಲಿ ಹೇಳುತ್ತಿದ್ದಾನೆ. ಕುಮಾರಸ್ವಾಮಿಯನ್ನು ನೀನು ಮೋದಿಯವರ ಜೊತೆಗೆ ಹೋಗು ಎಂದು ನನ್ನ ತಲೆಯಲ್ಲಿ ಬುದ್ಧಿ ಇಲ್ಲದೇ ಹೇಳಿದ್ದಲ್ಲ. ಈ ರಾಜ್ಯವನ್ನು ಲೂಟಿ ಮಾಡುತ್ತಿದ್ದು, ಇದನ್ನು ತಪ್ಪಿಸಲು ಕುಮಾರಸ್ವಾಮಿಗೆ ನೀನು ಮೋದಿಯವರ ಜೊತೆಗೆ ಹೋಗೆಂದು, ನಾನೇ ಅನುಮತಿ ಕೊಟ್ಟೆ ಎಂದು ಹೇಳಿದರು.

ನನ್ನ ಪಕ್ಕದಲ್ಲಿ ಯದುವೀರ್ ಕುಳಿತಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ರಾಜರ್ಷಿ ಎಂದೇ ಖ್ಯಾತನಾಮರಾದವರು. ಅವರು ಈ ರಾಜ್ಯಕ್ಕೆ ಎಷ್ಟೆಲ್ಲಾ ಕೊಡುಗೆ ನೀಡಿದ್ದಾರೆ. ಆದರೆ ಈಗ ಇಬ್ಬರು ಮಹಾನುಭಾವರು ಇದ್ದಾರೆ. ಆ ಪುಣ್ಯಾತ್ಮರಿಗೆ ನಮೋ ನಮಃ ಎಂದು ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ವಿರುದ್ಧ ಅವರ ಹೆಸರೇಳದೇ ಕಿಡಿಕಾರಿದರು. ರಾಜ್ಯದ ತುಮಕೂರು, ರಾಯಚೂರು, ಬಿಜಾಪುರ ಯಾವುದೇ ಇರಬಹುದು. ಯಡಿಯೂರಪ್ಪನವರೇ ನೀವು ಕರೆದಲ್ಲಿಗೆ ಬರುತ್ತಾನೆ. ನನಗೆ ಆ ಶಕ್ತಿ ಇದೆ. ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಲು ಈ ರಾಜ್ಯದಿಂದ ಕನಿಷ್ಠ 24 ಸ್ಥಾನಗಳನ್ನು ನಾವು ಎನ್‌ಡಿಎಯಿಂದ ಗೆಲ್ಲಬೇಕು ಎಂದು ಹೇಳಿ, ಜೈ ಹಿಂದ್ ಜೈ ಭಾರತ್ ಎಂದು ಹೇಳುವ ಮೂಲಕ ತಮ್ಮ ಭಾಷಣ ಅಂತ್ಯಗೊಳಿಸಿದರು.

6 ಕೋಟಿ ಜನತೆ ಮುಖ್ಯಮಂತ್ರಿ 140 ಕೋಟಿ ಪ್ರಧಾನಿ ಬಗ್ಗೆ ಲಘುವಾಗಿ ಮಾತಾಡ್ತಾರೆ!

ಮೋದಿಯವರ ಬಗ್ಗೆ ರಾಜ್ಯದ ಒಬ್ಬ ಮುಖ್ಯಮಂತ್ರಿ ಲಘುವಾಗಿ ಮಾತನಾಡುತ್ತಾರೆ. ಕೇವಲ 6 ಕೋಟಿ ಜನತೆಯ ಮುಖ್ಯಮಂತ್ರಿ, 140 ಕೋಟಿ ಜನತೆಯ ಪ್ರಧಾನಿ ಬಗ್ಗೆ ಲಘುವಾಗಿ ಮಾತನಾಡುತ್ತಾರೆ ಎಂದರೆ ಎಷ್ಟು ಸರಿ? ಎಂದು ಸಿದ್ದರಾಮಯ್ಯ ಅವರ ಬಗ್ಗೆ ಹೆಚ್.ಡಿ.ದೇವೇಗೌಡರು ಅಸಮಾಧಾನ ವ್ಯಕ್ತಪಡಿಸಿದರು.

ವಯೋಸಹಜ ಆರೋಗ್ಯ ಸಮಸ್ಯೆ ಗಳನ್ನು ಹೊಂದಿರುವ 91 ವರ್ಷದ ಹೆಚ್.ಡಿ.ದೇವೇಗೌಡರು, ಇಂದು ಪ್ರಧಾನಿ ಮೋದಿಯವರ ಸಮ್ಮುಖದಲ್ಲಿ ಮಾಡಿದಂತಹ ಭಾಷಣ ಅವರ ಅತ್ಯುತ್ತಮ ಸಾರ್ವಜನಿಕ ರಾಜಕೀಯ ಭಾಷಣವಾಗಿತ್ತು. ಯಾವ ವಿಷಯವನ್ನು ಯಾವ ಪ್ರಮಾಣದಲ್ಲಿ ಪ್ರಸ್ತುತಪಡಿಸಬೇಕೆಂಬ ನಿಖರತೆಯು ಅವರ ವಾಗ್ಝರಿಯಲ್ಲಿ ಗೋಚರಿಸುತ್ತಿತ್ತು. ಸೂಕ್ತ ರೀತಿಯಲ್ಲಿ ತಮ್ಮ ಭಾಷಣವನ್ನು ಅವರು ಸಮಾರೋಪಗೊಳಿಸಿದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಹೆಚ್ಚು ಸ್ಥಾನ

ರಾಜ್ಯ ಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ವಿಶ್ವಾಸ

ಮೈಸೂರು,ಏ.14(ಎಂಟಿವೈ)- ರಾಜ್ಯದಲ್ಲಿ ಬಡವರ ಪರ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜೋಡೆತ್ತಿನಂತೆ ಕಾರ್ಯನಿರ್ವಹಿಸುತ್ತಿರುವುದರಿಂದ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚು ಸ್ಥಾನ ಗಳಿಸುತ್ತದೆ ಎಂದು ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.


ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ದೇಶದಾದ್ಯಂತ ಇಂದು ಡಾ.ಅಂಬೇಡ್ಕರ್ ಅವರ ಜನ್ಮ ದಿನವನ್ನು ಆಚರಿಸುತ್ತಿದ್ದೇವೆ. ದೇಶಕ್ಕೆ ಹಾಗೂ ಶೋಷಿತ ವರ್ಗಕ್ಕೆ ಅಂಬೇಡ್ಕರ್ ನೀಡಿದ ಕೊಡುಗೆ ಅಪಾರ. ಸಂವಿಧಾನದಲ್ಲಿ ಅವಕಾಶ ನೀಡದೇ ಇದ್ದರೆ ಇಂದಿಗೂ ಶೋಷಿತ ಸಮುದಾಯ ಶೋಚನೀಯ ಸ್ಥಿತಿಯಲ್ಲಿ ಜೀವಿಸುವಂತಹ ಸ್ಥಿತಿ ಇರುತ್ತಿತ್ತು ಆದರೆ, ಶೋಷಿತ ಸಮುದಾಯ ಗೌರವಯುತವಾಗಿ ಬದುಕಲು ಸಂವಿಧಾನದಲ್ಲಿ ನೀಡಿರುವ ಅವಕಾಶ ಕಾರಣವಾಗಿದ್ದು, ಎಲ್ಲರೂ ಅಂಬೇಡ್ಕರ್ ಅವರ ಕೊಡುಗೆ ಸ್ಮರಿಸಬೇಕು ಎಂದು ಸಲಹೆ ನೀಡಿದರು.

ಕೇಂದ್ರದಲ್ಲಿ ಚುನಾವಣಾ ಬಾಂಡ್ ಪಡೆದು ದೊಡ್ಡ ಹಗರಣ ನಡೆದಿದೆ. ಐಟಿ, ಇಡಿ, ಸಿಬಿಐ ಸಂಸ್ಥೆಗಳನ್ನು ಮುಂದಿಟ್ಟುಕೊಂಡು ದೊಡ್ಡ ಮೊತ್ತದ ಹಣ ಸಂಗ್ರಹಿಸಲಾಗಿದೆ. ರಾಜ್ಯ ಸರ್ಕಾರ ಅಂಬೇಡ್ಕರ್ ಅವರ ಆಶಯಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅನೇಕ ಜನಪರ ಕಾರ್ಯಕ್ರಮ ಜಾರಿಗೊಳಿಸಿದ್ದಾರೆ. ಇದರಿಂದ ಲಕ್ಷಾಂತರ ಕುಟುಂಬಗಳು ಗ್ಯಾರಂಟಿ ಯೋಜನೆಗಳ ಸದುಪಯೋಗ ಪಡೆದುಕೊಂಡು ಸ್ವಾವಲಂಬಿ ಜೀವನ ನಡೆಸುತ್ತಿವೆ. ಈ ಹಿನ್ನೆಲೆಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಉತ್ತಮ ವಾತಾವರಣವಿದೆ. ಮೈಸೂರು-ಕೊಡಗು, ಮಂಡ್ಯ, ಹಾಸನ ಮತ್ತು ಮಂಡ್ಯ ಕ್ಷೇತ್ರಗಳನ್ನು ಗೆಲ್ಲುತ್ತೇವೆ. ಈ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪರವಾದ ವಾತಾವರಣ ಇರುವ ಕಾರಣ ಜಯಗಳಿಸುವ ನಂಬಿಕೆ ಇದೆ. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರಿಗೆ ಸರಿಸಾಟಿಯಾದ ನಾಯಕರು ಪ್ರತಿಪಕ್ಷದಲ್ಲಿ ಇಲ್ಲ. ಈ ಜೋಡಿ ಇರುವ ತನಕವೂ ಕಾಂಗ್ರೆಸ್ ಸೋಲಿಸಲಾಗದು. ಕರ್ನಾಟಕದಲ್ಲಿ 20 ಸ್ಥಾನಗಳನ್ನು ಗೆದ್ದು ಕೇಂದ್ರದಲ್ಲಿ ಅಧಿಕಾರ ಹಿಡಿಯುವಂತಾಗಬೇಕಾಗಿದೆ ಎಂದರು.

ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳಿಂದ ಹೆಣ್ಣು ಮಕ್ಕಳು ದಾರಿ ತಪ್ಪುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳುವ ಮೂಲಕ ಮಹಿಳೆಯರಿಗೆ ಅವಹೇಳನ ಮಾಡಿದ್ದಾರೆ. ಎರಡು ಬಾರಿ ಮುಖ್ಯಮಂತ್ರಿ ಆಗಿದ್ದ ಕುಮಾರಸ್ವಾಮಿ ಅವರಿಂದ ಇಂತಹ ಮಾತುಗಳು ಬಂದಿದ್ದು ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದರು.

ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್ ಮಾತನಾಡಿ, ಬಹುಭಾಷೀಯ ಪದ್ಧತಿಯನ್ನು ಮುಗಿಸಿ ದೇಶದ ಸಂವಿಧಾನ ಮುಗಿಸುವ ಕೆಲಸಕ್ಕೆ ಬಿಜೆಪಿ ಕೈ ಹಾಕಿದೆ. ಸಂವಿಧಾನದ ಆಶಯಗಳು ಸಮರ್ಪಕವಾಗಿ ಜಾರಿಯಾಬೇಕು. ಸಾಮಾಜಿಕ ಮತ್ತು ಆರ್ಥಿಕವಾಗಿ ನಾವು ಮುಂದುವರಿಯಬೇಕೆಂದು ಅಂಬೇಡ್ಕರ್ ಅವರು ಹೇಳಿದ ಮಾತು ಕನಸಾಗಿಯೇ ಉಳಿದಿದೆ ಎಂದರು.

ಇದೇ ವೇಳೆ ಡಾ.ಅಂಬೇಡ್ಕರ್ ಹಾಗೂ ಮಹಿಳಾ ಸ್ವಾತಂತ್ರ್ಯದ ಬಗ್ಗೆ ಕೆಪಿಸಿಸಿ ವಕ್ತಾರರಾದ ಘಾರಂಜುನ್ ವಿಚಾರ ಮಂಡನೆ ಮಾಡಿದರು. ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಸಿ.ಎಸ್. ದ್ವಾರಕನಾಥ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಾಸಕ ಕೆ.ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮಾಜಿ ಸದಸ್ಯ ಮರಿತಿಬ್ಬೇಗೌಡ, ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಮೈಸೂರು ನಗರಾಧ್ಯಕ್ಷ ಆರ್.ಮೂರ್ತಿ, ಮಾಜಿ ಮೇಯರ್‌ಗಳಾದ ನಾರಾಯಣ, ಬಿ.ಎಲ್.ಭೈರಪ್ಪ, ಟಿ.ಬಿ.ಚಿಕ್ಕಣ್ಣ, ಮೋದಾಮಣಿ, ಪುಷ್ಪಲತಾ ಚಿಕ್ಕಣ್ಣ, ಗ್ರಾಮಾಂತರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾ ಸಿದ್ದಶೆಟ್ಟಿ ಪಾಲಿಕೆ ಮಾಜಿ ಸದಸ್ಯರಾದ ಎಂ.ಪ್ರದೀಪ್ ಕುಮಾರ್, ಕೆ.ವಿ.ಮಲ್ಲೇಶ್, ಶೋಭಾ ವಕ್ತಾರ ಕೆ.ಮಹೇಶ್, ಕೋಟೆಹುಂಡಿ ಮಹದೇವು, ಎಂ.ಶಿವಣ್ಣ, ಈಶ್ವರ್ ಡಿ.ಚಕ್ಕಡಿ, ಅಶೋಕ್, ಭಾಸ್ಕರ್, ಶಿವಪ್ರಸಾದ್ ಮತ್ತಿತರರು ಹಾಜರಿದ್ದರು.



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಡಾ.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ನಮ್ಮ ಜನಪದರಿಗೆ ಅಂತರಂಗದಲ್ಲೇ ಸಾಹಿತ್ಯ, ಕಲೆಯ ಅಗಾಧ ಜ್ಞಾನವಿತ್ತು

ಜನಪದ ವಿದ್ವಾಂಸ ಕೃಷ್ಣಮೂರ್ತಿ ಹನೂರು



ಮೈಸೂರಿನ ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಶನಿವಾರ ರಂಗಭೂಮಿ ಮತ್ತು ಜನಪದ ಕಲಾಪ್ರಕಾರಗಳ ಉಚಿತ ತರಬೇತಿ ಶಿಬಿರದ ಸಮಾರೋಪ ಸಮಾರಂಭ ನಡೆಯಿತು.

ಮೈಸೂರು, ಏ.14(ಪಿಎಂ)- ನಮ್ಮ ಜನಪದರಿಗೆ ಓದು-ಬರಹ ಬರುವುದಿಲ್ಲ ಎನ್ನುವುದು ತಪ್ಪು. ಅವರಿಗೆ ಅವರ ಅಂತರಂಗದಲ್ಲೇ ಸಾಹಿತ್ಯ ಮತ್ತು ಕಲಾ ಪ್ರಕಾರದ ಅಗಾಧ ಜ್ಞಾನವಿತ್ತು ಎಂದು ಜನಪದ ವಿದ್ವಾಂಸ ಕೃಷ್ಣಮೂರ್ತಿ ಹನೂರು ಹೇಳಿದರು.

ಮೈಸೂರಿನ ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ರಂಗಭೂಮಿ ಮತ್ತು ಜನಪದ ಕಲಾಪ್ರಕಾರಗಳ ಉಚಿತ ತರಬೇತಿ ಶಿಬಿರದ ಸಮಾರೋಪ ಸಮಾರಂಭವನ್ನು ನಗಾರಿ ಭಾರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಜನಪದ ಸೃಜಿಸಿ ರೂಢಿಸಿಕೊಂಡ ನಮ್ಮ ಗ್ರಾಮೀಣ ಜನರಿಗೆ ಓದು-ಬರಹ ಬರಲ್ಲ ಎಂದು ಕೇವಲವಾಗಿ ನೋಡುವುದು ತಪ್ಪು. ಅಗಾಧ ಜ್ಞಾನ ಅವರ ಅಂತರಂಗದಲ್ಲೇ ಇತ್ತು. ನಮ್ಮ ಗ್ರಾಮೀಣ ಜನರು ಜನಪದ ಕಲೆಗಳನ್ನೇ ನಂಬಿ ಬದುಕಿದವರು. ಅವುಗಳಿಂದಲೇ ತಮ್ಮ ಜೀವನ ಸಾಗಿಸಿದವರು. ನಮ್ಮ ರಾಜ್ಯದಲ್ಲಿ 150ಕ್ಕೂ ಹೆಚ್ಚು ಜನಪದ ಕಲಾ ಪ್ರಕಾರಗಳಿವೆ. ಜನಪದಕ್ಕೆ ಸಂಬಂಧಿಸಿದಂತೆ ಈವರೆಗೆ 4ರಿಂದ 5 ಸಾವಿರ ಪುಸ್ತಕಗಳು ಹೊರಬಂದಿವೆ ಎಂದು ತಿಳಿಸಿದರು.

ಜನಪದ ಎಂದರೆ ಅದನ್ನೇನು ಕೇಳುವುದು, ನೋಡುವುದು ಎನ್ನುವ ತಾರತಮ್ಯ ಭಾವ ಮೊದಲಿನಿಂದಲೂ ಇದೆ. ತಾರತಮ್ಯ ಭಾವ ನಮ್ಮಲ್ಲಿ ಇತಿಹಾಸದ ಉದ್ದಕ್ಕೂ ಎಲ್ಲಾ ಹಂತಗಳಲ್ಲಿ ಬೆಳೆದು ಬಂದಿದ್ದು, ಇದು ದೂರವಾಗಬೇಕಾದರೆ ನಮ್ಮ ಜನಪದಕ್ಕೆ ಶಕ್ತಿ ತಂದುಕೊಡಬೇಕು. ಮೂಲ ಜನಪದವನ್ನು ಸರಿಯಾಗಿ ಕಲಿತು ಸಮರ್ಥವಾಗಿ ಪ್ರದರ್ಶಿಸಿದರೆ ಎದುರಿರುವ ಜನರನ್ನಷ್ಟೇ ಅಲ್ಲ, ಕೈಲಾಸದಲ್ಲಿರುವ ಶಿವನನ್ನು ಕುಣಿಸಬಹುದು. ಬೆಂಗಳೂರಿನಲ್ಲಿ ಮೈಸೂರು ಗುರುರಾಜ್ ಅವರಿಂದ ಮಂಟೆಸ್ವಾಮಿ ಮಹಾಕಾವ್ಯ ಕಥೆಯನ್ನು ಟಿಕೆಟ್ ವ್ಯವಸ್ಥೆಯಡಿ ಸಾರ್ವಜನಿಕರು ಕೇಳಿದ್ದಿದೆ. ಅದಕ್ಕೆ ನಾನೇ ಸಾಕ್ಷಿ ಎಂದರು.

ಕಲೆಗಳೇ ಜನಪದರನ್ನು ಬದುಕಿಸಿವೆ. ರಾಜ ಮಹಾರಾಜರು ಅರಮನೆಯಿಂದ ಗ್ರಾಮೀಣ ಪ್ರದೇಶಕ್ಕೆ ಬಂದು ಎಷ್ಟರ ಮಟ್ಟಿಗೆ ಅವರನ್ನು ಗಮನಿಸಿದ್ದರೋ ಗೊತ್ತಿಲ್ಲ. ಎಲ್ಲಾ ಶಿಷ್ಟ ಕಲಾ ಪ್ರಕಾರಗಳಿಗೂ ಜನಪದ ಕಲೆಯೇ ಮೂಲಬೇರು. ಅದೇ ಮಾತೃಸ್ವರೂಪಿ ಕಲೆ. ಹಿಂದಿನಿಂದಲೂ ಜನಪದ ಕಲೆಗಳ ಬಗ್ಗೆ ತಾತ್ಸರ ಭಾವ ಇದ್ದೇ ಇದೆ. ಹಳೆಗನ್ನಡ ಸಾಹಿತ್ಯದಲ್ಲೂ ಇದನ್ನು ಪ್ರಸ್ತಾಪಿಸಲಾಗಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಶಿಬಿರಾರ್ಥಿಗಳು ವಿವಿಧ ಜನಪದ ಕಲೆಗಳ ನೃತ್ಯ ಪ್ರದರ್ಶನ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ರಂಗವಲ್ಲಿ ಟ್ರಸ್ಟ್ ಸಂಚಾಲಕ ರವಿ ಹುಣಸೂರು, ಟ್ರಸ್ಟ್ ಅಧ್ಯಕ್ಷ ಕೃಷ್ಣಮೂರ್ತಿ ತಲಕಾಡು ಮತ್ತಿತರರು ಹಾಜರಿದ್ದರು.

ದೇಶದಲ್ಲಿ ಮತ್ತೊಮ್ಮೆ ಮನುವಾದಿ ಕಾನೂನು ಪ್ರತಿಷ್ಠಾಪನೆಗೆ ಸಂಚು

ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಸಿ.ಎಸ್.ದ್ವಾರಕಾನಾಥ್



ಮೈಸೂರು, ಏ.14(ಎಂಟಿವೈ)- ಇತ್ತೀಚಿನ ದಿನಗಳಲ್ಲಿ ಸಂವಿಧಾನವನ್ನು ವಿರೋಧಿಸುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ದೇಶದಲ್ಲಿ ಮತ್ತೊಮ್ಮೆ ಮನುವಾದಿ ಕಾನೂನುಗಳನ್ನು ಪ್ರತಿಷ್ಠಾಪಿಸಲು ಸಂಚು ನಡೆಯುತ್ತಿದೆ ಎಂದು ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷರು ಹಾಗೂ ಸುಪ್ರೀಂ ಕೋರ್ಟ್‌ನ ನ್ಯಾಯವಾದಿ ಸಿ.ಎಸ್ ದ್ವಾರಕಾನಾಥ್ ವಿಷಾದಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಭಾನುವಾರ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ 'ಸಂವಿಧಾನದ ಅಭದ್ರತೆಯ ಹುನ್ನಾರಗಳು' ವಿಷಯ ಕುರಿತು ಮಾತನಾಡಿದ ಅವರು, ಸಂವಿಧಾನವನ್ನು ವಿರೋಧ ಮಾಡುವ ಕೈಗಳು ದಿನಕಳೆದಂತೆ ಹೆಚ್ಚಾಗುತ್ತಿವೆ. ಪ್ರಸ್ತುತ ಕೇಂದ್ರದ ಬಿಜೆಪಿ ಸರ್ಕಾರ ಹಾಗೂ ಮನುವಾದಿ ಆರ್‌ಎಸ್‌ಎಸ್ ಸಂಘಟನೆಗಳು ಮತ್ತೊಮ್ಮೆ ದೇಶದಲ್ಲಿ ಮನುವಾದಿ ಕಾನೂನುಗಳನ್ನು ಪ್ರತಿಷ್ಠಾಪಿಸಲು ಹಪಹಪಿಸುತ್ತಿವೆ. ಪ್ರಧಾನಿ ಮೋದಿಯವರ ಆರ್ಥಿಕ ಸಲಹೆಗಾರ ಸಂವಿಧಾನವನ್ನು ಬದಲಾವಣೆ ಮಾಡುತ್ತೇವೆ ಎಂದು ಹೇಳಿಕೆ ನೀಡಿದ್ದಾರೆ. ಇದನ್ನು ಪ್ರಧಾನ ಮಂತ್ರಿಗಳ ಕಚೇರಿ ಸಮರ್ಥಿಸಿಕೊಂಡಿದೆ. ಈ ವಿಚಾರದಲ್ಲಿ ಬಿಜೆಪಿ ಮಗುವನ್ನು ಚಿವುಟಿ ತೊಟ್ಟಿಲನ್ನು ತೂಗುವ ದ್ವಂದ್ವ ನೀತಿ ಅನುಸರಿಸುತ್ತಿದೆ ಎಂದು ಕಿಡಿಕಾರಿದರು.

ಯಾರು ಏನೇ ಸಂಚು ನಡೆಸದರೂ ಸಂವಿಧಾನವನ್ನು ಬದಲಾವಣೆ ಮಾಡುವುದು ಸಾಧ್ಯವೇ ಇಲ್ಲ ಆದರೆ ಬಿಜೆಪಿ ತಮಗೆ ಬೇಕಾದ ತಿದ್ದುಪಡಿಗಳನ್ನು ತಂದು ಸಂವಿಧಾನವನ್ನು ದುರ್ಬಲಗೊಳಿಸುವ ಕಾರ್ಯ ಮಾಡುತ್ತಿದೆ. ಆರ್ಟಿಕಲ್ 370ನ್ನು ಚರ್ಚೆಗೆ ಒಳಪಡಿಸದೆ ರದ್ದು ಮಾಡಲಾಯಿತು. ಗಣಿಗಾರಿಕೆ ಮಾಡಲು ಜಮ್ಮು-ಕಾಶ್ಮೀರವನ್ನು ಉದ್ಯಮಿ ಗಳಾದ ಅಂಬಾನಿ, ಅದಾನಿಗೆ ಮಾರಾಟ ಮಾಡಲು ಹೊರಟಿದ್ದಾರೆ ಅವೈಜ್ಞಾನಿಕ ಜಿಎಸ್‌ಟಿ ಪದ್ಧತಿಯಿಂದ ಬಡ ಮತ್ತು ಮಧ್ಯಮ ವರ್ಗದ ಜನರು ತತ್ತರಿಸಿ ಹೋಗಿದ್ದು, ಹಲವಾರು ಸಣ್ಣ ಮತ್ತು ಗುಡಿ ಕೈಗಾರಿಕೆಗಳು ಮುಚ್ಚಿ ಹೋಗಿವೆ ಎಂದು ಆರೋಪಿಸಿದರು.

ಸಂವಿಧಾನ ಮೂಲ ಆಶಯಕ್ಕೆ ದಕ್ಕೆ ಮಾಡುತ್ತಿದ್ದಾರೆ. ಬಿಜೆಪಿ ಸುಳ್ಳಿನ ಪಕ್ಷ ಎಂದು ಸಾಬೀತಾಗಿದೆ. ಇಲ್ಲಿಯವರೆಗೂ ಬರೀ ಸುಳ್ಳುಗಳನ್ನೇ ಹೇಳಿಕೊಂಡು ಬಂದಿದೆ. ಸಂವಿಧಾನವನ್ನು ಡಾ.ಅಂಬೇಡ್ಕರ್ ಅವರು ಒಬ್ಬರೇ ಬರೆದಿಲ್ಲ ಎಂಬ ಸುಳ್ಳಿನ ಹೇಳಿಕೆ ನೀಡುವ ಮೂಲಕ ತನ್ನ ಮೂಲ ಉದ್ದೇಶವನ್ನು ಬಹಿರಂಗಪಡಿಸಿತ್ತು ಆದರೆ ಸಂವಿಧಾನವನ್ನು ಅಂಬೇಡ್ಕರ್ ಒಬ್ಬರೇ ಬರೆದಿದ್ದಾರೆ ಎಂದು ಸಂವಿಧಾನ ಸಭೆಯಲ್ಲಿ ಕೃಷ್ಣಮಾಚಾರಿ ಹೇಳಿದ್ದು ಸಂಸತ್ತಿನ ದಾಖಲೆಗಳಲ್ಲಿ ನಮೂದಾಗಿದೆ. ಇದರಿಂದ ಬಿಜೆಪಿ ಮುಖಭಂಗಕ್ಕೀಡಾಗಿದೆ ಎಂದು ತಿಳಿಸಿದರು.

ಭಾರತ ಸಂವಿಧಾನದ ಅನುಚ್ಛೇದ 38,39ರನ್ನು ಸಂಪೂರ್ಣವಾಗಿ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಪ್ರಯತ್ನಪಡುತ್ತಿದೆ ಸಂವಿಧಾನ ಮನುಷ್ಯ ಕೇಂದ್ರಿತ ಅಲ್ಲ. ಅದು ಜೀವ ಕೇಂದ್ರಿತ. ದೇಶದ ಎಲ್ಲಾ ಜೀವಿಗಳಿಗೂ ಅನ್ವಯವಾಗುವಂತಹ ಕಾನೂನು ನಮ್ಮ ಭಾರತದ ಸಂವಿಧಾನದಲ್ಲಿದೆ. ನಾವು ಭಾರತದ ಪಿತಾಮಹ ಮಹಾತ್ಮ ಗಾಂಧಿ ಎಂದು ಕರೆಯುತ್ತೇವೆ. ಅದರೊಂದಿಗೆ ಭಾರತದ ತಾಯಿ ಡಾ.ಬಿ.ಆರ್ ಅಂಬೇಡ್ಕರ್ ಎಂದು ಅಭಿಪ್ರಾಯಪಟ್ಟರು.




ಮೈಸೂರು ತಾಲೂಕಿನ ಮೂಡಲಹುಂಡಿ ಗ್ರಾಮದಲ್ಲಿ ಯುಗಾದಿ ಹಬ್ಬದ ಹಿನ್ನೆಲಯಲ್ಲಿ ಬೀರೇಶ್ವರ ಹಾಗೂ ಬಸವೇಶ್ವರ ಪೂಜಾ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತು.

ಮೃಗಾಲಯದ ಪ್ರಾಣಿಗಳ ದತ್ತು ಸ್ವೀಕಾರ

ಮೈಸೂರು,ಏ.14-ಶ್ರೀ ಚಾಮರಾಜೇಂದ್ರ ಮೃಗಾಲಯದಲ್ಲಿ ಸುಭಾಷ್, ಸಂಹಿತ ಮತ್ತು ಮಂಡ್ಯದ ಸಾನ್ವಿ ಎ.ಎಸ್ ಅವರು ಕಾಮನ್ ಆಸ್ಟ್ರಿಚ್ ಎಂಬ ಪಕ್ಷಿಯನ್ನು 13.05.2024ರಿಂದ 12.05.2025ವರೆಗೆ, ಬೆಂಗಳೂರಿನ ಆರ್. ಶಿವಶಂಕರ ರೆಡ್ಡಿ ಅವರು ಪ್ಯಾಂಥರ್ ಪ್ರಾಣಿಯನ್ನು 09.04.2024ರಿಂದ 8.04.2025ರವರೆಗೆ, ಮುಂಬೈನ ರಿತೇಶ್ ಗಾಲಾ ಅವರು ಎರಡು ಚುಕ್ಕೆ ಜಿಂಕೆಯನ್ನು 06.04.2024ರಿಂದ 05.04.2025ರವರೆಗೆ ಹಾಗೂ ಹಾಸನದ ವಿನಾಯಕ ಬಿ.ಸಿ. ಅವರು ಹಸಿರು ಅನಕೊಂಡವನ್ನು 31.03.2024ರಿಂದ 30.03.2025ರವರೆಗೆ ದತ್ತು ಸ್ವೀಕಾರ ಮಾಡಿರುತ್ತಾರೆ ಎಂದು ಶ್ರೀ ಚಾಮರಾಜೇಂದ್ರ ಮೃಗಾಲಯದ ಕಾರ್ಯ ನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ಕವಿತಾ



ಮೈಸೂರು, ಏ.14-ಮೈಸೂರು ನಾರಾಯಣ ಪಿಯು ಕಾಲೇಜಿನ ವಿದ್ಯಾರ್ಥಿನಿ ಕವಿತಾ ಎಸ್. ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 600 ಅಂಕಗಳಿಗೆ 563 ಅಂಕ(ಶೇ. 93.8) ಪಡೆದು ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ಮೈಸೂರು ತಾಲೂಕಿನ ಡಿ.ಸಾಲುಂಡಿ ಗ್ರಾಮದ ಆಟೋ ಚಾಲಕರಾದ ಸಿದ್ದರಾಮ ಹಾಗೂ ಭಾಗ್ಯ ದಂಪತಿ ಪುತ್ರಿ. ಕವಿತಾ ಕನ್ನಡ-97 ಇಂಗ್ಲಿಷ್-88 ಭೌತಶಾಸ್ತ್ರ-89, ಕೆಮಿಸ್ಟ್ರಿ-99 ಗಣಿತಶಾಸ್ತ್ರ-93, ಜೀವಶಾಸ್ತ್ರ-97 ಅಂಕ ಪಡೆದಿದ್ದಾರೆ.

ಕಾದಂಬರಿ ಓದುವಿಕೆ ನಾಟಕ ನೋಡಿದ ಅನುಭವ ನೀಡುತ್ತದೆ

ನಿವೃತ್ತ ಪ್ರಾಧ್ಯಾಪಕ ಪ್ರೊ.ನೀಲಗಿರಿ ಎಂ.ತಳವಾರ್



ಮೈಸೂರು,ಏ.14(ಪಿಎಂ)- ಆಧುನಿಕ ಕನ್ನಡ ಸಾಹಿತ್ಯದಲ್ಲಿ 'ಕಾದಂಬರಿ' ಜನಪ್ರಿಯ ಪ್ರಕಾರ. ನಾಟಕ ವೀಕ್ಷಿಸಿದಂತಹ ಅನುಭವವು ಕಾದಂಬರಿ ಓದುವುದರಿಂದ ದೊರೆಯುತ್ತದೆ ಎಂದು ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕರೂ ಆದ ನಿವೃತ್ತ ಪ್ರಾಧ್ಯಾಪಕ ಪ್ರೊ.ನೀಲಗಿರಿ ಎಂ.ತಳವಾರ್ ಹೇಳಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯ ರೋಟರಿ ಸಭಾಂಗಣದಲ್ಲಿ ಸ್ವಜನ್ಯ ಕಲಾ ವೇದಿಕೆ, ಅಮೋಘ ಪ್ರಕಾಶನದ ಜಂಟಿ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಡಾ.ಮಣಿಶ್ರೀ ಅವರ 'ಅತಿಥಿ ದೇವೋ ಭವ' ಕಾದಂಬರಿ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಕಾದಂಬರಿ ಓದುತ್ತಿದ್ದರೆ ಅಲ್ಲಿನ ವಸ್ತು ವಿಷಯ, ಪಾತ್ರಗಳನ್ನು ಜೀವಂತವಾಗಿ ನೋಡಿದ ಅನುಭವ ಉಂಟಾಗಲಿದೆ. ಅಂತಹ ವಿಶಿಷ್ಟ ಪ್ರಕಾರದ ಬರವಣಿಗೆಯಲ್ಲಿ ಡಾ.ಮಣಿಶ್ರೀ ತೊಡಗಿಕೊಂಡಿದ್ದು, ಅವರಿಗೆ ಈ ಪ್ರಕಾರದಲ್ಲಿ ಸಾಧನೆ ಸಿದ್ಧಿಯಾಗಲಿ ಎಂದು ಹಾರೈಸಿದರು.

ಇಂದು ಅತಿಥಿ ಉಪನ್ಯಾಸಕರು ಎಂಬ ವರ್ಗ ಸೃಜಿಸಿ, ಅವರು ಸರ್ಕಾರದ ಸವಲತ್ತು ಮತ್ತು ಮಾನ್ಯತೆಯಿಂದ ವಂಚಿತರಾಗುವಂತೆ ಮಾಡಲಾಗಿದೆ. ಇಂತಹ ಪರಿಸ್ಥಿತಿ ಕೇವಲ ಶಿಕ್ಷಣ ವ್ಯವಸ್ಥೆಯಲ್ಲಿ ಮಾತ್ರವಲ್ಲದೆ, ಸರ್ಕಾರದ ಎಲ್ಲಾ ಇಲಾಖೆಗಳಿಗೂ ಆವರಿಸಿದೆ. ಇದು ಶೋಚನೀಯವಾಗಿದ್ದು, ಅಂತಹವರ ಪರವಾಗಿ ಡಾ.ಮಣಿಶ್ರೀ ನಿರಂತರ ಹೋರಾಟದಲ್ಲಿ ತೊಡಗಿಕೊಂಡಿದ್ದಾರೆ ಎಂದರು.

ಪ್ರಸ್ತುತ ಮನುಷ್ಯತ್ವ ಮರೆಯುತ್ತಿದ್ದೇವೆ. ಒಂದು ಅರ್ಥದಲ್ಲಿ ಸೃಜನ ಅವರನ್ನು ನೆನಪು ಮಾಡಿಕೊಳ್ಳಬೇಕು. ಅವರು ಬಹಳ ದೊಡ್ಡ ಸಾಹಿತಿಗಳು. ಅದಕ್ಕೂ ಮಿಗಿಲಾಗಿ ಮನುಷ್ಯತ್ವ ಹೊಂದಿದ್ದ ಬಹಳ ದೊಡ್ಡ ವ್ಯಕ್ತಿ. 'ಏನಾದರೂ ಆಗು ಮೊದಲು ಮಾನವನಾಗು' ಎಂದು ಸಿದ್ದಯ್ಯ ಪುರಾಣಿಕರು ಅರ್ಥಪೂರ್ಣವಾಗಿ ಹೇಳಿದ್ದಾರೆ. ಇಂತಹ ಗುಣವನ್ನು, ನಾನು ಸೃಜನ ಅವರಲ್ಲಿ ಕಂಡಿದ್ದೇನೆ. ಸೃಜನ ಅವರು ಸಾಹಿತ್ಯಕ ಕಾರ್ಯಕ್ರಮಗಳಿಗೆ ಆಹ್ವಾನ ಇಲ್ಲವಾದರೂ ಬರುತ್ತಿದ್ದರು. ಆದರೆ ಈಗಿನ ನಮ್ಮ ಸಾಹಿತ್ಯ ಪರಂಪರೆಯಲ್ಲಿ ಆಹ್ವಾನ ಪತ್ರಿಕೆಯಲ್ಲಿ ಹೆಸರಿದ್ದರೆ ಮಾತ್ರವೇ ಬರುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಡಾ.ಮಣಿಶ್ರೀ ಅವರು ಕನ್ನಡ ಸಾಹಿತ್ಯ ಲೋಕಕ್ಕೆ ಹೊಸಬರೇನಲ್ಲ. ಈಗಾಗಲೇ ಅವರು ಎರಡು ಕಾದಂಬರಿ ಹೊರತಂದಿದ್ದು, ಅದರೊಂದಿಗೆ ಇಂದು ಮತ್ತೊಂದು ಸೇರ್ಪಡೆಯಾಗಿದೆ. ಹಲವು ಸಂಶೋಧನಾ ಲೇಖನಗಳನ್ನು ಬರೆದು ಈಗಾಗಲೇ ಕನ್ನಡ ಸಾರಸ್ವತ ಲೋಕಕ್ಕೆ ಅವರು ಪರಿಚಿತರಾಗಿದ್ದಾರೆ. ತಮ್ಮದೇ ಆದ ರೀತಿಯಲ್ಲಿ ಕನ್ನಡದ ಕೈಂಕರ್ಯ ನೆರವೇರಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸ್ವಜನ್ಯ ಕಲಾ ವೇದಿಕೆ ಅಧ್ಯಕ್ಷ ಎಸ್.ಶಿಶಿರಂಜನ್ (ಶಿಶಿರ) ಕಾದಂಬರಿ ಬಿಡುಗಡೆ ಮಾಡಿದರು. ಕೃತಿ ಕುರಿತು ಶಿಕ್ಷಕಿ ಎಸ್.ವನಜಾಕ್ಷಿ ಮಾತನಾಡಿದರು. ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಡಾ.ಸಿದ್ದರಾಮ ಹೊನ್ಕಲ್ ಅಧ್ಯಕ್ಷತೆ ವಹಿಸಿದ್ದರು. ಅರಿವು ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಡಾ.ಎಂ.ಸಿ.ಮನೋಹರ, ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಮನ್ವಯ ಸಮಿತಿ ರಾಜ್ಯಾಧ್ಯಕ್ಷ ಡಾ.ಸೋಮಶೇಖರ್ ಹೆಚ್.ಶಿವಮೊಗ್ಗಿ, ಮದ್ರಾಸು ವಿಶ್ವವಿದ್ಯಾನಿಲಯದ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಎಂ.ರಂಗಸ್ವಾಮಿ, ಕೃತಿ ಕರ್ತೃ ಹಾಗೂ ಅಮೋಘ ಪ್ರಕಾಶನದ ಪ್ರಕಾಶಕಿ ಡಾ.ಮಣಿಶ್ರೀ ಮತ್ತಿತರರು ಹಾಜರಿದ್ದರು.

ಮೈಸೂರು ಮಿತ್ರ ಸೋಮವಾರ 15 ಏಪ್ರಿಲ್ 2024

ಇಂದು ವಿವಿಧೆಡೆ ಲಕ್ಷ್ಮಣ ಪ್ರಚಾರ



ಹುಣಸೂರು, ಏ.14– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಅವರು ಏ.15ರಂದು ತಾಲೂಕಿನ ವಿವಿಧೆಡೆ ಮತಯಾಚನೆ ಮಾಡಲಿದ್ದಾರೆ.

ಬೆಳಗ್ಗೆ 8 ಗಂಟೆಗೆ ಕೊಮ್ಮೇಗೌಡನಕೊಪ್ಪಲು, 8.30ಕ್ಕೆ ಹಳೇಬೀಡು, 9 ಗಂಟೆಗೆ ಬಿಳಿಕೆರೆ, 11 ಗಂಟೆಗೆ ಹೊಸರಾಮೇನಹಳ್ಳಿ ಈರಣ್ಣ ದೇವಸ್ಥಾನದಲ್ಲಿ ಪೂಜೆ ನಂತರ ಪ್ರಚಾರದ ಸಭೆ, ಮಧ್ಯಾಹ್ನ 12 ಗಂಟೆಗೆ ಗಾವಡಗೆರೆ, 2 ಗಂಟೆಗೆ ಕಟ್ಟೆಮಳಲವಾಡಿ, 3 ಗಂಟೆಗೆ ಚಿಲ್ಕುಂದ, 4 ಗಂಟೆಗೆ ಅರಸು ಕಲ್ಲಹಳ್ಳಿಯಲ್ಲಿ ದೇವರಾಜ ಅರಸು ಸಮಾಧಿಗೆ ಮಾಲಾರ್ಪಣೆ ಮಾಡಲಾಗುತ್ತದೆ. ಸಂಜೆ 5 ಗಂಟೆಗೆ ದೊಡ್ಡಹೆಜ್ಜೂರು ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಭೇಟಿ, 6 ಗಂಟೆಗೆ ಹನಗೋಡು ಬಸ್ ನಿಲ್ದಾಣದಲ್ಲಿ ಲಕ್ಷ್ಮಣ ಚುನಾವಣೆ ಪ್ರಚಾರ ಮಾಡಲಿದ್ದಾರೆ. ಇವರಿಗೆ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಸಾಥ್ ನೀಡಲಿದ್ದು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಅಂಬೇಡ್ಕರ್ ಜೀವನ, ಹೋರಾಟ ಯುವಕರಿಗೆ ಸ್ಫೂರ್ತಿ

ಪುರಸಭಾ ಸದಸ್ಯ ಎಲ್.ಮಂಜುನಾಥ್



ಭೈರಾಪುರ 4ನೇ ವಾರ್ಡ್‌ನಲ್ಲಿ ಅಂಬೇಡ್ಕರ್ ಜಯಂತಿ ನಡೆಯಿತು.

ತಿ.ನರಸೀಪುರ, ಏ.14– ಅಂಬೇಡ್ಕರ್ ಎಂಬ ಮಹಾನ್ ಚೇತನ ಸಂಘರ್ಷದ ಅನುಭವದಿಂದ ಹುಟ್ಟಿಕೊಂಡ ವ್ಯಕ್ತಿತ್ವ, ಅವರ ಮನಸ್ಸಿನಲ್ಲಿ ಅಂದು ಮೂಡಿದ ಸಮಾನತೆಯ ಪ್ರಜ್ಞೆ ಭವ್ಯ ಭಾರತಕ್ಕೆ ಬಲಿಷ್ಠ ಸಂವಿಧಾನ ನೀಡುವಂತೆ ಪ್ರೇರೇಪಿಸಿತು ಎಂದು ಪುರಸಭಾ ಸದಸ್ಯ ಎಲ್.ಮಂಜುನಾಥ್ ತಿಳಿಸಿದರು.

ಪಟ್ಟಣದ ವರುಣ ವಿಧಾನಸಭಾ ಕ್ಷೇತ್ರದ ಪುರಸಭೆ ವ್ಯಾಪ್ತಿಯ ಭೈರಾಪುರ 4ನೇ ವಾರ್ಡ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತಿಯಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಅಂಬೇಡ್ಕರ್ ಶ್ರೇಷ್ಠ ಆರ್ಥಿಕ ತಜ್ಞ, ಸಂವಿಧಾನ ತಜ್ಞ ಹಾಗೂ ರಾಜಕೀಯ ಚಿಂತಕ. ಜಾತ್ಯಾತೀತ ಭಾರತದ ನಿರ್ಮಾಣ ಅವರ ಕನಸಾಗಿತ್ತು. ಅಂಬೇಡ್ಕರ್ ಅವರ ಜೀವನ, ಹೋರಾಟ ಯುವ ಜನಾಂಗಕ್ಕೆ ಸ್ಫೂರ್ತಿ ಆಗಬೇಕು. ಅವರ ಕುರಿತು ಮತ್ತಷ್ಟು ಅಧ್ಯಯನ ಆಗಬೇಕು ಎಂದು ಹೇಳಿದರು.

ಅನ್ಯಾಯ, ಅಸಮಾನತೆ, ಶೋಷಣೆಗಳ ವಿರುದ್ಧದ ಎಲ್ಲಾ ಚಳವಳಿಗೆ ಅಂಬೇಡ್ಕರ್ ಚಿಂತನೆಗಳೇ ಸ್ಫೂರ್ತಿ. ಅವರ ತತ್ವ ಆದರ್ಶಗಳ ಹಾದಿಯಲ್ಲಿ ನಾವೆಲ್ಲರೂ ದೃಢ ಸಂಕಲ್ಪ ಮಾಡಬೇಕು ಎಂದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಮಾಜದ ಕಡುಬಡವ ಮತ್ತು ಸಾಧಾರಣ ವರ್ಗದ ಜನರಿಗೆ ಹೊಸ ಭರವಸೆ ಮೂಡಿಸಿದವರು. ಸಂವಿಧಾನ ನಿರ್ಮಿಸುವಲ್ಲಿ ಅವರು ನೀಡಿದ ಅನನ್ಯ ಕೊಡುಗೆ ಮರೆಯಲು ಸಾಧ್ಯವಿಲ್ಲ. ನಾವು ಅವರ ಋಣದಲ್ಲಿದ್ದೇವೆ ಎಂದರು. ಇದೇ ವೇಳೆ ನಾವು ಏಕೆ ಅಂಬೇಡ್ಕರ್ ಜಯಂತಿ ಆಚರಣೆ ಮಾಡಬೇಕು. ಯಾವ ರೀತಿ ಆಚರಿಸಬೇಕು. ಯಾರ್‍ಯಾರು ಆಚರಿಸಬೇಕೆಂದು ಸಂಕ್ಷಿಪ್ತವಾಗಿ ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಗ್ರಾಮದ ಯಜಮಾನ ಮರಿಲಿಂಗಯ್ಯ, ರಾಚಯ್ಯ, ಪ್ರದೀಪ್, ಗೋಪಿ, ಮಾದೇಶ್, ಪ್ರಸನ್ನ, ಮಂಜು, ಚನ್ನಯ್ಯ, ನಾಗರಾಜು, ಜಗ್ಗು, ಶಂಕರ್, ಹೇಮಂತ್, ಅಪ್ಪು, ಅಮಿತ್ ಹಾಗೂ ಗ್ರಾಮಸ್ಥರು ಹಾಜರಿದ್ದರು.

ನಂ.ಗೂಡಿನ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್‌ಗೆ ಮತ ನೀಡಿ



ಕಾರ್ಯಕರ್ತರ ಸಭೆಯನ್ನು ಸಚಿವ ಹೆಚ್.ಸಿ.ಮಹದೇವಪ್ಪ ಉದ್ಘಾಟಿಸಿದರು.

ನಂಜನಗೂಡು, ಏ.14– ದಕ್ಷಿಣ ಕಾಶಿ ಎಂದೇ ಹೆಸರಾಗಿರುವ ನಗರವನ್ನು ಪ್ರವಾಸೋದ್ಯಮ ಕೇಂದ್ರವಾಗಿ ಸಮಗ್ರವಾಗಿ ಅಭಿವೃದ್ಧಿಪಡಿಸಲು ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್‌ಗೆ ಮತ ನೀಡಿ ಗೆಲ್ಲಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಮನವಿ ಮಾಡಿದರು.

ನಗರದ ನಂದಿ ಕನ್ವೆನ್‌ಷನ್ ಹಾಲ್‌ನಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಹಿಂದೆ ಶ್ರೀಕಂಠೇಶ್ವರ ಸ್ವಾಮಿ ರಥೋತ್ಸವ ಕೆಟ್ಟ ರಸ್ತೆಯಿಂದಾಗಿ ವಿಳಂಬವಾಗುತ್ತಿತ್ತು. ನಾನು ಲೋಕೋಪಯೋಗಿ ಸಚಿವನಾಗಿದ್ದಾಗ ತಾಲೂಕಿನ ಜನರ ಆಶಯದಂತೆ 9.5 ಕೋಟಿ ವೆಚ್ಚದಲ್ಲಿ 1.5 ಕಿಮೀ ವ್ಯಾಪ್ತಿಯ ರಥಬೀದಿಯನ್ನು ಕಾಂಕ್ರೀಟ್ ರಸ್ತೆಯಾಗಿ ಅಭಿವೃದ್ಧಿಪಡಿಸಲಾಯಿತು. ಅದರ ಪರಿಣಾಮ ಈಗ ಸಾಂಗವಾಗಿ ರಥೋತ್ಸವ ನಡೆಯುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ 5 ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ನಮ್ಮ ಪಕ್ಷದ ದರ್ಶನ್ ಅವರಿಗೆ 46 ಸಾವಿರಕ್ಕೂ ಹೆಚ್ಚು ಮತ ನೀಡಿ ಗೆಲ್ಲಿಸಿದ್ದೀರಿ. ಈ ಬಾರಿ ನಮ್ಮ ಅಭ್ಯರ್ಥಿಗೆ ಅದಕ್ಕಿಂತಲೂ ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸಬೇಕು ಎಂದರು.

ಶಾಸಕ ದರ್ಶನ್ ಮಾತನಾಡಿ, ರಾಜ್ಯ ಸರ್ಕಾರದ 5 ಗ್ಯಾರಂಟಿಗಳು ಕ್ಷೇತ್ರದ ಮತದಾರರ ಮನೆ ಮನೆ ತಲುಪಿವೆ. ನನ್ನ ತಂದೆ ಧ್ರುವನಾರಾಯಣ ಅವರನ್ನು 2 ಬಾರಿ ಸಂಸದರಾಗಿ ಚುನಾಯಿಸಿದ್ದೀರಿ. ರಾಜ್ಯದ ನಂ.1 ಸಂಸದರಾಗಿ ಧ್ರುವನಾರಾಯಣ್ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಲ್ಲಿ ಮುಂದಿದ್ದರು. ನುಡಿದಂತೆ ನಡೆಯುವ ಕಾಂಗ್ರೆಸ್ ಪಕ್ಷದ ನಮ್ಮ ಅಭ್ಯರ್ಥಿ ಸುನೀಲ್ ಬೋಸ್ ಅವರಿಗೆ ಹೆಚ್ಚಿನ ಮತ ನೀಡಿ ಗೆಲ್ಲಿಸಬೇಕು ಎಂದರು.

ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಸಿ.ಎಂ.ಶಂಕರ್, ಶ್ರೀಕಂಠನಾಯಕ, ಜಿಪಂ ಮಾಜಿ ಸದಸ್ಯರಾದ ಕೆ.ಮಾರುತಿ, ಕೆ.ಬಿ.ಸ್ವಾಮಿ, ಲತಾ, ಮುಖಂಡರಾದ ಬುಲೆಟ್ ಮಹದೇವಪ್ಪ, ಇಂಧನ್ ಬಾಬು, ಕೆಂಪಣ್ಣ, ಪಿ.ರವಿಪ್ರಕಾಶ್, ಎನ್.ಟಿ.ಗಿರೀಶ್, ನಾಗರಾಜು, ನಂದಕುಮಾರ್, ಅಜ್ಗರ್, ಹೆಚ್.ಜೆ.ಜಗದೀಶ್, ನಗರಸಭಾ ಸದಸ್ಯರಾದ ಎಸ್.ಗಂಗಾಧರ್, ಎಸ್.ಪಿ.ಮಹೇಶ್, ಶ್ರೀಕಂಠಸ್ವಾಮಿ, ಸಿದ್ದಿಕ್, ಕೆ.ಎಂ.ಬಸವರಾಜು, ಕೆಪಿಸಿಸಿ ಸದಸ್ಯ ಅಕ್ಬರ್ ಅಲೀಮ್ ಸೇರಿದಂತೆ ಹಲವರಿದ್ದರು.

ಸರಗೂರಲ್ಲಿ ಅಂಬೇಡ್ಕರ್ ಭಾವಚಿತ್ರ ಮೆರವಣಿಗೆ



ಸರಗೂರಲ್ಲಿ ಅಂಬೇಡ್ಕರ್ ಭಾವಚಿತ್ರ ಮೆರವಣಿಗೆ ಮಾಡಲಾಯಿತು.

ಸರಗೂರು, ಏ.14– ಡಾ.ಬಿ.ಆರ್.ಅಂಬೇಡ್ಕರ್ 133ನೇ ಜಯಂತಿ ಅಂಗವಾಗಿ ಆದಿಕರ್ನಾಟಕ ಸಮಾಜದಿಂದ ಪಟ್ಟಣ ಪ್ರಮುಖ ಬೀದಿಗಳಲ್ಲಿ ಅಂಬೇಡ್ಕರ್ ಭಾವಚಿತ್ರ ಮೆರವಣಿಗೆ ಮಾಡಲಾಯಿತು.

ಪಟ್ಟಣದ ಅಂಬೇಡ್ಕರ್ ಭವನದ ಎದುರು ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಯಿತು. ಮೆರವಣಿಗೆಗೆ ವಿವಿಧ ಜಾನಪದ ಕಲಾ ತಂಡಗಳು ಮೆರಗು ನೀಡಿದವು. ದಾರಿಯುದ್ದಕ್ಕೂ ಸಾರ್ವಜನಿಕರಿಗೆ ಮಜ್ಜಿಗೆ, ಪಾನಕ ವಿತರಿಸಲಾಯಿತು.

ಗಡಿ ಯಜಮಾನ ಭೀಮಯ್ಯ ಮಾತನಾಡಿ, ಅಂಬೇಡ್ಕರ್ ಶೋಷಿತ ಸಮುದಾಯಗಳ ಏಳಿಗೆಗಾಗಿ ನಿರಂತರವಾಗಿ ಶ್ರಮಿಸಿದವರು. ಜಾಗೃತಿ ಮತ್ತು ಜ್ಞಾನದ ದೀಪವಾಗಿ ಈ ದೇಶದ ಅಭಿವೃದ್ಧಿಗೆ ದಾರಿಯಾದವರು. ಅಂತಹ ಮಹನೀಯರು ಕೇವಲ ಒಂದು ವರ್ಗಕ್ಕೆ ಸೀಮಿತವಲ್ಲ ಅವರು ದೇಶದ ಆಸ್ತಿ ಎಂದರು.

ಈ ವೇಳೆ ಆದಿ ಕರ್ನಾಟಕ ಸಮಾಜದ ಯಜಮಾನ ಜವರಯ್ಯ, ಚಿಕ್ಕ ಯಜಮಾನ ಕೃಷ್ಣ, ಶಿವಣ್ಣ, ಇದೀಯಪ್ಪ, ಶಿವಶಂಕರನ್, ಸುಬ್ರಹ್ಮಣ್ಯ, ಬಿಲ್ಲಯ್ಯ, ಮಲ್ಲೇಶ್, ನಾಗರಾಜು, ಮುಖಂಡರಾದ ಭೋಗಯ್ಯ, ಸಣ್ಣಸ್ವಾಮಿ, ಕಾರಯ್ಯ, ಭೈರಲಿಂಗಯ್ಯ, ರಂಗಯ್ಯ, ದೇವಯ್ಯ, ಕೃಷ್ಣ, ಕೃಷ್ಣದಾಸಿ, ಮಾಜಿ ಪ್ರಧಾನರಾದ ಭೋಗಪ್ಪ, ಶಂಕರ, ಹುಚ್ಚಯ್ಯ, ಕೇಪಂರಾಜು, ಸಣ್ಣ, ಕರಿಯಪ್ಪ, ಶಂಭ, ಹುಲಿಸಿದ್ದರಾಜು, ರವಿ, ಮಾದಿಗ ಸಮಾಜದ ಯಜಮಾನರಾದ ವೆಂಕಟಪ್ಪ, ಸ್ವಾಮಿ ಸೇರಿದಂತೆ ಇನ್ನಿತರರಿದ್ದರು.



ವರುಣ ಕ್ಷೇತ್ರದ ಬಿಳಿಗೆರೆಹುಂಡಿಯಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ರಾಜಶೇಖರ್ ಮತ್ತು ಗ್ರಾಪಂ ಸದಸ್ಯೆ ಕಾಮಿನಿ ರಾಜಶೇಖರ್ ಕಾಂಗ್ರೆಸ್‌ಗೆ ಸೇರ್ಪಡೆಯಾದರು. ಈ ವೇಳೆ ಜಿಲ್ಲಾ ಪದವೀಧರರ ಘಟಕದ ಜಿಲ್ಲಾಧ್ಯಕ್ಷ ಎಂ.ರಮೇಶ್, ಕಾಂಗ್ರೆಸ್ ಮುಖಂಡ ಸೋಮಣ್ಣ, ಹಾಲಪ್ಪ, ದಣಾಯಕನಪುರ ಗ್ರಾಮದ ಪಿ.ಚಿನ್ನಬುದ್ಧಿ, ಬಸವಣ್ಣ ಮಾಸ್ಟರ್, ಡಿ.ಸೋಮಣ್ಣ, ಕುಮಾರ, ಶೇಖರ್, ಮಹೇಶ ಇತರರಿದ್ದರು.

ಕೆರೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿ ಪೂಜೆ



ಹೊಸಹೊಳಲು ಗ್ರಾಮದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿ ಪೂಜೆ ನಡೆಯಿತು.

ಹೆಚ್.ಡಿ.ಕೋಟೆ, ಏ.14– ಕೆರೆಗಳು ಅಭಿವೃದ್ಧಿಯಾದರೆ ಜನಜಾನುವಾರುಗಳಿಗೆ ಕುಡಿಯಲು ನೀರು ಹಾಗೂ ಬೋರ್‌ವೆಲ್‌ಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಳಕ್ಕೆ ಸಹಕಾರಿಯಾಗಲಿದೆ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಮೈಸೂರು ಪ್ರಾದೇಶಿಕ ನಿರ್ದೇಶಕ ಜಯರಾಮ ನೆಲ್ಲಿತಾಯ ತಿಳಿಸಿದರು.

ತಾಲೂಕಿನ ಹೊಸಹೊಳಲು ಗ್ರಾಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಹೆಚ್.ಡಿ.ಕೋಟೆ ಮತ್ತು ಹೊಸಹೊಳಲು ಕೆರೆ ಸಮಿತಿ ಸಂಯುಕ್ತಾಶ್ರಯದಲ್ಲಿ 'ನಮ್ಮೂರು ನಮ್ಮ ಕೆರೆ' ಕಾರ್ಯಕ್ರಮದಡಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಈ ಕಾರ್ಯದಲ್ಲಿ ಭಾಗವಹಿಸಿ ಸಹಕಾರ ನೀಡಬೇಕು ಎಂದರು.

ನಮ್ಮ ಸಂಸ್ಥೆಯು ಹೂಳು ತೆಗೆಯುವ ಕೆಲಸ ಮಾಡುತ್ತದೆ. ಗ್ರಾಮಸ್ಥರು ಹೂಳು ಕೊಂಡೊಯ್ಯುವ ಹಾಗೂ ಕೆರೆ ಸ್ವಚ್ಛತೆ ಕಾಪಾಡಬೇಕು ಎಂದರು.

ಈ ವೇಳೆ ಜಿಲ್ಲಾ ನಿರ್ದೇಶಕ ವಿ.ವಿಜಯಕುಮಾರ್ ನಾಗನಾಳ, ತಾಲೂಕು ಕ್ಷೇತ್ರ ಯೋಜನಾಧಿಕಾರಿ ವಿ.ಭಾಸ್ಕರ್, ಕೃಷಿ ಮೇಲ್ವಿಚಾರಕ ಬಿ.ಜೆ.ರಾಜು, ಅಭಿಯಂತರ ಸುರೇಶ್ ಡಿಸೋಜ, ಪುಷ್ಪರಾಜು, ಕೆರೆ ಸಮಿತಿ ಅಧ್ಯಕ್ಷ ಟಿ.ಮಂಜು, ಗ್ರಾಪಂ ಅಧ್ಯಕ್ಷೆ ಆಶಾ, ಶರತ್, ಮುಖಂಡ ಶಿವಣ್ಣ, ಮೇಲ್ವಿಚಾರಕಿ ಶಾಂತ, ಸೇವಾ ಪ್ರತಿನಿಧಿ ಜಯಮ್ಮ, ಲತಾ, ಪುಷ್ಪ, ಕೃಷ್ಣ, ಭೈರೇಗೌಡ, ಕೆರೆ ಸಮಿತಿಯ ಸರ್ವ ಸದಸ್ಯರು ಊರಿನ ಮುಖಂಡರು ಇದ್ದರು.

ಹಿರೀಕ್ಯಾತನಹಳ್ಳಿಯಲ್ಲಿ ಅಂಬೇಡ್ಕರ್ ಜಯಂತಿ

ಹಿರೀಕ್ಯಾತನಹಳ್ಳಿ, ಏ.14– ಇಲ್ಲಿನ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ಪಿಡಿಓ ಶಿಲ್ಪಾಶ್ರೀ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ಪ್ರತಿಯೊಬ್ಬರಿಗೂ ಮೂಲಭೂತ ಹಕ್ಕುಗಳ ಜೊತೆಗೆ ದೇಶದಲ್ಲಿ ರಾಜಪ್ರಭುತ್ವ ಕೊನೆಗಾಣಿಸಿ ಪ್ರಜೆಗಳ ಆಡಳಿತಕ್ಕೆ ಮುನ್ನುಡಿ ಬರೆದ ಪ್ರಜಾಪ್ರಭುತ್ವದ ಪಿತಾಮಹ ಅಂಬೇಡ್ಕರ್ ಎಂದರು.

ಪಂಚಾಯಿತಿ ಲೆಕ್ಕ ಪರಿಶೋಧಕ ಮಹದೇವ್ ಮಾತನಾಡಿ, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜನಪ್ರತಿನಿಧಿಗಳನ್ನು ಹೊರತುಪಡಿಸಿ ನೌಕರರು ಕಚೇರಿಯಲ್ಲಿ ಸರಳವಾಗಿ ಅಂಬೇಡ್ಕರ್ ಜಯಂತಿ ಆಚರಿಸಿದ್ದೇವೆ ಎಂದರು. ಈ ವೇಳೆ ಪಂಚಾಯಿತಿ ನೌಕರರಾದ ಶಿವಣ್ಣ, ರವಿ, ರಫೀಕ್ ಅಹಮದ್, ಚಂದ್ರ, ಮಹೇಶ್, ನಟೇಶ್, ಅಂಗನವಾಡಿ ಶಿಕ್ಷಕಿ ವೇದಾ, ರಾಜೇಶ್ ಹಾಗೂ ಇತರರಿದ್ದರು.

ಚುನಾವಣೆಯಲ್ಲಿ ಬಿಜೆಪಿ ಕಿತ್ತೊಗೆಯಬೇಕಿದೆ



ತಿ.ನರಸೀಪುರ ಏ.14– ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಸರ್ಕಾರವನ್ನು ಕಿತ್ತೊಗೆಯುವ ಜವಾಬ್ದಾರಿ ಪ್ರತಿಯೊಬ್ಬ ಭಾರತೀಯ ಪ್ರಜೆ ಮೇಲಿದೆ ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ತಿಳಿಸಿದರು. ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಹಿಂಸಾ ಮಾರ್ಗದ ಮೂಲಕ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮ ಗಾಂಧೀಜಿಯವರ ಕಾಲಿಗೆರಗಿ ನಮಸ್ಕರಿಸಿ ಎದೆಗೆ ಗುಂಡಿಕ್ಕಿದ ವಂಶಸ್ಥರ ಕೈಗೆ ಅಧಿಕಾರ ಕೊಟ್ಟದ್ದರಿಂದ ಸಂವಿಧಾನಕ್ಕೆ ಕೈ ಮುಗಿದು ಪ್ರಜಾತಂತ್ರ ವ್ಯವಸ್ಥೆಯನ್ನೇ ನಿರ್ಮೂಲನೆ ಮಾಡುತ್ತಿರುವುದನ್ನು ಕಣ್ಣಾರೆ ನೋಡುತ್ತಿದ್ದೇವೆ. ಇನ್ನಾದರೂ ಚುನಾವಣೆಯಲ್ಲಿ ಎಚ್ಚೆತ್ತುಕೊಳ್ಳದಿದ್ದರೆ ಸಂವಿಧಾನ ಮತ್ತು ಪ್ರಜಾ ಪ್ರಭುತ್ವಕ್ಕೆ ಅಪಾಯ ತಪ್ಪಿದ್ದಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಕೇಂದ್ರದಲ್ಲಿ 2 ಅವಧಿಗೆ ಆಡಳಿತ ನಡೆಸಿರುವ ಬಿಜೆಪಿ ಚುನಾವಣೆ ಪೂರ್ವ ನೀಡಿರುವ ಯಾವುದೇ ಭರವಸೆ ಈಡೇರಿಸಿಲ್ಲ. ವಿದೇಶಿ ಬ್ಯಾಂಕ್‌ನಲ್ಲಿರುವ ಕಪ್ಪು ಹಣ ತಂದು ಪ್ರತಿಯೊಬ್ಬರ ಖಾತೆಗೆ 15 ಲಕ್ಷ ಹಾಕುತ್ತೇವೆ ಎಂದವರು ಬ್ಯಾಂಕುಗಳಲ್ಲಿ ಎಲ್ಲರ ಶೂನ್ಯ ಖಾತೆ ತೆರೆಸಿದರೂ ಪ್ರಯೋಜನವಾಗಿಲ್ಲ. ವಿದ್ಯಾವಂತ ಯುವಕರಿಗೆ ವರ್ಷಕ್ಕೆ 2 ಕೋಟಿ ಉದ್ಯೋಗ ಕೊಡುತ್ತೇವೆ ಎಂದು ಇದ್ದಂತಹ ಉದ್ಯೋಗಗಳನ್ನೇ ಕಿತ್ತುಕೊಂಡರು. ರೈತರ ಆದಾಯ ದುಪ್ಪಟ್ಟು ಮಾಡುತ್ತೇವೆಂದು ರೈತರ ಕೃಷಿಯ ಅನುಕೂಲಕ್ಕೆಂದು ಇದ್ದಂತಹ ನೀತಿ ಕಾಯ್ದೆ ಗಳನ್ನು ಬದಲಾಯಿಸಿದರು. ಹೋರಾಟಕ್ಕಿಳಿದ ರೈತರ ಮೇಲೆ ದೌರ್ಜನ್ಯ ನಡೆಸಿದರು ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ದಸಂಸ ತಾಲೂಕು ಸಂಚಾಲಕ ಸೋಮಶೇಖರ್, ಮುಖಂಡರಾದ ನಾಗರಾಜಮೂರ್ತಿ ಹಾಗೂ ಬಸವರಾಜು ಉಪಸ್ಥಿತರಿದ್ದರು.

ಸೋಲಿನ ಭಯದಿಂದ ಬಿಜೆಪಿ, ಜೆಡಿಎಸ್ ಹೊಂದಾಣಿಕೆ

ಮುಖ್ಯಮಂತ್ರಿ ಸಿದ್ದರಾಮಯ್ಯ



ಪಿರಿಯಾಪಟ್ಟಣದಲ್ಲಿ ನಡೆದ ಕಾಂಗ್ರೆಸ್ ಪ್ರಜಾಧ್ವನಿ–2 ಸಮಾವೇಶವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಪಿರಿಯಾಪಟ್ಟಣ, ಏ.14– ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭಯದಿಂದ ಬಿಜೆಪಿ ಮತ್ತು ಜೆಡಿಎಸ್ ಹೊಂದಾಣಿಕೆ ಮಾಡಿಕೊಂಡಿದ್ದು, ಜಾತ್ಯಾತೀತ ಹೆಸರಿನಲ್ಲಿ ನಾಡಿನ ಜನತೆಯೊಂದಿಗೆ ನಾಟಕವಾಡುತ್ತಿದ್ದ ಅಪ್ಪ ಮಕ್ಕಳ ನಾಟಕ ಬಟಬಯಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ವ್ಯಂಗ್ಯವಾಡಿದರು.

ಲೋಕಸಭಾ ಚುನಾವಣೆ ಅಂಗವಾಗಿ ಪಟ್ಟಣದಲ್ಲಿ ನಡೆದ ಕಾಂಗ್ರೆಸ್ ಪ್ರಜಾಧ್ವನಿ–2 ಸಮಾವೇಶದಲ್ಲಿ ಮಾತನಾಡಿದ ಅವರು, ಬಿಜೆಪಿ ಅಭ್ಯರ್ಥಿಗಳಿಗೆ ಸ್ವತಂತ್ರವಾಗಿ ಗೆಲ್ಲುವ ಸಾಮರ್ಥ್ಯವಿಲ್ಲದೆ ಮೋದಿಗಾಗಿ ಮತ ನೀಡಿ ಎಂದು ಅಂಗಲಾಚುತ್ತಿದ್ದಾರೆ ಎಂದು ಜರಿದರು.

ಜೆಡಿಎಸ್ ಮತ್ತು ಬಿಜೆಪಿ ಹೊಂದಾಣಿಕೆ ನೋಡಿದರೆ ನಾಯಿ ಹಸಿದಿತ್ತು ಅನ್ನ ಹಳಸಿತ್ತು ಎಂಬ ಗಾದೆ ನೆನಪಿಗೆ ಬರುತ್ತಿದೆ. ದೇವೇಗೌಡರು ಪ್ರಧಾನಿಯಾಗಿದ್ದು ಕಾಂಗ್ರೆಸ್‌ನಿಂದ, ಕುಮಾರಸ್ವಾಮಿ ಸಿಎಂ ಆಗಿದ್ದು ಕಾಂಗ್ರೆಸ್ ಪಕ್ಷದಿಂದ ಆದರೆ ಈಗ ತಮ್ಮ ಪಕ್ಷ ಉಳಿಸಿಕೊಳ್ಳಲು ಜಾತ್ಯಾತೀತ ನಿಲುವನ್ನು ಕಿತ್ತೆಸೆದು ಕೋಮುವಾದಿಗಳೊಂದಿಗೆ ಕೈಜೋಡಿಸಿದ್ದಾರೆ ಎಂದು ಕುಟುಕಿದರು. ಸೆಕ್ಯುಲರ್ ಹೆಸರಿಟ್ಟುಕೊಂಡು ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡಿರುವ ಜೆಡಿಎಸ್‌ಗೆ ಮಾನ ಮರ್ಯಾದೆ ಇದೆಯಾ? ಕೇವಲ ಕುಟುಂಬದ ಹಿತಾಸಕ್ತಿಗಾಗಿ ಯಾರ ಜತೆಗೆ ಬೇಕಾದರೂ ಹೋಗಲು ಜೆಡಿಎಸ್ ರೆಡಿ ಆಗಿ ಬಿಡುತ್ತದೆ. ಯಾವುದೇ ಸಿದ್ಧಾಂತವಿಲ್ಲ. ಜನಪರ ಬದ್ಧತೆ ಇಲ್ಲ ಎಂದರು.

> ದೇಶದ ರೈತರ ಆದಾಯ ದುಪ್ಪಟ್ಟು ಮಾಡುತ್ತೇವೆ ಎಂದು ಭರವಸೆ ನೀಡಿದ್ದ ಪ್ರಧಾನಿ ಮೋದಿ ಶ್ರೀಮಂತರ ಆದಾಯ ಮಾತ್ರ ಹೆಚ್ಚು ಮಾಡಿದ್ದಾರೆ. ಈ ಲೋಕಸಭಾ ಚುನಾವಣೆ ಧರ್ಮ ಯುದ್ಧವಲ್ಲ ಸುಳ್ಳಿಗೂ ಮತ್ತು ಸತ್ಯಕ್ಕೂ ನಡುವಿನ ಅಂತರ ಸಾಬೀತುಪಡಿಸುವ ಚುನಾವಣೆ. ನಾವು ಅಧಿಕಾರ ವಹಿಸಿಕೊಂಡ ಒಂದೇ ಗಂಟೆಯಲ್ಲಿ ಗ್ಯಾರಂಟಿ ಅನುಷ್ಠಾನದ ಬಗ್ಗೆ ಚರ್ಚೆ ನಡೆಸಿದೆವು. 5 ತಿಂಗಳಲ್ಲೇ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದೆವು. ಆದರೆ ಪ್ರಧಾನಿ ಮೋದಿ ಚುನಾವಣಾ ಸಮಯದಲ್ಲಿ ನೀಡಿದ ಭರವಸೆಯಂತೆ ಪ್ರತಿ ವರ್ಷ 2 ಕೋಟಿ ಉದ್ಯೋಗವನ್ನು ಸೃಷ್ಟಿ ಮಾಡಿದ್ದಾರಾ, ಜನ್‌ಧನ್ ಖಾತೆಗೆ ಹಣ ಹಾಕಿದ್ದಾರಾ, ರೈತರ ಆದಾಯ ದುಪ್ಪಟ್ಟುಗೊಳಿಸಿದ್ದಾರಾ.
>
> – ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ

ಮೋದಿಯವರೇ ನೀವು 10 ವರ್ಷ ಪ್ರಧಾನಿಯಾಗಿದ್ದರೂ, ಒಂದೇ ಒಂದು ಭರವಸೆ ಈಡೇರಿಸಲಿಲ್ವಲ್ಲಾ ಯಾಕೆ ಸ್ವಾಮಿ, ಇದು ನ್ಯಾಯನಾ ಸ್ವಾಮಿ ಎಂದು ಪ್ರಶ್ನಿಸಿದ ಅವರು, ನೀವು ಕೊಟ್ಟ ಮಾತನ್ನಂತೂ ಉಳಿಸಿಕೊಳ್ಳಲಿಲ್ಲ. ಹೋಗ್ಲಿ ದೇಶದ ರೈತರು, ಕಾರ್ಮಿಕರು, ಮಹಿಳೆಯರು, ಶ್ರಮಿಕರು, ಸಣ್ಣ–ಮಧ್ಯಮ ಉದ್ಯಮಿಗಳಿಗೆ, ಯುವ ಜನರ ಭವಿಷ್ಯಕ್ಕೆ ಒಂದೇ ಒಂದು ಕಾರ್ಯಕ್ರಮವನ್ನೂ ಸಮರ್ಪಕವಾಗಿ ಜಾರಿ ಮಾಡಲಿಲ್ವಲ್ಲಾ ಈ ಚಂದಕ್ಕೆ ಹತ್ತತ್ತು ವರ್ಷ ಪ್ರಧಾನಿಯಾಗಬೇಕಿತ್ತಾ ಮೋದಿಯವರೇ? ಪ್ರಧಾನಿಯಾಗಿ ಸುಳ್ಳು ಹೇಳಿಕೊಂಡು ತಿರುಗಿದರೆ ಭಾರತೀಯರಿಗೆ ನಂಬಿಸಿ ಮೋಸ ಮಾಡಿದಂಗಲ್ವಾ ಸ್ವಾಮಿ, ನಿಮ್ಮನ್ನು ನಂಬಿದವರಿಗೆ ದ್ರೋಹ ಬಗೆದದ್ದು ಸರಿನಾ ಸ್ವಾಮಿ ಎಂದು ತಮ್ಮದೇ ಶೈಲಿಯಲ್ಲಿ ಪ್ರಶ್ನಿಸಿದರು.

ದೇಶದಲ್ಲಿ ಈಗ ಮೋದಿ ಅಲೆ ಇಲ್ಲ. ಬಿಜೆಪಿಗೆ ತನ್ನ ಶಕ್ತಿ ಮೇಲೆ ಗೆಲ್ಲುವ ಸಾಮರ್ಥ್ಯ ಇಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ಈ ಬಾರಿ ಕನಿಷ್ಠ 20 ಸ್ಥಾನ ಗೆಲ್ಲಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಭೆಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಸಚಿವರಾದ ಕೆ.ವೆಂಕಟೇಶ್, ಸತೀಶ್ ಜಾರಕಿಹೊಳಿ ಮಾತನಾಡಿದರು. ಕೆಪಿಸಿಸಿ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಪುಷ್ಪಾ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ, ತಾಲೂಕು ಕುರುಬ ಸಮಾಜದ ಅಧ್ಯಕ್ಷ ಹೆಚ್.ಡಿ.ಗಣೇಶ್, ಮುಖಂಡರಾದ ಭಾರತಿಶಂಕರ್, ಮಂಜುನಾಥ್ ಗುಂಡೂರಾವ್, ನಿತಿನ್ ವೆಂಕಟೇಶ್, ಸಂಜಯ್, ಡಿ.ಟಿ.ಸ್ವಾಮಿ, ರೆಹ್ಮದ್ ಜಾನ್ ಬಾಬು ಸೇರಿದಂತೆ ಇತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಬಡೇ ಮಿಯಾನ್ ಚೋಟೆ ಮಿಯಾನ್ (ಕ)	2 ಪ್ರದರ್ಶನಗಳು
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುವ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಮುಕ್ತ ಮನಸ್ಸು (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುವ (ಕ)	4 ಪ್ರದರ್ಶನಗಳು
ರಾಜಕಮಲ್	
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	4 ಪ್ರದರ್ಶನಗಳು
ಸಂಗಂ	
ಅವತಾರ ಪುರುಷ 2 (ಕ)	4 ಪ್ರದರ್ಶನಗಳು
ಲಿಡೋ	
ಮ್ಯಾಟ್ನಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ)	4 ಪ್ರದರ್ಶನಗಳು
ಪ್ರಭಾ	
ಮಾರಿಗೋಲ್ಡ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.10.15ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (ಇಂ): ಮ.1.25ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಮ.3.45ಕ್ಕೆ.
ಸ್ಕ್ರೀನ್ 2	ಅಪ್ಪ ಐ ಲವ್‌ಯು (ಕ): ಬೆ.10.20ಕ್ಕೆ, ಮುಕ್ತ ಮನಸ್ಸು (ಕ): ಮ.1.10ಕ್ಕೆ, ಗೀತಾಂಜಲಿ ಮಲ್ಲಿ ವಚ್ಚಿಂದಿ (ತೆ): ಸಂ.4.20ಕ್ಕೆ, ವರ್ಷನ್‌ಗಲ್ಕು ಶೇಷಂ (ಮ): ರಾ.7.10ಕ್ಕೆ, ಆವೇಶಂ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಅವತಾರ ಪುರುಷ 2 (ಕ): ಬೆ.10.55ಕ್ಕೆ, ರೊಮಿಯೋ (ತ): ಮ.1.25ಕ್ಕೆ, ಡಿಯರ್ (ತ): ಸಂ.4.15ಕ್ಕೆ, ಮೈದಾನ್ (ಹಿಂ): ಸಂ.6.55ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 4	ವರ್ಷನ್‌ಗಲ್ಕು ಶೇಷಂ (ಮ): ಬೆ.10.05ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.1.15ಕ್ಕೆ, ಯುವ (ಕ): ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.10.50ಕ್ಕೆ, ಮ.3ಕ್ಕೆ, ರಾ.10ಕ್ಕೆ, ಬಡೇ ಮಿಯಾನ್ ಚೋಟೆ ಮಿಯಾನ್ (3ಡಿ) (ಹಿಂ): ಸಂ.6.30ಕ್ಕೆ.
ಸ್ಕ್ರೀನ್ 2	ಮೈದಾನ್ (ಹಿಂ): ಬೆ.9.50ಕ್ಕೆ, ಮ.1.40ಕ್ಕೆ, ಸಂ.5.30ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.9.40ಕ್ಕೆ, ಅಪ್ಪ ಐ ಲವ್‌ಯು (ಕ): ಮ.1.10ಕ್ಕೆ, ಅವತಾರ ಪುರುಷ 2 (ಕ): ಸಂ.4.15ಕ್ಕೆ, ಯುವ (ಕ): ಸಂ.6.55ಕ್ಕೆ, ಮೈದಾನ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಯುವ (ಕ): ಬೆ.9.40ಕ್ಕೆ, ಸಂ.4ಕ್ಕೆ, ರೋಮಿಯೋ (ತ): ಮ.12.55ಕ್ಕೆ, ಗೀತಾಂಜಲಿ ಮಲ್ಲಿ ವಚ್ಚಿಂದಿ (ತೆ): ರಾ.7.05ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ರಾ.10.20ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ತ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಲಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ತೆ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.35ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, ಯುವ (ಕ): ಬೆ.10.20ಕ್ಕೆ, ಬೆ.11.35ಕ್ಕೆ, ಮ.12.45ಕ್ಕೆ, ಮ.3.20ಕ್ಕೆ, ಸಂ.5.45ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಬೆ.10.45ಕ್ಕೆ, ಮ.1.25ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ, ಅವತಾರ ಪುರುಷ 2 (ಕ): ಮ.12.40ಕ್ಕೆ, ಸಂ.6.35ಕ್ಕೆ, ಮ್ಯಾಟ್ನಿ (ಕ): ಮ.1.35ಕ್ಕೆ, ಭರ್ಜರಿ ಗಂಡು (ಕ): ಮ.2.50ಕ್ಕೆ, ದಿ ಫಸ್ಟ್ ಓಮನ್ (ಇಂ): ಸಂ.4ಕ್ಕೆ, ರಾ.9ಕ್ಕೆ, ಕ್ರೂವ್ (ಹಿಂ): ಸಂ.4.05ಕ್ಕೆ, ರಾ.9.15ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಸಂ.4.30ಕ್ಕೆ, ಮಾರಿಗೋಲ್ಡ್ (ಕ): ರಾ.7.25ಕ್ಕೆ, ಆಡುಜೀವಿತಂ (ಮ): ರಾ.10.15ಕ್ಕೆ.

ಗರುಡ ಮಾಲ್,
1ನೇ ಮಹಡಿ, ಮೊ.ನಂ: 9901373210

ಯುವ (ಕ): ಬೆ.9.30ಕ್ಕೆ, ಮ.12.25ಕ್ಕೆ, ಮ.3.40ಕ್ಕೆ, ಸಂ.6.30ಕ್ಕೆ, ರಾ.10.30ಕ್ಕೆ, ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.50ಕ್ಕೆ, ಮ.12ಕ್ಕೆ, ಮ.3.20ಕ್ಕೆ, ಸಂ.6.40ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಮ.1.10ಕ್ಕೆ, ಮ.3.50ಕ್ಕೆ, ರಾ.9.45ಕ್ಕೆ, ಅವತಾರ ಪುರುಷ 2 (ಕ): ಮ.2ಕ್ಕೆ, ರಾ.7.35ಕ್ಕೆ, ಮ್ಯಾಟ್ನಿ (ಕ): ಸಂ.4.40ಕ್ಕೆ, ಆಡುಜೀವಿತಂ (ಮ): ಸಂ.6.55ಕ್ಕೆ, ರಾ.10.15ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಅಂಬೇಡ್ಕರ್ ತತ್ವಾದರ್ಶ ಜೀವನದಲ್ಲಿ ಅಳವಡಿಸಿಕೊಳ್ಳಿ



ನಂಜನಗೂಡಿನಲ್ಲಿ ಶಾಸಕ ದರ್ಶನ್ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ನಂಜನಗೂಡು, ಏ.14– ಡಾ.ಬಿ.ಆರ್.ಅಂಬೇಡ್ಕರ್ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಅವರು ಹಾಕಿಕೊಟ್ಟ ದಾರಿಯಲ್ಲಿ ಮುನ್ನಡೆಯಬೇಕು ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಜಯಂತೋತ್ಸವ ಅಂಗವಾಗಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಇಂದು ಅವರು ನಮ್ಮೊಂದಿಗೆ ಇಲ್ಲದಿದ್ದರೂ ದೇಶದ ಧರ್ಮ ಗ್ರಂಥ ಸಂವಿಧಾನ ನಮ್ಮ ಕಣ್ಣುಂದಿದೆ. ಇದರ ನೆರಳಿನಲ್ಲಿ ಎಲ್ಲಾ ವರ್ಗದವರಿಗೂ ಸಮಾನ ಅವಕಾಶಗಳು ಲಭಿಸಿವೆ. ಆ ಸಂವಿಧಾನವನ್ನು ಸಂರಕ್ಷಣೆ ಮಾಡುವ ಜವಾಬ್ದಾರಿ ನಮ್ಮ ನಿಮ್ಮೆಲ್ಲರ ಮೇಲಿದೆ ಎಂದರು.

ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಮುಖಂಡರಾದ ಬುಲೆಟ್ ಮಹದೇವಪ್ಪ ಇಂಧನ್ ಬಾಬು, ನಾಗೇಶ್‌ರಾಜ್, ಎಂ.ಎನ್.ಮಂಜುನಾಥ್, ಶ್ರೀನಿವಾಸಮೂರ್ತಿ, ಮುದ್ದುಮಾದಶೆಟ್ಟಿ, ನಗರಸಭಾ ಸದಸ್ಯ ಪ್ರದೀಪ್ ಸೇರಿದಂತೆ ಹಲವರಿದ್ದರು


ಗುಂಗ್ರಾಲ್ ಛತ್ರ ಗ್ರಾಮ ಪಂಚಾಯಿತಿ
ಸದಸ್ಯರು ಹಾಗೂ ಮಾಜಿ ಉಪಾಧ್ಯಕ್ಷರಾದ
ಇ.ಪಿ.ರವಿ ರವರಿಗೆ
ಹುಟ್ಟು ಹಬ್ಬದ ಶುಭಾಶಯಗಳು
VISMAYA ADVERTISERS 8050302424
ಶುಭಕೋರುವವರು
ದುರ್ಗಾ ಗ್ರೂಪ್ಸ್